ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜನವರಿ 1 ಬುಧವಾರ 2025

₹4


ಸಂಪುಟ: 45 | ಸಂಚಿಕೆ: 255 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಮೈಸೂರು ಮಿತ್ರ

ನಾಳೆ ಮೈಸೂರಲ್ಲಿ 'ಭೀಮಾ ಕೋರೆಗಾಂವ್ ವಾರ್ಷಿಕೋತ್ಸವ'



ಮೈಸೂರು, ಡಿ.31(ಜಿಎ)–ಜೈ ಭೀಮಾ ಕೋರೆಗಾಂವ್ ವಿಜಯೋತ್ಸವ ಸಮಿತಿ ವತಿಯಿಂದ ಜ.2ರಂದು ಸಂಜೆ 6 ಗಂಟೆಗೆ ಮೈಸೂರಿನ ಜಯನಗರದ ರೈಲ್ವೆ ಗೇಟ್ ಬಳಿ ದಲಿತರ ಸ್ವಾಭಿಮಾನ ಜಾಗೃತಿ ದಿನದ ಅಂಗವಾಗಿ 'ಭೀಮಾ ಕೋರೆಗಾಂವ್ ವಾರ್ಷಿಕೋತ್ಸವ' ನಡೆಯಲಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಮಿತಿ ಅಧ್ಯಕ್ಷ ಪಿ.ಜಯರಾಜ್ ಹೆಗ್ಡೆ ಈ ವಿಷಯ ತಿಳಿಸಿ, ಬಂತೇಜಿ ಸಾನ್ನಿಧ್ಯ ವಹಿಸುವರು. ಚಿಂತಕರಾದ ರಹಮತ್ ತರೀಕೆರೆ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮಾಜಿ ಮೇಯರ್ ಪುರುಷೋತ್ತಮ್ ಅಧ್ಯಕ್ಷತೆ ವಹಿಸುವರು. ಪೊಲೀಸ್ ಅಧೀಕ್ಷಕ ವಿಷ್ಣುವರ್ಧನ್, ಚೆಸ್ಕಾಂ ನಿರ್ದೇಶಕಿ ಜಿ.ಶೀಲಾ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್, ರಂಗಕರ್ಮಿ ಜನಾರ್ಧನ್ ಜನ್ನಿ, ವಕೀಲ ಎಸ್.ಉಮೇಶ್, ಚಿಂತಕ ಶಿವಸುಂದರ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ವಿವರಿಸಿದರು.

1818ರ ಜನವರಿ 1ರಂದು ಕೋರೆಗಾಂವ್ ಘಟನೆ ನಡೆದಿದ್ದು, ಇದು ದಲಿತರ ಸ್ವಾಭಿಮಾನದ ಘಟನೆ ಮಾತ್ರವಲ್ಲ. ಇಡೀ ಭಾರತೀಯರ ವಿಜಯೋತ್ಸವ ಆಗಿದೆ. ಇದರಿಂದಲೇ ಸಮಾನತೆ, ಸಮಾನಾವಕಾಶ ಆರಂಭವಾಯಿತು. ಹೀಗಾಗಿ ಇಲ್ಲಿಯೂ ವಿಜಯೋತ್ಸವ ಆಚರಿಸಲಾಗುತ್ತಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಡಾ.ರಾಜು, ಪ್ರದೀಪ್‌ಕುಮಾರ್, ಶಂಕರ್, ರವಿಕುಮಾರ್ ಉಪಸ್ಥಿತರಿದ್ದರು.

ಜ.3ರಂದು ಡಾ.ಎ.ರವೀಂದ್ರರ 'ಸದ್ಧರ್ಮಗೀತ' ನಾಲ್ಕು ಕಾವ್ಯ ಕಥನಗಳ ಗುಚ್ಛ ಲೋಕಾರ್ಪಣೆ

ಮೈಸೂರು, ಡಿ. 31–ರಾಜ್ಯ ಸರ್ಕಾರದ ವಿಶ್ರಾಂತ ಮುಖ್ಯ ಕಾರ್ಯದರ್ಶಿ ಡಾ.ಎ.ರವೀಂದ್ರ ಅವರ ನೂತನ ಕೃತಿ 'ಸದ್ಧರ್ಮಗೀತ' ನಾಲ್ಕು ಕಾವ್ಯಕಥನಗಳ ಗುಚ್ಛ ಲೋಕಾರ್ಪಣೆ ಸಮಾರಂಭವನ್ನು ಜ.3ರಂದು ಸಂಜೆ 5:30 ಗಂಟೆಗೆ ನಗರದ ಇನ್ಫೆಂಟ್ರಿ ರಸ್ತೆಯ ಐಎಎಸ್ ಅಧಿಕಾರಿಗಳ ಸಂಘದಲ್ಲಿ ಆಯೋಜಿಸಲಾಗಿದೆ.

ಸೆಂಟರ್ ಫಾರ್ ಸಸ್ಟೈನೆಬಲ್ ಡೆವಲಪ್ಮೆಂಟ್ ಮತ್ತು ಐಎಎಸ್ ಅಧಿಕಾರಿಗಳ ಸಂಘದ ಸಹಯೋಗದಲ್ಲಿ ಏರ್ಪಡಿಸಿರುವ ಸಮಾರಂಭದ ಅಧ್ಯಕ್ಷತೆಯನ್ನು ಸರ್ವೋಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಶಿವರಾಜ ವಿ.ಪಾಟೀಲ ವಹಿಸಿ ಕೃತಿ ಲೋಕಾರ್ಪಣೆ ಮಾಡುವರು. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊಮಲ್ಲೇಪುರಂ ಜಿ. ವೆಂಕಟೇಶ ಅವರು ಕೃತಿ ಕುರಿತು ಮಾತನಾಡುವರು. ಮೈಸೂರು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಿವೃತ್ತ ಹಿರಿಯ ಐಎಎಸ್ ಅಧಿಕಾರಿ ಡಾ.ಸಿ. ಸೋಮಶೇಖರ ಪ್ರಾಸ್ತಾವಿಕ ನುಡಿಗಳನ್ನಾಡುವರು ಎಂದು ಆಯೋಜಕರಾದ ಸೆಂಟರ್ ಫಾರ್ ಸಸ್ಟೈನಬಲ್ ಡೆವಲಪ್ಮೆಂಟ್‌ನ ವ್ಯವಸ್ಥಾಪಕ ನಿರ್ದೇಶಕ ಆರ್.ಶ್ರೀನಿವಾಸ್ ಮತ್ತು ಐಎಎಸ್ ಅಧಿಕಾರಿಗಳ ಸಂಘದ ವ್ಯವಸ್ಥಾಪಕ ಗಣೇಶ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರತಿಭಾ ಕಾರಂಜಿಯ ಪ್ರತಿಭೆ



ಮೈಸೂರಿನ ಜಿಲ್ಲಾ ಹಂತದ ಪ್ರತಿಭಾ ಕಾರಂಜಿಯ ಧಾರ್ಮಿಕ ಪಠಣ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಶಾಲೆಯ ಮಹದೇವಕುಮಾರ್‌ಗೆ ಕ್ಷೇತ್ರ ಶಿಕ್ಷಣಾಧಿಕಾರಿ ರಾಜು, ವಿಷಯ ಪರಿವೀಕ್ಷಕರಾದ ಚನ್ನಬಸಪ್ಪ, ಡಿ.ಆರ್.ಪ್ರಸನ್ನ ಅಭಿನಂದಿಸಿದರು.

ಕನ್ನಡಿಗರ ಹಬ್ಬ ಕನ್ನಡ ರಾಜ್ಯೋತ್ಸವ



ಕನ್ನಡಾಂಬೆ ರಕ್ಷಣಾ ವೇದಿಕೆ ಸಿಂಹ ಘರ್ಜನೆ ಮೈಸೂರು ಜಿಲ್ಲಾ ಘಟಕ ಆಯೋಜಿಸಿರುವ ಕನ್ನಡಿಗರ ಹಬ್ಬ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕನ್ನಡಾಂಬೆ ಸೇವಾ ರತ್ನ ಪ್ರಶಸ್ತಿಯನ್ನು ಬಾಲು, ಸೀಮಾ ಮರಿಸ್ವಾಮಿ ಅವರಿಗೆ ನೀಡಿ ಗೌರವಿಸಲಾಯಿತು. ಈ ವೇಳೆ ಕನ್ನಡಾಂಬೆ ರಕ್ಷಣಾ ವೇದಿಕೆ ಸಿಂಹ ಘರ್ಜನೆ ಪದಾಧಿಕಾರಿಗಳು ಹಾಜರಿದ್ದರು.

'ಸ್ವರ್ಗ ನಾ ಕಂಡಂತೆ' ಕಾದಂಬರಿ ಲೋಕಾರ್ಪಣೆ



ಸ್ನೇಹ ಬುಕ್ ಹೌಸ್ ಪ್ರಕಟಿಸಿರುವ ಡಾ.ರಂಜನ್ ಪೇಜಾವರ್ ಅವರ ಮೊಟ್ಟ ಮೊದಲ ಕಾದಂಬರಿ 'ದ ಹೆವೆನ್ ಆಸ್ ಐ ಸಾ'ನ ಕನ್ನಡ ಅನುವಾದ 'ಸ್ವರ್ಗ ನಾ ಕಂಡಂತೆ' ಬೆಂಗಳೂರಿನ ನೃಪತುಂಗ ರಸ್ತೆಯ ಮಿಥಿಕ್ ಸೊಸೈಟಿ ಶತಮಾನೋತ್ಸವ ಸಭಾಂಗಣದಲ್ಲಿ ನಿಮ್ಹಾನ್ಸ್‌ನ ನಿವೃತ್ತ ಹಿರಿಯ ಪ್ರಾಧ್ಯಾಪಕ, ಖ್ಯಾತ ಮನೋವೈದ್ಯ ಹಾಗೂ ಲೇಖಕ ಡಾ.ಸಿ. ಆರ್.ಚಂದ್ರಶೇಖರ್ ಮತ್ತು ಥಟ್ ಅಂತ ಹೇಳಿ ಖ್ಯಾತಿಯ ಸುಪ್ರಸಿದ್ಧ ಕ್ವಿಜ್ ಮಾಸ್ಟರ್, ಟಿವಿ ನಿರೂಪಕ ಹಾಗೂ ಲೇಖಕ ಡಾ. ನಾ.ಸೋಮೇಶ್ವರ ಅವರು ಲೋಕಾರ್ಪಣೆ ಮಾಡಿದರು. ಸ್ನೇಹ ಬುಕ್ ಹೌಸ್‌ನ ಪ್ರಕಾಶಕ ಪರಶಿವಪ್ಪ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ದಿವಂಗತ ಅಜೀಜ್ ಸೇಠ್ 23ನೇ ಪುಣ್ಯತಿಥಿ ಸ್ಮರಣೆ



ಮಾಜಿ ಸಚಿವ, ದಿವಂಗತ ಅಝೀಝ್ ಸೇಠ್ ಅವರ 23ನೇ ಪುಣ್ಯಸ್ಮರಣೆ ಅಂಗವಾಗಿ ಅವರ ಅನುಯಾಯಿಗಳು ಹಾಗೂ ಹಿತೈಷಿಗಳಾದ ಮೊಹಮ್ಮದ್ ರಫಿ, ಮಾಜಿ ಸದಸ್ಯರು, ಪ್ರಧಾನಮಂತ್ರಿಗಳ 15 ಅಂಶಗಳ ಅಲ್ಪಸಂಖ್ಯಾತರ ಸಮಿತಿ; ಶೌಕತ್ ಅಲಿ ಖಾನ್, ಸಂಯೋಜಕರು, ಕೆಪಿಸಿಸಿ; ಮಜೀದ್ ಅಹಮದ್, ಸದಸ್ಯರು, ಡಿಸಿಸಿ, ಬನ್ನಿಮಂಟಪ; ಕೆಪಿಸಿಸಿ ಅಲ್ಪಸಂಖ್ಯಾತರ ವಿಭಾಗದ ಸಂಘಟನಾ ಕಾರ್ಯದರ್ಶಿ ಸೈಯದ್ ಫಾರೂಖ್, ಡಿಸಿಸಿ ಅಲ್ಪಸಂಖ್ಯಾತರ ವಿಭಾಗದ ವಕ್ತಾರ ಮಿರ್ಜಾ ಜಂಷೀದ್ ಬೇಗ್ ಅಶ್ರಫಿ; ಫಸೀಲ್ ಖಾನ್, ಮಾಜಿ ಕಾರ್ಯದರ್ಶಿ, ಸಾಹುಕಾರ್ ಚನ್ನಯ್ಯ ಬ್ಲಾಕ್ ಕಾಂಗ್ರೆಸ್ ಸಮಿತಿ, ಡಿಸಿಸಿ ಅಲ್ಪಸಂಖ್ಯಾತರ ವಿಭಾಗದ ವಕ್ತಾರ ಮಿರ್ಜಾ ಜಂಷೀದ್ ಬೇಗ್ ಅಶ್ರಫಿ, ಇತರರು ಮೈಸೂರಿನ ಟಿಪ್ಪು ಸರ್ಕಲ್ ಹಿಂಭಾಗದ ಮುಸ್ಲಿಮರ ಸ್ಮಶಾನದಲ್ಲಿರುವ ಅಝೀಝ್ ಸೇಠ್ ಅವರ ಗೋರಿಗೆ ಪುಷ್ಪಾರ್ಚನೆ ಮಾಡಿ ನಮನ ಸಲ್ಲಿಸಿದರು.

ಮೈಸೂರಿನ ಕೆಆರ್‌ಎಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ನಾಮಕರಣ ಪ್ರಸ್ತಾಪ

ಮುಖ್ಯಮಂತ್ರಿಗಳೇ ಗೊಂದಲ ನಿವಾರಿಸಲು ಮುಂದಾಗಬೇಕು

ಮೈಸೂರು, ಡಿ.31(ಜಿಎ)– ಮೈಸೂರಿನ ಕೆಆರ್‌ಎಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಹೆಸರು ನಾಮಕರಣ ಮಾಡಲು ಮುಂದಾಗಿರುವ ಕುರಿತು ಗೊಂದಲಗಳು, ವಿವಾದಗಳು, ಪರ–ವಿರೋಧ ಚರ್ಚೆಗಳು ಆರಂಭಗೊಂಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಇದಕ್ಕೆ ತೆರೆ ಎಳೆಯಬೇಕಾಗಿದೆ ಎಂದು ಮಾಜಿ ಮೇಯರ್ ಸಂದೇಶ್ ಸ್ವಾಮಿ ಮನವಿ ಮಾಡಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2013ರಲ್ಲಿ ಸಿದ್ದರಾಮಯ್ಯ ಅವರು ಮೊದಲ ಬಾರಿ ಮುಖ್ಯಮಂತ್ರಿಯಾಗಿದ್ದಾಗ ಪಾಲಿಕೆ ವತಿಯಿಂದ ಅವರಿಗೆ ಪೌರ ಸನ್ಮಾನ ಮಾಡಬೇಕೆಂದು ನಿರ್ಧರಿಸಿದ್ದೆವು. ಆದರೆ ಅವರು ನಯವಾಗಿಯೇ ನಿರಾಕರಿಸಿದ್ದರು. ಇದೇ ರೀತಿ ಸಿದ್ದರಾಮಯ್ಯ ಅವರೇ ರಸ್ತೆಗೆ ತಮ್ಮ ಹೆಸರು ಇಡುವ ವಿಚಾರದಲ್ಲಿ ಉಂಟಾಗಿರುವ ಗೊಂದಲಕ್ಕೂ ತೆರೆ ಎಳೆಯುವುದು ಅನಿವಾರ್ಯವಾಗಿದೆ ಎಂದು ತಿಳಿಸಿದರು.

1921ರಲ್ಲಿ ನಗರಾಭಿವೃದ್ಧಿ ವಿಶ್ವಸ್ಥ ಮಂಡಳಿ 'ಪ್ರಿನ್ಸೆಸ್ ರಸ್ತೆ' ಎಂದು ಕೆಆರ್‌ಎಸ್ ರಸ್ತೆಗೆ ಹೆಸರಿಸಿರುವ ನಕ್ಷೆ ಪ್ರದರ್ಶಿಸಿದ ಅವರು, ಈ ರಸ್ತೆಗೆ ಮರುನಾಮಕರಣ ವಿಚಾರವಾಗಿ ಗೊಂದಲ ಸೃಷ್ಟಿಸುವ ಮೂಲಕ ಮೈಸೂರು ಜಿಲ್ಲೆಯಿಂದ ಎರಡು ಬಾರಿ ಮುಖ್ಯಮಂತ್ರಿಯಾಗಿ ಹೆಗ್ಗಳಿಕೆಗೆ ಪಾತ್ರವಾಗಿರುವ ಸಿದ್ಧರಾಮಯ್ಯ ಅವರಿಗೆ ಮುಜುಗರ ತರುವುದು ತರವಲ್ಲ. ಅವರ ಗೌರವಕ್ಕೆ ಧಕ್ಕೆ ತರುವ ಕೆಲಸವನ್ನು ಯಾರೂ ಮಾಡಬಾರದು ಮನವಿ ಮಾಡಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾಜಿ ಮೇಯರ್ ಸಂದೇಶ್ ಸ್ವಾಮಿ ಅವರು 1921ರಲ್ಲಿ ನಗರಾಭಿವೃದ್ಧಿ ವಿಶ್ವಸ್ಥ ಮಂಡಳಿ 'ಪ್ರಿನ್ಸೆಸ್ ರಸ್ತೆ' ಎಂದು ಹೆಸರಿಸಿರುವ ನಕ್ಷೆ ಪ್ರದರ್ಶಿಸಿದರು.

ಮಾಜಿ ಮೇಯರ್ ಸಂದೇಶ್ ಸ್ವಾಮಿ ಮನವಿ

ವಿವಿಧ ಕ್ಷೇತ್ರಗಳ ಸಾಧಕರು ಹಾಗೂ ಸಮಾಜಕ್ಕೆ ಕೊಡುಗೆ ನೀಡಿರುವ ಗಣ್ಯರ ಹೆಸರನ್ನು ರಸ್ತೆ, ಉದ್ಯಾನವನ, ವೃತ್ತಗಳಿಗೆ ನಾಮಕರಣ ಮಾಡುವ ಸಂಪ್ರದಾಯವಿದೆ. ಆದರೆ ಈ ಪ್ರಕ್ರಿಯೆ ನಿಯಮ ಬದ್ಧವಾಗಿಯೇ ನಡೆಯಬೇಕು ಎಂದ ಅವರು ರಸ್ತೆಗಳ ನಾಮಕರಣ ಸಂಬಂಧ ನಗರ ಪಾಲಿಕೆಯಲ್ಲಿ ನಾಮಕರಣ ಸಮಿತಿ ಮೂಲಕ ಸಾರ್ವಜನಿಕ ಪ್ರಕಟಣೆ ಹೊರಡಿಸಿ, ತಕರಾರು ಸಲ್ಲಿಕೆಗೆ ಅವಕಾಶ ನೀಡಿ, ಕೌನ್ಸಿಲ್‌ನಲ್ಲಿ ನಿರ್ಣಯಿಸಿ ಸರ್ಕಾರಕ್ಕೆ ಕಳುಹಿಸಬೇಕು. ಆದರೆ, ಯಾವುದೇ ಪ್ರಕ್ರಿಯೆ ನಡೆಸದೇ ಅಧಿಕಾರಿಗಳು ಏಕಾಏಕಿಯಾವುದೇ ನಾಮಕರಣ ಮಾಡಲು ಅವಕಾಶ ಇರುವುದಿಲ್ಲ ಎಂದು ಸಂದೇಶ್ ಸ್ವಾಮಿ ತಿಳಿಸಿದರು.

ಬ್ರಿಟಿಷರ ಕಾಲದಲ್ಲಿ ಹಾಗೂ ರಾಜಮಹಾರಾಜರ ಕಾಲದಲ್ಲಿ ಸೇರಿದಂತೆ 1974 ಕ್ಕೂ ಹಿಂದೆ ನಾಮಕರಣ ಮಾಡಿರುವುದನ್ನು ಬದಲಿಸಲು ನಗರ ಪಾಲಿಕೆಗೆ ಕಾನೂನಿನಲ್ಲಿ ಅಧಿಕಾರವಿಲ್ಲ. ಉದಾಹರಣೆಗೆ ಅರಮನೆ ಬಳಿ ಇರುವ ಕರ್ಜನ್ ಪಾರ್ಕಿಗೆ ಡಾ.ರಾಜಕುಮಾರ್ ಉದ್ಯಾನವನ ಎಂದು ನಾಮಕರಣ ಮಾಡಲು ಕೌನ್ಸಿಲ್‌ನಲ್ಲಿ ನಿರ್ಣಯ ಕೈಗೊಂಡು ಸರ್ಕಾರದ ಅನುಮತಿ ಮೇರೆಗೆ ನಾಮಕರಣ ಮಾಡಲಾಯಿತು. ನಾನು ಮೇಯರ್ ಆಗಿದ್ದ ಅವಧಿಯಲ್ಲಿ ಸಾರ್ವಜನಿಕರ ಮನವಿ ಮೇರೆಗೆ ಜೆ.ಪಿ.ನಗರದ ದೊಡ್ಡ ಉದ್ಯಾನವನಕ್ಕೆ ಸಿದ್ದರಾಮಯ್ಯನವರ ಹೆಸರನ್ನು ನಾಮಕರಣ ಮಾಡಲಾಗಿದೆ. ನಗರ ವ್ಯಾಪ್ತಿಯಲ್ಲಿ ಒಂದು ಕಡೆ ನಾಮಕರಣ ಮಾಡಿರುವ ವ್ಯಕ್ತಿಯ ಹೆಸರನ್ನು ಮತ್ತೊಂದು ಕಡೆ ನಾಮಕರಣ ಮಾಡಲು ನಿಯಮದಲ್ಲಿ ಅವಕಾಶ ವಿಲ್ಲ ಎಂದರು.

2010–11 ಮತ್ತು 2011–12ರಲ್ಲಿ ಮೇಯರ್ ಆಗಿದ್ದ ಸಂದರ್ಭದಲ್ಲಿ ಸುಮಾರು 100ಕ್ಕೂ ಹೆಚ್ಚು ಗಣ್ಯರ ಹೆಸರು ವಿವಿಧೆಡೆಗೆ ನಾಮಕರಣ ಮಾಡಲು ನಿರ್ಣಯ ಕೈಗೊಳ್ಳಲಾಗಿತ್ತು. ಅದರಂತೆ ಮೈಸೂರು ಹೊರವರ್ತುಲ ರಸ್ತೆಗೆ ಎಸ್.ಎಂ.ಕೃಷ್ಣ ರಸ್ತೆ ಎಂದು ನಾಮಕರಣ ಮಾಡಲಾಯಿತು. ಅಧಿಕೃತವಾಗಿ ನಾಮಫಲಕ ಅಳವಡಿಸಿ ಅನುಷ್ಠಾನಗೊಳಿಸುವಲ್ಲಿ ಅಧಿಕಾರಿಗಳು ಉದಾಸೀನತೆ ತೋರಿರುವ ಕಾರಣ ಇದು ನೆನೆಗುದಿಗೆ ಬಿದ್ದಿದೆ. ಗಣ್ಯರ ಹೆಸರನ್ನು ನಾಮಕರಣ ಮಾಡಿರುವ ಉದ್ದೇಶಗಳ ಬಗ್ಗೆ ಅದರ ಇತಿಹಾಸ ತಿಳಿಯುವಲ್ಲಿ ಅಧಿಕಾರಿಗಳು ಮತ್ತು ಇಂದಿನ ಯುವಪೀಳಿಗೆ ಆಸಕ್ತಿ ವಹಿಸುತ್ತಿಲ್ಲ ಎಂದು ಸಂದೇಶ್ ಸ್ವಾಮಿ ಬೇಸರ ವ್ಯಕ್ತಪಡಿಸಿದ್ದಾರೆ.

ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್‌ನ ಚುನಾವಣಾ ಪ್ರಚಾರ



ಮೈಸೂರಿನ ಗಾಂಧಿ ಚೌಕದ ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ಚುನಾವಣೆ ಹಿನ್ನೆಲೆಯಲ್ಲಿ ಹಿರಿಯ ಸಹಕಾರಿಗಳಾದ ಕೆ.ಉಮಾಶಂಕರ್ ನೇತೃತ್ವದ ತಂಡವು ನಜರ್‌ಬಾದ್ ಮೊಹಲ್ಲಾದಲ್ಲಿ ಚುನಾವಣಾ ಪ್ರಚಾರ ನಡೆಸಿತು. ಈ ಸಂದರ್ಭದಲ್ಲಿ ಬ್ಯಾಂಕ್ ಅಧ್ಯಕ್ಷೆ ಪಿ.ರಾಜೇಶ್ವರಿ, ಉಪಾಧ್ಯಕ್ಷೆ ಪಿ.ಸವಿತಾ, ಎಸ್‌ಟಿ ವಿಭಾಗದ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ, ಹೆಚ್ ಹರೀಶ್ ಕುಮಾರ್, ಸಿ.ರೇವಣ್ಣ, ಎಂ.ಕುಮಾರ್,ಕೆ.ಗಿರೀಶ್ ಇನ್ನಿತರರು ಉಪಸ್ಥಿತರಿದ್ದರು.

ಹೊಟ್ಟೆಯಲ್ಲೇ ಮಗು ಸಾವು; ಚಿಕಿತ್ಸೆ ಫಲಿಸದೆ ಕೊನೆಯುಸಿರೆಳೆದ ಬಾಣಂತಿ!

ಕೊಪ್ಪಳ, ಡಿ.31– ರಾಜ್ಯಾದ್ಯಂತ ಬಾಣಂತಿಯರ ಸಾವಿನ ಪ್ರಕರಣಗಳು ಹೆಚ್ಚಾಗುತ್ತಲೇ ಇವೆ. ಸಕಾಲಕ್ಕೆ ಸೂಕ್ತ ಚಿಕಿತ್ಸೆ ಸಿಗದೇ ಮಗು ಗರ್ಭದಲ್ಲೇ ಮೃತಪಟ್ಟರೆ, ಇಂದು ಚಿಕಿತ್ಸೆ ಫಲಿಸದೆ ಕೊಪ್ಪಳದ ಜಿಲ್ಲಾಸ್ಪತ್ರೆಯಲ್ಲಿ ಬೆಳಗಾವಿ ಮೂಲದ ತುಂಬು ಗರ್ಭಿಣಿ ಮೃತಪಟ್ಟಿದ್ದಾರೆ. ಬೆಳಗಾವಿಯ ಕುಕನೂರಿನ ಆಡೂರ್ ಗ್ರಾಮದ ನಿವಾಸಿ ರೇಣುಕಾ ಪ್ರಕಾಶ್ ಹಿರೇಮನಿ ಹೆರಿಗೆಗಾಗಿ ನಿನ್ನೆ ರಾತ್ರಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದ್ದರು. ಕುಷ್ಟಗಿ ಆಸ್ಪತ್ರೆಯಿಂದ ಜಿಲ್ಲಾ ಆಸ್ಪತ್ರೆಗೆ ಬಂದಿದ್ದ ರೇಣುಕಾಗೆ ಬೆಳಗ್ಗೆ 2:30ರ ಸುಮಾರಿಗೆ ಹೆರಿಗೆ ಆಗಿತ್ತು. ಆದರೆ ಡೆಲಿವರಿಗೂ ಮೊದಲೇ ಮಗು ಮೃತಪಟ್ಟಿತ್ತು. ಹೀಗಾಗಿ ವೈದ್ಯರು ಸಿಜೇರಿಯನ್ ಮಾಡಿ ಮಗುವನ್ನು ಹೊರ ತೆಗೆದಿದ್ದರು. ಈ ಸಮಯದಲ್ಲಿ ಹೈಬಿಪಿ ಮತ್ತು ಹೃದಯಾಘಾತದಿಂದ ರೇಣುಕಾ ಸಾವನ್ನಪ್ಪಿದ್ದಾರೆ.

2024ನೇ ಸಾಲಿನ ಕ್ಯಾಲೆಂಡರ್‌ನಲ್ಲಿ ಪೇಪರ್ ಬ್ಯಾಗ್ ತಯಾರಿಸಿ ಆರ್ಟ್ ಆಫ್ ಲಿವಿಂಗ್ ಮಕ್ಕಳಿಂದ ಜಾಗೃತಿ

ಮೈಸೂರು,ಡಿ.31–ಆರ್ಟ್ ಆಫ್ ಲಿವಿಂಗ್ ಹಾಗೂ ಅಪೂರ್ವ ಸ್ನೇಹ ಬಳಗದ ವತಿಯಿಂದ ನಂಜುಮಳಿಗೆ ಮಾರ್ಕೆಟ್ ಸುತ್ತಮುತ್ತ 2024ರ ಕ್ಯಾಲೆಂಡರ್‌ನಲ್ಲಿ ಆರ್ಟ್ ಆಫ್ ಲಿವಿಂಗ್ ಮಕ್ಕಳೇ ಪೇಪರ್ ಬ್ಯಾಗನ್ನು ಸ್ವಯಂ ಸಿದ್ಧಪಡಿಸಿ ಪ್ಲಾಸ್ಟಿಕ್‌ನಿಂದ ಆಗುವ ಅನಾನುಕೂಲಗಳ ಬಗ್ಗೆ ಜಾಗೃತಿ ಮೂಡಿಸಿದರು.

ಪ್ಲಾಸ್ಟಿಕ್ ಚೀಲ ಬಿಡಿ, ಪೇಪರ್ ಬ್ಯಾಗ್, ಬಟ್ಟೆ ಬ್ಯಾಗ್ ಬಳಸಿ ಎಂದು ಘೋಷಣೆ ಕೂಗಿ ಗ್ರಾಹಕರಿಗೆ ಪೇಪರ್ ಬ್ಯಾಗ್ ವಿತರಿಸಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ನಗರಪಾಲಿಕೆ ಮಾಜಿ ಸದಸ್ಯ ಮಾ.ವಿ.ರಾಮ್‌ಪ್ರಸಾದ್ ಮಾತನಾಡಿ, ಆರ್ಟ್ ಆಫ್ ಲಿವಿಂಗ್ ಮಕ್ಕಳು ಪೇಪರ್ ಬ್ಯಾಗನ್ನು ಸ್ವಯಂ ಪ್ರೇರಿತರಾಗಿ ತಯಾರಿಸಿ ಜಾಗೃತಿ ಮೂಡಿಸುತ್ತಿರುವುದು ನಿಜಕ್ಕೂ ಅತ್ಯುತ್ತಮ ಕೆಲಸ. 2024ರ ನಿಮ್ಮ ಮನೆಯ ಹಳೆ ಕ್ಯಾಲೆಂಡರ್ ಹಾಗೂ ದಿನಪತ್ರಿಕೆಗಳನ್ನು ಬಿಸಾಡದೇ ಈ ರೀತಿ ಬಳಕೆ ಮಾಡುವ ಮೂಲಕ ನಿಮ್ಮ ಸುತ್ತಮುತ್ತ ಪರಿಸರವನ್ನು ಕಾಪಾಡುವುದು ನಮ್ಮೆಲ್ಲರ ಕರ್ತವ್ಯ.

ಪ್ರತಿ ಮೊಹಲ್ಲಾದಲ್ಲೂ ನಗರಪಾಲಿಕೆ ವತಿಯಿಂದ ಜಾಗೃತಿ ಮೂಡಿಸಲು ಅಧಿಕಾರಿಗಳು ಮುಂದಾಗಲಿ ಎಂದು ಕರೆ ನೀಡಿದರು. ನಗರಪಾಲಿಕೆ ಮಾಜಿ ಸದಸ್ಯ ಎಂ.ಡಿ.ಪಾರ್ಥಸಾರಥಿ, ಅಪೂರ್ವ ಸ್ನೇಹ ಬಳಗದ ಅಧ್ಯಕ್ಷ ಅಪೂರ್ವ ಸುರೇಶ್, ಕೆ.ಆರ್.ಬ್ಯಾಂಕ್ ಅಧ್ಯಕ್ಷ ಬಸವರಾಜ್ ಬಸಪ್ಪ, ಹಿರಿಯ ಪತ್ರಕರ್ತ ಅನಿಲ್ ಕುಮಾರ್, ಆರೋಗ್ಯ ನಿರೀಕ್ಷಕ ಶಿವಪ್ರಸಾದ್, ಶಂಕರ್, ಶಿವಲಿಂಗ ಸ್ವಾಮಿ, ಆರ್ಟ್ ಆಫ್ ಲಿವಿಂಗ್ ಸ್ವಯಂಸೇವಕರಾದ ನಂದಿನಿ, ವಿವೇಕ್ ಹಾಗೂ ಆರ್ಟ್ ಆಫ್ ಲಿವಿಂಗ್ ವಿದ್ಯಾರ್ಥಿಗಳು ಹಾಜರಿದ್ದರು.



2024ರ ಕ್ಯಾಲೆಂಡರ್‌ನಲ್ಲಿ ಆರ್ಟ್ ಆಫ್ ಲಿವಿಂಗ್ ಮಕ್ಕಳೇ ಪೇಪರ್ ಬ್ಯಾಗನ್ನು ಸ್ವಯಂಸಿದ್ಧಪಡಿಸಿ ಪ್ಲಾಸ್ಟಿಕ್‌ನಿಂದ ಆಗುವ ಅನಾನುಕೂಲಗಳ ಬಗ್ಗೆ ಮೈಸೂರಿನ ನಂಜುಮಳಿಗೆ ಸುತ್ತಮುತ್ತ ಮಂಗಳವಾರ ಜಾಗೃತಿ ಮೂಡಿಸಿದರು.

ಅವಧಿ ವಿಸ್ತರಣೆ

ಮೈಸೂರು,ಡಿ.31– ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಮೈಸೂರು ಜಿಲ್ಲಾ ವ್ಯಾಪ್ತಿಯ ಶಿಶು ಅಭಿವೃದ್ಧಿ ಯೋಜನೆಗಳಲ್ಲಿ ಖಾಲಿಯಿದ್ದ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳನ್ನು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಳ್ಳದೆ ಇರುವ ಕಾರಣ ಅಂತಹ ಅಭ್ಯರ್ಥಿಗಳಿಗೆ ಜ.5ರವರೆಗೆ ಕಾಲಾವಕಾಶ ಕಲ್ಪಿಸಲಾಗಿದೆ.

ಅಭ್ಯರ್ಥಿಗಳು https://karnemakaone.Kar.nic.in/abcd/ ಮೂಲಕ ಅರ್ಜಿ ಸಲ್ಲಿಸಬಹುದು. ತಾಲೂಕು ಶಿಶು ಅಭಿವೃದ್ಧಿ ಯೋಜನಾ ಕಚೇರಿ ತಿ.ನರಸೀಪುರ–08227–297267, ಹುಣಸೂರು–08222–252254, ಹೆಚ್.ಡಿ.ಕೋಟೆ–08228–255320, ಮೈಸೂರು ನಗರ– 0821–2492962, ಮೈಸೂರು ಗ್ರಾಮಾಂತರ –0821–2569940, ಕೆ.ಆರ್.ನಗರ 08223–262714, ಪಿರಿಯಾಪಟ್ಟಣ–08223–274742, ನಂಜನಗೂಡು–08221–297188, ಬಿಳಿಕೆರೆ– 08221–297171 ಅನ್ನು ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

01.01.2025 ಬುಧವಾರ, ಮಳೆ ನಕ್ಷತ್ರ: ಪೂಷಾ, 29.12.2024 ರಿಂದ 16.01.2025 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಧನುರ್ಮಾಸ, ಶುಕ್ಲ ಪಕ್ಷ, ತಿಥಿ: ಬಿದಿಗೆ, ನಕ್ಷತ್ರ: ಉಷಾ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಪಾಳ್ಯಂ ಶ್ರೀ ಶಾಸ್ತಾ ಪೀಠಂ, ಅಭುಯುದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ :** ಧನುರ್ಮಾಸದ ವಿಶೇಷ ಪೂಜಾ ಲಕ್ಷಾರ್ಚನಾ ಮತ್ತು ಕುಂಭಾಭಿಷೇಕ ಪೂಜಾ ಮಹೋತ್ಸವ, ಬೆಳಗ್ಗೆಯಿಂದ ಮಹತೋಬಾರ ಶ್ರೀ ಧರ್ಮ ಶಾಸ್ತಾ ಸ್ವಾಮಿಯವರಿಗೆ, ಮಹಾಭಿಷೇಕ, ಅಲಂಕಾರ ಸೇವೆ, ನಾಮಾರ್ಚನೆ, ಮಹಾ ನಿವೇದನೆ, ಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಆವರಣ, ರಾಘವೇಂದ್ರನಗರ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಆರೋಗ್ಯಾಯುಷ್ಯ ಆರೋಗ್ಯವರ್ಧಕ ಶಿಬಿರ, ಮೂತ್ರಪಿಂಡ (ಕಿಡ್ನಿ) ಕಾಯಿಲೆಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ.


■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ರಿಂದ.

■ **ಶ್ರೀ ವೀರ ಮಡಿವಾಳ ಮಾಚಿದೇವರ ಸಂಘ :** 2025ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭ, ಮುಖ್ಯ ಅತಿಥಿಗಳು: ಪಿಕೆಟಿಬಿ ಮತ್ತು ಸಿಡಿ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ. ಸಿ. ಪ್ರಶಾಂತ್, ಮೈಸೂರು ಜಿಲ್ಲಾ ಸಂಘದ ಉಪಾಧ್ಯಕ್ಷ ಬಿ.ಜಿ.ಕೇಶವ್, ಮೈಸೂರು ನಗರ ಕಾಂಗ್ರೆಸ್ ಸಮಿತಿ ಹಿಂದುಳಿದ ವರ್ಗಗಳವಿಭಾಗದ ಅಧ್ಯಕ್ಷ ಎನ್.ಆರ್. ನಾಗೇಶ್, ಶ್ರೀ ವೀರ ಮಡಿವಾಳ ಮಾಚಿ ದೇವರ ಸಂಘದ ಅಧ್ಯಕ್ಷ ಸಿ.ಎಸ್. ಮಹೇಶ್,ರಾಮ್ ಕೆಂಬಾಲ್, ವೆಂಕಟೇಶ್, ರವಿಕುಮಾರ್, ಸ್ಥಳ: ಪತ್ರಕರ್ತರ ಭವನ, ತ್ಯಾಗರಾಜ ರಸ್ತೆ,ಬೆಳಗ್ಗೆ 10.30ಕ್ಕೆ.

■ **ಕರ್ನಾಟಕ ಸೇನಾ ಪಡೆ:** ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ, ಸಾನ್ನಿಧ್ಯ: ಪ್ರೊ. ಭಾಷ್ಯಂ ಸ್ವಾಮೀಜಿ, ಕ್ಯಾಲೆಂಡರ್ ಬಿಡುಗಡೆ :ವಿಧಾನ ಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ, ಮುಖ್ಯ ಅತಿಥಿಗಳು : ರಾಜ್ಯ ಒಕ್ಕಲಿಗರ ಸಂಘದ ಕಾಮಗಾರಿ ಅಧ್ಯಕ್ಷ ಸಿ.ಜಿ. ಗಂಗಾಧರ್, ಎಸ್. ಜಯಪ್ರಕಾಶ್, ಡಾ. ಎಂ.ಬಿ. ಮಂಜೇಗೌಡ, ಡಾ. ಎಸ್.ಪಿ.ಯೋಗಣ್ಣ, ಡಾ. ರಘುರಾಂ ವಾಜಪೇಯಿ, ಎಂ.ಎನ್. ದೊರೆಸ್ವಾಮಿ, ಲಕ್ಷ್ಮೀ ನಾರಾಯಣ ಶೆಣೈ, ಡಾ. ಮೊಗಣ್ಣಾಚಾರ್, ಡಾ. ಶಾಂತರಾಜೇ ಅರಸ್, ಸ್ಥಳ: ಶ್ರೀಯೋಗಾ ನರಸಿಂಹಸ್ವಾಮಿ ದೇವಸ್ಥಾನದ ಆವರಣ, ಬೆಳಗ್ಗೆ 11.30ಕ್ಕೆ.

■ **ಶ್ರೀ ಗಣಪತಿ ಸೇವಾ ಮಂಡಳಿ ಟ್ರಸ್ಟ್ :** ಶ್ರೀ ಮದ್ಭಾಗವತ ಸಪ್ತಾಹ, ವಿದುಷಿ ಡಾ.ಜ್ಯೋತಿ ಶಂಕರ್ ಅವರಿಂದ ಬಾಲ ಲೀಲೆಗಳು ಕುರಿತು ಪ್ರವಚನ, ವಿದುಷಿ ಶ್ರುತಿರಂಜನಿ ಶಿಷ್ಯ ವೃಂದದವರಿಂದ ಹಾಡುಗಾರಿಕೆ, ವಿದ್ವಾನ್ ಡಾ. ಎಚ್.ಎಸ್. ತಾಂಡವಮೂರ್ತಿ–ಪಿಟೀಲು, ಸುಮುಖ– ಮೃದಂಗ, ಸ್ಥಳ: ರಜತ ಸಭಾ ಮಂಟಪ, ಗಣಪತಿ ದೇವಸ್ಥಾನ, ಐ–ಬ್ಲಾಕ್, ರಾಮಕೃಷ್ಣನಗರ, ಸಂಜೆ 6ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ರಂಗ ದಿಗ್ಗಜರು– ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆಯ ಮರೆಯಬಾರದ ಮಹನೀಯರು, ಲೇಖನ– ಎಸ್. ರಾಮನಾಥ್, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎಂ.ಎ. ಶೋಭಾ, ಕೆ.ಪಿ. ರೇವತಿ, ವ್ಯಾಖ್ಯಾನ–ಡಾ. ಲತಾ, ಮೈಸೂರು, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ– 'ಲಾಜಿಸ್ಟಿಕ್ಸ್ ಅಂದರೆ ಸರಕು ಸಾಗಣೆ ವಿಷಯದಲ್ಲಿ ಇರುವ ವೃತ್ತಿಪರ ಅವಕಾಶಗಳು' ಕುರಿತು ಲಾಜಿಸ್ಟಿಕ್ಸ್ ಉದ್ಯಮಿ ವಿಠ್ಠಲ. ಹೆಚ್. ಜಿ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.35 ಆಯುಷ್ ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.40 ದೇವರನಾಮ, 12.45ಜನಪದ ಸಂಗೀತ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, 4.00 ಮಹಿಳಾರಂಗ, 4.45 ಹಿಂದಿ ಪಾಠ–ಡಾ. ಜಯಂತಿ ಪ್ರಸಾದ್ ನೌಟಿಯಾಲ್, 6.50 ಕೃಷಿರಂಗ : ಮೇವು– ಮೆಲುಕು–ಮೇವಿನ ಬೆಳೆಗಳ ಬೇಸಾಯ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ. ವಿವಿಧ ಮೇವು ಬೆಳೆಗಳಲ್ಲಿ ಸುಧಾರಿತ ತಳಿಗಳು. ಈ ಕುರಿತು ಮಂಡ್ಯದ ವಿ.ಸಿ. ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಮೇವು ಅಭಿವೃದ್ಧಿ ವಿಭಾಗದ ಪ್ರಾಧ್ಯಾಪಕರಾದ ಡಾ. ಪಿ.ಮಹದೇವು ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್. ಕೇಶವಮೂರ್ತಿ, 7.45 ಸವಿನೆನಪು, 9.30 ಕ್ರೀಡಾಲೋಕ, 10.00 ಜನಪದ ಸಂಗೀತ, 10.30 ಸವಿನೆನಪು

■ **ಜೆಎಸ್‌ಎಸ್ ಸಂಗೀತ ಸಭಾ :** ರಾಜ್ಯ ಸಂಗೀತ ವಿದ್ವಾನ್ ಎಸ್. ಮಹದೇವಪ್ಪ ಸ್ಮಾರಕ ಸಂಗೀತ ಕಾರ್ಯಕ್ರಮ, ಮೈಸೂರು ನಾಗರಾಜ್ ಮತ್ತು ಡಾ. ಎಂ. ಮಂಜುನಾಥ್ ಅವರಿಂದ ದ್ವಂದ್ವ ವಯೋಲಿನ್, ಅನಂತ ಆರ್. ಕೃಷ್ಣನ್–ಮೃದಂಗ, ಓಜಸ್ ಆದಿಯಾ–ತಬಲ, ಸ್ಥಳ: ನವಜ್ಯೋತಿ ಸಭಾಂಗಣ, ಜೆಎಸ್‌ಎಸ್ ಮಹಿಳಾ ಕಾಲೇಜು, ಸರಸ್ವತಿಪುರಂ, ಸಂಜೆ 6ಕ್ಕೆ.

■ **ಹೆಬ್ಬಾರ್ ಶ್ರೀ ವೈಷ್ಣವ ಸಭಾ (ಬೆಂಗಳೂರು), ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ :** ಬೆಂಗಳೂರು ಮಹಾರಾಣಿ ಕಾಲೇಜು ನಿವೃತ್ತ ಸಂಸ್ಕೃತ ಪ್ರಾಧ್ಯಾಪಕ ಕೆ.ಎಸ್. ಶ್ರೀಧರನ್ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಸನಾತನ ಸಭಾ, ಜಯನಗರ, ಸಂಜೆ 6.15 ರಿಂದ.

■ **ಶ್ರೀ ಕೃಷ್ಣ ಟ್ರಸ್ಟ್, ಶ್ರೀ ಕೃಷ್ಣ ಮಿತ್ರ ಮಂಡಳಿ :** ಹಿರಿಯ ಸ್ವಾಮೀಜಿ ಶ್ರೀ ಶ್ರೀ ವಿಶ್ವೇಶತೀರ್ಥ ಶ್ರೀಪಾದಂಗಳವರ ಆರಾಧನೆ ಪ್ರಯುಕ್ತ ಜ್ಞಾನಯಜ್ಞ ಸಂಭ್ರಮ ಕಾರ್ಯಕ್ರಮದಡಿ ಪಲಿಮಾರು ಮಠದ ಸಂಸ್ಥಾನಾಧೀಶರಾದ ಶ್ರೀ ವಿದ್ಯಾಧೀಶ ತೀರ್ಥ ಶ್ರೀಪಾದಂಗಳವರಿಂದ ಮಹಾಭಾರತದಲ್ಲಿ ಭೀಷ್ಮಪರ್ವ ಕುರಿತು ಪ್ರವಚನ, ಸ್ಥಳ: ಕೃಷ್ಣಧಾಮ, ಸಾಹುಕಾರ್ ಚೆನ್ನಯ್ಯ ರಸ್ತೆ, ಸರಸ್ವತಿಪುರಂ, ಸಂಜೆ 6.30ರಿಂದ.

■ **ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನ :** ತಿರುಪ್ಪಾವೈ ಪ್ರವಚನ ಕಾರ್ಯಕ್ರಮ, ಮೈಸೂರು ಮಹಾರಾಣಿ ಕಲಾ ಕಾಲೇಜು ನಿವೃತ್ತ ಸಂಸ್ಕೃತ ಪ್ರಾಧ್ಯಾಪಕಿ, ವಿದುಷಿ ಡಾ. ಕೆ.ಎಲ್. ಪ್ರಸನ್ನಾಕ್ಷಿ ವಿದ್ವನ್ಮಣಿ, ದರ್ಶನ ವಾರಿಧಿ ಡಾ. ಕೆ.ಎಲ್. ಪ್ರಸನ್ನಾಕ್ಷಿ ಅವರಿಂದ, ಸ್ಥಳ: ದೇವಸ್ಥಾನದ ಆವರಣ, ತ್ಯಾಗರಾಜ ರಸ್ತೆ, ಸಂಜೆ 6.30ಕ್ಕೆ

■ **ಧಾತ್ರಿ ರಂಗ ಸಂಸ್ಥೆ, ಸಿರಿಗೇರಿ, ಸಂಚಲನ ಮೈಸೂರು :** ಸಂಚಲನ ರಂಗೋತ್ಸವ, ಉಪಸ್ಥಿತರು : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವಿಶ್ರಾಂತ ಉಪನಿರ್ದೇಶಕ ಮ.ಗು.ಸದಾನಂದಯ್ಯ, ಹಿರಿಯ ಪತ್ರಕರ್ತ ಕೆ. ನರಸಿಂಹಮೂರ್ತಿ, ಪ್ರಾಸ್ತಾವಿಕ ನುಡಿ : ಸಂಚಲನ ಮೈಸೂರು ಅಧ್ಯಕ್ಷ ದೀಪಕ್ ಮೈಸೂರು, ಮೈಸೂರು ಜಿಲ್ಲಾ ಹವ್ಯಾಸಿ ರಂಗಕರ್ಮಿಗಳ ವೇದಿಕೆ ಅಧ್ಯಕ್ಷ ರಾಜೇಶ್ ತಲಕಾಡು, ಮೋಳಿಗೆ ಮಾರಯ್ಯ ನಾಟಕ ಪ್ರದರ್ಶನ, ರಚನೆ : ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ಸಾಣೇಹಳ್ಳಿ, ಪರಿಕರ : ರಾಮಚಂದ್ರ ಶೇರೀಕಾರ್, ಸಂಗೀತ ಮತ್ತು ನಿರ್ದೇಶನ : ಜಗದೀಶ್ ಆರ್. ಜಾಣಿ, ಸ್ಥಳ: ಕಿರುರಂಗ ಮಂದಿರ, ಸಂಜೆ 6.30ಕ್ಕೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಜನವರಿ 1 ಬುಧವಾರ 2025

45

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 255 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಮೈಸೂರಲ್ಲಿ ಮೊಳಗಿದ 'ಹ್ಯಾಪಿ ನ್ಯೂ ಇಯರ್' ಹರ್ಷೋದ್ಗಾರ

■ ನೂತನ ವರ್ಷ 2025ಕ್ಕೆ ಸಂಭ್ರಮದ ಸ್ವಾಗತ ■ ಕಳೆಗಟ್ಟಿದ ಹೊಸ ವರ್ಷದ ಹರುಷ







ಮೈಸೂರು,ಡಿ.31(ಪಿಎಂ)– 'ಹ್ಯಾಪಿ ನ್ಯೂ ಇಯರ್' ಹರ್ಷೋದ್ಗಾರದೊಂದಿಗೆ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ನೂತನ ವರ್ಷ '2025' ಅನ್ನು ಸಡಗರ–ಸಂಭ್ರಮದಿಂದ ಸ್ವಾಗತಿಸಲಾಯಿತು.

ಮಂಗಳವಾರ ರಾತ್ರಿ ಮೈಸೂರಿನಲ್ಲಿ ಹೊಸ ವರ್ಷಾಚರಣೆಯ ಸಂಭ್ರಮ ಎಲ್ಲೆಡೆ ಕಳೆಗಟ್ಟಿತ್ತು. ವರ್ಷದ ಕೊನೆಯ ಸೂರ್ಯಾಸ್ತವಾಗುತ್ತಿದ್ದಂತೆ ನೂತನ ವರ್ಷಾಚರಣೆಯ ತಯಾರಿಗಳು ಜೋರಾದವು. ವಿದ್ಯುತ್ ದೀಪಗಳಿಂದ ಅಲಂಕೃತಗೊಂಡಿದ್ದ ನಗರದ ಸ್ಟಾರ್ ಹೋಟೆಲ್‌ಗಳಲ್ಲಿ ಡ್ಯಾನ್ಸ್, ಮೋಜು ಮಸ್ತಿಯೊಂದಿಗೆ ನೂತನ ವರ್ಷವನ್ನು ಬರಮಾಡಿಕೊಳ್ಳಲಾಯಿತು. ರಾತ್ರಿ 12 ಗಂಟೆಯಾಗುತ್ತಿದ್ದಂತೆ ಹ್ಯಾಪಿ ನ್ಯೂ ಇಯರ್ ಹರ್ಷೋದ್ಗಾರ ಮುಗಿಲು ಮುಟ್ಟಿತು. ಸ್ಟಾರ್ ಹೋಟೆಲ್‌ಗಳು, ಪಬ್‌ಗಳಲ್ಲಿ ಹೆಚ್ಚಾಗಿ ಯುವ ಜನತೆಯ ಮೋಜು ಮನೆ ಮಾಡಿತ್ತು. ಇವರೊಂದಿಗೆ ಎಲ್ಲಾ ವಯೋಮಾನದವರು ಕುಣಿದು ಕುಪ್ಪಳಿಸಿ ಸಂಭ್ರಮಿಸಿದರು. ವಾರದಿಂದಲೇ ಸಜ್ಜಾಗಿದ್ದ ಹೋಟೆಲ್, ರೆಸಾರ್ಟ್, ಕ್ಲಬ್, ಪಬ್‌ಗಳು ಶೃಂಗಾರಗೊಂಡಿದ್ದವು. ಹೊಸ ವರ್ಷಕ್ಕೆಂದೇ ನೃತ್ಯ, ಸಂಗೀತ, ಗಾಯನ ಸೇರಿದಂತೆ ಸಾಂಸ್ಕೃತಿಕ ಹಾಗೂ ಮನರಂಜನಾ ಕಾರ್ಯಕ್ರಮಗಳು ನಡೆಯುವ ಮೂಲಕ ಹೊಸ ವರ್ಷದ ಹರುಷ ಕಳೆಗಟ್ಟಿತ್ತು. ಈ ಎಲ್ಲೆಡೆ ನೂತನ ವರ್ಷ ಆರಂಭವಾಗುತ್ತಿದ್ದಂತೆ ಕೇಕ್ ಕತ್ತರಿಸಿ ಸಂಭ್ರಮಿಸಲಾಯಿತು. ಹೋಟೆಲ್, ರೆಸ್ಟೋರೆಂಟ್, ಕ್ಲಬ್, ರೆಸಾರ್ಟ್, ಹೋಂ ಸ್ಟೇ, ಸರ್ವಿಸ್ ಅಪಾರ್ಟ್‌ಮಂಟ್, ಅಪಾರ್ಟ್‌ಮೆಂಟ್ ಅಸೋಸಿಯೇಷನ್, ಮಾಲ್ಸ್ ಮತ್ತು ಸಂಘ–ಸಂಸ್ಥೆಗಳಲ್ಲಿ ಹೊಸ ವರ್ಷಾಚರಣೆ ಕಾರ್ಯಕ್ರಮಗಳು ಜರುಗಿದವು. ಪೊಲೀಸ್ ಆಯುಕ್ತರ ಕಚೇರಿಯಿಂದ ಅನುಮತಿಯೊಂದಿಗೆ ಇವುಗಳಲ್ಲಿ ನೂತನ ವರ್ಷಾಚರಣೆಗೆ ಅವಕಾಶ ಕಲ್ಪಿಸಲಾಗಿತ್ತಲ್ಲದೆ, ಮಧ್ಯರಾತ್ರಿ 1 ಗಂಟೆಯೊಳಗೆ ಕಡ್ಡಾಯವಾಗಿ ಕಾರ್ಯಕ್ರಮ ಮುಕ್ತಾಯಗೊಳಿಸಲು ಹಾಗೂ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಕ್ರಮ ವಹಿಸಲು ಷರತ್ತು ವಿಧಿಸಲಾಗಿತ್ತು. ಅನೇಕರು ತಮ್ಮ ಮನೆಗಳಲ್ಲೇ ರಾತ್ರಿ 12 ಗಂಟೆಗೆ ಕೇಕ್ ಕತ್ತರಿಸಿ ಹೊಸ ವರ್ಷಾಚರಣೆಯೊಂದಿಗೆ ಪರಸ್ಪರ ಶುಭಾಷಯ ವಿನಿಮಯ ಮಾಡಿಕೊಂಡರು. ಈ ಪೈಕಿ ಬಹುತೇಕ ಕಡೆಗಳಲ್ಲಿ ಬಗೆಬಗೆಯ ಖಾದ್ಯ ಸವಿರುಚಿ ಸವಿಯುವುದರೊಂದಿಗೆ ಪಾನಗೋಷ್ಠಿಗಳು ■ 6ನೇ ಪುಟಕ್ಕೆ



ಅರಮನೆ ಫಲಪುಷ್ಪ ಪ್ರದರ್ಶನಕ್ಕೆ ತೆರೆ

ಮೈಸೂರು,ಡಿ.31(ಪಿಎಂ)– ಹೊಸ ವರ್ಷದ ಹೊಸ್ತಿಲಲ್ಲಿ ಅರಮನೆ ಆವರಣದಲ್ಲಿ ಡಿ.21ರಿಂದ ಹಮ್ಮಿಕೊಂಡಿದ್ದ 11 ದಿನಗಳ ಆಕರ್ಷಕ ಫಲಪುಷ್ಪ ಪ್ರದರ್ಶನಕ್ಕೆ ಮಂಗಳವಾರ ತೆರೆ ಬಿದ್ದಿತು. ಫಲಪುಷ್ಪ ರಾಶಿಯಲ್ಲಿ ಅರಳಿದ್ದ ವಿವಿಧ ಕಲಾಕೃತಿ ಗಳನ್ನು ಲಕ್ಷಾಂತರ ಮಂದಿ ಕಣ್ತುಂಬಿಕೊಂಡು ಸಂಭ್ರಮಿಸಿದರು.

ಆಗಸದಲ್ಲಿ ಮೂಡದ ಬೆಳಕಿನ ಚಿತ್ತಾರ: ಈ ವರ್ಷ ಅರಮನೆ ಮಂಡಳಿಯಿಂದ ಆಯೋಜನೆಗೊಂಡಿದ್ದ ಪೊಲೀಸ್ ಇಲಾಖೆಯ ಕರ್ನಾಟಕ ಮತ್ತು ಆಂಗ್ಲ ಬ್ಯಾಂಡ್ ಕಾರ್ಯಕ್ರಮದ ಸಂಗೀತ ಕಾರಂಜಿ ಹೊಮ್ಮಲಿಲ್ಲ. ಜೊತೆಗೆ ಹಸಿರು ಪಟಾಕಿ ಆಗಸದಲ್ಲಿ ಚಿತ್ತಾರವನ್ನೂ ಬಿಡಿಸಲಿಲ್ಲ. ಮಾಜಿ ಪ್ರಧಾನ ಮಂತ್ರಿ ಡಾ.ಮನಮೋಹನ್ ಸಿಂಗ್ ನಿಧನದ ಶೋಕಾಚರಣೆ ಕಾರಣ ಅರಮನೆ ಮಂಡಳಿ ಈ ಕಾರ್ಯಕ್ರಮಗಳನ್ನು ರದ್ದುಪಡಿಸಿತು. ಹೀಗಾಗಿ ಈ ಬಾರಿ ಅರಮನೆ ಅಂಗಳದಲ್ಲಿ ಸಂಗೀತದ ನಿನಾದ ಹಾಗೂ ಪಟಾಕಿಯ ಬೆಳಕಿನ ವೈಯ್ಯಾರ ಇರಲಿಲ್ಲ.

ಶುಭಾಶಯಗಳು

ನಮ್ಮೆಲ್ಲಾ ಓದುಗರು, ಚಂದಾದಾರರು, ಜಾಹೀರಾತುದಾರರು, ಪತ್ರಿಕೆ ವಿತರಕರು, ಅಭಿಮಾನಿಗಳು, ಹಿತೈಷಿಗಳು ಹಾಗೂ ನಾಡಿನ ಸಮಸ್ತರಿಗೂ ಹೊಸ ವರ್ಷದ ಶುಭಾಶಯಗಳು –ಸಂ.

ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ಸಿ.ಟಿ.ರವಿ ದೂರು
ಬೆಳಗಾವಿ ಪೊಲೀಸ್ ಅಧಿಕಾರಿಗಳ ಮೂಲಕ ನನ್ನ ಎನ್‌ಕೌಂಟರ್ ಪ್ರಯತ್ನ ನಡೆದಿತ್ತು...

● ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಈ ಪ್ರಯತ್ನ ಮಾಡಿದ್ದರು ● ಇವರುಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಿ


ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ರಾಜ್ಯ ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್ ಅವರಿಗೆ ಲಿಖಿತ ದೂರು ಸಲ್ಲಿಸಿದರು.

ಬೆಂಗಳೂರು, ಡಿ.31(ಕೆಎಂಶಿ)– ಬೆಳಗಾವಿಯ ಹಿರಿಯ ಪೊಲೀಸ್ ಅಧಿಕಾರಿಗಳ ಮೂಲಕ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಮ್ಮನ್ನು ಎನ್‌ಕೌಂಟರ್ ಮಾಡಿಸುವ ಪ್ರಯತ್ನ ಮಾಡಿದ್ದರೆಂದು ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ಲಿಖಿತ ದೂರು ಸಲ್ಲಿಸಿದ್ದಾರೆ. ■ 6ನೇ ಪುಟಕ್ಕೆ

ಇದುವರೆಗೆ ಪರಿಶೀಲಿಸಿದ ಮೈಸೂರು ನಗರಪಾಲಿಕೆ ದಾಖಲಾತಿಗಳಲ್ಲಿ 'ಪ್ರಿನ್ಸೆಸ್ ರಸ್ತೆ' ಉಲ್ಲೇಖವಿಲ್ಲ

● ಕಾಂಗ್ರೆಸ್ ನಿಯೋಗಕ್ಕೆ ನಗರ ಪಾಲಿಕೆ ಆಯುಕ್ತ ಅಸಾದ್ ಉರ್ ರೆಹಮಾನ್ ಷರೀಫ್ ಸ್ಪಷ್ಟನೆ ● 1999 ರಿಂದ 2024ರ ದಾಖಲಾತಿಯಲ್ಲಿ 'ಪ್ರಿನ್ಸೆಸ್' ಉಲ್ಲೇಖವಿಲ್ಲ; 1964ರ ನಂತರದ ದಾಖಲಾತಿ ಪರಿಶೀಲನೆ ನಡೆಯುತ್ತಿದೆ ● ಆಕ್ಷೇಪಣೆ ಸಲ್ಲಿಸಲು ಇನ್ನು ಸಮಯಾವಕಾಶವಿದೆ


ಮೈಸೂರು ನಗರ ಪಾಲಿಕೆಯ ಕೌನ್ಸಿಲ್ ಸಭಾಂಗಣದಲ್ಲಿ ಮಂಗಳವಾರ ಕೆಆರ್‌ಎಸ್ ರಸ್ತೆಗೆ ಸಿದ್ದರಾಮಯ್ಯ ಹೆಸರು ನಾಮಕರಣ ಮಾಡುವ ಸಂಬಂಧ ಕಾಂಗ್ರೆಸ್ ನಿಯೋಗ ನಗರಪಾಲಿಕೆ ಆಯುಕ್ತ ಅಸಾದ್ ಉರ್ ರೆಹಮಾನ್ ಷರೀಫ್ ಅವರನ್ನು ಭೇಟಿ ಮಾಡಿ, ಚರ್ಚಿಸಿತು.

ಮೈಸೂರು, ಡಿ.31(ಬಿಎಲ್‌ಯು)– ಸದ್ಯ ಪರಿಶೀಲನೆ ನಡೆಸಿರುವ ಮೈಸೂರು ನಗರಪಾಲಿಕೆ ದಾಖಲಾತಿಗಳಲ್ಲಿ ಕೆಆರ್‌ಎಸ್ ರಸ್ತೆ ವಿಚಾರದಲ್ಲಿ 'ಪ್ರಿನ್ಸೆಸ್ ರಸ್ತೆ' ಉಲ್ಲೇಖವಿಲ್ಲ ಎಂದು ನಗರ ಪಾಲಿಕೆ ಆಯುಕ್ತ ಅಸಾದ್ ಉರ್ ರೆಹಮಾನ್ ಷರೀಫ್ ಸ್ಪಷ್ಟಪಡಿಸಿದ್ದಾರೆ. ಮೈಸೂರಿನ ಕೆಆರ್‌ಎಸ್ ರಸ್ತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹೆಸರು ನಾಮಕರಣ ಮಾಡುವಂತೆ ತಮ್ಮನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ಕಾಂಗ್ರೆಸ್ ನಿಯೋಗಕ್ಕೆ ಅಸಾದ್ ಉರ್ ರೆಹಮಾನ್ ಷರೀಫ್ ಈ ಸ್ಪಷ್ಟನೆ ನೀಡಿದ್ದಾರೆ.

ಮೈಸೂರಿನ ಶ್ರೀ ಲಕ್ಷ್ಮಿ ವೆಂಕಟರಮಣ ಸ್ವಾಮಿ ದೇವಸ್ಥಾನ ವೃತ್ತದಿಂದ ರಿಂಗ್ ರಸ್ತೆಯ ರಾಯಲ್ ಇನ್ ಹೋಟೆಲ್ ಜಂಕ್ಷನ್ ತನಕ ಸಿದ್ದರಾಮಯ್ಯ ಆರೋಗ್ಯ ಮಾರ್ಗ ಹೆಸರು ನಾಮಕರಣ ಮಾಡುವಂತೆ ಶಾಸಕ ಕೆ.ಹರೀಶ್‌ಗೌಡ, ನ.13 ರಂದು ಮನವಿ ಸಲ್ಲಿಸಿದ್ದರು.

ನಗರ ಪಾಲಿಕೆ ವ್ಯಾಪ್ತಿಯ ಯಾವುದಾದರೂ ರಸ್ತೆಗೆ ಸಿದ್ದರಾಮಯ್ಯ ಅವರ ಹೆಸರಿಡಲಾಗಿದೆಯೇ ಎಂಬುದನ್ನು ಪರಿಶೀಲನೆ ನಡೆಸಿ ವರದಿ ನೀಡುವಂತೆ 9 ವಲಯ ಕಚೇರಿಗಳಿಗೆ ನವೆಂಬರ್ 14 ರಂದು ಸೂಚನೆ ನೀಡಲಾಗಿತ್ತು. ಆದರೆ ನಗರ ಪಾಲಿಕೆ ವ್ಯಾಪ್ತಿಯ ಯಾವ ರಸ್ತೆಗೂ ಸಿದ್ದರಾಮಯ್ಯ ಹೆಸರಿಟ್ಟಿಲ್ಲ ಎಂಬುದು ಅಧಿಕಾರಿಗಳ ವರದಿಯಿಂದ ಸ್ಪಷ್ಟವಾಯಿತು ■ 6ನೇ ಪುಟಕ್ಕೆ

ಮೈಸೂರಿನ ಇನ್ಫೋಸಿಸ್ ಕ್ಯಾಂಪಸ್‌ನಲ್ಲಿ ಚಿರತೆ ಸುಳಿದಾಟ

ಕೂಂಬಿಂಗ್ ಕಾರ್ಯಾಚರಣೆ

● ಉದ್ಯೋಗಿಗಳಲ್ಲಿ ಆತಂಕ; ವರ್ಕ್ ಫ್ರಂ ಹೋಮ್ ವ್ಯವಸ್ಥೆ ● ಕ್ಯಾಂಪಸ್‌ನ ಸಿಸಿ ಕ್ಯಾಮರಾದಲ್ಲಿ ಚಿರತೆ ಓಡಾಡುವ ದೃಶ್ಯ ಸೆರೆ




ಮೈಸೂರಿನ ಇನ್ಫೋಸಿಸ್ ಆವರಣದಲ್ಲಿ ಅಧಿಕಾರಿಗಳು ಸ್ಥಳ ನಕ್ಷೆ ಪರಿಶೀಲಿಸುತ್ತಿರುವುದು. ಬಲಚಿತ್ರದಲ್ಲಿ ಚಿರತೆ ಸೆರೆಗೆ ಕೂಂಬಿಂಗ್ ಕಾರ್ಯಾಚರಣೆ ನಡೆಸುತ್ತಿರುವುದನ್ನು ಕಾಣಬಹುದು.

ಮೈಸೂರು,ಡಿ.31(ಎಂಟಿವೈ)– ಮೈಸೂರಿನ ಇನ್ಫೋಸಿಸ್ ಕ್ಯಾಂಪಸ್‌ನಲ್ಲಿ ಚಿರತೆಯೊಂದು ಸುಳಿದಾಡುತ್ತಿರುವ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದ್ದು, ಚಿರತೆ ಕಾರ್ಯಪಡೆ ಸೇರಿದಂತೆ ಅರಣ್ಯ ಸಿಬ್ಬಂದಿ ಕೂಂಬಿಂಗ್ ಕಾರ್ಯಾಚರಣೆ ಮೂಲಕ ಚಿರತೆ ಸೆರೆಗೆ ಕ್ರಮ ಕೈಗೊಂಡಿದೆ. ಮೈಸೂರು ಸುತ್ತಮುತ್ತ ಚಿರತೆಗಳ ಹಾವಳಿ ಮತ್ತೆ ಹೆಚ್ಚಾಗುತ್ತಿದ್ದು, ತಿಂಗಳ ಹಿಂದಷ್ಟೇ ಯಾದವಗಿರಿ, ಹೆಬ್ಬಾಳು ಕೈಗಾರಿಕಾ ಪ್ರದೇಶದಲ್ಲಿ ಚಿರತೆ ಕಂಡಿದ್ದಾಗಿ ಸ್ಥಳೀಯರು ದೂರಿದ್ದರು. ಇದೀಗ ಇನ್ಫೋಸಿಸ್ ಆವರಣದ ಗೇಟ್–3ರ ಬಳಿ ಭಾರೀ ಗಾತ್ರದ ಚಿರತೆಯೊಂದು ಭದ್ರತಾ ಸಿಬ್ಬಂದಿಯ ಕಣ್ಣಿಗೆ ಬಿದ್ದಿದೆ. ಈ ಬಗ್ಗೆ ಇನ್ಫೋಸಿಸ್ ಸಂಸ್ಥೆಯ ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ.

ಇಂದು ಬೆಳಗ್ಗೆ ಇನ್ಫೋಸಿಸ್ ಆವರಣದಲ್ಲಿ ಅಳವಡಿಸಲಾಗಿರುವ ಸಿಸಿ ಕ್ಯಾಮರಾ ದೃಶ್ಯ ಪರಿಶೀಲಿಸಿದಾಗ ಕ್ಯಾಂಪಸ್ ಕಾಂಪೌಂಡ್ ಕಡೆ ಚಿರತೆ ಸುಳಿದಾಡುತ್ತಿರುವ ದೃಶ್ಯ ಸೆರೆ ಸಿಕ್ಕಿದೆ. ಕೂಡಲೇ ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದಾರೆ. ಡಿಸಿಎಫ್‌ಗಳಾದ ಡಾ.ಐ.ಬಿ.ಪ್ರಭುಗೌಡ, ಡಾ.ಕೆ.ಎನ್.ಬಸವರಾಜು ನೇತೃತ್ವದಲ್ಲಿ ಚಿರತೆ ಕಾರ್ಯಪಡೆ ಹಾಗೂ ಮೈಸೂರು ವಿಭಾಗದ ಅರಣ್ಯ ಸಿಬ್ಬಂದಿಗಳುಳ್ಳ 40 ಮಂದಿಯ ತಂಡ ಇನ್ಫೋಸಿಸ್‌ಗೆ ಭೇಟಿ ನೀಡಿ, ಸ್ಥಳ ಪರಿಶೀಲಿಸಿತು. ಅಲ್ಲದೆ, ಭದ್ರತಾ ಸಿಬ್ಬಂದಿ ■ 6ನೇ ಪುಟಕ್ಕೆ

ಚಿರತೆ ಪತ್ತೆಗೆ ಡ್ರೋನ್ ಕ್ಯಾಮರಾ ಬಳಕೆ: ಈಶ್ವರ್ ಖಂಡ್ರೆ



ಬೆಂಗಳೂರು, ಡಿ.31– ಮೈಸೂರು ನಗರದ ಇನ್ಫೋಸಿಸ್ ಆವರಣದಲ್ಲಿ ಇಂದು ನಸುಕಿನ ಜಾವ 4.30ರ ಸುಮಾರಿನಲ್ಲಿ ಚಿರತೆ ಕಾಣಿಸಿಕೊಂಡಿದ್ದು, ಇದರ ಸೆರೆಗೆ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಿಷಯ ತಿಳಿದ ಕೂಡಲೇ ಚಿರತೆ ಸೆರೆ ಹಿಡಿಯಲು ಚಿರತೆ ಕಾರ್ಯಪಡೆ ತಂಡವನ್ನು ಕಳುಹಿಸಲಾಗಿದೆ. ತಂಡದಲ್ಲಿ ಪಶುವೈದ್ಯರು, ಚಿರತೆ ಸೆರೆ ತರಬೇತಿ ಪಡೆದ 40 ಸಿಬ್ಬಂದಿ ಇದ್ದಾರೆ. ವನ್ಯಜೀವಿ ವಿಭಾಗದ ಅರಣ್ಯಾಧಿಕಾರಿಗಳೂ ಸ್ಥಳದಲ್ಲಿದ್ದು, ಕಾರ್ಯಾಚರಣೆಯ ಉಸ್ತುವಾರಿ ನೋಡಿಕೊಳ್ಳುತ್ತಿದ್ದಾರೆ ಎಂದು ತಿಳಿಸಿದರು. ಸಿಸಿ ಟಿವಿಯಲ್ಲಿ ಚಿರತೆ ಸಂಚಾರದ ದೃಶ್ಯಗಳು ಸೆರೆಯಾಗಿದೆ. ಇಂದು ಮಧ್ಯಾಹ್ನ 12 ಗಂಟೆಯ ಸುಮಾರಿನಲ್ಲಿ ಚಿರತೆ ■ 6ನೇ ಪುಟಕ್ಕೆ

ಸಿಸಿ ಕ್ಯಾಮರಾದಲ್ಲಿ ದೃಶ್ಯ ಸೆರೆ

ಇನ್ಫೋಸಿಸ್ ಆವರಣದಲ್ಲಿ ಚಿರತೆ ಇರುವ ಮಾಹಿತಿ ಬಂದ ಕೂಡಲೇ ನುರಿತ ಸಿಬ್ಬಂದಿಗಳೊಂದಿಗೆ ತೆರಳಿ ಪರಿಶೀಲಿಸಲಾಗಿದೆ. ಚಿರತೆಯನ್ನು ಯಾರು ನೋಡಿಲ್ಲ. ಆದರೆ, ಸಿಸಿ ಕ್ಯಾಮರಾದಲ್ಲಿ ಚಿರತೆ ಸುಳಿದಾಡುತ್ತಿರುವ ದೃಶ್ಯ ಸೆರೆಯಾಗಿದೆ. ಮುಂಜಾಗ್ರತಾ ಕ್ರಮವಾಗಿ ಕಟ್ಟಡದ ಸೆಲ್ಲರ್ ಗೇಟ್ ಹಾಕಿಸಿ, ಕೂಂಬಿಂಗ್ ಕಾರ್ಯಾಚರಣೆ ನಡೆಸಲಾಗುತ್ತಿದೆ. ಇದುವರೆಗೆ ಚಿರತೆ ಸುಳಿವು ಪತ್ತೆಯಾಗಿಲ್ಲ. ಕ್ಯಾಮರಾ ಟ್ರ್ಯಾಪ್ ಅಳವಡಿಸಿ, ಬೋನ್ ಇಡಲಾಗಿದೆ. – ಡಾ.ಐ.ಬಿ.ಪ್ರಭುಗೌಡ, ಡಿಸಿಎಫ್, ವನ್ಯಜೀವಿ ವಿಭಾಗ



ನಕ್ಕರೆ ಅದೇ ಸ್ವರ್ಗ

ಒಂದು ತಿಂಗಳು ಆಸ್ಪತ್ರೆಯಲ್ಲಿದ್ದ ಗುಂಡ ಡಿಸ್ಚಾರ್ಜ್ ಆಗುವ ಮುನ್ನ

ಗುಂಡ : ನೀವು ನನ್ನ ಹೃದಯ ಕದ್ದಿದ್ದೀರಿ. ನಿಮ್ಮನ್ನು ಬಹಳ ಇಷ್ಟ ಪಡ್ತೀನಿ ನಾನು.

ನರ್ಸ್ : ಅಯ್ಯೋ, ಕದ್ದಿದ್ದು ಹೃದಯ ಅಲ್ಲ. ಕಿಡ್ನಿ

ಮೈಸೂರು ಮಿತ್ರ

ಬುಧವಾರ, 1 ಜನವರಿ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ಗಾಳಿಯಂತೆ ನೀನು ಜೀವನದ ಎಲ್ಲಾ ಭಾಗಗಳಲ್ಲೂ ಪ್ರವೇಶ ಪಡೆ. ಆದರೆ, ಅಂಟಿಕೊಳ್ಳಬೇಡ. –ಅವಧೂತ ವೆಂಕಟಾಚಲ ಸದ್ಗುರು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ದಕ್ಷಿಣೆಗಾದರೆ ಮಾತು ಹಿಡಿದಾನು, ಮಂತ್ರಕ್ಕಾದರೆ ಬೆನ್ನು ತೋರ್ಸಿಯಾನು.

ನಿಮ್ಮ ಪತ್ರಗಳು

■ ಸಿದ್ಧಾರ್ಥ ಬಡಾವಣೆಯಿಂದ ವರುಣಾ ಕೆರೆವರೆಗಿನ ರಸ್ತೆಗೆ 'ಸಿದ್ದರಾಮಯ್ಯ ಮಾರ್ಗ' ಹೆಸರಿಡಬಹುದು

ಮಾನ್ಯರೇ,

ಡಿ.26ರ 'ಮೈಸೂರು ಮಿತ್ರ' ಸಂಚಿಕೆಯಲ್ಲಿ ಪ್ರಕಟವಾದ ಸುದ್ದಿಗೆ ಸಂಬಂಧಿಸಿದಂತೆ ರಸ್ತೆಯೊಂದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಸರು ನಾಮಕರಣ ಮಾಡುವುದು ಉತ್ತಮ ಮತ್ತು ಸೂಕ್ತವಾಗಿದೆ. ಆದರೆ ಈಗಿರುವ ಐತಿಹಾಸಿಕ ಮತ್ತು ಪಾರಂಪರಿಕ ರಸ್ತೆಗೆ ಮರುನಾಮಕರಣ ಮಾಡುವುದು ಸೂಕ್ತವಲ್ಲವೆಂಬ ಸಾಮಾನ್ಯ ಜನರ ಭಾವನೆಗಳಿಗೆ ನಾನೂ ಸಹಮತಿಸುತ್ತೇನೆ.

ಈಗ ಹೊಸದಾಗಿ ನಿರ್ಮಿಸಲಾದ ಟ್ರಾಮಾ ಕೇರ್ ಸೆಂಟರ್ (4 ಎಕರೆ) ಮತ್ತು ಜಯದೇವ ಆಸ್ಪತ್ರೆ (16 ಎಕರೆ) ಇರುವ ಪ್ರಿನ್ಸೆಸ್ ರಸ್ತೆ ಮತ್ತು 83 ಎಕರೆಯಲ್ಲಿರುವ ಪಿಕೆಟಿಬಿ ಸ್ಯಾನಿಟೋರಿಯಂ ಆಸ್ಪತ್ರೆಯ ಶ್ರೀಮಂತ ಪರಂಪರೆ ಹಾಗೂ ಐತಿಹಾಸಿಕ ಮಹತ್ವದ ಬಗ್ಗೆ ಅನೇಕರಿಗೆ ತಿಳಿದಿಲ್ಲ.

ಭಾರತದ ಸ್ವಾತಂತ್ರ್ಯ ಹಾಗೂ ಕರ್ನಾಟಕ ರಚನೆಯಾಗುವ ಮೊದಲೇ 1917ರ ಜುಲೈನಲ್ಲಿ ಅಂದಿನ ಮೈಸೂರು ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು 83 ಎಕರೆಗಳಷ್ಟು ಎತ್ತರದ ಪ್ರದೇಶದಲ್ಲಿ ಈ ಆಸ್ಪತ್ರೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದರು. 1921ರ ನ.18ರಂದು ಸಾರ್ವಜನಿಕರ ಸೇವೆಗಾಗಿ ಈ ಆಸ್ಪತ್ರೆಯನ್ನು ಉದ್ಘಾಟಿಸಲಾಯಿತು ಎಂಬುದನ್ನು ಇತಿಹಾಸ ತಿಳಿಸುತ್ತದೆ.

ರಾಜಕುಮಾರಿ ಕೃಷ್ಣಾಜಮ್ಮಣಿ ಮತ್ತು ಅವರ ಹೆಣ್ಣು ಮಕ್ಕಳು ಮಾರಣಾಂತಿಕ ಕ್ಷಯರೋಗಕ್ಕೆ ಬಲಿಯಾದರು. ಇವರ ಸ್ಮರಣೆಯಲ್ಲಿ ಮೈಸೂರಿನ ನಾಗರಿಕರನ್ನು ಈ ಕಾಯಿಲೆಯಿಂದ ರಕ್ಷಿಸಲು ಈ ಆಸ್ಪತ್ರೆ ನಿರ್ಮಿಸಲಾಗಿದೆ. ಹಾಗಾಗಿ ಈ ರಸ್ತೆಯು ಮೈಸೂರು ರಾಜಮನೆತನದ ಕಾಳಜಿ, ಸೇವೆ ಮತ್ತು ತ್ಯಾಗದ ಸಂಕೇತವಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕೊಡುಗೆ ಶ್ಲಾಘನೀಯವೇ ಆಗಿದ್ದರೂ ಮಹತ್ವದ ಪಾರಂಪರಿಕ ಮೌಲ್ಯ ಹೊಂದಿರುವ ರಸ್ತೆಯ ಹೆಸರನ್ನು ಬದಲಾಯಿಸುವ ಅಗತ್ಯವಿಲ್ಲ. ಹೆಸರಿರುವ ರಸ್ತೆಗೆ ಮರುನಾಮಕರಣ ಮಾಡುವ ಬದಲು ಹೊಸ ರಸ್ತೆಗೆ ಸಿದ್ದರಾಮಯ್ಯ ಅವರ ಹೆಸರು ನಾಮಕರಣ ಮಾಡಬಹುದು.

ಉದಾಹರಣೆಗೆ ಸಿದ್ಧಾರ್ಥ ಬಡಾವಣೆ ಜಂಕ್ಷನ್‌ನಿಂದ ವರುಣಾ ಕೆರೆಯವರೆಗೆ ಹೊಸದಾಗಿ ನಿರ್ಮಿಸಿರುವ ಜೋಡಿ ರಸ್ತೆಗೆ 'ಸಿದ್ದರಾಮಯ್ಯ ಮಾರ್ಗ' ಎಂದು ನಾಮಕರಣ ಮಾಡಬಹುದು. ಇದು ಮುಖ್ಯಮಂತ್ರಿಗಳ ಹುಟ್ಟೂರು ಸಿದ್ದರಾಮನ ಹುಂಡಿಗೂ ಸಂಪರ್ಕ ಕಲ್ಪಿಸುತ್ತದೆ. ಆ ಮೂಲಕ ಈ ಕುರಿತಂತೆ ಪರ–ವಿರೋಧ ಚರ್ಚೆಯಲ್ಲಿರುವ ಎಲ್ಲರ ಗೆಲುವೂ ಆಗಲಿದೆ. ಸೂಕ್ತ ಪರಿಹಾರವೂ ದೊರೆತಂತಾಗಲಿದೆ.

–ವಿ.ರಘುನಾಥ ಶರ್ಮ, ಶ್ರೀರಾಂಪುರ

■ ಲಂಚ ಪಟ್ಟಿ ಪ್ರಕಟಿಸುವುದು ಸೂಕ್ತ

ಮಾನ್ಯರೆ,

ನಗರ ಹಾಗೂ ಗ್ರಾಮೀಣ ಜನರು ತಮ್ಮ ಕೆಲಸ ಮಾಡಿಸಿಕೊಳ್ಳಲು ಸರ್ಕಾರದ ಕಚೇರಿಗಳಿಗೆ ದಿನನಿತ್ಯ ಅಲೆಯುವುದನ್ನು ತಪ್ಪಿಸಲು ಯಾರಿಗೆ ಎಷ್ಟು ಲಂಚ ಎಂಬ ಪಟ್ಟಿ ಪ್ರಕಟಿಸುವುದು ಸೂಕ್ತ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡರು ಆಕ್ರೋಶ ವ್ಯಕ್ತಪಡಿಸಿರುವುದು ಶ್ಲಾಘನೀಯ. ಮಂತ್ರಿಗಳಿಗೂ ಹಣ ನೀಡಬೇಕು ಎನ್ನುತ್ತೀರಲ್ಲ ಅವರಿಗೆ ಎಷ್ಟು ಕೊಡಬೇಕು ಎಂಬುದನ್ನು ಪಟ್ಟಿಯ ಮೇಲ್ಭಾಗದಲ್ಲೇ ಪ್ರಕಟಿಸಿದರೆ ಸಾರ್ವಜನಿಕರು ಲಂಚ ನೀಡಿ ತಮ್ಮ ಕೆಲಸ ಮಾಡಿಸಿಕೊಳ್ಳಲು ಅನುಕೂಲವಾಗುತ್ತದೆ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿರುವುದು ಅಭಿನಂದನಾರ್ಹ.

ಸಣ್ಣ ಪುಟ್ಟ ಕೆಲಸಗಳಿಗೂ ಹತ್ತಾರು ಬಾರಿ ಅಲೆದು, ಕೊನೆಗೆ ಮಧ್ಯವರ್ತಿಗಳಿಗೆ ಹಣ ನೀಡಿ ಕೆಲಸ ಮಾಡಿಸಿಕೊಳ್ಳುವ ಬದಲು, ಹೋಟೆಲ್‌ಗಳಲ್ಲಿ ತಿಂಡಿಗೆ ಬೆಲೆ ನಿಗದಿ ಮಾಡಿದಂತೆ ಯಾವ ಯಾವ ಕೆಲಸಕ್ಕೆ ಎಷ್ಟು ಹಣ ನೀಡಬೇಕು ಎಂಬುದನ್ನು ಪ್ರಕಟಿಸಿದರೆ ಉತ್ತಮ. ನೀವು ಸರ್ಕಾರದ ವ್ಯವಸ್ಥೆಯಲ್ಲಿದ್ದೀರಾ ಅಥವಾ ನಿಮ್ಮ ಸ್ವಂತ ವ್ಯವಸ್ಥೆಯಲ್ಲಿದ್ದೀರಾ ನೀವು ಹೇಳಿದಷ್ಟೇ ಸರ್ಕಾರಿ ಕೆಲಸ ಅಲ್ಲವೇ ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿರುವುದು ಗಮನಾರ್ಹ ಅಂಶ. ಇದುವರೆಗೆ ಸರ್ಕಾರದ ಚುಕ್ಕಾಣಿ ಹಿಡಿದ ಯಾವುದೇ ಜನಪ್ರತಿನಿಧಿಗಳಿಂದಲೂ ಲಂಚದ ಪಿಡುಗನ್ನು ನಿರ್ಮೂಲನೆ ಮಾಡಲು ಸಾಧ್ಯವಾಗಿಲ್ಲ. ಸರ್ಕಾರದ ಪ್ರತಿಯೊಂದು ಇಲಾಖೆಯಲ್ಲೂ ಲಂಚದ ಪಿಡುಗು ಸರ್ವೇಸಾಮಾನ್ಯವಾಗಿದೆ ಎಂದು ಸಾರ್ವಜನಿಕರು ಇಲಾಖೆಗಳ ಮುಂದೆ ಮಾತನಾಡುತ್ತಾ ಇರುವುದು ಪ್ರತಿನಿತ್ಯ ನೋಡುವಂತಾಗಿದೆ. ಈ ಪಿಡುಗು ಎಂದು ಕೊನೆಗೊಳ್ಳುತ್ತದೆ ಕಾದು ನೋಡೋಣ.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.

■ ಕೆಎಎಸ್ ಉದ್ಯೋಗಾಕಾಂಕ್ಷಿಗಳ ಕನಸಿಗೆ ಕೊಳ್ಳಿ

ಮಾನ್ಯರೆ,

ಆಗಸ್ಟ್‌ನಲ್ಲಿ ಕೆಪಿಎಸ್‌ಸಿ ನಡೆಸಿದ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ನೇಮಕಾತಿ ಪೂರ್ವಭಾವಿ ಪರೀಕ್ಷೆ ಭಾಷಾಂತರದಲ್ಲಿ ದೊಡ್ಡಮಟ್ಟದ ಲೋಪವಾದ ಕಾರಣಕ್ಕಾಗಿ ಕಳೆದ ಭಾನುವಾರ ಮರು ಪರೀಕ್ಷೆ ನಡೆಸಲಾಯಿತು, ಉದ್ಯೋಗಾಕಾಂಕ್ಷಿಗಳ ಕನಸನ್ನು ನಾಶ ಮಾಡುವುದಕ್ಕಾಗಿಯೇ ಹೊರಟಂತಿರುವ ವ್ಯವಸ್ಥೆಯು ಈ ಬಾರಿಯೂ ಅದೇ ಲೋಪ ಎಸಗಿದೆ. ಕೆಪಿಎಸ್‌ಸಿ ಸಂಸ್ಥೆಯು ನ್ಯಾಯಯುತವಾಗಿ ಹಾಗೂ ನಿಖರವಾಗಿ ಪರೀಕ್ಷೆಗಳನ್ನು ನಡೆಸುವುದರಲ್ಲಿ ಆಗಿಂದಾಗ್ಗೆ ವಿಫಲವಾಗುತ್ತಿರುವುದರಿಂದ ಉದ್ಯೋಗ ನಿರೀಕ್ಷೆಯಲ್ಲಿ ಇರುವ ಯುವಕರಿಗೆ ಬಹಳವೇ ತೊಂದರೆ ಆಗುತ್ತಿದೆ.

ಕೆಪಿಎಸ್‌ಸಿಯು ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸುವುದರಲ್ಲಿ ಸಮರ್ಥವಾಗಿಲ್ಲ ಎನ್ನುವುದನ್ನು ಪದೇ ಪದೇ ಸಾಬೀತುಪಡಿಸಿಕೊಂಡು ಬರುತ್ತಿದೆ. ಕೆಎಎಸ್ ಹುದ್ದೆಯು ರಾಜ್ಯದ ಅಭಿವೃದ್ಧಿ ಹಾಗೂ ಸದೃಢ ಆಡಳಿತದ ದೃಷ್ಟಿಯಿಂದ ಪ್ರಮುಖವಾದ ಹುದ್ದೆಯಾಗಿದ್ದು, ಪ್ರತಿಭಾವಂತ ಯುವಕರ ನೇಮಕಾತಿಯ ಅಗತ್ಯವಿದೆ. ಆದರೆ ಬಹುಪಾಲು ಈ ಹುದ್ದೆಗೆ ತಾಳಿಭಾಗ್ಯ(ಗಣ್ಯರ ಮಕ್ಕಳನ್ನು ಮದುವೆ ಆಗುವ ಅಭ್ಯರ್ಥಿ) ಲಕ್ಷ್ಮೀಭಾಗ್ಯ(ಹಣ ಕೊಟ್ಟು ಹುದ್ದೆ ಗಿಟ್ಟಿಸುವ ಅಭ್ಯರ್ಥಿ)ಗಳಂತಹ ಅಭ್ಯರ್ಥಿಗಳು ಆಯ್ಕೆ ಆಗುತ್ತಿರುವುದು ಸಮಾಜಕ್ಕೆ ತಿಳಿಯದ ವಿಷಯವೇನಲ್ಲ, ಇದಕ್ಕೆ ನಡೆದ ಹಗರಣಗಳು ಪತ್ರಿಕೆಗಳಲ್ಲಿ ಸುದ್ದಿ ಆಗಿರುವುದೇ ಸಾಕ್ಷಿ.

ಕೆಪಿಎಸ್‌ಸಿ ಸಂಸ್ಥೆಯು ಪರೀಕ್ಷೆ ನಡೆಸಲು ಅನರ್ಹವಾಗಿದೆ, ಇದರ ಬದಲಾಗಿ ಪ್ರತೀ ವರ್ಷ ಯುಪಿಎಸ್‌ಸಿ ನಡೆಸುವ ಐಎಎಸ್ ಪರೀಕ್ಷೆಯ ಫಲಿತಾಂಶದ ರ್‍ಯಾಂಕಿಂಗ್ ಪಟ್ಟಿಯನ್ನು ಪಡೆದು ಕೇಂದ್ರ ಸರ್ಕಾರದ ಹುದ್ದೆಗೆ ಆಯ್ಕೆಯಾದ ನಂತರದ ಶ್ರೇಣಿಯಲ್ಲಿ ಬರುವ ಕರ್ನಾಟಕ ರಾಜ್ಯದ ಮಕ್ಕಳನ್ನು ಆಯ್ಕೆ ಮಾಡಿಕೊಳ್ಳುವುದು ಸೂಕ್ತ, ಇದರಿಂದ ಹುದ್ದೆಗೆ ಹಾಗೂ ಶ್ರಮ ಹಾಕಿ ಪರೀಕ್ಷೆ ಎದುರಿಸಿದ ಮಕ್ಕಳಿಗೆ ನ್ಯಾಯ ಒದಗಿಸಿದಂತೆ ಆಗುವುದು ಜೊತೆಗೆ ಪರೀಕ್ಷೆ ನಡೆಸಲು ಖರ್ಚು ಮಾಡುವ ಕೋಟ್ಯಾಂತರ ಹಣವೂ ಸಹ ಸರ್ಕಾರಕ್ಕೆ ಉಳಿತಾಯ ಆಗುವುದು.

–ಮಿರ್ಲೆ ಚಂದ್ರಶೇಖರ, ಲೇಖಕರು, ಮೈಸೂರು.




ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಸಿಪಿಕೆ ಅವರ ಚಿಂತನ ಚಿಂತಾಮಣಿ

ಕನ್ನಡ ಸಾಹಿತ್ಯಕ್ಕೆ ಅಮೂಲ್ಯ ಕೊಡುಗೆ ಕೊಡುತ್ತಿರುವ ಹಿರಿಯ ಚೇತನ ಸಿ.ಪಿ.ಕೆ. ಎಂದೇ ಜನಮನದಲ್ಲಿ ನೆಲೆಯೂರಿರುವ ಪ್ರೊ. ಸಿ.ಪಿ. ಕೃಷ್ಣಕುಮಾರ್. ಅವರು ಎಷ್ಟು ಬರೆದಿದ್ದಾರೆ, ಎಷ್ಟು ಸಾರ್ವಜನಿಕ ಸ್ಥಳಗಳಲ್ಲಿ ಉಪನ್ಯಾಸಗಳನ್ನು ನೀಡಿದ್ದಾರೆ, ಎಷ್ಟು ಜನ ವಿದ್ಯಾರ್ಥಿಗಳಲ್ಲಿ ಕನ್ನಡ ಪ್ರೀತಿ ಬಿತ್ತಿ ಬೆಳೆಸಿದ್ದಾರೆ ಎಂದು ಹೇಳಲು ಗಣಕ ಯಂತ್ರವೂ ಶಕ್ತವಾಗುವುದೋ ಇಲ್ಲವೋ. ಅವರ ಭಾಷಣ ಅಥವಾ ಉಪನ್ಯಾಸ ಅಥವಾ ಪ್ರವಚನ ಎಂದರೆ ಅದು ವಿಚಾರಾಮೃತಧಾರೆ. ಒಂದು ವಿದ್ವತ್ಸಭೆಯಲ್ಲಿ ಅವರು ಗಂಭೀರವಾಗಿ ಕಾವ್ಯ ಮೀಮಾಂಸೆಯ ಬಗೆಗೆ ಮಾತನಾಡುತ್ತಿದ್ದರು. ಎಲ್ಲರೂ ತದೇಕ ಚಿತ್ತರಾಗಿ ಕೇಳುತ್ತಿದ್ದರು. ನಾನೂ ಶ್ರೋತೃವಾಗಿ ಕೇಳುತ್ತಿದ್ದೆ. ಆಗ ವ್ಯವಸ್ಥಾಪಕರ ಕಡೆಯವರಲ್ಲೊಬ್ಬರು 'ಸಮಯ ಮುಗಿಯಿತು' ಎಂದು ಸೂಚನೆಯನ್ನು ಕೊಡಲು ಚೀಟಿಯೊಂದನ್ನು ಸಿಪಿಕೆ ಅವರಿಗೆ ಕೊಟ್ಟರು. ವಾಗ್ಝರಿಗೆ ಅಡ್ಡಿಯಾದಾಂತಾಯಿತು. ಒಂದು ಕ್ಷಣ ಸಿಪಿಕೆ ಮೌನ ವಹಿಸಿದರು. ಆಗ ಶ್ರೋತೃಗಳಲ್ಲೊಬ್ಬರಾಗಿದ್ದ ಶತಾವಧಾನಿ ಡಾ.ಆರ್.ಗಣೇಶ್ ಅವರು ಎದ್ದು ನಿಂತು 'ದಯವಿಟ್ಟು ತಮ್ಮ ಮಾತನ್ನು ಮುಂದು ವರಿಸಬೇಕು. ಇಷ್ಟು ಸೂಕ್ಷ್ಮ ವಿಷಯಗಳನ್ನು ಕೇಳಲು ನಮಗೆ ಮತ್ತೆ ಅವಕಾಶ ಸಿಗಲಾರದು' ಎಂದು ಬಿನ್ನವಿಸಿದರು. ಭಾಷಣ ಮುಂದುವರಿಯಿತು. ಕೇಳುಗರೆಲ್ಲರಿಗೂ ರಸದೌತಣ ಲಭ್ಯವಾಯಿತು.



ಇಂತಹ ಸನ್ನಿವೇಶ ಅಪೂರ್ವ. ಇದು ಹೇಗೆ ಸಾಧ್ಯವಾಯಿತು? ಆಳವಾದ ಅಧ್ಯಯನ, ವಿಶಾಲವಾದ ದರ್ಶನ, ಹೊಸ ವಿಚಾರಗಳನ್ನು ಕಾಣಬಲ್ಲ ಪ್ರತಿಭೆ, ಶ್ರೋತೃಗಳ ಹೃದಯವನ್ನು ತಟ್ಟಬಲ್ಲ ವಚನ ಸಂಪತ್ತು ಇವೆಲ್ಲವೂ ಮೇಳೈಸಿದಾಗ ಮಾತ್ರ ಇದು ಸಾಧ್ಯ. ಯಾರೋ ಭಾಷಣಕ್ಕೆ ಕರೆದರೆಂದು ಹೊಸದಾಗಿ 'ಸಿದ್ಧತೆ' ಮಾಡಿಕೊಂಡು ಬರುವವರಿಗೆ ಅದು ಗಗನ ಕುಸುಮ. ಕನ್ನಡ–ಸಂಸ್ಕೃತ–ಇಂಗ್ಲಿಷ್ ಭಾಷೆಗಳ ಸಾಹಿತ್ಯ ಸಾಗರದಲ್ಲಿ ಈಜಿ ಅವುಗಳ ಕೃತಿರತ್ನಗಳನ್ನು ಅರಿತಿರುವ, ಒಬ್ಬೊಬ್ಬ ಕವಿಯ ನುಡಿಗಳ ಗುಣದೋಷಗಳನ್ನು ಕರಾರುವಾಕ್ಕಾಗಿ ಹೇಳಬಲ್ಲ ಸಿಪಿಕೆ. ಇದಕ್ಕೆ ಪ್ರಥಮೋದಾಹರಣೆ. ಧ್ವನ್ಯಾಲೋಕ, ಅಭಿನವ ಭಾರತಿ, ಕಾವ್ಯಪ್ರಕಾಶ ಮುಂತಾದ ಸಂಸ್ಕೃತ ಗ್ರಂಥಗಳನ್ನೂ ಕವಿರಾಜಮಾರ್ಗ, ವಿಕ್ರಮಾರ್ಜುನ ವಿಜಯ, ಸಾಹಸ ಭೀಮ ವಿಜಯ ಮುಂತಾದವೆಲ್ಲ ಸಿಪಿಕೆ ಅವರಿಗೆ ಕರತಲಾಮಲಕ. ಅವುಗಳನ್ನು ಸಾಮಾನ್ಯರಿಗೂ ಕೈಗೆಟುಕುವಂತೆ ವಿವರಿಸುವುದರಲ್ಲಿ ಅವರ ನೈಪುಣ್ಯ ಅಸಾಧಾರಣ. ತಮ್ಮ ಲೇಖನಗಳಲ್ಲಿ ಅವರು ಪಂಪ–ರನ್ನರ ವಾಕ್ಯಗಳನ್ನು ಉದಾಹರಿಸುವಂತೆ ಭಾಸ–ಕಾಳಿದಾಸ–ಭಾರವಿಗಳನ್ನೂ ಉದಾಹರಿಸುತ್ತಾರೆ. ಕನ್ನಡ–ಸಂಸ್ಕೃತ ಬಾಂಧವ್ಯಕ್ಕೆ ಸಿಪಿಕೆ ಸಾಹಿತ್ಯ ಅತ್ಯುತ್ತಮ ನಿದರ್ಶನ. ಪೂರ್ವಾಗ್ರಹವಿಲ್ಲದ ವಿಮರ್ಶೆಗೂ ಅದು ಶ್ರೇಷ್ಠ ದೃಷ್ಟಾಂತ.

ಚಿಂತನ ಚಿಂತಾಮಣಿ

ಕನ್ನಡ ಗದ್ಯ ಲೇಖನ ಕ್ಷೇತ್ರದಲ್ಲಿ ಹೊಸ ತಂಗಾಳಿ ಬೀಸಿದ ಅನುಭವ ನಮಗಾಗುವುದು. ಸಿಪಿಕೆ ಅವರ 'ಚಿಂತನ ಚಿಂತಾಮಣಿ'ಯನ್ನು ಓದುವಾಗ ಪ್ರಸನ್ನವಾದ ಶೈಲಿಯಲ್ಲಿ, ರುಚಿಕರವಾದ ರೀತಿಯಲ್ಲಿ ವಿಷಯಗಳನ್ನು ಅವರು ತೆರೆದಿಡುವ ವಿಧಾನವೇ ಮನೋಜ್ಞವಾಗಿದೆ. ಈ ಪುಸ್ತಕ ಸಾವಿರಕ್ಕೂ ಹೆಚ್ಚು ಪುಟಗಳನ್ನೊಳಗೊಂಡಿದೆ. ಒಟ್ಟು 793 ಚಿಂತನೆಗಳು ಇದರಲ್ಲಿವೆ. ಜೀವನದ ಎಲ್ಲಾ ಮುಖಗಳು ಇದರಲ್ಲಿ ಪ್ರತಿಬಿಂಬಿತವಾಗಿವೆ. ವಿಷಯ ವೈವಿಧ್ಯ ಬೆರಗನ್ನು ಉಂಟು ಮಾಡುತ್ತವೆ. ಮಾರೀಚ, ಶಕುನಿ ಮುಂತಾದವರಲ್ಲೂ ಇದ್ದ ಸದ್ಗುಣದ ಕ್ಷಣಗಳನ್ನು ಅವರು ಗುರುತಿಸಿದ್ದಾರೆ. ಸೂಕ್ಷ್ಮವಾದ ದೃಷ್ಟಿಗೆ ಇದು ಸಾಕ್ಷಿ.

'ಎಲ್ಲರೂ ಬದುಕಬೇಕು' ಎಂಬ ಚಿಂತನೆಯಲ್ಲಿ ಒಂದು ಹಾಸ್ಯ ಪ್ರಸಂಗವನ್ನು ಕೊಟ್ಟಿದ್ದಾರೆ. ಅದನ್ನು ಅವರ ಮಾತುಗಳಲ್ಲೇ ಕೇಳೋಣ:

"ನಿಮಗೆ ಅನಾರೋಗ್ಯವಾದರೆ ತಪ್ಪದೇ ವೈದ್ಯರಲ್ಲಿಗೆ ಹೋಗಿ: ಏಕೆಂದರೆ, ವೈದ್ಯರು ಬದುಕಬೇಕು. ಅವರು ಬರೆದುಕೊಡುವ ಮಾತ್ರೆ ಮದ್ದುಗಳನ್ನು ಔಷಧದ ಅಂಗಡಿಯಿಂದ ಕೊಂಡು ತನ್ನಿ: ಏಕೆಂದರೆ ಅಂಗಡಿಯವರೂ ಬದುಕಬೇಕು. ಆಮೇಲೆ ಅವುಗಳನ್ನೆಲ್ಲ ತಿಪ್ಪೆಗೆಸೆಯಿರಿ. ಏಕೆಂದರೆ ನೀವೂ ಬದುಕಬೇಕು !"

ಚಿಂತನೆಯೆಂದರೆ ಆಧ್ಯಾತ್ಮಿಕವೋ ವೈಜ್ಞಾನಿಕವೋ ಆಗಿರಲೇಬೇಕೆಂಬ ನಿಯಮವಿಲ್ಲ. ಹಾಸ್ಯ ಪೂರ್ಣವಾಗಿಯೂ ವಿಷಯಗಳನ್ನು ತಿಳಿಸಬಹುದು ಎಂದು ಸಿಪಿಕೆ ತೋರಿಸಿದ್ದಾರೆ.

ಜಾತೀಯತೆ ಎಂಬ ಶೀರ್ಷಿಕೆಯಿಂದ ಚಿಂತನೆಯಲ್ಲಿ ಸಿಪಿಕೆ ಬಹಳ ಮುಕ್ತ ಮನಸ್ಸಿನಿಂದ ಮಾತನಾಡಿದ್ದಾರೆ ಅಥವಾ ಬರೆದಿದ್ದಾರೆ. ಹೀಗೆ ಬರೆಯುವ ಧೈರ್ಯವುಳ್ಳ ವಿದ್ವಾಂಸರು ವಿರಳ. ಜಾತ್ಯಾತೀತತೆ ದೊಡ್ಡ ಆದರ್ಶ. ಆದರೆ ಅದು ಸಾಮಾನ್ಯರಿಗೆ ಎಟುಕುವುದಿಲ್ಲ. ಸ್ವಾರ್ಥದಿಂದ ತನ್ನ ಹಿತದ ಕಡೆಗೆ ಮಾತ್ರ ಗಮನ ಕೊಡುವವನಿಗಿಂತ ತನ್ನ ಸಮುದಾಯದ, ಜಾತಿಯ ಹಿತವನ್ನು ಸಾಧಿಸಲು ತೊಡಗುವವನು ಉತ್ತಮ. ಅಂತಹ ಜಾತೀಯತೆ ಅಪರಾಧವಲ್ಲ ಎಂಬ ನಿಲುವನ್ನು ಸಿಪಿಕೆ ತಳೆದಿದ್ದಾರೆ.

"ಅನ್ಯ ಜಾತಿಯನ್ನು ದ್ವೇಷಿಸದೆ, ಅದಕ್ಕೆ ಕೆಡುಕು ಮಾಡಲು ಯತ್ನಿಸದೆ, ತನ್ನ ಜಾತಿಯನ್ನು ಪ್ರೀತಿಸಿ ಅದರ ಏಳಿಗೆಗೆ ದುಡಿಯುವುದಾದರೆ ಅಂಥ ಧೋರಣೆ ಏಕೆ ಆಕ್ಷೇಪಣೀಯವಾಗಬೇಕು?" ಎಂದು ಅವರು ಪ್ರಶ್ನಿಸಿದ್ದಾರೆ. ಇತರರಿಗೆ ಅನ್ಯಾಯವನ್ನು ಮಾಡದೆ ತನ್ನವರ ಹಿತವನ್ನು ಸಾಧಿಸುವುದೂ ಅಪೇಕ್ಷಣೀಯವಲ್ಲವೆ? ಅಷ್ಟಾದರೂ ಸ್ವಾರ್ಥ ತ್ಯಾಗವನ್ನು ಮಾಡುವವರು ಪ್ರಶಂಸನೀಯರೇ. ಸಮಸ್ತ ಜಗತ್ತೆಲ್ಲವೂ ನನ್ನ ಮನೆ ಎಂಬ ಎತ್ತರಕ್ಕೆ ಎಷ್ಟು ಜನ ಏರಬಲ್ಲರು? ದೇಶ ಪ್ರೇಮದಿಂದ ಸ್ವಾರ್ಥವನ್ನು ತ್ಯಜಿಸಿ ತನ್ನ ಪ್ರಾಣಕ್ಕೆ ಅಪಾಯವನ್ನು ತಂದುಕೊಂಡು ಹೋರಾಡಿ ಆತ್ಮಾರ್ಪಣೆ ಮಾಡುವ ಸೈನಿಕನನ್ನು "ನಿನಗೆ ವಿಶ್ವ ಪ್ರಜ್ಞೆಯಿಲ್ಲ – ವಸುದೈವ ಕುಟುಂಬಕಂ ಎಂಬ ತತ್ತ್ವವನ್ನು ನೆನೆದುಕೋ, ಶತ್ರುಗಳೂ ನಿನ್ನ ಅಣ್ಣ ತಮ್ಮಂದಿರು. ಅವರನ್ನು ಕೊಂದದ್ದು ನಿನ್ನ ತಪ್ಪು" ಎಂದು ನಿಂದಿಸಲಾದೀತೇ?

ಸಿಪಿಕೆ ಅವರ ನೋಟ ಎಷ್ಟು ವ್ಯಾಪಕವಾದುದೆಂದರೆ ಅವರು ರೋಮನ್ ಚಕ್ರವರ್ತಿ ಮಾರ್ಕಸ್ ಅರಿಲಿಯಸ್‌ನ ಸೂಕ್ತಿಗಳನ್ನೂ ಉದಾಹರಿಸಿದ್ದಾರೆ.

"ಯಾವನಾದರೂ ನನ್ನನ್ನು ತಿರಸ್ಕಾರದಿಂದ ಕಂಡನೆಂದುಕೊಳ್ಳೋಣ. ಅದು ಅವನಿಗೆ ಸೇರಿದ್ದು. ಆದರೆ ತಿರಸ್ಕಾರಾರ್ಹವಾದ ಯಾವ ಕಾರ್ಯವನ್ನೂ ಮಾಡದೆ, ಯಾವ ಮಾತನ್ನೂ ಆಡದೆ ಇರುವುದು ನನಗೆ ಸೇರಿದ್ದು" ಮುಂತಾದ ಅರಿಲಿಯಸ್‌ನ ಸೂಕ್ತಿಗಳನ್ನು ಅವರು ಒಂದು ಚಿಂತನದಲ್ಲಿ ಉದಾಹರಿಸಿದ್ದಾರೆ. **ಕಾಲ ಮತ್ತು ಕಾಲಾತೀತ** ಎಂಬ ಚಿಂತನೆಯಲ್ಲಿ ಅವರು Present is a gift, that is why we call it present ಎಂಬ ಚಮತ್ಕಾರೋಕ್ತಿಯನ್ನು ಉದಾಹರಿಸಿದ್ದಾರೆ. ಈ ಅದ್ಭುತ ವಾಕ್ಯವನ್ನು ಕನ್ನಡಿಸುವುದು ಸಾಧ್ಯವಿಲ್ಲ ಎಂಬ ಸೂಚನೆಯನ್ನೂ ಕೊಟ್ಟಿದ್ದಾರೆ. ಕನ್ನಡವೇ ಏಕೆ, ಯಾವ ಬೇರೆ ಭಾಷೆಗೂ ಇದನ್ನು ಅನುವಾದಿಸಲಾಗದು.

ದೇವಾಲಯ ನಿರಾಕರಣ ಎಂಬ ಚಿಂತನದಲ್ಲಿ ಸಿಪಿಕೆ ಕಟುವಾದ ಕೆಲವು ಮಾತುಗಳನ್ನಾಡಿದ್ದಾರೆ. "ವಿಶ್ವವ್ಯಾಪಿಯೂ ವಿರಾಡ್ರೂಪಿಯೂ ಆದ ಭಗವಂತನನ್ನು ದೇವಾಲಯಕ್ಕೆ ಪರಿಮಿತಗೊಳಿಸುವುದು ಮೌಢ್ಯ. ಒಟ್ಟಾರೆ, ದೇವಾಲಯ ಸಂಸ್ಕೃತಿ ವ್ಯರ್ಥ. ಅನಿಷ್ಟ ವ್ಯವಸ್ಥೆಯದು" ಎಂದವರು ನುಡಿದಿದ್ದಾರೆ. ಈ ಹೇಳಿಕೆಯನ್ನು ಎಷ್ಟು ಜನ ಒಪ್ಪುತ್ತಾರೋ ನಾನರಿಯೇ. ದೇವಾಲಯ ಸಂಸ್ಕೃತಿ ಇಲ್ಲದಿದ್ದರೆ ನಮ್ಮ ಶಿಲ್ಪಕಲೆ, ವಾಸ್ತು ಶಿಲ್ಪಕಲೆ ಉಳಿಯುತ್ತಿತ್ತೆ? ಎಂಬುದನ್ನೂ ಯೋಚಿಸಬೇಕು. ಈ ವಿಷಯ ಎಷ್ಟು ದೊಡ್ಡದೆಂದರೆ ಸಿಪಿಕೆ ಅವರ ಮಾತನ್ನು ಸಮರ್ಥಿಸಿ ಒಂದು ದೀರ್ಘ ಲೇಖನವನ್ನೋ ಪುಸ್ತಕವನ್ನೋ ಬರೆಯಬಹುದು. ಅದನ್ನು ವಿರೋಧಿಸಿ ಕೂಡ ಹಲವರು ಗ್ರಂಥಗಳನ್ನು ರಚಿಸಬಹುದು.

ಕರುಣೆ ಮತ್ತು ಒಲುಮೆ ಎಂಬ ಚಿಂತನೆ ಅತ್ಯಂತ ಹೃದಯಸ್ಪರ್ಶಿಯಾಗಿದೆ. ಕರುಣೆ ದೊಡ್ಡದು ನಿಜ. ಆದರೆ ಪ್ರೀತಿಗೆ ಹೋಲಿಸಿದರೆ ಅದು ಚಿಕ್ಕದು. ಈ ಸತ್ಯವನ್ನು ಪು.ತಿ.ನ. ಅವರ ಅನುಭವಾತ್ಮಕವಾದ ಕಥೆ, ಕವಿತೆಗಳ ಮೂಲಕ ಸಿಪಿಕೆ ನಿರೂಪಿಸಿರುವುದು ಹೃದ್ಯವಾಗಿದೆ. ಒಂದು ನಾಯಿ ಮರಿಯೂ ಕರುಣೆಗಿಂತ ಪ್ರೀತಿಗೆ ಬೆಲೆಯನ್ನು ಕೊಡುತ್ತದೆ ಎಂಬ ನಿತ್ಯ ಸತ್ಯವನ್ನು ಕವಿ ಪು.ತಿ.ನ. ನಿರೂಪಿಸಿದ್ದಾರೆ.

ವರುಷ ನೂರರ ಕರುಣೆ ಬಿಗಿವುದೆ
ಕುರುಬನಿರುಳೊಳು ಬಿಗಿದ ಕಟ್ಟ?
ಮರಿ ನಡತೆಗೆ ಕೋಪಗೊಳ್ಳುವೆ?
ಕರುಣೆ ಒಲುಮೆಗೆ ಸಾಟಿಯೇ?

ಇದನ್ನು ನೂರು ಸಲ ಓದಿ ಮನಸ್ಸಿಗೆ ತಂದುಕೊಳ್ಳಬೇಕು.

ಸಿಪಿಕೆ ಅವರು ಹೆಚ್ಚು ಓದಿದ್ದಾರೆ ಎಂದು ಮಾತ್ರ, ಅವರನ್ನೂ ನಾನು ಗೌರವಿಸುವುದಿಲ್ಲ. ಹಾಗೆ ನೋಡಿದರೆ ಅವರಿಗಿಂತ ಹೆಚ್ಚು ಓದಿದವರೂ ನಮ್ಮಲ್ಲಿರಬಹುದು. ಆದರೆ ಓದಿದ ಗ್ರಂಥಗಳ ಸಾರವನ್ನು ಗ್ರಹಿಸಿ ಚಿಂತನೆಗಳನ್ನು ರೂಪಿಸುವ ಅವರ ಕೌಶಲ ಮಾತ್ರ ಅನುಪಮ. ಆ ಗ್ರಂಥಗಳ ವಾಕ್ಯ ರತ್ನಗಳನ್ನು ಆರಿಸಿಕೊಟ್ಟಿದ್ದಾರೆ ಅವರು. ಅವು ಒಂದೊಂದೂ ಚಿಂತನ ತರಂಗಗಳನ್ನು ಮೂಡಿಸುತ್ತದೆ. ಒಂದು ಉದಾಹರಣೆ–

ಇಂದೇನೊ ಮುಂದೇನೊ ಮುನ್ನ ಆಳ್ ಕಾಣನ್
ಬಂದುದನೆ ಕೊಂಡುಂಡು ತಾಳ್ದವನೆ ಜಾಣನ್

ಜೀವನದಲ್ಲಿ ಇಂತಹ ಒಂದೊಂದು ವಾಕ್ಯದ ಅರ್ಥವನ್ನು ಮೈಗೂಡಿಸಿಕೊಂಡರೂ ನಮ್ಮಲ್ಲಿ ದೊಡ್ಡ ಪರಿವರ್ತನೆಯಾಗುತ್ತದೆ. ಚಿಂತನ ಚಿಂತಾಮಣಿ ಇಂತಹ ವಾಕ್ಯಗಳ ಕಣಜ.

ಚಿಂತನ ಚಿಂತಾಮಣಿಯನ್ನು ಕಾದಂಬರಿಯನ್ನು ಓದಿದಂತೆ ಸತತವಾಗಿ ಓದಬಾರದು. ದಿವಸಕ್ಕೆ ಒಂದೋ ಎರಡೋ ಚಿಂತನೆಗಳನ್ನು ಓದಿ ಅದರ ಅರ್ಥವನ್ನು ಸಾವಕಾಶವಾಗಿ ಚಿಂತಿಸಬೇಕು. ಹೀಗೆ ಸುಮಾರು ಎರಡು ವರ್ಷಗಳಲ್ಲಿ ಓದಿ ಮುಗಿಸಿದರೆ, ಓದಿದ್ದನ್ನು ಮಿದುಳಿನಲ್ಲಿ ಧರಿಸಿದರೆ ಆ ಸಾಮಗ್ರಿಯನ್ನು ನಮ್ಮ ಬದುಕಿನಲ್ಲಿ ಬಳಸಿಕೊಳ್ಳಬಹುದು. ಎಷ್ಟೋ ಅಂಶಗಳನ್ನು ಭಾಷಣ–ಲೇಖನಗಳಲ್ಲೂ ಉಪಯೋಗಿಸಿಕೊಳ್ಳಬಹುದು.

ಡಾ. ಕೆ. ಅನಂತರಾಮು ಅವರು ಈ ಗ್ರಂಥದ ಹಿನ್ನುಡಿಯನ್ನು ಬರೆದಿದ್ದಾರೆ. **ಗುಣಾ ಗುಣಜ್ಞೇಷು ಗುಣಾ ಭವಂತಿ** (ಗುಣಗಳು ಗುಣಗಳೇ ಆಗುವುದು ಗುಣಜ್ಞರಲ್ಲಿ ಮಾತ್ರ) ಎಂಬುದಕ್ಕೆ ಅವರ ಲೇಖನ ಸಾಕ್ಷಿ. ಮೊದಲು ಅದನ್ನು ಓದಿ ಅನಂತರ ಚಿಂತನೆಗಳನ್ನು ಓದಿದರೆ ಹೆಚ್ಚು ಪ್ರಯೋಜನ ಎಂದು ನನ್ನ ಅಭಿಪ್ರಾಯ. ಅವರು ಹೇಳಿದ್ದಾರೆ –

"ಈ ಚಿಂತನ ಚಿಂತಾಮಣಿ ಬೇಕಾದಷ್ಟು ಹಿತವಚನಗಳಿವೆ; ವಿವೇಕವನ್ನು ಜಾಗೃತಗೊಳಿಸುವ ಉಪದೇಶಗಳಿವೆ; ಶ್ರದ್ಧೆಯನ್ನು ಭದ್ರಗೊಳಿಸುವ ಸೂಕ್ತಿಗಳಿವೆ; ವಿಧಿ ನಿಷೇಧಗಳನ್ನು ನಿರ್ದೇಶಿಸುವ ಸದುಕ್ತಿಗಳಿವೆ. ಒಂದು ಪರಿಪೂರ್ಣವಾದ ವ್ಯಕ್ತಿತ್ವವು ನಿರ್ಮಾಣಗೊಳ್ಳಲು ಬೇಕಾಗುವ ಎಲ್ಲ ಸಲಕರಣೆಗಳೂ ಇಲ್ಲಿವೆ" ಒಂದು ಒಳ್ಳೆಯ ಗ್ರಂಥವನ್ನು ಇದಕ್ಕಿಂತ ಚೆನ್ನಾಗಿ ಪರಿಚಯಿಸುವುದು ಅಸಾಧ್ಯವೆನಿಸುತ್ತದೆ. ಪ್ರೊ.ಅನಂತರಾಮು ಅವರಿಗೆ ನಮನಗಳನ್ನು ಅರ್ಪಿಸುತ್ತೇನೆ.

ಪುಸ್ತಕಗಳನ್ನು ಓದುವ ಜನರೇ ದುರ್ಲಭವಾಗಿರುವ ಈ ಯುಗದಲ್ಲಿ ಒಂದು ಸಾವಿರ ಪುಟಗಳಿಗಿಂತ ದೊಡ್ಡದಾದ ಪ್ರಸ್ತುತ ಬೃಹದ್ ಗ್ರಂಥವನ್ನು ಅಚ್ಚುಕಟ್ಟಾಗಿ, ಅಂದವಾಗಿ ಪ್ರಕಾಶ ಪಡಿಸಿ ಕನ್ನಡ ಲೋಕಕ್ಕೆ ನೀಡಿರುವ ಸಂವಹನ ಪ್ರಕಾಶನದ ಶ್ರೀಯುತ ಲೋಕಪ್ಪನವರಿಗೆ ಎಷ್ಟು ವಂದನೆಗಳನ್ನು ಅರ್ಪಿಸುವುದೋ ತಿಳಿಯೆನು. ಎಲ್ಲರ ಪ್ರಯತ್ನವೂ ಸಫಲವಾಗಲೆಂದು ಆಶಿಸುತ್ತೇನೆ.

ಸೀಮಾ ಲಾಟ್ಕರ್, ವಿಷ್ಣುವರ್ಧನ್ ಸೇರಿ 67 ಐಪಿಎಸ್, 23 ಐಎಫ್‌ಎಸ್ ಅಧಿಕಾರಿಗಳಿಗೆ ಬಡ್ತಿ

ಬೆಂಗಳೂರು, ಡಿ.31– ಹೊಸ ವರ್ಷದ ಸಂದರ್ಭದಲ್ಲಿ ರಾಜ್ಯ ಸರ್ಕಾರವು 67 ಐಪಿಎಸ್ ಹಾಗೂ 23 ಐಎಫ್‌ಎಸ್ ಅಧಿಕಾರಿಗಳಿಗೆ ಬಡ್ತಿ ನೀಡಿ, ಕೆಲವರ ಅದೇ ಸ್ಥಾನದಲ್ಲಿ ಮುಂದುವರೆಸಿದ್ದರೆ ಮತ್ತೆ ಕೆಲವರನ್ನು ವರ್ಗಾವಣೆ ಮಾಡಿದೆ. ಮೈಸೂರು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ವಿಷ್ಣುವರ್ಧನ ಸೇರಿದಂತೆ ಕೆಲವು ಅಧಿಕಾರಿಗಳಿಗೆ ಬಡ್ತಿಯೊಂದಿಗೆ ಪ್ರಸಕ್ತ ಸ್ಥಳದಲ್ಲೇ ಮುಂದುವರೆಯಲು ಸೂಚಿಸಲಾಗಿದೆ.



ಸೀಮಾ ಲಾಟ್ಕರ್



ಎನ್.ವಿಷ್ಣುವರ್ಧನ

ಐಪಿಎಸ್ ಅಧಿಕಾರಿಗಳು: ವಿಕಾಶ್ ಕುಮಾರ್, ರಮಣ್ ಗುಪ್ತಾ, ಡಾ.ಚೇತನ್ ಸಿಂಗ್ ರಾಥೋರ್, ಅಮಿತ್ ಸಿಂಗ್, ಎನ್.ಶಶಿಕುಮಾರ್, ಡಾ.ವೈ.ಎಸ್. ರವಿಕುಮಾರ್, ಸಿ.ವಂಶಿ ಕ್ರಿಷ್ಣ, ಕಾರ್ತಿಕ್ ರೆಡ್ಡಿ, ಕುಲ್ದೀಪ್ ಕುಮಾರ್ ಆರ್. ಜೈನ್, ವಿನಾಯಕ್ ವಸಂತರಾವ್ ಪಾಟೀಲ್, ಕೆ.ಸಂತೋಷ್ ಬಾಬು, ಇಷಾ ಪಂತ್, ಜಿ.ಸಂಗೀತಾ, ಸೀಮಾ ಲಾಟ್ಕರ್, ರೇಣುಕಾ ಕೆ.ಸುಕುಮಾರ್, ಡಾ.ಭೀಮ ಶಂಕರ್ ಎಸ್.ಗುಳೇದ್, ನಿಕಮ್ ಪ್ರಕಾಶ್ ಅಮೃತ್, ಜಿ.ರಾಧಿಕಾ, ರಾಹುಲ್ ಕುಮಾರ್ ಷಹಪುರವಾಡ್, ಧರ್ಮೇಂದರ್ ಕುಮಾರ್ ಮೀನಾ, ಇಲಕ್ಕಿಯಾ ಕರುನಾಗರನ್, ಜೋಷಿ ಶ್ರೀನಾಥ್ ಮಹಾದೇವ್, ಸಿ.ಬಿ.ವೇದ ಮೂರ್ತಿ, ಕೆ.ಎಂ.ಶಾಂತರಾಜು, ಹನುಮಂತರಾಯ, ಡಿ.ದೇವರಾಜ, ಡಿ.ಆರ್. ಸಿರಿ ಗೌರಿ, ಡಾ.ಕೆ.ಧರಣಿ ದೇವಿ, ಎಸ್.ಸವಿತಾ, ಸಿ.ಕೆ.ಬಾಬಾ, ಅಬ್ದುಲ್ ಅಹದ್, ಎಸ್.ಗಿರೀಶ್, ಎಂ.ಪುಟ್ಟ ಮಾದಯ್ಯ, ಟಿ.ಶ್ರೀಧರ, ಎಂ.ಅಶ್ವಿನಿ, ಎ.ಎನ್.ಪ್ರಕಾಶ್ ಗೌಡ, ಜಿನೇಂದ್ರ ಖಣಗವಿ, ಜೆ.ಕೆ.ರಶ್ಮಿ, ಟಿ.ಪಿ.ಶಿವ ಕುಮಾರ್, ಎನ್.ವಿಷ್ಣುವರ್ಧನ, ಡಾ.ಸಂಜೀವ್ ಎಂ.ಪಾಟೀಲ್, ಕೆ.ಪರಶು ರಾಮ, ಹೆಚ್.ಡಿ.ಆನಂದ ಕುಮಾರ್, ಕಲಾ ಕೃಷ್ಣಮೂರ್ತಿ, ಆರ್.ಶ್ರೀನಿವಾಸ ಗೌಡ, ಜಿ.ಕೆ.ಮಿಥುನ್ ಕುಮಾರ್, ಪ್ರದೀಪ್ ಗುಂಟಿ, ಪಿ.ಕೃಷ್ಣಕಾಂತ್, ಎನ್.ಯತೀಶ್, ಸಾಯಿದುಲು ಅದವಂತ್, ಕ್ಷಮಾ ಮಿಶ್ರಾ, ಡಾ.ಶಿವಕುಮಾರ್, ಮಲ್ಲಿಕಾರ್ಜುನ ಬಾಲ್ದಂಡಿ, ಅಮರ್ ನಾಥ್ ರೆಡ್ಡಿ, ಪವನ್ ನೆಜ್ಜೂರ್, ಶ್ರೀಹರಿ ಬಾಬು, ಎಂ.ಎಸ್.ಗೀತಾ, ಯಶೋದಾ ವಂಟಿಗೋಡಿ, ರಾಜೀವ್ ಎಂ, ಡಾ.ಶೋಭಾ ರಾಣಿ ವಿ.ಜೆ, ಡಾ.ಎಸ್. ಕೆ.ಸೌಮ್ಯಲತಾ, ಡಾ.ಬಿ.ಟಿ.ಕವಿತಾ, ಉಮಾ ಪ್ರಶಾಂತ್, ಸಾಹಿಲ್ ಬಾಗ್ಲಾ, ಬಿಂದು ಮಣಿ ಆರ್.ಎನ್.

ಐಎಫ್‌ಎಸ್ ಅಧಿಕಾರಿಗಳು: ಮನೋಜ್ ಕುಮಾರ್ ತ್ರಿಪಥಿ, ಉಪೇಂದ್ರ ಪ್ರತಾಪ್ ಸಿಂಗ್, ತಖಾತ್ ಸಿಂಗ್ ರಣಾವತ್, ಯಶ್‌ಪಾಲ್ ಕ್ಷೀರಸಾಗರ್, ಡಾ.ಮಹೇಶ್ ಕುಮಾರ್, ಏಡುಕೊಂಡಲು ವಿ., ಎಸ್.ಪ್ರಭಾಕರನ್, ಸೋನಾಲ್, ದೀಪ್ ಜೆ.ಕಂಟ್ರಾಕ್ಟರ್, ವಾಸಂತಿ ಎಂ.ಎಂ., ಮರಿಯಾ ಕ್ರಿಸ್ತು ರಾಜಾ, ಕೆ.ಗಣಪತಿ, ಮೋಹನ್ ಕುಮಾರ್ ಡಿ., ಆಶಿಕ್ ರೆಡ್ಡಿ, ಅರ್ಸಲನ್, ಅಜ್ಜಯ್ಯ ಜಿ.ಆರ್., ಡಾ.ಸಂತೋಷ್ ಕುಮಾರ್ ಜಿ., ಇ.ಶಿವಶಂಕರ್, ಟಿ.ರಾಜಣ್ಣ, ಪ್ರಭಾಕರ್ ಪ್ರಿಯದರ್ಶಿ, ಕಾಜೋಲ್ ಅಜಿತ್ ಪಾಟೀಲ್, ವಿ.ಅಭಿಷೇಕ್, ಮಖಿತ್ ಮೀನಾ.

ಕ್ರಿಕೆಟಿಗ ರಾಬಿನ್ ಉತ್ತಪ್ಪ ಬಂಧನ ವಾರಂಟ್‌ಗೆ ಹೈಕೋರ್ಟ್ ತಡೆ

ಬೆಂಗಳೂರು, ಡಿ.31– ಉದ್ಯೋಗಿಗಳ ಇಪಿಎಫ್ ಪಾವತಿಸದೆ ವಂಚಿಸಿರುವ ಆರೋಪಕ್ಕೆ ಸಂಬಂಧಿಸಿದಂತೆ ಭಾರತ ತಂಡದ ಮಾಜಿ ಕ್ರಿಕೆಟಿಗ ರಾಬಿನ್ ಉತ್ತಪ್ಪ ವಿರುದ್ಧ ಜಾರಿಯಾಗಿದ್ದ ಬಂಧನ ವಾರಂಟ್‌ಗೆ ಕರ್ನಾಟಕ ಹೈಕೋರ್ಟ್ ತಡೆ ನೀಡಿದೆ.



ರಾಬಿನ್ ಉತ್ತಪ್ಪ


ರಾಬಿನ್ ಉತ್ತಪ್ಪ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರ ರಜಾಕಾಲೀನ ಏಕಸದಸ್ಯ ಪೀಠ ನಡೆಸಿತು. ಕೇಂದ್ರ ಕಾರ್ಮಿಕ ಇಲಾಖೆ, ಸಹಾಯಕ ಭವಿಷ್ಯ ನಿಧಿ ಆಯುಕ್ತರು ಮತ್ತು ವಸೂಲಿ ಅಧಿಕಾರಿ, ಬೆಂಗಳೂರಿನ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತರು ಮತ್ತು ವಸೂಲಿ ಅಧಿಕಾರಿ ಹಾಗೂ ಪುಲಿಕೇಶಿನಗರ ಠಾಣಾಧಿಕಾರಿಗೆ ನ್ಯಾಯಾಲಯವು ನೋಟಿಸ್ ಜಾರಿ ಮಾಡಿ ವಿಚಾರಣೆ ಮುಂದೂಡಿತು.

ಡಿ. 4ಕ್ಕೆ ವಾರಂಟ್ ಜಾರಿಯಾಗಿತ್ತು: ಸೆಂಚುರಿ ಲೈಫ್ ಸ್ಟೈಲ್ ಬ್ರ್ಯಾಂಡ್ ಪ್ರೈವೇಟ್ ಲಿಮಿಟೆಡ್ ಕಂಪನಿಯ ನಿರ್ದೇಶಕರಾಗಿರುವ ರಾಬಿನ್ ಉತ್ತಪ್ಪ ಅವರು ಉದ್ಯೋಗಿಗಳಿಗೆ 23 ಲಕ್ಷ ರೂ. ಇಪಿಎಫ್ ಪಾವತಿಸದೆ ವಂಚಿಸಿರುವ ಆರೋಪ ಹಿನ್ನೆಲೆಯಲ್ಲಿ ಕೆ.ಆರ್. ಪುರ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಷಡಾಕ್ಷರ ಗೋಪಾಲ ರೆಡ್ಡಿ ಅವರು ಡಿ. 4 ರಂದು ಬಂಧನ ವಾರಂಟ್ ಜಾರಿಗೊಳಿಸಿ ಆದೇಶಿಸಿದ್ದರು. ರಾಬಿನ್ ಉತ್ತಪ್ಪ ಈ ಹಿಂದೆ ಪುಲಕೇಶಿನಗರ ವ್ಯಾಪ್ತಿಯಲ್ಲಿ ವಾಸವಿದ್ದರು. ಹಾಗಾಗಿ, ಉತ್ತಪ್ಪ ಅವರನ್ನು ಬಂಧಿಸುವಂತೆ ಭವಿಷ್ಯ ನಿಧಿ ಆಯುಕ್ತರು ಪುಲಕೇಶಿನಗರ ಠಾಣೆ ಪೊಲೀಸರಿಗೆ ಪತ್ರ ಬರೆದಿದ್ದರು. ಆದರೆ, ಉತ್ತಪ್ಪ ಅವರು ಕಳೆದ ಒಂದು ವರ್ಷದಿಂದ ಠಾಣಾ ವ್ಯಾಪ್ತಿಯಲ್ಲಿ ವಾಸವಿಲ್ಲವೆಂಬ ಮಾಹಿತಿಯನ್ನು ಭವಿಷ್ಯ ನಿಧಿ ಆಯುಕ್ತರಿಗೆ ತಿಳಿಸಲಾಗಿದೆ ಎಂದು ಪೊಲೀಸರು ಹೇಳಿದ್ದರು.

ಚಿನ್ನ ಪಡೆದು ವಂಚನೆ ಆರೋಪ

ಐಶ್ವರ್ಯಾಗೌಡ, ಪತಿ ಹರೀಶ್ ಬಿಡುಗಡೆಗೆ ಹೈಕೋರ್ಟ್ ಆದೇಶ

ಬೆಂಗಳೂರು: ಚಿನ್ನ ಪಡೆದು ವಂಚಿಸಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಬಂಧಿತ ಉದ್ಯಮಿ ಐಶ್ವರ್ಯಾ ಗೌಡ ಹಾಗೂ ಅವರ ಪತಿ ಕೆ.ಎನ್.ಹರೀಶ್ ಅವರನ್ನು ಕೂಡಲೇ ಬಿಡುಗಡೆ ಮಾಡುವಂತೆ ಹೈಕೋರ್ಟ್ ಆದೇಶಿಸಿದೆ.



ಈ ಸಂಬಂಧ ಜೈಲಿನಲ್ಲಿರುವ ಉದ್ಯಮಿ ಐಶ್ವರ್ಯಾ ಗೌಡ (32) ಹಾಗೂ ಅವರ ಪತಿ ಕೆ.ಎನ್.ಹರೀಶ್ (45) ಸಲ್ಲಿಸಿದ್ದ ರಿಟ್ ಅರ್ಜಿಯನ್ನು ನ್ಯಾಯಮೂರ್ತಿ ಹೇಮಂತ ಚಂದನಗೌಡರ್ ಅವರಿದ್ದ ರಜಾಕಾಲದ ಏಕಸದಸ್ಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಪದಾಂಕಿತ ಹಿರಿಯ ವಕೀಲ ಸಂದೇಶ್ ಜೆ.ಚೌಟ ಹಾಗೂ ಎಸ್.ಸುನಿಲ್ ಕುಮಾರ್ ಅವರು, ಐಶ್ವರ್ಯಾ ಗೌಡ ಹಾಗೂ ಹರೀಶ್ ಪರ ವಾದ ಮಂಡಿಸಿ, ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ನೀಡಿದ್ದ ನೋಟಿಸ್ ಅನುಸಾರ ಅರ್ಜಿದಾರರು ಸ್ವ ಇಚ್ಛೆಯಿಂದ ಠಾಣೆಗೆ ತೆರಳಿ ತನಿಖೆಗೆ ಸಹಕರಿಸಿದ್ದಾರೆ. ಆದರೆ, ಪೊಲೀಸರು ಏಕಾಏಕಿ ಅವರನ್ನು ಬಂಧಿಸಿರುವುದು ಕಾನೂನು ಬಾಹಿರ ಎಂದರು.

ಅರ್ಜಿದಾರರನ್ನು ಬಂಧಿಸುವುದಕ್ಕೂ ಮುನ್ನ ಆರೋಪಿಗಳಿಗೆ ಪೊಲೀಸರು ಕಾನೂನು ಬದ್ಧವಾಗಿ ನೀಡಬೇಕಾದ ಬಂಧನಕ್ಕೆ ಕಾರಣವಾಗುವ ಅಂಶಗಳನ್ನು ಲಿಖಿತ ರೂಪದಲ್ಲಿ ನೀಡಿಲ್ಲ. ಇದು ಅರ್ಜಿದಾರರ ಸಾಂವಿಧಾನಿಕ ಹಕ್ಕಿನ ಉಲ್ಲಂಘನೆ ಆದ್ದರಿಂದ, ಅವರ ಬಂಧನವನ್ನು ಕಾನೂನುಬಾಹಿರ ಎಂದು ಘೋಷಿಸಿ ಬಿಡುಗಡೆಗೆ ಆದೇಶಿಸಬೇಕು ಎಂದು ಕೋರಿದರು.

ಇದಕ್ಕೆ ದೂರುದಾರರಾದ ವಾರಾಹಿ ವರ್ಲ್ಡ್ ಆಫ್ ಗೋಲ್ಡ್ ಅಂಗಡಿ ಮಾಲಕಿ ವನಿತಾ ಎಸ್. ಐತಾಳ್ ಪರ ಹಾಜರಿದ್ದ ವಕೀಲ ಪಿ.ಅರವಿಂದ ಕಾಮತ್ ತೀವ್ರ ಆಕ್ಷೇಪ ವ್ಯಕ್ತಪಡಿಸಿ, ಇದೊಂದು ಬಹುಕೋಟಿ ಹಗರಣ. ಪೊಲೀಸರು ಆರೋಪಿಗಳನ್ನು ಬಂಧಿಸುವ ಪೂರ್ವ ಮತ್ತು ನಂತರ ಎಲ್ಲಾ ರೀತಿಯ ಕಾನೂನು ಪ್ರಕ್ರಿಯೆಗಳನ್ನು ಅನುಸರಿಸಿದ್ದಾರೆ ಎಂದು ಪ್ರತಿಪಾದಿಸಿದರು.

ಇದನ್ನು ಒಪ್ಪದ ನ್ಯಾಯಪೀಠ, ಅರ್ಜಿದಾರರ ಪರ ವಕೀಲರು ಸಾಂವಿಧಾನಿಕ ಹಕ್ಕಿನ ಉಲ್ಲಂಘನೆ ಬಗ್ಗೆ ವಾದ ಮಂಡಿಸಿದ್ದು ಬಿಡುಗಡೆಗೆ ಕೋರಿದ್ದಾರೆ. ಅಂತೆಯೇ, ಇದು ಪ್ರತಿಯೊಬ್ಬರ ಸಾಂವಿಧಾನಿಕ ಹಕ್ಕಿನ ರಕ್ಷಣೆ ವಿಷಯವೂ ಆಗಿದೆ. ಆದ್ದರಿಂದ, ಈ ಅರ್ಜಿಯನ್ನು ಈಗ ಮೆರಿಟ್ ಆಧಾರದಲ್ಲಿ ನಿರ್ಣಯಿಸುವುದಿಲ್ಲ ಎಂಬ ಮೌಖಿಕ ಅಭಿಪ್ರಾಯ ವ್ಯಕ್ತಪಡಿಸಿತು.

ಅಂತೆಯೇ, ಅರ್ಜಿದಾರರು ಕಾಲಕಾಲಕ್ಕೆ ತನಿಖೆಗೆ ಸಹಕರಿಸಬೇಕು. ಸಾಕ್ಷ್ಯಗಳನ್ನು ನಾಶಪಡಿಸಬಾರದು ಎಂಬ ಷರತ್ತುಗಳೊಂದಿಗೆ ತಕ್ಷಣವೇ ಬಿಡುಗಡೆ ಮಾಡುವಂತೆ ಆದೇಶಿಸಿತು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮಹದೇಶ್ವರ ಬೆಟ್ಟದ ವಸ್ತುಸಂಗ್ರಹಾಲಯ ಉದ್ಘಾಟನೆಗೆ ಹೈಕೋರ್ಟ್‌ನಿಂದ ತಡೆಯಾಜ್ಞೆ

ಎಣ್ಣೆಮಜ್ಜನ ಸೇವಾಕರ್ತರ ಇತಿಹಾಸ ಮರೆತ ಹಿನ್ನೆಲೆಯಲ್ಲಿ ಕೋರ್ಟ್ ಮೊರೆ ಹೋಗಿದ್ದ ಕುಟುಂಬಸ್ಥರು

ಮೈಸೂರು, ಡಿ.31(ಜಿಎ)–ಶ್ರೀ ಮಲೆ ಮಹದೇಶ್ವರ ಬೆಟ್ಟದಲ್ಲಿ ನಿರ್ಮಾಣಗೊಳ್ಳುತ್ತಿರುವ ವಸ್ತುಸಂಗ್ರಹಾಲಯದಲ್ಲಿ ಮಹದೇಶ್ವರ ಸ್ವಾಮಿಯ ಎಣ್ಣೆ ಮಜ್ಜನ ಸೇವಾ ಕರ್ತರ ಇತಿಹಾಸ ತಿಳಿಸುವ ಕಾರ್ಯ ಮಾಡದ ಹಿನ್ನೆಲೆಯಲ್ಲಿ ವಸ್ತುಸಂಗ್ರಹಾಲಯ ಉದ್ಘಾಟನೆಗೆ ತಡೆಯಾಜ್ಞೆ ತರಲಾಗಿದೆ ಎಂದು ಸೇವಾಕರ್ತರ ಕುಟುಂಬಸ್ಥ ಸಿದ್ದಪ್ಪ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಲೆ ಮಹದೇಶ್ವರ ಬೆಟ್ಟದಲ್ಲಿರುವ 108 ಅಡಿ ಎತ್ತರದ ಮಹದೇಶ್ವರ ಪ್ರತಿಮೆ ಮುಂಭಾಗ ಮಹದೇಶ್ವರರ ಇತಿಹಾಸ ತಿಳಿಸುವ ವಸ್ತುಸಂಗ್ರಹಾಲಯ ನಿರ್ಮಾಣ ಭರದಿಂದ ಸಾಗಿದೆ. ಆದರೆ ಇದರಲ್ಲಿ ಮಹದೇಶ್ವರ ಸ್ವಾಮಿಯ ಎಣ್ಣೆ ಮಜ್ಜನ ಸೇವಾಕರ್ತರ ಇತಿಹಾಸ ತಿಳಿಸುವ ಕೆಲಸ ಮಾಡಿಲ್ಲ ಎಂಬ ಕಾರಣದಿಂದಾಗಿ ಈ ವಸ್ತು ಸಂಗ್ರಹಾಲಯ ಉದ್ಘಾಟನೆಗೆ ಹೈಕೋರ್ಟ್‌ನಿಂದ ತಡೆಯಾಜ್ಞೆ ತರಲಾಗಿದೆ. ಒಂದು ವೇಳೆ ಉದ್ಘಾಟಿಸಿದರೆ ಕಾನೂನು ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಪ್ರತಿ ತಿಂಗಳ ಅಮಾವಾಸ್ಯೆಯ ಹಿಂದಿನ ದಿನ ಮಹದೇಶ್ವರರಿಗೆ ಎಣ್ಣೆಮಜ್ಜನ ನಡೆಸುವವರು ಈ ಕುಟುಂಬದವರೇ ಆಗಿದ್ದಾರೆ. ಇದು ಶತ ಶತಮಾನಗಳಿಂದ ನಡೆದುಕೊಂಡು ಬಂದಿದೆ. ವಸ್ತು ಸಂಗ್ರಹಾಲಯದಲ್ಲಿ ಮಹದೇಶ್ವರರ ಇತಿಹಾಸ ದೊಡನೆ, ಸಂಬಂಧಿತ ಇತರ ಮಾಹಿತಿಯೂ ಇದೆ. ಆದರೆ ಎಣ್ಣೆಮಜ್ಜನ ಸೇವಾ ಕರ್ತರ ಇತಿಹಾಸ ತಿಳಿಸುವ ಕೆಲಸ ನಡೆದಿಲ್ಲ ಬೇಸರ ವ್ಯಕ್ತಪಡಿಸಿದರು.

ಎಣ್ಣೆಮಜ್ಜನ ಸೇವಾಕರ್ತರ ಇತಿಹಾಸವನ್ನೂ ವಸ್ತುಸಂಗ್ರಹಾಲಯದಲ್ಲಿ ಸೇರಿಸಬೇಕೆಂದು ಈ ಹಿಂದೆಯೆ ಮುಖ್ಯಮಂತ್ರಿಗಳು, ಜಿಲ್ಲಾಧಿಕಾರಿ ಸೇರಿದಂತೆ ಸಂಬಂಧಿಸಿದವರಿಗೆಲ್ಲ ಮನವಿ ಸಲ್ಲಿಸಿದ್ದೇವೆ. ಇದಕ್ಕೆ ಸೂಕ್ತ ಸ್ಪಂದನೆ ದೊರೆತಿಲ್ಲ. ಹೀಗಾಗಿ ನ್ಯಾಯಾಲಯದ ಮೊರೆ ಹೋಗಲಾಗಿತ್ತು. ಆದರೆ ಈಚೆಗೆ ಚಾಮರಾಜನಗರ ಡಿಸಿಯವರು ಶೀಘ್ರದಲ್ಲೇ ವಸ್ತುಸಂಗ್ರಹಾಲಯ ಉದ್ಘಾಟನೆಗೊಳ್ಳಲಿದೆ ಎಂದು ಗೊಂದಲದ ಹೇಳಿಕೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ತಾವು ತಡೆಯಾಜ್ಞೆ ತಂದಿದ್ದು, ಒಂದು ವೇಳೆ ಉದ್ಘಾಟಿಸಿದರೆ ನ್ಯಾಯಾಂಗ ನಿಂದನೆ ಆಗಲಿದೆ ಎಂದು ಎಚ್ಚರಿಸಿದರು. ಗೋಷ್ಠಿಯಲ್ಲಿ ದೊಡ್ಡಸ್ವಾಮಿ, ಕಾಳಶೆಟ್ಟಿ, ಮಹದೇವಶೆಟ್ಟಿ, ಶಿವರಾಜ್ ಉಪಸ್ಥಿತರಿದ್ದರು.

ವಿಶ್ವಮಾನವ ಸಂದೇಶ ಸಾರಿದ ಏಕಮಾತ್ರ ಕವಿ ಕುವೆಂಪು



ಅಖಿಲ ಕರ್ನಾಟಕ ಒಕ್ಕಲಿಗರ ಮಹಾಸಭಾ ವತಿಯಿಂದ ಮೈಸೂರಿನ ಶಿವರಾಂಪೇಟೆಯಲ್ಲಿರುವ ಸಂಘದ ಕಚೇರಿಯಲ್ಲಿ ಕುವೆಂಪು ಅವರ 121ನೇ ಜನ್ಮದಿನ ಆಚರಿಸಲಾಯಿತು.

ಮೈಸೂರು, ಡಿ.31–ಅಖಿಲ ಕರ್ನಾಟಕ ಒಕ್ಕಲಿಗರ ಮಹಾಸಭಾ ವತಿಯಿಂದ ಮೈಸೂರು ನಗರದ ಶಿವರಾಂ ಪೇಟೆಯಲ್ಲಿರುವ ಸಂಘದ ಕಚೇರಿಯಲ್ಲಿ ರಸಋಷಿ ಕುವೆಂಪುರವರ 121ನೇ ಜನ್ಮದಿನದ ಪ್ರಯುಕ್ತ ಕುವೆಂಪು ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಸರಳವಾಗಿ ಆಚರಿಸಿ, ಸಿಹಿ ವಿತರಿಸಲಾಯಿತು.

ವಿಶ್ವಮಾನವ ಸಂದೇಶವನ್ನು ಜಗತ್ತಿಗೆ ಸಾರಿದ ಏಕಮಾತ್ರ ಕವಿ ಕುಪ್ಪಳ್ಳಿ ವೆಂಕಟಪ್ಪ ಪುಟ್ಟಪ್ಪ ಅವರು ಎಂದು ಅಖಿಲ ಕರ್ನಾಟಕ ಒಕ್ಕಲಿಗ ಮಹಾಸಭಾದ ಸಂಸ್ಥಾಪಕ ಅಧ್ಯಕ್ಷ ಎನ್.ಬೆಟ್ಟೇಗೌಡರು ಹೇಳಿದರು. ನಮ್ಮ ಕರ್ನಾಟಕಕ್ಕೆ ಮೊದಲ ಜ್ಞಾನಪೀಠ, ಕರ್ನಾಟಕ ರತ್ನ ಹಾಗೂ ಪಂಪ ಪ್ರಶಸ್ತಿ ಪಡೆದು ರಾಷ್ಟ್ರಕವಿಯಾದರು ಎಂದು ತಿಳಿಸಿದರು.


ಕುವೆಂಪುರವರು ಮಕ್ಕಳ ಸಾಹಿತ್ಯದಿಂದ ಮಹಾಕಾವ್ಯದವರಿಗೆ ಸಾಹಿತ್ಯದಲ್ಲಿ ಶ್ರೇಷ್ಠತೆಯನ್ನು ಸೃಷ್ಟಿಸಿದವರು. ನಾಡು ನುಡಿಯ ಅಭಿಮಾನದ ಜೊತೆಗೆ ರಾಷ್ಟ್ರ ಪ್ರೇಮವನ್ನು ಕನ್ನಡಿಗರಲ್ಲಿ ಜಾಗೃತಗೊಳಿಸಿದರು. ದಿಟ್ಟ ಹಾಗೂ ಸ್ಪಷ್ಟ ವಿಚಾರ ಲಹರಿಯ ಮೂಲಕ ಕನ್ನಡ ಸಾಹಿತ್ಯಕ್ಕೆ ಧೀಮಂತಿಗೆ ತಂದುಕೊಟ್ಟಿದ್ದಾರೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಅಭಿಪ್ರಾಯಪಟ್ಟರು.

ರಾಮಾಯಣ ದರ್ಶನಂ ಮಹಾಕಾವ್ಯದ ರಚನೆಯ ಮೂಲಕ ಹಿಂದೂ ಧರ್ಮದ ಶ್ರೇಷ್ಠ ಕಾವ್ಯವನ್ನು ತಮ್ಮ ಒಳನೋಟಗಳ ಮೂಲಕ ನೀಡಿ ಹೊಸ ಆಯಾಮ ನೀಡಿದವರು ಕುವೆಂಪು. ಭಾರತ ಜನನಿಯಾ ತನುಜಾತೆ ಕನ್ನಡ ಕಾವ್ಯದ ಮೂಲಕ ವಿದ್ಯಾರ್ಥಿ ದೆಸೆಯಲ್ಲಿ ಭಾರತೀಯ ಸಂಸ್ಕೃತಿಯಲ್ಲಿ ವೈಶಿಷ್ಟ್ಯವನ್ನು ಹಾಗೂ ಕರ್ನಾಟಕ ಎಂಬ ಪರಿಕಲ್ಪನೆಗೆ ಒತ್ತು ನೀಡಿ ಕರ್ನಾಟಕ ಎಂದು ನಾಮಕರಣವಾಗಲಿಕ್ಕೂ ಕಾವ್ಯದ ಮೂಲಕ ಮುನ್ನುಡಿ ಬರೆದವರು ಕುವೆಂಪು ಎಂದು ಕರ್ನಾಟಕ ಸುಗಮ ಸಂಗೀತ ಪರಿಷತ್ತಿನ ಮೈಸೂರು ಜಿಲ್ಲಾ ಘಟಕದ ಅಧ್ಯಕ್ಷ ಡಾ.ನಾಗರಾಜ್ ವಿ ಬೈರಿ ಹೇಳಿದರು.

ಕುವೆಂಪು ವಿಶ್ವದ ಅನನ್ಯ ಕವಿ. ಸಾಹಿತ್ಯದಲ್ಲಿ ನೇಪಥ್ಯಕ್ಕೆ ಸರಿದಿದ್ದ ರೈತನ ಬೆವರಿನ ಶ್ರಮ ದುಡಿಮೆಯ ಬೆಲೆ ಅರಿತು ಅನ್ನದಾತ ಎಂದು ಬಣ್ಣಿಸಿ ಸಾಹಿತ್ಯದಲ್ಲಿ ಕೃಷಿಕನ ಬದುಕು ಬವಣೆಗಳ ಬಗ್ಗೆ ಬೆಳಕು ಚೆಲ್ಲಿದರು. ಸಾಮಾಜಿಕ ಅನ್ಯಾಯಗಳ ವಿರುದ್ಧ ಸಾಹಿತ್ಯ ರಚನೆ ಮಾಡುತ್ತಲೇ ಓದುಗರ ಮನದಲ್ಲಿ ಸಾಮಾಜಿಕ ಚಳವಳಿಯ ಜಾಗೃತಿ ಮೂಡಿಸಿದರು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ನಿಕಟ ಪೂರ್ವ ಅಧ್ಯಕ್ಷ ಡಾ. ವೈ.ಡಿ. ರಾಜಣ್ಣ ಹೇಳಿದರು.

ಕುವೆಂಪು ಕವಿಗಳಾಗಿ ಹೆಚ್ಚು ಜನಪ್ರಿಯತೆ ಗಳಿಸಿದ್ದಾರೆ. ಬಹಳ ಮುಖ್ಯವಾದ ಅವರ ವಿಚಾರ ಕ್ರಾಂತಿಯ ಮಾತುಗಳು ನಮ್ಮಲ್ಲಿ ಸಾಮಾಜಿಕವಾಗಿ ಜಾಗೃತಗೊಳಿಸುವಲ್ಲಿ ಸಾರ್ಥಕತೆ ಮೆರೆದಿದ್ದಾರೆ. ಮೈಸೂರು ಅವರ ಸಾಹಿತ್ಯದ ಕರ್ಮಭೂಮಿಯಾಗಿತ್ತು ಎನ್ನುವುದೇ ಮೈಸೂರಿಗರಿಗೆ ಅಭಿಮಾನದ ಸಂಗತಿ ಎಂದು ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್ ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಕೆ.ಬಿ.ಲಿಂಗರಾಜು, ವಿಕ್ರಂ ಅಯ್ಯಂಗಾರ್ ಹಾಗೂ ಶ್ರೀಮತಿ ಪದ್ಮ ಉಪಸ್ಥಿತರಿದ್ದರು.

ದಿಢೀರ್ ಬೆಂಕಿ; ಕಾರಿಗೆ ಹಾನಿ



ಸರಸ್ವತಿಪುರಂನಲ್ಲಿ ಕಾರಿನಲ್ಲಿ ಬೆಂಕಿ ಹೊತ್ತಿ ಉರಿಯುತ್ತಿರುವುದು.

ಮೈಸೂರು, ಡಿ.31(ಎಸ್‌ಬಿಡಿ)– ನಿಲ್ಲಿಸಿದ್ದ ಕಾರಿನಲ್ಲಿ ದಿಢೀರ್ ಬೆಂಕಿ ಹೊತ್ತಿಕೊಂಡು ಹಾನಿಯಾಗಿರುವ ಘಟನೆ ಮೈಸೂರಿನಲ್ಲಿ ಮಂಗಳವಾರ ರಾತ್ರಿ ಸಂಭವಿಸಿದೆ.

ಸರಸ್ವತಿಪುರಂ ಕಾಂತರಾಜ ಅರಸ್ ರಸ್ತೆ ಬದಿಯಲ್ಲಿ ನಿಲ್ಲಿಸಿದ್ದ ಟಾಟಾ ಇಂಡಿಕಾ ಕಾರಿನ(ಕೆಎ–01, ಎಂಜೆ–6148) ಇಂಜಿನ್‌ನಲ್ಲಿ ಮಂಗಳವಾರ ರಾತ್ರಿ 7.50ರ ಸಮಯದಲ್ಲಿ ಹೊಗೆ ಕಾಣಿಸಿಕೊಂಡು ಕ್ಷಣಾರ್ಧದಲ್ಲಿ ಬೆಂಕಿ ಹೊತ್ತಿಕೊಂಡಿದೆ. ಸಾರ್ವಜನಿಕರು ತುರ್ತು ಸೇವೆಗೆ ಕರೆ ಮಾಡಿ, ವಿಷಯ ತಿಳಿಸಿದ್ದಾರೆ. ಸಮೀಪದ ಸರಸ್ವತಿಪುರಂ ಅಗ್ನಿಶಾಮಕ ಠಾಣೆ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ದೌಡಾಯಿಸಿ, ಬೆಂಕಿ ನಂದಿಸಿದ್ದಾರೆ. ಸಕಾಲಕ್ಕೆ ಬೆಂಕಿ ನಂದಿಸಿದ್ದರಿಂದ ಕಾರಿನ ಇಂಜಿನ್‌ಗೆ ಮಾತ್ರ ಹಾನಿಯಾಗಿದೆ. ಜೆ.ಪಿ.ನಗರ ನಿವಾಸಿ ವಿನಯ್‌ಕುಮಾರ್, ಆ ಕಾರಿನ ಮಾಲೀಕರೆಂದು ತಿಳಿದು ಬಂದಿದೆ. ಓವರ್ ಹೀಟ್‌ನಿಂದ ಈ ಘಟನೆ ಸಂಭವಿಸಿರಬಹುದು ಎಂದು ಅಗ್ನಿಶಾಮಕ ಸಿಬ್ಬಂದಿ ಹೇಳಿದ್ದಾರೆ.

ಸರಣಿ ಘಟನೆ: ಕಳೆದ ಶನಿವಾರ ವಿವಿ ಮೊಹಲ್ಲಾ 3ನೇ ಕ್ರಾಸ್‌ನಲ್ಲಿ ದಟ್ಟಗಳ್ಳಿಯ ವಿಭಾ ಅವರ ಕ್ವಿಡ್ ಕಾರು ಆಕಸ್ಮಿಕ ಬೆಂಕಿಯಿಂದ ಸಂಪೂರ್ಣ ಸುಟ್ಟು ಕರಕಲಾಯಿತು. ಕಾರು ನಿಲ್ಲಿಸಿ ಫುಡ್ ಮೊಹಲ್ಲಾ ಹೋಟೆಲ್‌ಗೆ ಹೋಗಿ ಕೇವಲ 10 ನಿಮಿಷದಲ್ಲಿ ಈ ಅವಘಡ ಸಂಭವಿಸಿತ್ತು. ಆದರೆ ಘಟನೆಗೆ ಕಾರಣವೇನೆಂದು ಈವರೆಗೂ ತಿಳಿದುಬಂದಿಲ್ಲ. ಆಸುಪಾಸಿನಲ್ಲಿರುವ ಅಪಾರ್ಟ್‌ಮೆಂಟ್‌ಗಳಲ್ಲೂ ಸಿಸಿ ಕ್ಯಾಮರಾಗಳು ಇಲ್ಲದ ಕಾರಣ ಬೆಂಕಿ ಉಂಟಾಗಿದ್ದು ಹೇಗೆಂದು ತಿಳಿಯಲು ಸಾಧ್ಯವಾಗಿಲ್ಲ. ವಾಹನಗಳಲ್ಲಿ ಬೆಂಕಿ ಕಾಣಿಸಿಕೊಳ್ಳುತ್ತಿರುವ ಸರಣಿ ಘಟನೆಗಳಿಂದ ಸಾರ್ವಜನಿಕರಲ್ಲಿ ಆತಂಕ ಸೃಷ್ಟಿಯಾಗಿದೆ.

ವಾಸ್ತು ಎಂಬುದು ಮನಸ್ಸಿನಲ್ಲೇ ಇದೆ ಮನೆಯಲ್ಲಿ ಅಲ್ಲ!



ಮೈಸೂರು,ಡಿ.31–ವಾಸ್ತು ಎನ್ನುವುದು ಈಗ ಜನರನ್ನು ಬಹಳಷ್ಟು ಚಿಂತೆಗೀಡು ಮಾಡಿದೆ. ಆದರೆ ಅದು ನಮ್ಮ ಮನಸ್ಸಿನಲ್ಲಿದೆಯೇ ಹೊರತು ಮನೆಯಲ್ಲಿ ಅಲ್ಲ ಎಂದು ವಿಜಯಪುರ ಜಿಲ್ಲೆ ತಾಳಿಕೋಟೆಯ ಶ್ರೀ ಖಾಸ್ಗತ ವಿರಕ್ತ ಮಠದ ಶ್ರೀ ಸಿದ್ಧಲಿಂಗ ದೇವರು ಹೇಳಿದರು.

ಶ್ರೀ ಶಿವರಾತ್ರಿ ರಾಜೇಂದ್ರ ಭವನದಲ್ಲಿ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯ ವತಿಯಿಂದ ಜರುಗಿದ 320ನೆಯ ಶಿವಾನುಭವ ದಾಸೋಹ ಕಾರ್ಯಕ್ರಮದಲ್ಲಿ 'ನೆಮ್ಮದಿ ಹುಡುಕಾಟದಲ್ಲಿ ಜೀವನದ ಸ್ವಾರಸ್ಯ' ವಿಷಯ ಕುರಿತು ಮಾತನಾಡಿದ ಅವರು, ಕಷ್ಟದಲ್ಲಿರುವವರನ್ನು ಮಾತನಾಡಿಸಿ ನಾಲ್ಕು ಒಳ್ಳೆಯ ಸಮಾಧಾನದ ಮಾತುಗಳನ್ನು ಆಡಬೇಕು. ಯುದ್ಧ ಮಾಡಿ ಆಸ್ತಿ, ಅಂತಸ್ತು, ಐಶ್ವರ್ಯ ಗಳಿಸಿ ರಾಜರಾಗಿದ್ದವರ ಕಥೆ ಏನಾಗಿದೆ? ಜಗತ್ತಿನಲ್ಲಿ ಯಾವುದೂ ದೊಡ್ಡದಲ್ಲ, ಪ್ರೀತಿ ದೊಡ್ಡದು. ಮನುಷ್ಯ ಎಷ್ಟೇ ಶ್ರೀಮಂತನಾದರೂ ನೆಮ್ಮದಿಗಾಗಿ ಹುಡುಕಾಡುತ್ತಾನೆ. ನೆಮ್ಮದಿ ಅವನ ಮನಸ್ಸಿನಲ್ಲಿ ಇರುತ್ತದೆ. ಆದರೆ ಅವನು ಬೇರೆ ಬೇರೆ ವಿಷಯಗಳಿಂದ ನೆಮ್ಮದಿ ಪಡೆಯಲು ಯತ್ನಿಸುತ್ತಾನೆ. ಹೊಸ ಮನೆ ಕಟ್ಟಿ ಬೇರೆಯವರಿಂದ ವಾಸ್ತು ವಿಚಾರ ಕೇಳಿ ನೆಮ್ಮದಿಯನ್ನು ಹಾಳು ಮಾಡಿಕೊಳ್ಳುತ್ತಾನೆ. ಅದಕ್ಕಾಗಿ ಬಸವಾದಿ ಶರಣರು ಕಾಯಕದಲ್ಲಿ ಕೈಲಾಸ ಕಾಣಬೇಕು. ಪ್ರತಿಯೊಬ್ಬರೂ ವೃತ್ತಿಗೆ ಗೌರವ ಕೊಟ್ಟು, ದುಡಿದು ತಿನ್ನಬೇಕು ಎಂಬುದನ್ನು ಹಲವಾರು ವಚನಗಳು ಹಾಗೂ ಈಶಾವಾಸ್ಯ ಉಪನಿಷತ್‌ನ ಶ್ಲೋಕಗಳನ್ನು ಉಲ್ಲೇಖಿಸಿ ಮಾತನಾಡಿದರು. ಮಂಗ ಮರದ ಕೊಂಬೆಯ ಮೇಲೆ ಕೈ, ಕಾಲು ಇಳಿಬಿಟ್ಟು ನೆಮ್ಮದಿಯಾಗಿ ನಿದ್ದೆ ಮಾಡುತ್ತದೆ. ಆದರೆ ಮನುಷ್ಯ ಸುಪ್ಪತ್ತಿಗೆಯ ಮೇಲೆ ಮಲಗಿದರೂ ಚಿಂತೆಯಿಂದಾಗಿ ಹೆಚ್ಚು ನಿದ್ದೆ ಮಾಡಲಿಕ್ಕೆ ಆಗುವುದಿಲ್ಲ. ಪಕ್ಷಿ, ಪ್ರಾಣಿಗಳಿಗೆ ಇರುವ ನಿಯತ್ತು ಮನುಷ್ಯನಿಗೆ ಇಲ್ಲ. ಅವು ಪ್ರಕೃತಿಗೆ ವಿರುದ್ಧವಾಗಿ ಹೋಗದೆ, ಪರೋಪಕಾರಿಯಾಗಿ ಬದುಕಿ ಹೋಗುತ್ತವೆ. ಮನುಷ್ಯ ಒಂದು ಪಡೆಯಲಿಕ್ಕೆ ಮತ್ತೊಂದನ್ನು ನಾಶ ಮಾಡಿ ಗಳಿಸುತ್ತಾನೆ. ಎಷ್ಟು ಗಳಿಸಿದರೂ ಮತ್ತಷ್ಟು ಗಳಿಸಿ ನೆಮ್ಮದಿ, ಆರೋಗ್ಯ ಹಾಳು ಮಾಡಿಕೊಳ್ಳುತ್ತಾನೆ. ಭಗವಂತನಿಗೆ, ತಂದೆ ತಾಯಿಯಂದಿರಿಗೆ, ಹಿರಿಯರಿಗೆ ನಾವು ಯಾವಾಗಲೂ ಕೃತಜ್ಞರಾಗಿರಬೇಕು. ಆಗ ಮಾತ್ರ ನಮ್ಮ ಬದುಕು ಬಂಗಾರವಾಗುತ್ತದೆ ಎಂದು ತಮ್ಮ ಉಪನ್ಯಾಸದಲ್ಲಿ ಶ್ರೀ ಸಿದ್ಧಲಿಂಗ ದೇವರು ತಿಳಿಸಿದರು.

ಜೆಎಸ್‌ಎಸ್ ಮಹಾವಿದ್ಯಾಪೀಠ ತೋಟಗಾರಿಕೆ ವಿಭಾಗದ ನಿರ್ದೇಶಕ ಎನ್.ಎಂ.ಶಿವಶಂಕರಪ್ಪ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಗುರು ಸ್ವೀಟ್ ಮಾರ್ಟ್ ಮಾಲೀಕರಾದ ಶ್ರೀಮತಿ ಮಹದೇವಮ್ಮ ಮತ್ತು ಮಕ್ಕಳು ಪ್ರಾಯೋಜಕತ್ವವನ್ನು ವಹಿಸಿದ್ದರು. ಶ್ರೀ ಶಿವರಾತ್ರೀಶ್ವರ ಅಕ್ಕನ ಬಳಗದ ಅಧ್ಯಕ್ಷರು, ಪದಾಧಿಕಾರಿಗಳು, ಸಾರ್ವಜನಿಕರು, ಜೆಎಸ್‌ಎಸ್ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳು, ಶಿವಶ್ರೀ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳು ಸೇರಿದಂತೆ ಅಪಾರ ಶ್ರೋತೃಗಳು ಭಾಗವಹಿಸಿದ್ದರು. ಕು. ಚೂಡಾಮಣಿ ಪ್ರಾರ್ಥನೆ, ಶ್ರೀ ನಗರ್ಲೆ ಶಿವಕುಮಾರ ಸ್ವಾಗತ, ಕು. ಶಿವಪ್ರಿಯ ನಿರೂಪಣೆ ಹಾಗೂ ಕು. ಬಿ.ಯು. ರಾಹುಲ್ ವಂದನಾರ್ಪಣೆಯನ್ನು ಮಾಡಿದರು.

ಸಾಹಸಸಿಂಹ ವಿಷ್ಣುವರ್ಧನ್ ಅವರ ಕೋಟಿಗೊಬ್ಬ ಕ್ಯಾಲೆಂಡರ್ ಬಿಡುಗಡೆ



ಕೋಟಿಗೊಬ್ಬ 2025ರ ಕ್ಯಾಲೆಂಡರ್ ಅನ್ನು ಹಿರಿಯ ನಟಿ ಭಾರತಿ ವಿಷ್ಣುವರ್ಧನ್ ಹಾಗೂ ನಟ ಅನಿರುದ್ಧ ಬಿಡುಗಡೆ ಮಾಡಿದರು.

ಮೈಸೂರು, ಡಿ. 31–ಉದ್ಬೂರ್ ಗೇಟ್ ಬಳಿ ಇರುವ ಸಾಹಸಸಿಂಹ ವಿಷ್ಣುವರ್ಧನ್ ಸ್ಮಾರಕದಲ್ಲಿ ಸಾಹಸಸಿಂಹ ವಿಷ್ಣುವರ್ಧನ್ ಅವರ 15ನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ವಿಷ್ಣುವರ್ಧನ್ ಪ್ರತಿಮೆಗೆ ಪೂಜೆ ಸಲ್ಲಿಸಿ, ನಂತರ ಮಾಲಾರ್ಪಣೆ ಮಾಡಲಾಯಿತು.

ಬಳಿಕ ಸಾಹಸಸಿಂಹ ವಿಷ್ಣುವರ್ಧನ್ ಅಭಿಮಾನಿ ಬಳಗದ ವಿಷ್ಣುವರ್ಧನ್ ಅವರ ಕೋಟಿಗೊಬ್ಬ 2025ರ ಕ್ಯಾಲೆಂಡರ್ ಅನ್ನು ಹಿರಿಯ ನಟಿ ಭಾರತಿ ವಿಷ್ಣುವರ್ಧನ್ ಹಾಗೂ ನಟ ಅನಿರುದ್ಧ ಬಿಡುಗಡೆ ಮಾಡಿದರು. ಇದೇ ವೇಳೆ ಜೀವಧಾರ ರಕ್ತ ನಿಧಿ ಕೇಂದ್ರದ ವತಿಯಿಂದ ಸ್ವಯಂಪ್ರೇರಿತ ರಕ್ತದಾನ ಶಿಬಿರ ನಡೆಯಿತು. 60ಕ್ಕೂ ಹೆಚ್ಚು ಜನ ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿದರು. ಈ ವೇಳೆ ವಿಷ್ಣು ಅಭಿಮಾನಿಗಳ ಸಂಘದ ಒಕ್ಕೂಟದ ಅಧ್ಯಕ್ಷ ಎಂ.ಡಿ. ಪಾರ್ಥಸಾರಥಿ, ಆಲ್ವಿನ್, ಸಮಾಜ ಸೇವಕರಾದ ವಿಕ್ರಂ ಅಯ್ಯಂಗಾರ್, ಎಂ.ಎನ್.ಚೇತನ್‌ಗೌಡ, ಲಕ್ಷ್ಮಣ, ಮಹದೇವ್, ಜೀವಧಾರ ರಕ್ತನಿಧಿ ಕೇಂದ್ರದ ಸಿಬ್ಬಂದಿಗಳಾದ ಸುರೇಶ್, ಪ್ರಭು, ಸಂತೋಷ್, ಸಿದ್ದಪ್ಪ, ಬಸವರಾಜು ಇನ್ನಿತರರು ಹಾಜರಿದ್ದರು.

ಡಾ.ಯೋಗಣ್ಣಗೆ ಶ್ರೇಷ್ಠ ತೋಟಗಾರಿಕಾ ರೈತ ಪ್ರಶಸ್ತಿ ಪ್ರದಾನ



ಬಾಗಲಕೋಟೆ ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾನಿಲಯದಲ್ಲಿ ಜರುಗಿದ 2024ರ ಕೃಷಿ ರೈತ ಸಮ್ಮೇಳನದಲ್ಲಿ ರಾಜ್ಯದ 24 ಜಿಲ್ಲೆಗಳ 24 ತೋಟಗಾರಿಕಾ ರೈತರಿಗೆ ಶ್ರೇಷ್ಠ ತೋಟಗಾರಿಕಾ ರೈತ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಮೈಸೂರು,ಡಿ.31–ಇತ್ತೀಚೆಗೆ ಬಾಗಲಕೋಟೆ ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾನಿಲಯದಲ್ಲಿ ಜರುಗಿದ 2024ರ ಕೃಷಿ ರೈತ ಸಮ್ಮೇಳನದಲ್ಲಿ ರಾಜ್ಯದ 24 ಜಿಲ್ಲೆಗಳ 24 ತೋಟಗಾರಿಕಾ ರೈತರಿಗೆ ಶ್ರೇಷ್ಠ ತೋಟಗಾರಿಕಾ ರೈತ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಮೈಸೂರು ಜಿಲ್ಲೆಯಿಂದ ಡಾ.ಎಸ್.ಪಿ. ಯೋಗಣ್ಣ ಈ ಪ್ರಶಸ್ತಿಗೆ ಭಾಜನರಾಗಿದ್ದು, ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಅವರು, ರೈತರು ಇಂದು ಕೂಲಿ ಕಾರ್ಮಿಕರ ಕೊರತೆ, ಬೆಲೆ ಮತ್ತು ಹವಾಮಾನಗಳ ವೈಪರೀತ್ಯ ಇತ್ಯಾದಿ ಹಲವಾರು ಸಮಸ್ಯೆಗಳಿಂದ ನಲುಗುತ್ತಿದ್ದು, ಗ್ರಾಮೀಣ ಪ್ರದೇಶದ ಯುವಕರು ಕೃಷಿಯಿಂದ ವಿಮುಖರಾಗುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಮುಂದಿನ ತಲೆಮಾರಿನಲ್ಲಿ ರಾಗಿ, ಭತ್ತ, ಜೋಳ ಇತ್ಯಾದಿ ಆಹಾರಧಾನ್ಯಗಳನ್ನು ಬೆಳೆಯುವ ಶೇ.10ರಷ್ಟು ಕೃಷಿ ಭೂಮಿ ತೆಂಗು, ಅಡಿಕೆ ಇತ್ಯಾದಿ ತೋಟಗಾರಿಕೆ ಬೆಳೆಗಳಿಗೆ ಪರಿವರ್ತನೆಯಾಗುತ್ತಿದ್ದು, ಮುಂದಿನ ದಿನಗಳಲ್ಲಿ ಆಹಾರ ಧಾನ್ಯಗಳ ಕೊರತೆಯಾಗಲಿದೆ ಎಂದು ಡಾ.ಎಸ್.ಪಿ. ಯೋಗಣ್ಣ ಆತಂಕ ವ್ಯಕ್ತಪಡಿಸಿದರು.

ಅಧಿಕಾರ ನಡೆಸುವ ಬಹು ಪಾಲರು ರೈತರ ಮಕ್ಕಳುಗಳೇ ಆದರೂ ರೈತರ ಸಮಸ್ಯೆಗಳಿಗೆ ಸಮಂಜಸವಾದ ಪರಿಹಾರವನ್ನು ನೀಡುವಲ್ಲಿ ವಿಫಲವಾಗಿರುವುದು ದುರದೃಷ್ಟಕರ ಎಂದರು.

ರೈತರು ಅಲ್ಪಾವಧಿಯಲ್ಲಿ ಆದಾಯ ಬರುವ ಹಣ್ಣು, ತರಕಾರಿ ಮತ್ತು ದೀರ್ಘಾವಧಿಯಲ್ಲಿ ಹೆಚ್ಚು ಆದಾಯ ತರುವ ಬೆಳೆಗಳನ್ನೊಳಗೊಂಡ ಸಮಗ್ರ ಕೃಷಿ ನೀತಿಯನ್ನು ಪಾಲಿಸಬೇಕೆಂದು ಸಲಹೆ ನೀಡಿ ಸಾವಯವ ಮತ್ತು ರಾಸಾಯನಿಕ ಗೊಬ್ಬರಗಳ ಮಿಶ್ರಿತ ಆರೋಗ್ಯ ಪದ್ಧತಿಯನ್ನು ಅನುಸರಿಸಿದರೆ ಮಾತ್ರ ಭೂಮಿಯ ಫಲವತ್ತತೆಯನ್ನು ಕಾಯ್ದುಕೊಳ್ಳುವುದರ ಜೊತೆಗೆ ಲಾಭದಾಯಕ ಕೃಷಿ ಮಾಡಬಹುದೆಂದು ತಮ್ಮ ಅನುಭವವನ್ನು ಹಂಚಿಕೊಂಡರು.

ವ್ಯವಸಾಯವನ್ನು ಕೈಗಾರಿಕೋದ್ಯಮದ ರೀತಿ ಪರಿಗಣಿಸಿ ಬೆಲೆ ನಿಗದಿ ಮಾಡಬೇಕೆಂದು ಅಭಿಪ್ರಾಯಿಸಿದರು.

ಕಾರ್ಯಕ್ರಮದಲ್ಲಿ ತೋಟಗಾರಿಕಾ ವಿಶ್ವವಿದ್ಯಾನಿಲಯದ ಉಪ ಕುಲಪತಿಗಳಾದ ಡಾ.ಹರ್ಷವರ್ಧನ್, ರಾಜ್ಯಸಭಾ ಸದಸ್ಯ ನಾರಾಯಣ ಸಾ ಬಾಂಡಗೆ, ವಿಧಾನಪರಿಷತ್ ಸದಸ್ಯ ಪಿ.ಹೆಚ್. ಪೂಜಾರ್ ಸೇರಿದಂತೆ ಹಲವಾರು ವಿಜ್ಞಾನಿಗಳು ಭಾಗವಹಿಸಿದ್ದರು.

ವಿಕ್ರಾಂತ್ ಬಸವ ಬಳಗದ ನೂತನ ವರ್ಷದ ಕ್ಯಾಲೆಂಡರ್



ಮೈಸೂರಿನ ವಿಕ್ರಾಂತ್ ಬಸವ ಬಳಗ ಹೊರತಂದಿರುವ ನೂತನ ವರ್ಷದ ಕ್ಯಾಲೆಂಡರ್ ಅನ್ನು ಕುದೇರು ಮಠದ ಶ್ರೀ ಗುರುಶಾಂತ ಸ್ವಾಮೀಜಿ ಬಿಡುಗಡೆ ಮಾಡಿದರು. ಬಳಗದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಚಿತ್ರದಲ್ಲಿದ್ದಾರೆ.

ದಸಂಸದಿಂದ ಕೆ.ನಂಜಪ್ಪರಿಗೆ ಅಭಿನಂದನೆ



ಮೈಸೂರು ಜಿಲ್ಲೆಯ ಸಫಾಯಿ ಕರ್ಮಚಾರಿ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಶಾಶ್ವತ ಸದಸ್ಯ ಕೆ. ನಂಜಪ್ಪ ಬಸವನಗುಡಿ ಅವರನ್ನು ಜಿಲ್ಲಾ ದಸಂಸ ವತಿಯಿಂದ ಅಭಿನಂದಿಸಲಾಯಿತು.

ಮೈಸೂರು, ಡಿ. 31– ಮೈಸೂರು ಜಿಲ್ಲೆಯ ಸಫಾಯಿ ಕರ್ಮಚಾರಿ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಶಾಶ್ವತ ಸದಸ್ಯರಾಗಿ ಆಯ್ಕೆಯಾಗಿರುವ ಕೆ. ನಂಜಪ್ಪ ಬಸವನಗುಡಿ ಅವರನ್ನು ಮೈಸೂರು ನಗರದ ಬಸವನಗುಡಿ ಬಡಾವಣೆಯಲ್ಲಿ ಮೈಸೂರು ಜಿಲ್ಲಾ ದ.ಸಂಸ ವತಿಯಿಂದ ಅಭಿನಂದಿಸಲಾಯಿತು.


ಬಳಿಕ ಮೈಸೂರು ಜಿಲ್ಲಾ ದ.ಸಂ.ಸ ಜಿಲ್ಲಾ ಸಂಚಾಲಕರಾದ ನಿಂಗರಾಜ್ ಮಲ್ಲಾಡಿ ಮಾತನಾಡಿ, ಕೆ.ನಂಜಪ್ಪ ಬಸವನಗುಡಿ ಅವರು ಪರಿಶಿಷ್ಟ ಆದಿದ್ರಾವಿಡ ಸಮಾಜದವರಾಗಿದ್ದು, ಕಳೆದ 20 ವರ್ಷಗಳಿಂದ ದಸಂಸದ ಸಂಘಟನೆಯ ಹೋರಾಟದಲ್ಲಿ ಸಕ್ರೀಯರಾಗಿ ತೊಡಗಿಸಿಕೊಂಡಿದ್ದು, ಇವರು ಸಮಾಜದ ಕಟ್ಟಕಡೆಯ ಕುಟುಂಬಗಳಾದ ಪೌರಕಾರ್ಮಿಕ, ನಿರ್ಗತಿಕ ಅಲೆಮಾರಿ ಸಮುದಾಯಗಳು, ದಿಕ್ಕುದನಿ ಇಲ್ಲದ ಕುಟುಂಬಗಳ ಹಕ್ಕುಗಳು ಮತ್ತು ಬಾಧ್ಯತೆಗಳ ಬಗ್ಗೆ ಬಹಳ ಕಾಳಜಿ ವಹಿಸಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಕೆಲಸದಲ್ಲಿ ತೊಡಗಿದ್ದಾರೆ ಎಂದರು. ಡಾ| ಬಿ.ಆರ್. ಅಂಬೇಡ್ಕರ್ ವಿಚಾರ ವೇದಿಕೆ ಗೌರವಾಧ್ಯಕ್ಷ ಕೃಷ್ಣಪ್ಪ, ಗೌರವ ಸಲಹೆಗಾರ ಬನ್ನಾರಿ, ದ.ಸಂ.ಸದ ಹಿರಿಯ ಮುಖಂಡರಾದ ಹೆಚ್.ಬಿ. ದಿವಾಕರ್, ಬಸವನಗುಡಿಯ ಕೆ. ನಾಗರಾಜ್‌ದಾಸ್ ಮತ್ತಿತರರು ಉಪಸ್ಥಿತರಿದ್ದರು.

ದಿ ಮೈಸೂರು ಸಿಟಿ ಕೋ–ಆಪರೇಟಿವ್ ಹೌಸಿಂಗ್ ಸೊಸೈಟಿಗೆ ಆಯ್ಕೆ




ಮೈಸೂರಿನ ಚಾಮರಾಜ ಜೋಡಿ ರಸ್ತೆಯಲ್ಲಿರುವ ದಿ ಮೈಸೂರು ಸಿಟಿ ಕೋ–ಆಪರೇಟಿವ್ ಹೌಸಿಂಗ್ ಸೊಸೈಟಿಯ 2025–29ನೇ ಸಾಲಿಗೆ ನಡೆದ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಬಿ.ನಾಗರಾಜು, ಶಂಕರನಾರಾಯಣಶಾಸ್ತ್ರಿ, ಶಾರದಮ್ಮ, ಶ್ರೀನಿವಾಸ್, ವೆಂಕಟಕೃಷ್ಣಶಾಸ್ತ್ರಿ, ಮರಯ್ಯ (ಮರಿಯಪ್ಪ), ಹೆಚ್.ಎಸ್.ನಾಗರಜು, ಪ್ರಕಾಶ್, ಡಾ.ಮಂಜುನಾಥಸ್ವಾಮಿ, ವಿ.ಎಂ.ನಾಗರಾಜು, ಶಿವಪ್ಪ, ಮಹದೇವಸ್ವಾಮಿ, ಸೀತಾಲಕ್ಷ್ಮಿ ಅವರುಗಳು ಆಯ್ಕೆಯಾಗಿದ್ದಾರೆ.

ವಿಷ್ಣುವರ್ಧನ್ ಪುತ್ಥಳಿಗೆ ಮಾಲಾರ್ಪಣೆ



ಸಾಹಸಸಿಂಹ ವಿಷ್ಣುವರ್ಧನ್ ಅವರ 15ನೇ ವರ್ಷದ ಪುಣ್ಯ ಸ್ಮರಣೆ ಅಂಗವಾಗಿ ಚಾಮುಂಡೇಶ್ವರಿ ಬಳಗದ ವತಿಯಿಂದ ಉದ್ಬೂರಿನಲ್ಲಿರುವ ಅವರ ಸ್ಮಾರಕದಲ್ಲಿನ ವಿಷ್ಣು ಪುತ್ಥಳಿಗೆ ಮಾಲಾರ್ಪಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಮೈಸೂರು ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗದ ಉಪಾಧ್ಯಕ್ಷ ರಮೇಶ್ ರಾಮಪ್ಪ, ಚಾಮುಂಡೇಶ್ವರಿ ಬಳಗದ ಮಂಜುನಾಥ್, ಪುರುಷೋತ್ತಮ್, ಯೋಗೇಶ್, ಮಮತಾ ಚಂದ್ರಕಲಾ ಇನ್ನಿತರರು ಉಪಸ್ಥಿತರಿದ್ದರು.

ಸೇನಾಪಡೆಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಸನ್ಮಾನ



ಮೈಸೂರು, ಡಿ. 31–ಬೆಳವಾಡಿ ಸಿಲಿಕಾನ್ ವ್ಯಾಲಿ ಬಡಾವಣೆಯಲ್ಲಿರುವ ಸೈನಿಕ ಅಕಾಡೆಮಿ ಸಂಸ್ಥೆಯಲ್ಲಿ ತರಬೇತಿ ಪಡೆದು ಭಾರತೀಯ ಅರೆ ಸೇನಾಪಡೆಗೆ ಆಯ್ಕೆಯಾಗಿರುವ ಶರಣ್, ಸೋಮರಪೇಟೆ (ಸಿಆರ್‌ಪಿಎಫ್), ನಟೇಶ್, ನೆಲಮಂಗಲ (ಬಿಎಸ್‌ಎಫ್), ಸುಜಿತ್, ಹುಣಸೂರು (ಸಿಐಎಸ್‌ಎಫ್), ಶ್ರೇಯಸ್, ಹುಣಸೂರು (ಸಿಐಎಸ್‌ಎಫ್) ಅವರನ್ನು ಸನ್ಮಾನಿಸಲಾಯಿತು. ಸೈನಿಕ ಅಕಾಡೆಮಿ ಸಂಸ್ಥಾಪಕ ಮತ್ತು ಮಾಜಿ ಕಮಾಂಡೋ ಶ್ರೀಧರ, ಸಹ ಸಂಸ್ಥಾಪಕಿ ಅನಿತಾ ಶ್ರೀಧರ, ಅಧ್ಯಾಪಕರಾದ ಸ್ವಾಮಿಗೌಡ, ಪ್ರಫುಲ್ಲಕುಮಾರ್ ಇತರರು ಉಪಸ್ಥಿತರಿದ್ದರು.

ಐಶ್ವರ್ಯಗೌಡ ವಂಚನೆ; ಕಾಂಗ್ರೆಸ್ ಮುಖಂಡರು ಭಾಗಿ

ಕಿರುಗಾವಲು ಗ್ರಾಮದಿಂದಲೇ ವಂಚನೆ ಆರಂಭವಾಗಿದ್ದು, ಸರಿಯಾದ ರೀತಿಯಲ್ಲಿ ತನಿಖೆ ನಡೆಯಲಿ

ಮಂಡ್ಯ ಜಿಲ್ಲೆಯಲ್ಲಿ 4 ಪ್ರಕರಣಗಳು ದಾಖಲು: ಅನ್ನದಾನಿ



ಐಶ್ವರ್ಯಗೌಡ



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಾಜಿ ಶಾಸಕ ಕೆ.ಅನ್ನದಾನಿ.

ಮಳವಳ್ಳಿ, ಡಿ.31– ಚಿನ್ನದ ಅಂಗಡಿ ಮಾಲೀಕರಿಗೆ ಮತ್ತು ಸಮಾಜದ ಗಣ್ಯರಿಗೆ ಕೋಟ್ಯಾಂತರ ರೂ. ವಂಚಿಸಿರುವ ಕಿರುಗಾವಲು ಗ್ರಾಮದ ಐಶ್ವರ್ಯ ಗೌಡ ಅವರ ವಂಚನೆ ಪ್ರಕರಣದಲ್ಲಿ ಕಾಂಗ್ರೆಸ್ ಮುಖಂಡರು ಭಾಗಿಯಾಗಿದ್ದು, ಸರಿಯಾದ ಹಾದಿಯಲ್ಲಿ ತನಿಖೆ ನಡೆಸಬೇಕು ಎಂದು ಮಾಜಿ ಶಾಸಕ ಕೆ.ಅನ್ನದಾನಿ ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಐಶ್ವರ್ಯಗೌಡ ಅಲಿಯಾಸ್ ನವ್ಯಶ್ರೀ ಅವರ ಅನಾಚಾರಗಳು ಕಿರುಗಾವಲು ಗ್ರಾಮದಿಂದಲೇ ಪ್ರಾರಂಭವಾಗಿದ್ದು, ಅವರೊಟ್ಟಿಗೆ ಇಲ್ಲಿಂದಲೇ ಹಲವು ಸ್ಥಳೀಯ ಕಾಂಗ್ರೆಸ್ಸಿಗರು ಕೈಜೋಡಿಸಿದ್ದಾರೆ ಎಂಬ ಗಂಭೀರ ಆರೋಪ ಮಾಡಿದರಲ್ಲದೆ ಅವರೊಂದಿಗೆ ಹಲವು ಕಾರ್ಯಕ್ರಮಗಳಲ್ಲಿ ಕಾಂಗ್ರೆಸ್ಸಿಗರು ಭಾಗವಹಿಸಿರುವ ಭಾವಚಿತ್ರಗಳು ಇವೆ ಎಂದರು.

ತಾಲೂಕಿನ ಕಾಂಗ್ರೆಸ್ ನಾಯಕರು ಐಶ್ವರ್ಯಗೌಡ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದು, ಅವರಿಂದ ಆತಿಥ್ಯ ಸ್ವೀಕರಿಸಿದ್ದಾರೆ. ಈ ಸಂಬಂಧ ತಾಲೂಕಿನ ನಾಯಕರ ಹೆಸರು ಮಾಧ್ಯಮಗಳಲ್ಲಿ ಬಹಿರಂಗಗೊಂಡಿದ್ದು, ತಾಲೂಕಿನ ವಿನಯ್ ಕುಲಕರ್ಣಿ ಹಾಗೂ ಶಾಸಕ ನರೇಂದ್ರಸ್ವಾಮಿ ಹೆಸರುಗಳು ಬಹಿರಂಗಗೊಂಡಿದ್ದವು. ಇದು ತಾಲೂಕಿನ ಮುಖಂಡರು ಐಶ್ವರ್ಯಗೌಡ ಪ್ರಕರಣದಲ್ಲಿ ಭಾಗಿಯಾದಿದ್ದಾರೆ ಎಂಬುದಕ್ಕೆ ಸಾಕ್ಷಿ ಎಂದು ಬಹಿರಂಗವಾಗಿ ಹೇಳಿದರು.

ಸದರಿ ಪ್ರಕರಣದಲ್ಲಿ ಸರ್ಕಾರದ್ದೇ ಶಾಸಕರಿದ್ದಾರೆ ಎಂಬ ಕಾರಣಕ್ಕೆ ಪ್ರಕರಣದ ತನಿಖೆ ಹಾದಿ ತಪ್ಪುವ ಆತಂಕವಿದೆ. ಯಾವುದೇ ಕಾರಣಕ್ಕೂ ಸದರಿ ಪ್ರಕರಣದ ತನಿಖೆಯನ್ನು ಲಘುವಾಗಿ ಪರಿಗಣಿಸದೇ ಕಿರುಗಾವಲು ಗ್ರಾಮದಿಂದಲೇ ತನಿಖೆ ಆರಂಭಿಸಬೇಕು. ಜಿಲ್ಲೆಯಲ್ಲಿಯೂ ಐಶ್ವರ್ಯಗೌಡ ಅವರಿಂದ ವಂಚಿತರಾಗಿರುವ 4 ಪ್ರಕರಣಗಳಿವೆ. 2023ರ ಸಾರ್ವತ್ರಿಕ ಚುನಾವಣೆಯ ವೇಳೆ ಕಾಂಗ್ರೆಸ್ ಅಭ್ಯರ್ಥಿ ಹಾಗೂ ಐಶ್ವರ್ಯಗೌಡ ಅವರ ನಡುವೆ ಹಣದ ವ್ಯವಹಾರ ನಡೆದಿದೆ ಎಂಬ ಗುಮಾನಿಯಿದೆ ಎಂದು ಗಂಭೀರ ಆರೋಪ ಮಾಡಿದರು.

ಕಿರುಗಾವಲು ಪೊಲೀಸ್ ಠಾಣೆಯಲ್ಲಿ ಐಶ್ವರ್ಯಗೌಡ ವಿರುದ್ಧ 2–3 ದೂರು ದಾಖಲಾಗಿದೆ. ಅವರ ಹಣಕಾಸು ಹಾಗೂ ಚಿನ್ನದ ವ್ಯವಹಾರದಲ್ಲಿ ಕಾಂಗ್ರೆಸ್ಸಿಗರು ಬೆಂಬಲ ನೀಡಿದ್ದರಿಂದಾಗಿ ಇಂದು ಐಶ್ವರ್ಯಗೌಡ ರಾಜ್ಯ ಮಟ್ಟದಲ್ಲಿ ಅನ್ಯಾಯ ಮಾಡುವ ಮಟ್ಟಕ್ಕೆ ಬೆಳೆದಿದ್ದಾರೆ ಎಂದು ದೂರಿದರು.

ಶಾಸಕ ಸ್ಥಾನದಲ್ಲಿ ನರೇಂದ್ರಸ್ವಾಮಿ ಯಾವ ಹಕ್ಕಿದೆ: ರಾಜ್ಯದಲ್ಲಿ ಬಿ.ಆರ್.ಅಂಬೇಡ್ಕರ್ ಅವರ ಸಿದ್ಧಾಂತ ಹೊರತು ಪಡಿಸಿ, ಯಾರ ಸಿದ್ಧಾಂತ ನಡೆಯಬೇಕು, ಯಾವ ಸಿದ್ಧಾಂತವನ್ನು ಪಾಲಿಸಬೇಕು ಎಂಬುದನ್ನು ಶಾಸಕ ಪಿ.ಎಂ.ನರೇಂದ್ರಸ್ವಾಮಿ ಪ್ರಸ್ತಾಪಿಸಿದ್ದು, ಅಂಬೇಡ್ಕರ್ ಸಿದ್ಧಾಂತ ಪಾಲಿಸದ ಅವರು ಅಂಬೇಡ್ಕರ್ ಅವರ ಮೀಸಲಾತಿಯಿಂದ ಗೆದ್ದ ಅವರಿಗೆ ಶಾಸಕ ಸ್ಥಾನದಲ್ಲಿ ಮುಂದುವರೆಯಲು ಯಾವ ನೈತಿಕ ಹಕ್ಕಿದೆ ಎಂದು ಪ್ರಶ್ನಿಸಿದರು.

ಅಮಿತ್ ಶಾ ಅವರು ಅಂಬೇಡ್ಕರ್ ವಿರುದ್ಧ ಉದ್ದೇಶಪೂರಕವಾಗಿ ಹೇಳಿಕೆ ನೀಡಿದ್ದರೆ ಅದನ್ನು ಖಂಡಿಸುತ್ತೇನೆ. ಆ ವಿಚಾರವಾಗಿ ಕಾಂಗ್ರೆಸ್ಸಿಗರು ರಾಜ್ಯಾದ್ಯಂತ ಬೊಬ್ಬೆ ಹಾಕುತ್ತಿದ್ದು, ಕಾಂಗ್ರೆಸ್ ಪಕ್ಷದ ಶಾಸಕ ಅಂಬೇಡ್ಕರ್ ಬಗ್ಗೆ ಅನಾಗರಿಕವಾಗಿ ಮಾತನಾಡಿದ್ದು, ಈ ಸಂಬಂಧ ಕಾಂಗ್ರೆಸ್ ಪಕ್ಷದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಉತ್ತರ ನೀಡಬೇಕು ಎಂದು ಒತ್ತಾಯಿಸಿದರು. ನರೇಂದ್ರಸ್ವಾಮಿ ಅವರಿಗೆ ಸಿದ್ದರಾಮಯ್ಯ ಅವರ ಸಿದ್ಧಾಂತ ಬೇಕಾಗಿದೆ. ಅಧಿಕಾರ ಗಿಟ್ಟಿಸಿಕೊಳ್ಳಲು ಅಂಬೇಡ್ಕರ್ ಸಿದ್ಧಾಂತಕ್ಕೆ ಅಪಮಾನ ಮಾಡಿದ್ದಾರೆ. ಅಂಬೇಡ್ಕರ್ ಸಿದ್ಧಾಂತ ತ್ಯಜಿಸಿರುವ ಅವರಿಗೆ ಆತ್ಮಸಾಕ್ಷಿ ಎಂಬುದಿದ್ದರೆ ತಮ್ಮ ಶಾಸಕ ಸ್ಥಾನಕ್ಕೆ ಹಾಗೂ ವಿಧಾನ ಸಭೆಯ ಪರಿಶಿಷ್ಟ ಶಾಸಕರ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಆಗ್ರಹಿಸಿದರು.

ಈ ಸಂಬಂಧ ಕ್ಷೇತ್ರದಲ್ಲಿ ಅವರನ್ನು ಪ್ರಶ್ನಿಸಿದ್ದಕ್ಕೆ ಬೆದರಿಕೆಯ ಮಾತುಗಳನ್ನಾಡಿರುವುದಲ್ಲದೇ ಕ್ಷೇತ್ರದಲ್ಲಿ ತಾವು ಪಾಳೆಗಾರ ಇದ್ದಂತೆ ಎಂದು ಹೇಳಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪಾಳೆಗಾರಿಕೆ ಸಂಸ್ಕೃತಿ ಇಲ್ಲ, ಅದಕ್ಕೇ ಅಂಬೇಡ್ಕರ್ ಅವರು ಪಾಳೆಗಾರಿಕೆ ಅಳಿಸಿ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿ ಪ್ರಜೆಗೂ ಪ್ರಶ್ನಿಸುವ ಹಕ್ಕು ನೀಡಿದ್ದಾರೆ ಎಂದು ಚಿವುಟಿದರು.

ಗೋಷ್ಠಿಯಲ್ಲಿ ಮಳವಳ್ಳಿ ಜೆಡಿಎಸ್ ಕಾರ್ಯಾಧ್ಯಕ್ಷ ಚಿಕ್ಕಮಲಗೂಡು ಪುಟ್ಟಬುದ್ದಿ, ಯುವ ಜನತಾದಳ ಅಧ್ಯಕ್ಷ ಶ್ರೀಧರ್, ಜಯರಾಂ, ಮಾಜಿ ಜಿ.ಪಂ ಸದಸ್ಯ ಹನುಮಂತು, ಕಾಂತರಾಜು, ಸಿದ್ದಾಚಾರಿ, ಕಿರುಗಾವಲು ಪ್ರಕಾಶ್, ನಾಗರಾಜು, ವೇಣು ಗೋಪಾಲ್ ಇದ್ದರು.

ಜ.5ರಂದು ಮಳವಳ್ಳಿ ತಾಲೂಕಲ್ಲಿ ಕುಮಾರಸ್ವಾಮಿ ಕೃತಜ್ಞತಾ ಸಮಾವೇಶ



ಮಂಡ್ಯ,ಡಿ.31– ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಜನವರಿ 5ರಂದು ಮಳವಳ್ಳಿ ತಾಲೂಕಿಗೆ ಭೇಟಿ ನೀಡಿ ಮತದಾರರಿಗೆ ಕೃತಜ್ಞತೆ ಸಲ್ಲಿಸಲಿದ್ದಾರೆ ಎಂದು ಮಾಜಿ ಶಾಸಕ ಕೆ.ಅನ್ನದಾನಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ ಕಿರುಗಾವಲು ಸಂತೆಮಾಳ, ಪಟ್ಟಣದ ಅನಂತರಾಮ್ ವೃತ್ತ, ಕಸಬಾ(ಹಾಡ್ಲಿ) ವೃತ್ತ ಮತ್ತು ಹಲಗೂರು ಹೋಬಳಿ ಕೇಂದ್ರಗಳಲ್ಲಿ ಪ್ರವಾಸ ಹಮ್ಮಿಕೊಂಡಿದ್ದಾರೆ ಎಂದರು.

ಸಚಿವರು ಸಂಸತ್ತಿಗೆ ಆಯ್ಕೆಯಾಗಿ 5–6 ತಿಂಗಳುಗಳಾಗಿದ್ದು, ಅವರ ಕೇಂದ್ರದಲ್ಲಿ ಎರಡು ಖಾತೆಗಳನ್ನು ನಿಭಾಯಿಸಿದ್ದರಿಂದ ಕೃತಜ್ಞತೆ ಸಲ್ಲಿಸಲು ತಡವಾಗಿದೆ. ಅದಕ್ಕೆ ಸಚಿವರ ಪರವಾಗಿ ಕ್ಷಮೆ ಕೋರುತ್ತೇನೆ. ಆದ್ದರಿಂದ ಮಳವಳ್ಳಿ ವಿಧಾನಸಭಾ ಕ್ಷೇತ್ರದ ಮತದಾರರು ಈ ನಾಲ್ಕು ಕ್ಷೇತ್ರಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ನವೋದಯ ಕರ್ನಾಟಕ ಕ್ಯಾಲೆಂಡರ್ ಬಿಡುಗಡೆ...



ಪಾಂಡವಪುರ ತಾಲೂಕಿನ ಜಕ್ಕನಹಳ್ಳಿ ಸರ್ಕಲ್‌ನಲ್ಲಿ ಸರ್ವೋದಯ ಕರ್ನಾಟಕ ಪಕ್ಷದ 2025ನೇ ಸಾಲಿನ ಕ್ಯಾಲೆಂಡರ್‌ನ್ನು ಶಾಸಕ ದರ್ಶನ್ ಪುಟ್ಟಣ್ಣಯ್ಯ ಬಿಡುಗಡೆ ಮಾಡಿದರು. ಮನ್‌ಮುಲ್ ನಿರ್ದೇಶಕ ಕಾಡೇನಹಳ್ಳಿ ರಾಮಚಂದ್ರು ಇದ್ದಾರೆ.

ಕೆ.ಆರ್.ಪೇಟೆಯಲ್ಲಿ ಕ್ಯಾಲೆಂಡರ್ ಬಿಡುಗಡೆ...



ಕೆ.ಆರ್.ಪೇಟೆ ಪಟ್ಟಣದ ಜಯನಗರ ಬಡಾವಣೆಯಲ್ಲಿ ಸಮಾಜ ಸೇವಕ ಆರ್‌ಟಿಓ ಮಲ್ಲಿಕಾರ್ಜುನ್ ಅಭಿಮಾನಿಗಳ ಬಳಗದ ವತಿಯಿಂದ ಹೊರ ತರಲಾಗಿರುವ 2025ನೇ ಸಾಲಿನ ದಿನದರ್ಶಿಕೆಯನ್ನು ಲೇಖಕರಾದ ಕೆ.ಕಾಳೇಗೌಡ, ಸಮಾಜ ಸೇವಕ ಆರ್‌ಟಿಓ.ಮಲ್ಲಿಕಾರ್ಜುನ್ ಮತ್ತು ಇತರೆ ಗಣ್ಯರು ಬಿಡುಗಡೆ ಮಾಡಿದರು.

ಜಿಲ್ಲೆಯಲ್ಲಿ 5 ಗ್ಯಾರಂಟಿ ಯೋಜನೆಗಳ ಬಗ್ಗೆ ಅರಿವು ಅಗತ್ಯ

ಅರ್ಹ ಫಲಾನುಭವಿಗಳು ಯೋಜನೆಯಿಂದ ವಂಚಿತರಾಗಬಾರದು: ಚಿಕ್ಕಲಿಂಗಯ್ಯ



ಮಂಡ್ಯ,ಡಿ.31– ಜಿಲ್ಲೆಯಲ್ಲಿ ಸರ್ಕಾರದ 5 ಗ್ಯಾರಂಟಿ ಯೋಜನೆಗಳ ಸೌಲಭ್ಯವನ್ನು ಫಲಾನುಭವಿಗಳು ಪಡೆಯುತ್ತಿದ್ದು, ಯೋಜನೆಗಳ ಬಗ್ಗೆ ಹೆಚ್ಚಿನ ಅರಿವು ಅಗತ್ಯವಾಗಿದೆ. ಅರ್ಹ ಫಲಾನುಭವಿಗಳು ಯೋಜನೆಗಳ ಸೌಲಭ್ಯದಿಂದ ವಂಚಿತರಾಗಬಾರದು ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಚಿಕ್ಕಲಿಂಗಯ್ಯ ತಿಳಿಸಿದರು.

ಸೋಮವಾರ ಜಿಲ್ಲಾ ಪಂಚಾಯತ್‌ನ ಮಿನಿ ಸಭಾಂಗಣದಲ್ಲಿ ಸರ್ಕಾರದ ಗ್ಯಾರಂಟಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಯ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರತಿ ತಿಂಗಳು 15 ಹಾಗೂ 30 ರಂದು ಸರ್ಕಾರದ 5 ಮಹತ್ವಾಕಾಂಕ್ಷಿ ಯೋಜನೆಗಳಾದ ಗೃಹಲಕ್ಷ್ಮಿ ಅನ್ನಭಾಗ್ಯ ಶಕ್ತಿ ಯೋಜನೆ, ಗೃಹಜ್ಯೋತಿ ಹಾಗೂ ಯುವ ನಿಧಿ ಯೋಜನೆಗಳ ಬಗ್ಗೆ ಪ್ರಗತಿ ಪರಿಶೀಲನಾ ಸಭೆ ನಡೆಸಲಾಗುವುದು. ಸಂಬಂಧಿಸಿದ ಯೋಜನೆಗಳ ಪ್ರಗತಿ ವರದಿಯನ್ನು ಸಂಬಂಧಪಟ್ಟ ಇಲಾಖೆಯು ಸಲ್ಲಿಸಬೇಕು ಎಂದರು. ಸರ್ಕಾರದ ಗೃಹಲಕ್ಷ್ಮಿ ಯೋಜನೆ ಹಾಗೂ ಅನ್ನಭಾಗ್ಯ ಯೋಜನೆಯ ಸೌಲಭ್ಯ ಪಡೆಯಲು ಫಲಾನುಭವಿಗಳ ಖಾತೆಗೆ ಸಂಬಂಧಪಟ್ಟ ಖಾತೆ ಸಂಖ್ಯೆ, ಆಧಾರ್ ಸೀಡಿಂಗ್, ಇಕೆವೈಸಿ ಕೆಲವು ಲೋಪದೋಷಗಳನ್ನು ಸರಿಪಡಿಸಿಕೊಳ್ಳಬೇಕು. ತದನಂತರ ನೇರವಾಗಿ ಅರ್ಹ ಫಲಾನುಭವಿ ಖಾತೆಗೆ ಹಣವನ್ನು ಜಮೆ ಮಾಡಲಾಗುವುದು ಎಂದರು.

ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯ ಅಡಿಯಲ್ಲಿ 2023 ನೇ ಸಾಲಿನ ಆಗಸ್ಟ್ ಮಾಹೆಯಿಂದ 2024ರ ಸೆಪ್ಟೆಂಬರ್ ಮಾಹೆಯವರೆಗೆ ಫಲಾನುಭವಿಗಳಿಗೆ ಒಟ್ಟು 1218.74 ಕೋಟಿ ರೂ (ಶೇ. 99.32 ರಷ್ಟು) ಮೊತ್ತವನ್ನು ಪಾವತಿಸಲಾಗಿದೆ. ಉಳಿದ ಕೆಲವು ತಾಂತ್ರಿಕ ದೋಷವಿರುವ ಫಲಾನುಭವಿಗಳಿಗೆ ಸಮಸ್ಯೆಯನ್ನು ಬಗೆಹರಿಸಿಕೊಂಡ ನಂತರ ಎಲ್ಲಾ ತಿಂಗಳ ಬಾಕಿ ಮೊತ್ತವನ್ನು ಒಟ್ಟಿಗೆ ಅವರ ಖಾತೆಗೆ ವರ್ಗಾವಣೆ ಮಾಡಲಾಗುತ್ತದೆ ಎಂದು ತಿಳಿಸಿದರು.

ಜಿಲ್ಲೆಯ ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ 5 ಗ್ಯಾರಂಟಿ ಯೋಜನೆಗಳ ಬಗ್ಗೆ ಸಭೆ ನಡೆಸಿ ಅರಿವು ಮೂಡಿಸಬೇಕು. ಗ್ರಾಮ ಸಭೆಯಲ್ಲಿ ಯೋಜನೆಗಳ ಬಗ್ಗೆ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳನ್ನು ಕಡ್ಡಾಯವಾಗಿ ಒಳಗೊಂಡಂತೆ ಸಭೆಯಲ್ಲಿ ಚರ್ಚಿಸಿ, ಸಾರ್ವಜನಿಕರಲ್ಲಿ ಹೆಚ್ಚಿನ ಅರಿವು ಮೂಡಿಸಬೇಕು. ಯಾವುದೇ ಅರ್ಹ ಫಲಾನುಭವಿಯು ಯೋಜನೆಯಿಂದ ವಂಚಿತರಾಗಬಾರದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷರುಗಳಾದ ಪ್ರಶಾಂತ್ ಬಾಬು.ಕೆ.ಸಿ, ರಾಜೇಂದ್ರ ಎಸ್.ಹೆಚ್, ಶಿವಣ್ಣ, ಕೆ.ಹನುಮಂತಯ್ಯ, ಸದಸ್ಯರುಗಳು, ಜಿಪಂ ಮುಖ್ಯ ಯೋಜನಾಧಿಕಾರಿ ಧನುಷ್.ಎಸ್,ಪರಮೇಶ್ವರಪ್ಪ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಮಂಡ್ಯ: ಪಾಂಡವಪುರ ತಾಲೂಕು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ 18 ಅಂಗನವಾಡಿ ಮಿನಿ ಕಾರ್ಯಕರ್ತರು, ಕಾರ್ಯಕರ್ತರು, ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ದಿನಾಂಕವನ್ನು ಜ.5 ರವರೆಗೆ ವಿಸ್ತರಿಸಲಾಗಿದೆ. (ದೂ.ಸಂ: 08236–255642.)

ಕಿಕ್ಕೇರಿಯಲ್ಲಿ ಕುವೆಂಪು ಜಯಂತಿ ಆಚರಣೆ...



ನಾಡಪ್ರಭು ಕೆಂಪೇಗೌಡ ಒಕ್ಕಲಿಗರ ಸಂಘದ ವತಿಯಿಂದ ಕಿಕ್ಕೇರಿಯಲ್ಲಿ ಕುವೆಂಪು ಜಯಂತಿ ಆಚರಿಸಲಾಯಿತು. ಸುರೇಶ್, ಕೆ.ಎಸ್. ಪ್ರಭಾಕರ್, ಕಾಯಿ ಸುರೇಶ್, ಕೆ.ಜಿ.ಪುಟ್ಟರಾಜು, ಕೇಶವಮೂರ್ತಿ, ಮಧುಕರ್, ಸತ್ಯ, ಸಿಪಾಯಿ ಲೋಕೇಶ್, ಚಂದ್ರಶೇಖರಯ್ಯ ಇದ್ದರು.

ಮೂರನೇ ಪುಟದಿಂದ

ದಾಖಲಾತಿಗಳಲ್ಲಿ 'ಪ್ರಿನ್ಸೆಸ್ ರಸ್ತೆ' ಉಲ್ಲೇಖವಿಲ್ಲ

ಎಂದು ಹೇಳಿದರು. ತರುವಾಯ ನವೆಂಬರ್ 20ರಂದು ನಗರ ಪಾಲಿಕೆಯ ಆಡಳಿತಾಧಿಕಾರಿ ರಮೇಶ್ ನೇತೃತ್ವದಲ್ಲಿ ನಡೆದ ಕೌನ್ಸಿಲ್ ಸಭೆಯಲ್ಲಿ ಚರ್ಚೆ ಮಾಡಿ ಕೆಆರ್‌ಎಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಹೆಸರು ನಾಮಕರಣ ಮಾಡಲು ತೀರ್ಮಾನ ಕೈಗೊಳ್ಳಲಾಯಿತು. ನಂತರ ಈ ಸಂಬಂಧ ಆಕ್ಷೇಪಣೆ ಸಲ್ಲಿಸಲು 30 ದಿನಗಳ ಕಾಲಾವ ಕಾಶ ನೀಡಲಾಗಿದೆ ಎಂದು ತಿಳಿಸಿದರು. ಕೆಆರ್‌ಎಸ್ ಮಾರ್ಗಕ್ಕೆ 'ಪ್ರಿನ್ಸೆಸ್ ರಸ್ತೆ' ಎಂಬ ಹೆಸರು ಈ ಮೊದಲೇ ಇತ್ತೆ ಎಂಬ ಬಗ್ಗೆ 1999ರಿಂದ 2024ರವರೆಗೆ ನಗರಪಾಲಿಕೆಯ ಎಲ್ಲಾ ದಾಖಲಾತಿ ಪರಿಶೀಲನೆ ನಡೆಸಿದ್ದು, ಇದುವರೆಗಿನ ಪರಿಶೀಲನೆ ವೇಳೆ 'ಪ್ರಿನ್ಸೆಸ್ ರಸ್ತೆ' ಎಂಬ ಉಲ್ಲೇಖವಿಲ್ಲ. ಇದರ ಜೊತೆಗೆ 1964 ರಿಂದ ಕೂಡ ದಾಖಲಾತಿ ಪರಿಶೀಲನೆ ನಡೆಸುತ್ತಿದ್ದು, ಈಗಾಗಲೇ ಶೇಕಡ 50 ರಷ್ಟು ದಾಖಲಾತಿ ಪರಿಶೀಲನಾ ಕಾರ್ಯ ಮುಗಿದಿದೆ. ಇದುವರೆಗೆ ಈ ಉಲ್ಲೇಖವಿಲ್ಲ ಎಂದು ಅಶಾದ್ ಉರ್ ರೆಹಮಾನ್ ಷರೀಫ್ ಹೇಳಿದರು. ಗೆಜೆಟ್‌ನಲ್ಲಿ 'ಪ್ರಿನ್ಸೆಸ್ ರಸ್ತೆ' ಉಲ್ಲೇಖವಿದೆಯೇ ಎಂಬ ಬಗ್ಗೆ ಜಿಲ್ಲಾಧಿಕಾರಿಗಳೇ ಸ್ಪಷ್ಟನೆ ನೀಡಬೇಕಿದ್ದು, ಇದು ನನಗೆ ಸಂಬಂಧಪಡದ ವಿಚಾರವಾಗಿದೆ ಎಂದು ತಿಳಿಸಿದರು.

ಆಕ್ಷೇಪಣೆ ಸಲ್ಲಿಸಲು ಇನ್ನು ಕಾಲಾವಕಾಶವಿದ್ದು, ಆಕ್ಷೇಪಣೆ ಅರ್ಜಿ ಸೇರಿದಂತೆ ಇತರೆ ದಾಖಲಾತಿ ಪರಿಶೀಲನೆ ನಡೆಸಿದ ನಂತರ ಈ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದರು. ವಿಧಾನ ಪರಿಷತ್ ಸದಸ್ಯ ಡಾ.ತಿಮ್ಮಯ್ಯ, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಮಾಜಿ ಮೇಯರ್‌ಗಳಾದ ಮೋದಾಮಣಿ, ಭೈರಪ್ಪ, ಪುಷ್ಪಲತಾ, ಟಿ.ಬಿ.ಚಿಕ್ಕಣ್ಣ, ಆರೀಫ್ ಹುಸೇನ್, ಮಾಜಿ ಕಾರ್ಪೋರೇಟರ್ ಮಲ್ಲೇಶ್, ಕಾಂಗ್ರೆಸ್ ಮುಖಂಡ ಭಾಸ್ಕರ್ ಸೇರಿದಂತೆ ಹಲವರು ನಿಯೋಗದಲ್ಲಿದ್ದರು.

ಸಿದ್ದರಾಮಯ್ಯನವರ ಒಂದು ಹೆಸರಿಟ್ಟರೇನು ತಪ್ಪು...!

ಮೈಸೂರು ನಗರ ವ್ಯಾಪ್ತಿಯ 1,430 ಕಿಲೋ ಮೀಟರ್ ರಸ್ತೆಗೆ 980 ಹೆಸರುಗಳನ್ನು ಈಗಾಗಲೇ ನಾಮಕರಣ ಮಾಡಲಾಗಿದೆ. ಅಷ್ಟಕ್ಕೂ ಒಂದು ರಸ್ತೆಗೆ ಇದರಲ್ಲಿ ಈ ನಾಡಿನ ಸಿಎಂ ಸಿದ್ದರಾಮಯ್ಯ ಹೆಸರಿಟ್ಟರೇನು ತಪ್ಪು ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಪ್ರಶ್ನಿಸಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದೆ ಎಂಬ ದರ್ಪದಿಂದ ಧಮ್ಕಿ ಹಾಕಿ, ಪ್ರಭಾವ ಬೀರಿ ಸಿದ್ದರಾಮಯ್ಯ ಹೆಸರಿಡುವಂತೆ ನಾವು ಒತ್ತಡ ಹೇರುತ್ತಿಲ್ಲ. ಕೆಆರ್‌ಎಸ್ ಮಾರ್ಗದಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ 2,800 ಕೋಟಿ ವೆಚ್ಚದಲ್ಲಿ 12 ಆಸ್ಪತ್ರೆ ನಿರ್ಮಾಣ ಮಾಡಿದೆ. ಇದಕ್ಕೆ ಕಾರಣೀಭೂತರಾದ ಸಿದ್ದರಾಮಯ್ಯ ಹೆಸರು ನಾಮಕರಣ ಮಾಡುವಂತೆ ಮನವಿ ಮಾಡಿದ್ದೇವೆಯೇ ಹೊರತು ಅಧಿಕಾರ ದುರ್ಬಳಕೆ ಮಾಡಿಕೊಂಡು, ಒತ್ತಡ ಹೇರಿಲ್ಲ ಎಂದರು. ಕೆಆರ್‌ಎಸ್ ಮಾರ್ಗಕ್ಕೆ ಸಿದ್ದರಾಮಯ್ಯ ಹೆಸರಿಡಲು ಪಕ್ಷ ಭೇದ ಮರೆತು ಎಲ್ಲರೂ ಬೆಂಬಲ ನೀಡಬೇಕು. ಈ ವಿಚಾರವಾಗಿ ಯಾರೂ ಕೂಡ ರಗಳೆ, ರಂಪಾಟ ಮಾಡಬಾರದು ಎಂದು ಲಕ್ಷ್ಮಣ ಮನವಿ ಮಾಡಿದರು. ಈ ವೇಳೆ ಮಾತನಾಡಿದ ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಸಿದ್ದರಾಮಯ್ಯ ಈ ರಾಜ್ಯದ ಹೆಮ್ಮೆಯ ಪುತ್ರ. ವರುಣ ನಾಲೆ ನಿರ್ಮಾಣ ಸಾಧ್ಯವಿಲ್ಲ ಎಂದಾಗ ಅವರ ಹಠದಿಂದ ವರುಣ ನಾಲೆ ಯೋಜನೆ ಸಾಕಾರಗೊಂಡಿದೆ. ಹೀಗೆ ಮೈಸೂರಿಗೆ ಹತ್ತಾರು ಸ್ಮರಣೀಯ ಕೊಡುಗೆಗಳನ್ನು ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಕೆಆರ್‌ಎಸ್ ರಸ್ತೆಗೆ ಸಿದ್ದರಾಮಯ್ಯ ಹೆಸರು ನಾಮಕರಣ ಮಾಡಿ ಪೌರ ಸನ್ಮಾನ ಕೂಡ ಮಾಡಬೇಕು ಎಂದು ಮನವಿ ಮಾಡಿದರು.

ಇಂತಹ ರಸ್ತೆಗೆ ತಮ್ಮ ಹೆಸರು ನಾಮಕರಣ ಮಾಡುವಂತೆ ಸಿದ್ದರಾಮಯ್ಯ ಎಂದೂ ಬೇಡಿಕೆ ಸಲ್ಲಿಸಿಲ್ಲ. ಅರ್ಜಿ ಕೂಡ ಹಾಕಿಲ್ಲ. ಮೈಸೂರಿಗೆ ಅವರು ನೀಡಿರುವ ಕೊಡುಗೆಗಳನ್ನು ಸ್ಮರಿಸಿ ಸಿದ್ದರಾಮಯ್ಯ ಹೆಸರಿಡಲು ನಾವೇ ಪ್ರಸ್ತಾಪ ಮಾಡಿದ್ದೇವೆ ಎಂದು ದಸರಾ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ತಿಳಿಸಿದರು.

ಮುಖ್ಯಮಂತ್ರಿ ಆಗಿರುವ ಸಿದ್ದರಾಮಯ್ಯ ಬಗ್ಗೆ ಮಾತನಾಡಿದರೆ ತಾವು ದೊಡ್ಡ ವ್ಯಕ್ತಿಗಳಾಗುತ್ತೇವೆ ಎಂದು ಸಣ್ಣ ಪುಟ್ಟ ಜನರೆಲ್ಲಾ ಟೀಕೆ ಮಾಡುತ್ತಿದ್ದಾರೆ. ಆದರೆ ಮೈಸೂರಿಗೆ ಸಿದ್ದರಾಮಯ್ಯ ನೀಡಿರುವ ಕೊಡುಗೆಯನ್ನು ಅವರು ಸ್ಮರಿಸುತ್ತಿಲ್ಲ ಎಂದು ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅಸಮಾಧಾನ ವ್ಯಕ್ತಪಡಿಸಿದರು.

'ಹ್ಯಾಪಿ ನ್ಯೂ ಇಯರ್' ಹರ್ಷೋದ್ಗಾರ

ನಡೆದವು. 2024ನೇ ವರ್ಷದ ಕೊನೆ ದಿನವಾದ ಮಂಗಳವಾರ ಮೈಸೂರು ನಗರಕ್ಕೆ ಪ್ರವಾಸಿಗರು ಲಗ್ಗೆ ಇಟ್ಟಿದ್ದರು. ವಾರದಿಂದಲೇ ಮೈಸೂರಿನತ್ತ ಪ್ರವಾಸಿಗರು ಮುಖ ಮಾಡಿದ್ದು, ನೂತನ ವರ್ಷದ ಮೊದಲ ದಿನವಾದ ಬುಧವಾರವೂ ಮೈಸೂರು ಪ್ರವಾಸಿಗರಿಂದ ತುಂಬಿ ತುಳುಕುವುದು ಪ್ರತಿ ವರ್ಷ ಸಹಜವಾಗಿದೆ.

ಇನ್ನು ಮಂಗಳವಾರ ಬೆಳಗ್ಗೆಯಿಂದಲೇ ಅರಮನೆ, ಮೃಗಾಲಯ, ಚಾಮುಂಡಿ ಬೆಟ್ಟ, ಕೆಆರ್‌ಎಸ್ ಸೇರಿದಂತೆ ಮೈಸೂರು ಹಾಗೂ ಸುತ್ತಮುತ್ತಲ ಪ್ರವಾಸಿ ತಾಣಗಳು ಜನದಟ್ಟಣೆಯಿಂದ ಕೂಡಿದ್ದವು. ಸಂಜೆಯಾಗುತ್ತಿದ್ದಂತೆ ತಾವು ವಾಸ್ತವ್ಯ ಹೂಡಿದ್ದ ಹೋಟೆಲ್‌ಗಳತ್ತ ದಾವಿಸಿದ ಪ್ರವಾಸಿಗರು ತಡರಾತ್ರಿ ವರೆಗೂ ಹೊಸ ವರ್ಷದ ಸಂಭ್ರಮಾಚರಣೆಯಲ್ಲಿ ತೇಲಿದರು.

ಬೆಟ್ಟಕ್ಕೆ ಪ್ರವೇಶ ನಿರ್ಬಂಧ: ಹೊಸ ವರ್ಷಾಚರಣೆ ಹಿನ್ನೆಲೆಯಲ್ಲಿ ಚಾಮುಂಡಿ ಬೆಟ್ಟಕ್ಕೆ ಮಂಗಳವಾರ ರಾತ್ರಿ 7 ಗಂಟೆ ನಂತರ ಉತ್ತನಹಳ್ಳಿ ಕ್ರಾಸ್ ಗೇಟ್, ದೇವಿವನ ಗೇಟ್, ಚಾಮುಂಡಿಬೆಟ್ಟದ ಪಾದದ ಗೇಟ್, ಲಲಿತಮಹಲ್ ಗೇಟ್ ಮೂಲಕ ಪ್ರವೇಶವನ್ನು ನಿರ್ಬಂಧಿಸಲಾಗಿತ್ತು. ತಾವರೆಕಟ್ಟೆ ಗೇಟ್ ಮೂಲಕ ಮಂಗಳವಾರ ರಾತ್ರಿ 8 ಗಂಟೆಯಿಂದ ಬುಧವಾರ ಬೆಳಗ್ಗೆ 6 ಗಂಟೆಯವರೆಗೆ ಪ್ರವೇಶವನ್ನು ನಿರ್ಬಂಧಿಸಲಾಗಿತ್ತು. ರಾತ್ರಿ 9 ಗಂಟೆ ನಂತರದಲ್ಲಿ ಬೆಟ್ಟಕ್ಕೆ ಪ್ರವೇಶ ನಿರ್ಬಂಧಿಸಲಾಗಿತ್ತು. ಬೆಟ್ಟದ ನಿವಾಸಿಗಳು ಹಾಗೂ ಸುತ್ತಮುತ್ತ ಗ್ರಾಮಸ್ಥರ ಹೊರತು ಪಡಿಸಿ ಈ ಕ್ರಮ ಕೈಗೊಳ್ಳಲಾಗಿತ್ತು.

ಶೋಕಾಚರಣೆ ಮಧ್ಯೆ ವರ್ಷಾಚರಣೆ: ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ನಿಧನದ ಶೋಕಾಚರಣೆ ನಡುವೆ ಹೊಸ ವರ್ಷಾಚರಣೆ ಹೇಗೆಂಬ ಚರ್ಚೆ ಸಹ ನಡೆದಿತ್ತು. ಈ ಮಧ್ಯೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜನರ ಹೊಸ ವರ್ಷಾಚರಣೆಯ ಸಂತೋಷವನ್ನು ಕಸಿದುಕೊಳ್ಳಲಾಗದು. ವೈಯಕ್ತಿಕ ಸಂಭ್ರಮಾಚರಣೆಗೆ ತಡೆಯೊಡ್ಡುವುದು ಅಸಾಧ್ಯ ಎಂದು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ್ದರು. ಅಂತೆಯೇ ರಾಜ್ಯ ಮಾತ್ರವಲ್ಲದೆ, ದೇಶದೆಲ್ಲೆಡೆ ಹೊಸ ವರ್ಷದ ಆಚರಣೆ ಸಂಭ್ರಮದಿಂದಲೇ ನಡೆದಿದೆ.

ಪೊಲೀಸ್ ಕಟ್ಟೆಚ್ಚರ: ನಗರದಾದ್ಯಂತ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ನಗರ ಪೊಲೀಸ್ ವತಿಯಿಂದ ಬಿಗೀ ಬಂದೋಬಸ್ತ್ ಕೈಗೊಳ್ಳಲಾಗಿತ್ತು. ನಾಲ್ವರು ಡಿಸಿಪಿಗಳು, 12 ಮಂದಿ ಎಸಿಪಿಗಳು, 32 ಪೊಲೀಸ್ ಇನ್ಸ್‌ಪೆಕ್ಟರ್‌ಗಳು, 53 ಪಿಎಸ್‌ಐಗಳು, 112 ಎಎಸ್‌ಐಗಳು, 895 ಪೊಲೀಸ್ ಸಿಬ್ಬಂದಿ, 79 ಮಹಿಳಾ ಸಿಬ್ಬಂದಿ ನಿಯೋಜಿಸಲಾಗಿತ್ತು. ಜೊತೆಗೆ 8 ಸಿಎಆರ್ ತುಕಡಿಗಳು, 4 ಕೆಎಸ್‌ಆರ್‌ಪಿ ತುಕಡಿಗಳು, 2 ಕಮಾಂಡೋ ಪಡೆಗಳು, 2 ಎಎಸ್‌ಸಿ ತಂಡಗಳು ಹಾಗೂ 1 ಶ್ವಾನದಳ ತಂಡ ಹದ್ದಿನ ಕಣ್ಣಿಟ್ಟಿದ್ದವು.

ಮೈಸೂರಿನ ಬನ್ನಿಮಂಟಪದ ರೆಜೆಂಟಾ ಸೆಂಟ್ರಲ್ ಹೆರಾಲ್ಡ್, ಜೆಎಲ್‌ಬಿ ರಸ್ತೆಯ ಮೆಟ್ರೋಪೋಲ್ ಹೋಟೆಲ್, ಹೆಬ್ಬಾಳು ಕೈಗಾರಿಕಾ ಪ್ರದೇಶದಲ್ಲಿರುವ ನಾರ್ತ್ ಅವೆನ್ಯೂ ಹೋಟೆಲ್, ವಿನೋಬಾ ರಸ್ತೆಯ ದಿ ಕೋರಮ್ ಹೋಟೆಲ್, ಎಂಜಿ ರಸ್ತೆಯ ರ್ಯಾಡಿಸನ್ ಬ್ಲೂ ಪ್ಲಾಜಾ ಹೋಟೆಲ್, ಹೂಟಗಳ್ಳಿಯಲ್ಲಿರುವ ಸೈಲೆಂಟ್ ಶೋರ್ಸ್ ರೆಸಾರ್ಟ್, ಗಂಗೋತ್ರಿ ಲೇಔಟ್‌ನ ರೆಜೆಂಟಾ ಸೆಂಟ್ರಲ್ ಜವಾಜಿ ಹೋಟೆಲ್ ಮತ್ತು ಬೃಂದಾವನ್ ಗಾರ್ಡನ್ ರೆಸಾರ್ಟ್ ಸೇರಿದಂತೆ ನಗರದ ಹೋಟೆಲ್‌ಗಳಲ್ಲಿ ಹೊಸ ವರ್ಷಾಚರಣೆ ಪ್ರಯುಕ್ತ ವೈವಿಧ್ಯಮಯ ಕಾರ್ಯಕ್ರಮಗಳು ಜರುಗಿದವು.

ಅಧಿಕಾರಿಗಳ ಮೂಲಕ ನನ್ನ ಎನ್‌ಕೌಂಟರ್ ಪ್ರಯತ್ನ ನಡೆದಿತ್ತು...

ಪಕ್ಷದ ಮುಖಂಡರ ಜೊತೆಗೂಡಿ ಇಂದು ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್ ಅವರನ್ನು ಭೇಟಿ ಮಾಡಿ ಲಿಖಿತ ದೂರು ಸಲ್ಲಿಸಿದ್ದಲ್ಲದೆ, ಇವರುಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ನಾನು ದೂರು ಕೊಟ್ಟ ಬಳಿಕವೂ ಎಫ್‌ಐಆರ್ ಹಾಕದೆ, ನನ್ನನ್ನು ಅಕ್ರಮವಾಗಿ ಬಂಧಿಸಿ, ನನ್ನ ಮೇಲೆ ದೌರ್ಜನ್ಯ ಎಸಗಿ, ಈ ಪ್ರಭಾವಿಗಳ ನಿರ್ದೇಶನದಂತೆ ರಾತ್ರಿಯಿಡೀ ನಿರ್ಜನ ಪ್ರದೇಶಗಳಲ್ಲಿ ವಾಹನದಲ್ಲಿ ಕೂರಿಸಿಕೊಂಡು ಸುತ್ತಾಡಿಸಿ ಕಾನೂನು ಉಲ್ಲಂಘನೆ ಮಾಡಿದ್ದು, ಸಂಬಂಧಿಸಿದ ಪೊಲೀಸ್ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಆಗ್ರಹಿಸಿದ್ದಾರೆ. ಈ ಸಂಬಂಧ ಸರಣಿ ಟ್ವೀಟ್ ಮಾಡಿರುವ ರವಿ, ಪೊಲೀಸ್ ನಿರ್ದೇಶಕರು ಮತ್ತು ರಾಜ್ಯಪಾಲರಿಗೆ ನೀಡಿರುವ ದೂರಿನ ಮಾಹಿತಿಯನ್ನು ಹಂಚಿಕೊಂಡಿದ್ದಾರೆ. ಬೆಳಗಾವಿಯ ಸುವರ್ಣ ಸೌಧದಿಂದ ತಮ್ಮನ್ನು ಪಶುವಿನ ರೀತಿ ಪೊಲೀಸರು ಕಿಡ್ನ್ಯಾಪ್ ಮಾಡಿದ್ದರು. ಇಡೀ ಸನ್ನಿವೇಶ ಫೇಕ್ ಎನ್‌ಕೌಂಟರ್ ರೀತಿ, ಲೈಸೆನ್ಸ್ಡ್ ಸುಪಾರಿ ಕಿಲ್ಲರ್‌ಗಳು ನಡೆದು ಕೊಳ್ಳುವ ರೀತಿ ಇತ್ತು ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ರಾಜ್ಯಪಾಲರ ಭೇಟಿ ವೇಳೆ ಉಪ ಮುಖ್ಯಮಂತ್ರಿ ಹಾಗೂ ಸಚಿವೆ ವಿರುದ್ಧ ಸವಿಸ್ತಾರವಾದ ವಿವರಣೆ ನೀಡಿದ್ದೇನೆ. ಅವರು ನ್ಯಾಯ ಕೊಡಿಸುತ್ತಾರೆಂಬ ವಿಶ್ವಾಸ ನನಗಿದೆ ಎಂದಿದ್ದಾರೆ. ಬೆಳಗಾವಿ ನಗರ ಪೊಲೀಸ್ ಕಮಿಷನರ್ ಯಡಾ ಮಾರ್ಟಿನ್ ಮತ್ತು ಬೆಳಗಾವಿ ಎಸ್ಪಿ ಭೀಮಾಶಂಕರ್ ಗುಳೇದ್ ವಿರುದ್ಧವೂ ರವಿ ಆರೋಪ ಮಾಡಿದ್ದಾರೆ. ರಾಜ್ಯಪಾಲರಿಗೆ ನೀಡಿದ್ದ 8 ಪುಟಗಳ ದೂರಿನಲ್ಲೂ ಡಿ.ಕೆ. ಶಿವಕುಮಾರ್ ಮತ್ತು ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ.

ಬೆಳಗಾವಿಯ ಚಳಿಗಾಲದ ಅಧಿವೇಶನದ ಕೊನೆಯ ದಿನ, ರಾಜ್ಯ ಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಷಾ ನೀಡಿದ ಹೇಳಿಕೆ ಕುರಿತು ವಿಧಾನ ಪರಿಷತ್‌ನಲ್ಲಿ ಪರ–ವಿರೋಧ ಚರ್ಚೆಗಳು ತಾರಕಕ್ಕೇರಿ, ರವಿ ಮತ್ತು ಸಚಿವೆ ಹೆಬ್ಬಾಳ್ಕರ್ ನಡುವೆ ವಾಕ್ ಸಮರಕ್ಕೆ ಕಾರಣ ವಾಗಿತ್ತು. ಈ ಹಂತದಲ್ಲಿ ರವಿ ಅವರು ಸಚಿವೆ ಬಗ್ಗೆ ಅವಾಚ್ಯ ಪದ ಬಳಸಿದರೆಂದು ಅವರ ಬೆಂಬಲಿ ಗರು ಸುವರ್ಣಸೌಧದೊಳಗೆ ನುಗ್ಗಿ ಹಲ್ಲೆಗೆ ಪ್ರಯತ್ನ ಮಾಡಿದ್ದರು. ಮಾರ್ಷಲ್‌ಗಳ ಮಧ್ಯ ಪ್ರವೇಶದಿಂದ ರವಿ ಅವರ ಮೇಲೆ ಹಲ್ಲೆ ವಿಫಲವಾಯಿತು, ನಂತರ ಸಚಿವೆ ನೀಡಿದ ದೂರಿನ ಆಧಾರದ ಮೇಲೆ ಸ್ಥಳೀಯ ಪೊಲೀಸರು ರವಿ ವಿರುದ್ಧ ಕ್ರಮಕ್ಕೆ ಮುಂದಾಗಿದ್ದರು.

ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣ

ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಪೋಸ್ಟರ್ ವಾರ್

- ಪೊಲೀಸರಿಂದ ಬಿಜೆಪಿ ನಾಯಕರು, ಕಾರ್ಯಕರ್ತರ ಬಂಧನ
- ಪ್ರಕರಣ ಅಂತರರಾಜ್ಯ ವ್ಯಾಪ್ತಿ ಹೊಂದಿದ್ದು ಸಿಬಿಐ ತನಿಖೆಗೆ ಆಗ್ರಹ



ಬೆಂಗಳೂರು, ಡಿ.31(ಕೆಎಂಶಿ)–ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣದಲ್ಲಿ ಆರೋಪ ಎದುರಿಸುತ್ತಿರುವ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಪೋಸ್ಟರ್ ವಾರ್ ಆರಂಭಿಸಿದೆ. ಪೋಸ್ಟರ್ ಅಂಟಿಸುವ ಅಭಿಯಾನದಲ್ಲಿ ತೊಡಗಿದ್ದ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿದ್ದಾರೆ. ಪ್ರತ್ಯೇಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿಧಾನಪರಿಷತ್‌ನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಏಕಾಯಿತು ಎಂಬುದು ತನಿಖೆಯಿಂದ ಹೊರಬರಬೇಕಿದೆ. ಸುಪಾರಿ, ಹನಿಟ್ರ್ಯಾಪ್ ವಿಷಯವೂ ಇದರೊಂದಿಗೆ ಹೆಣೆದುಕೊಂಡಿದ್ದು, ಮಹಾರಾಷ್ಟ್ರದವರ ಹೆಸರುಗಳು ಆರೋಪದಲ್ಲಿ ಕೇಳಿಬಂದಿರುವುದರಿಂದ ಇದು ಅಂತರರಾಜ್ಯ ವಿಚಾರವಾಗಿದ್ದು, ಸಿಬಿಐ ತನಿಖೆಗೆ ನೀಡಬೇಕು ಎಂದರು.

ಸಚಿವ ಪ್ರಿಯಾಂಕ್ ಖರ್ಗೆ ಬಿಜೆಪಿ ಮತ್ತು ಪಕ್ಷದ ನಾಯಕರಿಗೆ ಸವಾಲು ಹಾಕಿದ್ದು, ಬಟ್ಟೆ ಹರಿದುಕೊಂಡರೂ ರಾಜೀನಾಮೆ ಕೊಡುವುದಿಲ್ಲ ಎಂದಿದ್ದಾರೆ. ನ್ಯಾಯ ಕೇಳುವುದು ತಪ್ಪೇ ಎಂದು ಪ್ರಶ್ನಿಸಿದರು. ಪ್ರಕರಣದಲ್ಲಿ ಪ್ರಿಯಾಂಕ್ ಖರ್ಗೆ ಅವರ ಲೆಫ್ಟ್ ಹ್ಯಾಂಡ್, ರೈಟ್ ಹ್ಯಾಂಡ್ ಇದ್ದಾರೆ. ತಪ್ಪು ಮಾಡಿದ್ದನ್ನು ಕೇಳುವುದು ವಿರೋಧ ಪಕ್ಷದವರ ಅಧಿಕಾರ ಮತ್ತು ಹಕ್ಕು. ಉತ್ತರ ಕೊಡಲು ಗೊತ್ತಿಲ್ಲದಿದ್ದರೆ ಕೇಳಿ ತಿಳಿದುಕೊಳ್ಳಲಿ. ಸಚಿವರೇ ಉದ್ಧಟತನ ಬದಿಗಿಡಿ, ನಿಮ್ಮನ್ನು ಟಾರ್ಗೆಟ್ ಮಾಡಿ ಬಿಜೆಪಿಗೆ ಏನೂ ಆಗಬೇಕಾಗಿಲ್ಲ. ಆಪಾದನೆ ಬಂದಾಗ ಯಾವ ರೀತಿ ಎದುರಿಸಬೇಕು ಎಂಬುದನ್ನು ಕಲಿತುಕೊಳ್ಳಿ. ನ್ಯಾಯ ಕೇಳುತ್ತಿದ್ದೇವೆ, ನೀವು ಭಿತ್ತಿಪತ್ರ ಅಂಟಿಸಿದ ಮಾದರಿಯಲ್ಲೇ ನಾವು ನಿಮ್ಮ ರಾಜೀನಾಮೆಗೆ ಆಗ್ರಹಿಸಿ ಭಿತ್ತಿಪತ್ರ ಅಂಟಿಸಿದ್ದೇವೆ ಎಂದರು. ಸಚಿನ್ ಆತ್ಮಹತ್ಯೆ ಪ್ರಕರಣ ರಾಜ್ಯಾದ್ಯಂತ ಸದ್ದು ಮಾಡುತ್ತಿದೆ. ಇದರಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಹೆಸರು ಪ್ರಸ್ತಾಪವಾಗಿದೆ. ಪ್ರಕರಣದ ತನಿಖೆಯನ್ನು ಸಿಬಿಐಗೆ ನೀಡುವಂತೆ ಬಿಜೆಪಿ ಮಾತ್ರವಲ್ಲ, ಮೃತನ ಕುಟುಂಬದವರದ್ದೂ ಆಗ್ರಹವಾಗಿದೆ. ಬಿಜೆಪಿ ಕಾರ್ಯಕರ್ತರು, ಮುಖಂಡರು 10 ಲಕ್ಷ ರೂ. ಸಂಗ್ರಹಿಸಿ ಮೃತನ ಕುಟುಂಬಕ್ಕೆ ನೀಡಲು ಹೋಗಿದ್ದೆವು. ಅವರು ಕೈಮುಗಿದು 'ನಮಗೆ ಹಣ ಬೇಡ, ನ್ಯಾಯ ಬೇಕು' ಎಂದು ತಿಳಿಸಿದರು. ಪೊಲೀಸರು ನ್ಯಾಯ ಕೊಡಿಸುವ ಭರವಸೆ ಇಲ್ಲ. ಸಿಐಡಿ ತನಿಖೆ ಬೇಕಾಗಿಲ್ಲ. ಸಿಬಿಐಗೆ ಒಪ್ಪಿಸಿ ನ್ಯಾಯ ಕೊಡಿಸಿ ಎಂದು ಮೃತರ ಸೋದರಿಯರು ಮನವಿ ಮಾಡಿದ್ದಾರೆ ಎಂದರು.

ಚಿರತೆ ಪತ್ತೆಗೆ ಡ್ರೋನ್ ಕ್ಯಾಮರಾ ಬಳಕೆ: ಈಶ್ವರ್ ಖಂಡ್ರೆ

ಇರುವಿಕೆ ಖಚಿತವಾದ ಹಿನ್ನೆಲೆಯಲ್ಲಿ ತುರ್ತು ಕಾರ್ಯಾಚರಣೆಗೆ ಸೂಚನೆ ನೀಡಲಾಗಿದೆ. ಇನ್ಫೋಸಿಸ್ ತನ್ನ ಉದ್ಯೋಗಿಗಳಿಗೆ ಮನೆಯಿಂದಲೇ ಕಾರ್ಯ ನಿರ್ವಹಿಸಲು ಅವಕಾಶ ನೀಡಿದ್ದು, ಆತಂಕ ಪಡುವ ಅಗತ್ಯವಿಲ್ಲ. ಅರಣ್ಯ ಇಲಾಖೆ ಸಿಬ್ಬಂದಿ ಬಲೆ, ಅರವಳಿಕೆ ಔಷಧದೊಂದಿಗೆ ಸಜ್ಜಾಗಿದ್ದಾರೆ. ಇನ್ಫೋಸಿಸ್ ಆವರಣ ಸುಮಾರು 350 ಎಕರೆಯಷ್ಟಿದ್ದು, ಕೆಲವು ಭಾಗ ಕಾಡಿ ನಂತೆಯೇ ಇದೆ.

ಇಲ್ಲಿ ಕಾರ್ಯಾಚರಣೆ ಸಾಹಸವೇ ಸರಿ. ಆದರೂ ಕಾರ್ಯಾಚರಣೆ ನಡೆಯುತ್ತಿದೆ ಎಂದರು. ಚಿರತೆ ಸಮೀಪದ ವಸತಿ ಪ್ರದೇಶಗಳಿಗೆ ನುಗ್ಗದಂತೆ ಸಹ ಕ್ರಮ ವಹಿಸ ಲಾಗಿದೆ. ಚಿರತೆ ಪತ್ತೆಗೆ ಥರ್ಮಲ್ ಕ್ಯಾಮೆರಾ ಅಳವಡಿಸಿದ ಡ್ರೋನ್ ಸಹ ಬಳಸಲಾಗುತ್ತಿದೆ. ಅರಣ್ಯ ಇಲಾಖೆ ಸಿಬ್ಬಂದಿ ಶೀಘ್ರವೇ ಚಿರತೆ ಸೆರೆ ಹಿಡಿದು ಜನರ ಆತಂಕ ದೂರ ಮಾಡುತ್ತಾರೆ ಎಂಬ ವಿಶ್ವಾಸವನ್ನು ಈಶ್ವರ ಖಂಡ್ರೆ ವ್ಯಕ್ತಪಡಿಸಿದ್ದಾರೆ.

ಮೈಸೂರಿನ ಇನ್ಫೋಸಿಸ್ ಕ್ಯಾಂಪಸ್‌ನಲ್ಲಿ ಚಿರತೆ ಸುಳಿದಾಟಕೂಂಬಿಂಗ್ ಕಾರ್ಯಾಚರಣೆ

ತಿಳಿಸಿದ ಸ್ಥಳದಲ್ಲಿ ಕೂಂಬಿಂಗ್ ಕಾರ್ಯಾಚರಣೆ ನಡೆಸಿದರೂ ಯಾವುದೇ ಸುಳಿವು ಪತ್ತೆಯಾಗಲಿಲ್ಲ. ಥರ್ಮಲ್ ಡ್ರೋನ್ ಬಳಸಿ ಇನ್ಫೋಸಿಸ್ ಆವರಣದಲ್ಲಿ ಪರಿಶೀಲಿಸಲಾಯಿತು. ಚಿರತೆ ಓಡಾಡಿರುವ ಸ್ಥಳದ ಸುತ್ತಮುತ್ತ 12 ಕ್ಯಾಮರಾ ಟ್ರ್ಯಾಪ್ ಅಳವಡಿಸಲಾಗಿದೆ. ಚಿರತೆ ಸೆರೆಗಾಗಿ 2 ಬೋನ್ ಇಡಲಾಗಿದೆ. ಕ್ಯಾಂಪಸ್‌ನಲ್ಲಿ ಚಿರತೆ ಇದ್ದರೆ, ಅದು ಕಾಂಪೌಂಡ್ ಜಿಗಿದು ಹೋಗಲು ಸಹಕಾರಿಯಾಗುವಂತೆ ಆಯ್ದ ಸ್ಥಳದಲ್ಲಿ 10 ಕಡೆ ಏಣಿಗಳನ್ನು ಇಡಲಾಗಿದೆ. ಸ್ಥಳದಲ್ಲಿಯೇ ಪಶುವೈದ್ಯಕೀಯ ತಂಡ ನಿಯೋಜಿಸಲಾಗಿದೆ.

ಕೋಳಿ ಆಕರ್ಷಣೆ: ಇನ್ಫೋಸಿಸ್ ಆವರಣದಲ್ಲಿ ಚಿರತೆಗೆ ಯಾವುದೇ ಆಹಾರವಿಲ್ಲದೇ ಇದ್ದರೂ, ಕೋಳಿ ಮೇಲೆ ಆಕರ್ಷಣೆಗೊಂಡು ಬಂದಿರಬಹುದು ಎಂದು ಶಂಕಿಸಲಾಗಿದೆ. ಇನ್ಫೋಸಿಸ್ ಆವರಣದ ಒಂದು ಭಾಗದಲ್ಲಿ ನಾಟಿ ಕೋಳಿಗಳಿದ್ದು, ಆ ಭಾಗದ ಚಿರತೆ ಸಂಚರಿಸುತ್ತಿರುವುದು ಸಿಸಿ ಕ್ಯಾಮರಾದಲ್ಲಿ ಕಂಡು ಬಂದಿದೆ ಈ ಹಿನ್ನೆಲೆಯಲ್ಲಿ ಕೋಳಿಗಾಗಿಯೇ ಚಿರತೆ ಇನ್ಫೋಸಿಸ್ ಆವರಣಕ್ಕೆ ಬಂದಿರಬಹುದು ಎನ್ನಲಾಗಿದೆ. ಹಾಗಾಗಿಯೇ, ಆ ಭಾಗದಲ್ಲಿಯೇ ಬೋನ್ ಇಡಲಾಗಿದೆ.

ಗಾಯಕಿ, ಭರತನಾಟ್ಯ ಕಲಾವಿದೆಯೊಂದಿಗೆ ಸಂಸದ ತೇಜಸ್ವಿ ಸೂರ್ಯ ವಿವಾಹ ನಿಶ್ಚಯ




ಬೆಂಗಳೂರು, ಡಿ.31– ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಅವರಿಗೆ ಕಂಕಣ ಭಾಗ್ಯ ಕೂಡಿಬಂದಿದ್ದು, most eligible bachelor ಎನಿಸಿಕೊಂಡಿರುವ ಯುವ ರಾಜಕಾರಣಿ ಕೆಲವೇ ತಿಂಗಳಲ್ಲಿ ಗೃಹಸ್ಥಾಶ್ರಮಕ್ಕೆ ಕಾಲಿಡಲಿದ್ದಾರೆ.

ಚೆನ್ನೈ ಮೂಲದ ಗಾಯಕಿ, ಭರತನಾಟ್ಯ ಕಲಾವಿದೆಯೂ ಆಗಿರುವ ಶಿವಶ್ರೀ ಸ್ಕಂದಪ್ರಸಾದ್ ಅವರನ್ನು ತೇಜಸ್ವಿ ಸೂರ್ಯ ವರಿಸಲಿದ್ದಾರೆ. ಅವರ ಎರಡೂ ಕುಟುಂಬಗಳು ಈಗಾಗಲೇ ಮಾತುಕತೆ ನಡೆಸಿ, ಮದುವೆಗೆ ಒಪ್ಪಿಗೆ ನೀಡಿವೆ ಎಂಬ ಮಾಹಿತಿ ಲಭ್ಯವಾಗಿದೆ.

ಶಾಸ್ತ್ರ ವಿಶ್ವವಿದ್ಯಾಲಯದಿಂದ ಬಯೋ ಇಂಜಿನಿಯರಿಂಗ್‌ನಲ್ಲಿ ಬಿ.ಟೆಕ್ ಪದವಿಯನ್ನು ಪಡೆದಿರುವ ಶಿವಶ್ರೀ ಸ್ಕಂದ ಪ್ರಸಾದ್, ಚೆನ್ನೈ ವಿಶ್ವವಿದ್ಯಾನಿಲಯದಿಂದ ಭರತನಾಟ್ಯದಲ್ಲಿ ಎಂಎ ಮತ್ತು ಚೆನ್ನೈ ಸಂಸ್ಕೃತ ಕಾಲೇಜಿನಲ್ಲಿ ಸಂಸ್ಕೃತದಲ್ಲಿ ಎಂಎ ಪದವಿ ಪಡೆದಿದ್ದಾರೆ. 2025ರ ಮಾರ್ಚ್‌ನಲ್ಲಿ ತೇಜಸ್ವಿ ಸೂರ್ಯ –ಶಿವಶ್ರೀ ಸ್ಕಂದಪ್ರಸಾದ್ ವಿವಾಹ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

ಹುಬ್ಬಳ್ಳಿ ಸಿಲಿಂಡರ್ ಸ್ಫೋಟ ಪ್ರಕರಣ: ಮತ್ತೋರ್ವ ಅಯ್ಯಪ್ಪ ಮಾಲಾಧಾರಿ ಸಾವು

ಮೃತರ ಸಂಖ್ಯೆ 8ಕ್ಕೇರಿಕೆ; 9 ಮಂದಿ ಗಾಯಗೊಂಡಿದ್ದರು




ಹುಬ್ಬಳ್ಳಿ, ಡಿ.31– ಹುಬ್ಬಳ್ಳಿಯಲ್ಲಿ ಅಗ್ನಿ ಅವಘಡದಿಂದ ಗಂಭೀರ ಗಾಯಗೊಂಡಿದ್ದ ಮತ್ತೊಬ್ಬ ಅಯ್ಯಪ್ಪ ಮಾಲಾಧಾರಿ ಮೃತಪಟ್ಟಿದ್ದಾರೆ. ಪ್ರಕಾಶ ಬಾರಕೇರ(42) ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೆ ಮಂಗಳವಾರ ಬೆಳಗ್ಗೆ ಮೃತಪಟ್ಟಿದ್ದಾರೆ. ಇದರೊಂದಿಗೆ, ಘಟನೆಯಲ್ಲಿ ಮೃತಪಟ್ಟವರ ಸಂಖ್ಯೆ 8ಕ್ಕೆ ಏರಿಕೆಯಾಗಿದೆ. ಮೃತ ಪ್ರಕಾಶ ಬಾರಕೇರ, ಹುಬ್ಬಳ್ಳಿಯ ಉಣಕಲ್ ನಿವಾಸಿಯಾಗಿದ್ದಾರೆ.

ಸೋಮವಾರ ರಾತ್ರಿಯಷ್ಟೇ ಅಯ್ಯಪ್ಪ ಮಾಲಾಧಾರಿ ತೇಜಸ್ವರ್(27) ಮೃತಪಟ್ಟಿದ್ದರು. ಇದೀಗ 9 ಗಾಯಾಳುಗಳ ಪೈಕಿ 8 ಅಯ್ಯಪ್ಪ ಮಾಲಾಧಾರಿಗಳ ಸಾವಾಗಿದ್ದು, ಪ್ರಕಾಶ್ ಬಾರಕೇರ ಅವರ ಮಗ ವಿನಾಯಕ್‌ಗೆ ಕಿಮ್ಸ್‌ನಲ್ಲಿ ಚಿಕಿತ್ಸೆ ಮುಂದುವರಿದಿದೆ. ಸದ್ಯಕ್ಕೆ ಆರೋಗ್ಯ ಸ್ಥಿರವಾಗಿದೆ.

ಹುಬ್ಬಳ್ಳಿಯ ಅಚ್ಚವ್ವನ ಕಾಲೋನಿಯ ಅಯ್ಯಪ್ಪನ ಸನ್ನಿಧಿಯಲ್ಲಿ ಸಂಭವಿಸಿದ್ದ ಭೀಕರ ಸಿಲಿಂಡರ್ ಸ್ಫೋಟದಲ್ಲಿ 9 ಮಂದಿ ಅಯ್ಯಪ್ಪ ಮಾಲಾಧಾರಿಗಳು ಗಾಯಗೊಂಡು ಕಿಮ್ಸ್ ಆಸ್ಪತ್ರೆ ಸೇರಿದ್ದರು. ತಜ್ಞ ವೈದ್ಯರಿಂದ ಚಿಕಿತ್ಸೆ ಕೊಡಿಸಿದರೂ ಗಾಯಾಳುಗಳನ್ನು ಉಳಿಸಿಕೊಳ್ಳಲು ಆಗುತ್ತಿಲ್ಲ. ಸಾವಿನ ಸರಣಿ ಮುಂದುವರಿದಿದ್ದು ಸೋಮವಾರ ರಾತ್ರಿ ರಾಮನಗರ ನಿವಾಸಿ 26 ವರ್ಷದ ತೇಜಸ್ವರ್ ಸಾತರೆ ಉಸಿರು ಚೆಲ್ಲಿದ್ದಾರೆ. ಮೃತ ತೇಸಜ್ವರ್ 3 ವರ್ಷದಿಂದ ಅಯ್ಯಪ್ಪ ಸ್ವಾಮಿ ಮಾಲೆ ಹಾಕುತ್ತಿದ್ದರು. ಗಂಭೀರವಾಗಿ ಗಾಯಗೊಂಡಿರುವ 9 ಜನ ಮಾಲಾಧಾರಿಗಳ ಪೈಕಿ ಇದೀಗ ಒಬ್ಬ ಗಾಯಾಳು ಮಾತ್ರ ಬದುಕುಳಿದಿದ್ದಾರೆ. ಅವರಿಗೆ ಚಿಕಿತ್ಸೆ ಮುಂದುವರಿದಿದೆ.

ಪ್ರಕರಣದ ಹಿನ್ನೆಲೆ: ಡಿಸೆಂಬರ್ 23ರಂದು ಬೆಳಗಿನ ಜಾವ ಹುಬ್ಬಳ್ಳಿಯ ಉಣಕಲ್ ಅಚ್ಚವ್ವ ಕಾಲೋನಿಯಲ್ಲಿ ಗ್ಯಾಸ್ ಸಿಲಿಂಡರ್ ಸ್ಫೋಟ ಸಂಭವಿಸಿತ್ತು. ಎಂದಿನಂತೆ ಅಯ್ಯಪ್ಪಸ್ವಾಮಿ ಮಾಲಾಧಾರಿಗಳು ತಮ್ಮ ವ್ರತವನ್ನು ಮುಗಿಸಿ, ಅಯ್ಯಪ್ಪನಿಗೆ ಪೂಜೆ ಸಲ್ಲಿಸಿ ನಿದ್ರೆ ಮಾಡುತ್ತಿದ್ದರು. ಈ ಸಂದರ್ಭದಲ್ಲಿ ಓರ್ವ ಅಯ್ಯಪ್ಪ ಮಾಲಾಧಾರಿಯ ಕಾಲು ಗ್ಯಾಸ್ ಸಿಲಿಂಡರ್‌ಗೆ ತಾಗಿದ ಪರಿಣಾಮ ಗ್ಯಾಸ್ ಸೋರಿಕೆಯಾಗಿತ್ತು. ದೇವರಿಗೆ ಹಚ್ಚಿದ್ದ ದೀಪ ಉರಿಯುತ್ತಿದ್ದರಿಂದ ಏಕಾಏಕಿ ಬೆಂಕಿ ಹೊತ್ತಿಕೊಂಡಿತ್ತು.

ಘಟನೆಯಲ್ಲಿ 9 ಜನ ಅಯ್ಯಪ್ಪ ಮಾಲಾಧಾರಿಗಳು ಗಂಭೀರವಾಗಿ ಗಾಯಗೊಂಡಿದ್ದರು. ಅವರನ್ನು ಸ್ಥಳೀಯರು ಕಿಮ್ಸ್ ಆಸ್ಪತ್ರೆಗೆ ರವಾನಿಸಿದ್ದರು.

ಸಕಾಲಕ್ಕೆ ಚಿಕಿತ್ಸೆ ಸಿಗದೇ ಮಗು, ಗರ್ಭಿಣಿ ಸಾವು: ಮನನೊಂದು ಪತಿ ಆತ್ಮಹತ್ಯೆ ಯತ್ನ

ಹುಬ್ಬಳ್ಳಿ,ಡಿ.31–ಸಕಾಲಕ್ಕೆ ಸೂಕ್ತ ಚಿಕಿತ್ಸೆ ಸಿಗದೆ ಹೊಟ್ಟೆಯಲ್ಲೇ ಮಗು ಮತ್ತು ಚಿಕಿತ್ಸೆ ಫಲಿಸದೆ ಗರ್ಭಿಣಿ ರಾಧಿಕಾ ಮಲ್ಲೇಶ್ ಗಡ್ಡಿಹೊಳಿ (19) ಸಾವಿನ ಪ್ರಕರಣ ಸದ್ಯ ಸಾಕಷ್ಟು ಚರ್ಚೆಗೆ ಗ್ರಾಸವಾಗಿದೆ. ಈ ಮಧ್ಯೆ ಪತ್ನಿ ಸಾವಿನ ಸುದ್ದಿ ತಿಳಿದು ವಿಷ ಸೇವಿಸಿ ಪತಿಯೂ ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ನಡೆದಿದೆ. ಮಲ್ಲೇಶ್(25) ಆತ್ಮಹತ್ಯೆಗೆ ಯತ್ನಿಸಿದ ರಾಧಿಕಾ ಪತಿ. ಸದ್ಯ ಮಲ್ಲೇಶ್‌ಗೆ ಕಿಮ್ಸ್ ಆಸ್ಪತ್ರೆಯ ತುರ್ತು ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಕಳೆದ 2 ದಿನಗಳಿಂದ ಸಾವು–ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದ ಬೆಳಗಾವಿ ಮೂಲದ ರಾಧಿಕಾ ಗಡ್ಡಿಹೊಳಿ ಸಾವಿನ ಮನೆ ಸೇರಿದ್ದಾರೆ. ಚಿಕಿತ್ಸೆ ಫಲಕಾರಿಯಾಗದೇ ರಾಧಿಕಾ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ. ಇಷ್ಟಕ್ಕೂ ರಾಧಿಕಾ ವಯಸ್ಸು ಕೇವಲ 19 ವರ್ಷ. ಬೆಳಗಾವಿ ಜಿಲ್ಲೆಯ ಗೋಕಾಕ ತಾಲೂಕಿನ ಮೇಲಮಟ್ಟಿ ಗ್ರಾಮದವರು. ಎಂಟೂವರೆ ತಿಂಗಳ ಗರ್ಭಿಣಿ ಆಗಿದ್ದ ರಾಧಿಕಾಗೆ 6 ಬಾರಿ ಫಿಟ್ಸ್ ಬಂದಿತ್ತು. ಮೊನ್ನೆ ಭಾನುವಾರ ರಾತ್ರಿ 8 ಗಂಟೆ ಸುಮಾರಿಗೆ ಫಿಟ್ಸ್ ಬಂದು ಸೀರಿಯಸ್ ಆಗಿದ್ದರು. 2 ಆಸ್ಪತ್ರೆಗೆ ಅಲೆದರೂ ಸೂಕ್ತ ಸಮಯಕ್ಕೆ ಚಿಕಿತ್ಸೆ ಸಿಕ್ಕಿರಲಿಲ್ಲ. ಕೊನೆಗೆ ಬೆಳಗಾವಿಯ ಬಿಮ್ಸ್‌ಗೆ ಕರೆದುಕೊಂಡು ಬರುವಷ್ಟರಲ್ಲಿ ಶಿಶು ಗರ್ಭಿಣಿಯ ಹೊಟ್ಟೆಯಲ್ಲೇ ಮೃತಪಟ್ಟಿತ್ತು. ರಾಧಿಕಾ ಸ್ಥಿತಿಯೂ ಗಂಭೀರವಾಗಿತ್ತು. ಹೆಚ್ಚಿನ ಚಿಕಿತ್ಸೆಗಾಗಿ ನಿನ್ನೆ ಬಿಮ್ಸ್ ಆಸ್ಪತ್ರೆಯಿಂದ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿತ್ತು. ಆದರೆ ರಾಧಿಕಾ ಆರೋಗ್ಯದಲ್ಲಿ ತೀವ್ರ ಏರುಪೇರು ಉಂಟಾಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.

ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ



ಮೈಸೂರಿನ ಲೋಕನಾಯಕನಗರದ ಚಾಮರಾಜ ಕ್ಷೇತ್ರದ ಶಾಸಕ ಕೆ. ಹರೀಶ್‌ಗೌಡ ಕಚೇರಿಯಲ್ಲಿ 2025ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು. ಈ ವೇಳೆ ಶಾಸಕ ಹರೀಶ್‌ಗೌಡ, ಮಾಜಿ ಕಾರ್ಪೋರೇಟರ್ ಪೈಲ್ವಾನ್ ಶ್ರೀನಿವಾಸ್, ಯುವ ಕಾಂಗ್ರೆಸ್ ಮುಖಂಡ ರವೀಶ್ ಇನ್ನಿತರರು ಉಪಸ್ಥಿತರಿದ್ದಾರೆ.

ಹೃದಯಾಘಾತದಿಂದ ಹುಣಸೂರಲ್ಲಿ ಮೈಸೂರು ಯುವಕ ಸಾವು



ಮೈಸೂರು, ಡಿ.31(ಆರ್‌ಕೆ)–ತೀವ್ರ ಹೃದಯಾಘಾತದಿಂದ ಮಲಗಿದ್ದಲ್ಲೇ ಮೈಸೂರು ಯುವಕ ಹುಣಸೂರಲ್ಲಿ ಸಾವನ್ನಪ್ಪಿದ್ದಾನೆ. ಮೈಸೂರಿನ ಗೋಕುಲಂ ನಿವಾಸಿ ಹರೀಶ್ ಅವರ ಮಗ ನಿಶ್ಚಲ್ (28) ಸಾವನ್ನಪ್ಪಿದವರು. ಸೋಮವಾರ ರಾತ್ರಿ ಸ್ನೇಹಿತರೊಂದಿಗೆ ಹುಣಸೂರಿಗೆ ತೆರಳಿದ್ದ ಅವರು ರೆಸಾರ್ಟ್‌ವೊಂದರಲ್ಲಿ ವಾಸ್ತವ್ಯ ಹೂಡಿದ್ದರು. ಇಂದು ಬೆಳಗ್ಗೆ 10 ಗಂಟೆಯಾದರೂ ಎಚ್ಚರವಾಗದಿದ್ದರಿಂದ ಸಂಶಯಗೊಂಡು ಸ್ನೇಹಿತರು ಎಬ್ಬಿಸಲೆತ್ನಿಸಿದಾಗ ನಿಶ್ಚಲ್ ಮೃತಪಟ್ಟಿರುವುದು ತಿಳಿಯಿತು. ಹರೀಶ್ ದಂಪತಿಗೆ ಏಕಮಾತ್ರ ಪುತ್ರನಾಗಿದ್ದ ನಿಶ್ಚಲ್ ದೇಹವನ್ನು ಇಂದು ಬೆಳಗ್ಗೆ ಮೈಸೂರಿಗೆ ತಂದು ಅಂತ್ಯಕ್ರಿಯೆ ಮಾಡಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಹೊನ್ನಾವರ ಬಳಿ ಬಸ್–ಬೈಕ್ ಡಿಕ್ಕಿ; ಮೂವರು ಸಾವು

ಉತ್ತರ ಕನ್ನಡ,ಡಿ.31–ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರದ ಶರಾವತಿ ಸೇತುವೆಯ ಮೇಲೆ ಬೈಕಿಗೆ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ ಹೊಡೆದಿದ್ದು, ಭೀಕರ ಅಪಘಾತದಲ್ಲಿ ಮೂವರು ಮೃತಪಟ್ಟಿದ್ದಾರೆ. ವಿಜಯಪುರದಿಂದ ಮಂಗಳೂರಿಗೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ ಮಂಕಿ ಕಡೆಯಿಂದ ಹೊನ್ನಾವರ ಪಟ್ಟಣಕ್ಕೆ ಬರುತ್ತಿದ್ದ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಬೈಕ್ ಸವಾರರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತರನ್ನು ಭಟ್ಕಳ ತಾಲೂಕಿನ ರಾಘವೇಂದ್ರ ಸೋಮಯ್ಯ ಗೌಡ(34), ಗೌರೀಶ್ ನಾಯ್ಕ(25) ಮತ್ತು ರಮೇಶ್ ನಾಯ್ಕ (22) ಎಂದು ಗುರುತಿಸಲಾಗಿದೆ. ಘಟನಾ ಸ್ಥಳಕ್ಕೆ ಹೊನ್ನಾವರ ಪಿಎಸ್‌ಐ ಮಂಜುನಾಥಗೌಡ ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹೊನ್ನಾವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪರಮಾನಂದ ನೇಮಕ



ಮೈಸೂರು: ಕೇಂದ್ರ ಸರ್ಕಾರವು ಸೆಂಟ್ರಲ್ ಬೋರ್ಡ್ ಆಫ್ ಫಿಲ್ಮ ಸರ್ಟಿಫಿಕೇಟ್‌ನ ಬೆಂಗಳೂರು ವಿಭಾಗದ ಸಲಹಾ ಮಂಡಳಿ ಸದಸ್ಯರನ್ನಾಗಿ (ಸೆನ್ಸಾರ್ ಕಮಿಟಿ ಸದಸ್ಯ) ಪರಮಾನಂದ ಎಂ.ಎಸ್ ಅವರನ್ನು ನೇಮಕ ಮಾಡಿ ಆದೇಶಿಸಿದೆ. ಇವರನ್ನು ಗಾಂಧಿನಗರ ನಾಗರಿಕರ ಹಿತರಕ್ಷಣಾ ಸಮಿತಿ ಅಧ್ಯಕ್ಷ ಶರತ್ ಸತೀಶ್, ಕಾರ್ಯದರ್ಶಿ ದೇವರಾಜು, ಉಪಾಧ್ಯಕ್ಷರಾದ ಸುರೇಶ್, ರಾಜೇಶ್, ವಿಜಯ್ ಹಾಗೂ ಮಂಜುನಾಥ್ ಅಭಿನಂದಿಸಿದ್ದಾರೆ.

ಮುಂಬೈ ಹೋರ್ಡಿಂಗ್ ಕುಸಿತ: ಏಳು ತಿಂಗಳಿನಿಂದ ತಲೆಮರೆಸಿಕೊಂಡಿದ್ದ ಪ್ರಮುಖ ಆರೋಪಿ ಬಂಧನ




ಮುಂಬೈ,ಡಿ.31–ಮುಂಬೈನ ಘಾಟ್ಕೋಪರ್ ಪ್ರದೇಶದಲ್ಲಿ 17 ಜನರ ಸಾವಿಗೆ ಕಾರಣವಾದ ದೈತ್ಯ ಹೋರ್ಡಿಂಗ್ ಕುಸಿತಕ್ಕೆ ಸಂಬಂಧಿಸಿದಂತೆ ಪ್ರಕರಣದ ಪ್ರಮುಖ ಆರೋಪಿಯನ್ನು ಮುಂಬೈ ಪೊಲೀಸರು ಮಂಗಳವಾರ ಬಂಧಿಸಿದ್ದಾರೆ.

ಆರೋಪಿಯನ್ನು ಉದ್ಯಮಿ ಅರ್ಷದ್ ಖಾನ್ (42) ಎಂದು ಗುರುತಿಸಲಾಗಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ತನ್ನ ಹೇಳಿಕೆ ದಾಖಲಿಸಲು ಕರೆದ ನಂತರ ಕಳೆದ 7 ತಿಂಗಳಿಂದ ತಲೆಮರೆಸಿಕೊಂಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಮೇ 13ರಂದು ಮಳೆ ಮತ್ತು ಗಾಳಿಯಿಂದಾಗಿ ಇಲ್ಲಿನ ಘಾಟ್ಕೋಪರ್ ಪ್ರದೇಶದ ಪೆಟ್ರೋಲ್ ಪಂಪ್ ಬಳಿ ಅಕ್ರಮವಾಗಿ ಅಳವಡಿಸಿದ್ದ ದೈತ್ಯಾಕಾರದ ಜಾಹೀರಾತು ಫಲಕ ಕುಸಿದು 17 ಜನರು ಸಾವಿಗೀಡಾಗಿದ್ದರು ಮತ್ತು 80ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು.

ತನಿಖೆ ವೇಳೆ ಹೋರ್ಡಿಂಗ್ ಅಳವಡಿಸಿದ್ದ M/s Ego Media Pvt.Ltd ಬಂಧಿತ ಅರ್ಷದ್ ಖಾನ್ ಜತೆ ನಂಟು ಹೊಂದಿರುವ ಕೆಲವರ ಬ್ಯಾಂಕ್ ಖಾತೆಗೆ 82 ಲಕ್ಷ ರೂ.ಗಳನ್ನು ವರ್ಗಾವಣೆ ಮಾಡಿರುವುದು ಬೆಳಕಿಗೆ ಬಂದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅರ್ಷದ್ ಖಾನ್ ಸರ್ಕಾರಿ ರೈಲ್ವೆ ಮಾಜಿ ಪೊಲೀಸ್ (ಜಿಆರ್‌ಪಿ) ಕಮಿಷನರ್ ಕ್ವೈಸರ್ ಖಾಲಿದ್ ಅವರ ಪತ್ನಿಯ ವ್ಯವಹಾರ ಸಹಚರರಾಗಿದ್ದರು. ಘಟನೆ ಸಂಭವಿಸಿದ ಬಳಿಕ ತಮ್ಮ ಹೇಳಿಕೆಯನ್ನು ದಾಖಲಿಸಿದ ನಂತರ ಖಾನ್ ಪ್ರಕರಣದ ತನಿಖೆ ನಡೆಸುತ್ತಿರುವ ಮುಂಬೈ ಪೊಲೀಸ್ ವಿಶೇಷ ತನಿಖಾ ತಂಡ (ಎಸ್‌ಐಟಿ)ದ ಮುಂದೆ ಹಾಜರಾಗದೆ, ತಲೆಮರೆಸಿಕೊಂಡಿದ್ದರು. ಕಳೆದ ಕೆಲವು ತಿಂಗಳುಗಳಿಂದ ಪೊಲೀಸರು ಖಾನ್‌ಗಾಗಿ ಹುಡುಕಾಟ ನಡೆಸುತ್ತಿದ್ದರು. ಆದರೆ, ಅವರು ತಮ್ಮ ಸ್ಥಳವನ್ನು ಬದಲಾಯಿಸುತ್ತಲೇ ಇದ್ದರು. ಅಂತಿಮವಾಗಿ ಖಾನ್ ಅವರನ್ನು ಭಾನುವಾರ ಲಖನೌನಲ್ಲಿ ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸಾಹಿತ್ಯ ಭವನದಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ



ರೋಟರಿ ಮೈಸೂರು ಅಂಬಾರಿ ವತಿಯಿಂದ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ರೊ.ಕೇಶವ ಪ್ರಸಾದ್, ರೊ.ರಾಜಶೇಖರ ಮೂರ್ತಿ ಇನ್ನಿತರರಿದ್ದಾರೆ.

ಮೈಸೂರು,ಡಿ.31–ರೋಟರಿ ಮೈಸೂರು ಅಂಬಾರಿ ವತಿಯಿಂದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ವಿಜಯನಗರದ ಒಂದನೇ ಹಂತದಲ್ಲಿ ಕನ್ನಡ ಸಾಹಿತ್ಯ ಭವನದಲ್ಲಿ ಆಚರಿಸಲಾಯಿತು.

ಕನ್ನಡ ಸಾಹಿತ್ಯ ಪರಿಷತ್ ಮೈಸೂರು ನಗರ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ರೋಟರಿ ಅಸಿಸ್ಟೆಂಟ್ ಗೌರ್ನರ್ ರೋ ಕೇಶವ ಪ್ರಸಾದ್ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ವಿಜೇತರಾದ ಮಡ್ಡಿಕೆರೆ ಗೋಪಾಲ್ ಅವರನ್ನು ಅಭಿನಂದಿಸಿದರು. ಮಾಜಿ ಅಸಿಸ್ಟೆಂಟ್ ಗವರ್ನರ್‌ಗಳಾದ ರೋ ರಾಜಶೇಖರ್ ಮೂರ್ತಿ, ರೋ ಯಶಸ್ವಿನಿ ಸೋಮಶೇಖರ್, ರೋಟರಿ ಮೈಸೂರು ಅಂಬಾರಿ ಅಧ್ಯಕ್ಷ ರೋ ಯದುಕೃಷ್ಣ, ಉಪಾಧ್ಯಕ್ಷರಾದ ರೋ ಜಗದೀಶ್, ರೋ ಕಿರಣ್‌ಕುಮಾರ್, ಕಾರ್ಯದರ್ಶಿ ಹರೀಶ್, ಮಾಜಿ ಅಧ್ಯಕ್ಷರಾದ ಜಗದೀಶ್, ಭರತ್, ನಿರ್ದೇಶಕರಾದ ಚಂದ್ರಹಾಸ್, ಮಂಜುನಾಥ್, ರೋ ಲೋಕೇಶ್, ರೋ ಮನು ಉಪಸ್ಥಿತರಿದ್ದರು. ಇದೇ ವೇಳೆ ಕರಾಟೆಯಲ್ಲಿ ಬ್ಲಾಕ್ ಬೆಲ್ಟ್ ಪಡೆದ ಶ್ರೀತೇಜ್ ಅವರನ್ನು ಸನ್ಮಾನಿಸಲಾಯಿತು.

ಪರಿಸರ ಕುರಿತು ಚಿತ್ರಕಲಾ ಸ್ಪರ್ಧೆ



ಅಸೋಸಿಯೇಷನ್ ಆಫ್ ಅಲೈನ್ಸ್ ಕ್ಲಬ್ ಇಂಟರ್‌ನ್ಯಾಷನಲ್, ಗುಡ್‌ವಿಶ್ ಫೌಂಡೇಶನ್ ಸಂಯುಕ್ತಾಶ್ರಯದಲ್ಲಿ ಕುವೆಂಪು ಅವರ ಜನ್ಮದಿನದ ಸ್ಮರಣೆ ಪ್ರಯುಕ್ತ ಬೋಗಾದಿ ಸರ್ಕಾರಿ ಪ್ರೌಢಶಾಲೆಯಲ್ಲಿ ಮಕ್ಕಳಲ್ಲಿ ಪರಿಸರ ಅರಿವು ಮತ್ತು ಸಂರಕ್ಷಣೆಯ ಕುರಿತು ಚಿತ್ರಕಲಾ ಸ್ಪರ್ಧೆ ನಡೆಯಿತು. ಈ ವೇಳೆ ಮುಖ್ಯ ಶಿಕ್ಷಕ ಲಿಂಗರಾಜು, ಅಲೈ ಸಿರಿಬಾಲು, ಗುಡ್ ವಿಶ್ ಸಂಸ್ಥೆಯ ಸಂಸ್ಥಾಪಕ ಪದ್ಮನಾಭ, ಅಧ್ಯಕ್ಷರಾದ ರೇಖಾ ಪದ್ಮನಾಭ, ಶಾಲಾ ಸಿಬ್ಬಂದಿ, ಸ್ವಯಂಸೇವಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಪ್ರತಿಭಾನ್ವಿತ ಕಲಾವಿದರಿಗೆ ಸೂಕ್ತ ವೇದಿಕೆ ಅವಶ್ಯಕತೆ ಇದೆ

ಮೈಸೂರು ಅಂತರಾಷ್ಟ್ರೀಯ ಫಿಲ್ಮ್ ಫೆಸ್ಟಿವಲ್‌ನ ಸಿನಿ ಸಂತೆ ಸಮಾರೋಪದಲ್ಲಿ ನಟ ಡಾಲಿ ಧನಂಜಯ ಅಭಿಮತ



ಮೈಸೂರಿನ ಜೆಕೆ ಮೈದಾನದಲ್ಲಿ ಮೇಕ್ ಸೊಸೈಟಿ ಸ್ಮೈಲ್ ಫೌಂಡೇಶನ್ ವತಿಯಿಂದ 4ನೇ ವರ್ಷದ ಮೈಸೂರು ಅಂತರಾಷ್ಟ್ರೀಯ ಫಿಲ್ಮ್ ಫೆಸ್ಟಿವಲ್ ಸಿನಿ ಸಂತೆ ಸಮಾರೋಪದಲ್ಲಿ ನಟ ಡಾಲಿ ಧನಂಜಯ ಅವರನ್ನು ಅಭಿನಂದಿಸಲಾಯಿತು.

ಮೈಸೂರು, ಡಿ. 31–ಮೈಸೂರು ಜೆಕೆ ಮೈದಾನದಲ್ಲಿ ಮೇಕ್ ಸೊಸೈಟಿ ಸ್ಮೈಲ್ ಫೌಂಡೇಶನ್ ವತಿಯಿಂದ 4ನೇ ವರ್ಷದ ಮೈಸೂರು ಅಂತರಾಷ್ಟ್ರೀಯ ಫಿಲ್ಮ್ ಫೆಸ್ಟಿವಲ್ ಸಿನಿ ಸಂತೆ ಸಮಾರೋಪದಲ್ಲಿ ಅತ್ಯುತ್ತಮ 65ಕ್ಕೂ ಹೆಚ್ಚು ಕಿರುಚಿತ್ರ ಚಿತ್ರಗಳಿಗೆ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವನ್ನು ಜನಪ್ರಿಯ ನಟ ಡಾಲಿ ಧನಂಜಯ ಉದ್ಘಾಟಿಸಿದರು.

ನಂತರ ನಟ ಡಾಲಿ ಧನಂಜಯ ಮಾತನಾಡಿ, ಕನ್ನಡ ಚಿತ್ರರಂಗದಲ್ಲಿ ಸಾಕಷ್ಟು ಪ್ರತಿಭಾವಂತ ಕಲಾವಿದರಿದ್ದರು ಸೂಕ್ತ ವೇದಿಕೆ ಸಿಕ್ಕಿಲ್ಲ. ಹೊಸ ಪ್ರಯೋಗಗಳು, ನಿರ್ದೇಶನ, ಸಂಗೀತ ಸಾಹಿತ್ಯ ಇವೆಲ್ಲವುದಕ್ಕೂ ಮನ್ನಣೆ ನೀಡಲು ಸಿನಿ ಸಂತೆ ತರಹದ ವಸ್ತುಪ್ರದರ್ಶನ ಪ್ರಶಸ್ತಿ ಪ್ರಧಾನ ಆಯೋಜನೆ ಉತ್ತಮ ಬೆಳವಣಿಗೆ. ಕಲಾವಿದರಾಗಿ ನಾವು ಬೆಳೆಯುವ ಜೊತೆಯಲ್ಲೇ ಹೊಸ ಕಲಾವಿದರನ್ನು ಕರೆ ತಂದು ವೇದಿಕೆ ಕಲ್ಪಿಸಿ ಪರಿಚಯಿಸಿ ಪ್ರೋತ್ಸಾಹಿಸಬೇಕು ಎಂದರು.

ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್ ಮಾತನಾಡಿ, ಮೈಸೂರು ಕಲಾವಿದರ ತವರೂರು, ನಾಟಕ ನೃತ್ಯ ಗಾಯನ ರಂಗಭೂಮಿ ಸಿನಿಮಾ ಕ್ಷೇತ್ರದಲ್ಲಿ ಸಾವಿರಾರು ಕಲಾವಿದರು ಮೈಸೂರಿನ ಸಾಂಸ್ಕೃತಿಕ ಹಿರಿಮೆಯನ್ನು ಶ್ರೀಮಂತಗೊಳಿಸಿದ್ದಾರೆ. ದಸರಾ ವಸ್ತುಪ್ರದರ್ಶನ ಆವರಣದಲ್ಲಿ ಮುಂದಿನ ದಿನದಲ್ಲಿ ಬೇಸಿಗೆ ಶಿಬಿರ, ಕಲಾಸಕ್ತರಿಗಾಗಿ ತರಬೇತಿ ಶಿಬಿರವನ್ನು ಆಯೋಜಿಸಿ ಹೊಸ ಯುವ ಕಲಾವಿದರಿಗೆ ವೇದಿಕೆ ಕಲ್ಪಿಸಿಕೊಡುವ ಚಿಂತನೆಯಿದೆ ಎಂದರು.

ಮೈಸೂರು ಅಂತರರಾಷ್ಟ್ರೀಯ ಚಲನ ಚಿತ್ರ ಉತ್ಸವದ ಆಯೋಜಕರಾದ ರಂಜಿತ ಸುಬ್ರಹ್ಮಣ್ಯ, ಸಂಧ್ಯಾ ರಾಣಿ, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ರೇಖಾ ಶ್ರೀನಿವಾಸ್, ನಿರೂಪಕ ಅಜಯ್ ಶಾಸ್ತ್ರಿ, ಕೆ.ಆರ್. ಬ್ಯಾಂಕ್ ಅಧ್ಯಕ್ಷ ಬಸವರಾಜ್ ಬಸಪ್ಪ, ವಿಶೇಷ ಚೇತನ ಕ್ರೀಡಾಪಟು ಅಲೋಕ್‌ಜೈನ್, ವನಮಾಲ, ಎಂ.ಎನ್.ಚೇತನ್ ಗೌಡ, ಮೋಹನ್, ಶ್ರೀನಾಥ್ ಇನ್ನಿತರರು ಹಾಜರಿದ್ದರು

ಡಾ.ಮನಮೋಹನ್ ಸಿಂಗ್‌ರಿಗೆ ಶ್ರದ್ಧಾಂಜಲಿ



ಮಾಜಿ ಪ್ರಧಾನಿ ಮನಮೋಹನ್‌ಸಿಂಗ್ ಅವರಿಗೆ ಪಡುವಾರಹಳ್ಳಿಯಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ಅಧ್ಯಕ್ಷೆ ಪಿ.ರಾಜೇಶ್ವರಿ, ಮಾಜಿ ಅಧ್ಯಕ್ಷ ಕೆ.ಉಮಾಶಂಕರ್, ನಿರ್ದೇಶಕರಾದ ಪಡುವಾರಹಳ್ಳಿ ಎಂ.ರಾಮಕೃಷ್ಣ, ಹರೀಶ್‌ಕುಮಾರ್, ಪಾಲಿಕೆ ಮಾಜಿ ಸದಸ್ಯ ಚಿಕ್ಕವೆಂಕಟು, ಕುಮಾರ್, ರಾಮಚಂದ್ರ, ಕೃಷ್ಣ, ನಾಗರಾಜ್, ಗಂಗಾಧರ್, ಗಿರೀಶ್, ವೆಂಕಟೇಶ ಇತರರಿದ್ದರು.

ದೇಶ - ವಿದೇಶ

ಅಮೆರಿಕ ಏರ್ಪೋರ್ಟ್‌ನಲ್ಲಿ ಕೂದಲೆಳೆ ಅಂತರದಲ್ಲಿ ತಪ್ಪಿದ ವಿಮಾನ ದುರಂತ



ವಾಷಿಂಗ್ಟನ್: ಲಾಸ್ ಏಂಜಲೀಸ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಿಮಾನಗಳ ಭೀಕರ ಅಪಘಾತವೊಂದು ಕೂದಲೆಳೆ ಅಂತರದಲ್ಲಿ ತಪ್ಪಿದೆ. ಡೆಲ್ಟಾ ಏರ್‌ಲೈನ್ಸ್ ಸೇರಿದ ವಿಮಾನವು ಗೊನ್ಜಾಗಾ ವಿಶ್ವವಿದ್ಯಾಲಯದ ಬ್ಯಾಸ್ಕೆಟ್‌ಬಾಲ್ ತಂಡವನ್ನು ಹೊತ್ತೊಯ್ಯುತ್ತಿದ್ದ ವಿಮಾನಕ್ಕೆ ಡಿಕ್ಕಿ ಹೊಡೆಯುವ ಸಾಧ್ಯತೆ ಇತ್ತು. ಆದರೆ ಪೈಲಟ್‌ಗಳು ಸಮಯ ಪ್ರಜ್ಞೆ ಮೆರೆದು ತುರ್ತು ಬ್ರೇಕ್ ಅಳವಡಿಸಿ ಸಂಭವಿಸಬಹುದಾಗಿದ್ದ ದೊಡ್ಡ ದುರಂತ ತಪ್ಪಿಸಿದ್ದಾರೆ. ಸ್ಥಳೀಯ ಸಮಯ ಸಂಜೆ 4:30ರ ಸುಮಾರಿಗೆ, ಗೊನ್ಜಾಗಾದ ಚಾರ್ಟರ್ಡ್ ಕೀ ಲೈಮ್ ಏರ್ ಫ್ಲೈಟ್ 563 ರನ್‌ವೇಯಲ್ಲಿ ಸಾಗುತ್ತಿದ್ದಾಗಲೇ ಅಟ್ಲಾಂಟಾಗೆ ಹೊರಟಿದ್ದ ಏರ್‌ಬಸ್ ೦321 ವಿಮಾನ ಡೆಲ್ಟಾ ಫ್ಲೈಟ್ 471, ಟೇಕ್‌ಆಫ್ ಕಡೆಗೆ ವೇಗವಾಗಿ ಚಲಿಸಿದೆ. ಇದರಿಂದ ವಿಮಾನಗಳಲ್ಲಿದ್ದ ಪ್ರಯಾಣಿಕರು ಕೆಲಕಾಲ ಆತಂಕ ಮತ್ತು ಜೀವ ಭಯಕ್ಕೆ ತುತ್ತಾದರು. ಎರಡೂ ವಿಮಾನಗಳು ಸಮೀಪಿಸುತ್ತಿರುವಾಗಲೇ ಪ್ರಯಾಣಿಕರು.. Stop.. Stop.. Stop ಎಂದು ಕೂಗಲಾರಂಭಿಸಿದ್ದು, ಪೈಲಟ್ ಕೂಡಲೇ ಫುಟ್ಬಾಲ್ ಆಟಗಾರರನ್ನು ಹೊತ್ತಿದ್ದ ಪುಟ್ಟ ಚಾರ್ಟೆಡ್ ವಿಮಾನ ತುರ್ತು ಬ್ರೇಕಿಂಗ್ ಅಳವಡಿಸಿದೆ. ಈ ವೇಳೆ ವಿಮಾನದ ವೇಗ ನಿಯಂತ್ರಣಕ್ಕೆ ಬಂದಿದೆ.


ಭಾರಿ ಪ್ರಮಾಣದ ನಕಲಿ ಔಷಧಿ ವಶ: ಕೋಲ್ಕತ್ತಾದಲ್ಲಿ ಆರೋಪಿ ಸೆರೆ



ನವದೆಹಲಿ: ಕೋಲ್ಕತ್ತಾದಲ್ಲಿ ದೊಡ್ಡ ಪ್ರಮಾಣದ ಕ್ಯಾನ್ಸರ್ ಹಾಗೂ ಮಧುಮೇಹ ನಿವಾರಕ ಔಷಧಿಗಳು ಮತ್ತು ನಕಲಿ ಎಂದು ಶಂಕಿಸಲಾದ ಇತರ ಔಷಧಿಗಳನ್ನು ವಶಪಡಿಸಿಕೊಳ್ಳಲಾಗಿದೆ. ಪೂರ್ವ ವಲಯದ ಸೆಂಟ್ರಲ್ ಡ್ರಗ್ಸ್ ಸ್ಟ್ಯಾಂಡರ್ಡ್ ಕಂಟ್ರೋಲ್ ಆರ್ಗನೈಸೇಶನ್ ಮತ್ತು ಪಶ್ಚಿಮ ಬಂಗಾಳದ ಡ್ರಗ್ಸ್ ಕಂಟ್ರೋಲ್ ಡೈರೆಕ್ಟರೇಟ್‌ನ ಜಂಟಿ ತಂಡ ಈ ಕಾರ್ಯಾಚರಣೆ ನಡೆಸಿದೆ. ಭಾರತದಾದ್ಯಂತ ವಿವಿಧ ಔಷಧೀಯ ಕಂಪನಿಗಳು ತಯಾರಿಸಿದ 111 'ಪ್ರಮಾಣಿತ ಗುಣಮಟ್ಟವಲ್ಲದ' ಔಷಧಿಗಳನ್ನು ಆರೋಗ್ಯ ಸಚಿವಾಲಯ ಪತ್ತೆ ಹಚ್ಚಿದೆ.

ಕೋಲ್ಕತ್ತಾದ 'ಮೆಸರ್ಸ್ ಕೇರ್ ಆಂಡ್ ಕ್ಯೂರ್ ಫಾರ್ ಯು' ಕಂಪನಿಯ ಸಗಟು ಶೇಖರಣಾ ಗೋದಾಮಿನ ಮೇಲೆ ದಾಳಿ ನಡೆಸಿ, ದೊಡ್ಡ ಪ್ರಮಾಣದ ಕ್ಯಾನ್ಸರ್ ವಿರೋಧಿ, ಮಧುಮೇಹ ವಿರೋಧಿ ಮತ್ತು ನಕಲಿ ಎಂದು ಶಂಕಿಸಲಾದ ಇತರ ಔಷಧಿಗಳನ್ನು ವಶಪಡಿಸಿಕೊಳ್ಳಲಾಗಿದೆ. ತನಿಖಾ ತಂಡವು ಹಲವಾರು ಖಾಲಿ ಪ್ಯಾಕಿಂಗ್ ವಸ್ತುಗಳನ್ನೂ ಪತ್ತೆ ಮಾಡಿದೆ. ವಶಪಡಿಸಿಕೊಂಡ ಉತ್ಪನ್ನಗಳ ಸತ್ಯಾಸತ್ಯತೆಯ ಬಗ್ಗೆ ಮತ್ತಷ್ಟು ಸಂಶಯವನ್ನು ಹುಟ್ಟು ಹಾಕಿದೆ ಎಂದು ಸಚಿವಾಲಯ ತಿಳಿಸಿದೆ.

ಕೇರಳದ ನರ್ಸ್‌ಗೆ ಮರಣದಂಡನೆ ಶಿಕ್ಷೆ; ಸಾಧ್ಯವಿರುವ ಎಲ್ಲ ನೆರವು: ಕೇಂದ್ರ



ನವದೆಹಲಿ: ಯೆಮೆನ್ ದೇಶದಲ್ಲಿ ಮರಣದಂಡನೆ ಶಿಕ್ಷೆಗೆ ಗುರಿಯಾಗಿರುವ ಭಾರತೀಯ ಮೂಲದ ನರ್ಸ್ ಪ್ರಕರಣದಲ್ಲಿ ಸಾಧ್ಯವಿರುವ ಎಲ್ಲ ರೀತಿಯ ನೆರವು ನೀಡುವುದಾಗಿ ವಿದೇಶಾಂಗ ವ್ಯವಹಾರಗಳ ಸಚಿವಾಲಯ (ಎಂಇಎ) ಮಂಗಳವಾರ ತಿಳಿಸಿದೆ. ಪ್ರಕರಣ ಸಂಬಂಧ ಪರ್ಯಾಯ ಆಯ್ಕೆ ಕುರಿತು ಪರಿಶೀಲಿಸಲಾಗುತ್ತಿದೆ ಎಂದು ಹೇಳಿದೆ.

ಯೆಮೆನ್ ಪ್ರಜೆಯನ್ನು ಹತ್ಯೆ ಮಾಡಿದ ಆರೋಪದಲ್ಲಿ ಕೇರಳ ಮೂಲದ ನರ್ಸ್ ನಿಮಿಷಾ ಪ್ರಿಯಾ, ಮರಣದಂಡನೆ ಶಿಕ್ಷೆಗೆ ಗುರಿಯಾಗಿದ್ದರು.

'ಯೆಮೆನ್‌ನಲ್ಲಿ ನಿಮಿಷಾ ಪ್ರಿಯಾ ಅವರ ಮೇಲೆ ಮರಣದಂಡನೆ ಶಿಕ್ಷೆ ವಿಧಿಸಲ್ಪಟ್ಟಿರುವ ಕುರಿತು ನಮ್ಮ ಅರಿವಿಗೆ ಬಂದಿದೆ. ಪ್ರಿಯಾಳ ಕುಟುಂಬ ಪರ್ಯಾಯ ಆಯ್ಕೆ ಕುರಿತು ಪರಿಶೀಲಿಸುತ್ತಿದೆ. ಈ ಸಂಬಂಧ ಸರ್ಕಾರವು ಸಾಧ್ಯವಿರುವ ಎಲ್ಲ ರೀತಿಯ ನೆರವನ್ನು ಮಾಡಲಿದೆ' ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ.

ಕಿಡಿಯನ್ನೂ ಲೆಕ್ಕಿಸದೇ 2 ಕಿ.ಮೀ ಬೈಕ್ ಎಳೆದೊಯ್ದ ಬೊಲೆರೊ ವಾಹನ



ಸಂಭಲ್: ಬೈಕ್‌ಗೆ ಡಿಕ್ಕಿ ಹೊಡೆದ ಬೊಲೆರೊ ವಾಹನವೊಂದು ಆ ಬೈಕ್ ಅನ್ನು ಎರಡು ಕಿಲೋ ಮೀಟರ್‌ವರೆಗೆ ಎಳೆದುಕೊಂಡು ಹೋಗಿರುವ ಘಟನೆ ಉತ್ತರಪ್ರದೇಶದ ಸಂಭಲ್‌ನಲ್ಲಿ ನಡೆದಿದೆ. ಬೈಕ್‌ನಿಂದ ಬೆಂಕಿ ಕಿಡಿ ಬರುತ್ತಿದ್ದರೂ ಅದನ್ನು ಲೆಕ್ಕಿಸದೇ, ರಭಸದಿಂದ ಸಾಗಿರುವ ಆಘಾತಕಾರಿ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಕೊಟ್ವಾಲಿ ಪ್ರದೇಶದಲ್ಲಿನ ಮೊರದಬಾದ್‌ನ ವಜಿದ್ಪುರಮ್ ಬಳಿ ಈ ಘಟನೆ ನಡೆದಿದೆ. ಮೊರ್ದಾಬಾದ್ ಜಿಲ್ಲೆಯ ಸುಖ್ವೀರ್ (50) ಮಾವನ ಮನೆಯಿಂದ ಸಂಭಲ್‌ನ ಹಯತ್‌ನಗರದಲ್ಲಿರುವ ತನ್ನ ಮನೆಗೆ ಮರಳುತ್ತಿದ್ದರು. ಈ ವೇಳೆ ಮೊರದಾಬಾದ್ ರಸ್ತೆಯಲ್ಲಿ ಎಸ್‌ಯುವಿ ವಾಹನ ಡಿಕ್ಕಿಯಾಗಿದೆ. ಗಾಯಗೊಂಡ ಸುಖ್ವೀರ್‌ರನ್ನು ತಕ್ಷಣಕ್ಕೆ ಆಸ್ಪತ್ರೆಗೆ ದಾಖಲಿಸಿದ್ದು, ಹೆಚ್ಚಿನ ಚಿಕಿತ್ಸೆಗೆ ಮೊರದಾಬಾದ್‌ಗೆ ಸ್ಥಳಾಂತರಿಸಲಾಗಿದೆ. ಗಾಯಗೊಂಡಿರುವ ಸುಖ್ವೀರ್ ಅವರಿಂದ ಪೊಲೀಸರು ದೂರು ದಾಖಲಿಸಿಕೊಂಡಿದ್ದಾರೆ. ಘಟನೆ ಕುರಿತು ಮಾತಾಡಿರುವ ಪೊಲೀಸ್ ಅಧಿಕಾರಿ ಅನುಜ್‌ಕುಮಾರ್, ಹೃದಯಹೀನ ಕೃತ್ಯ ಎಸಗಿರುವ ಚಾಲಕನ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಎಸ್‌ಯುವಿಯನ್ನು ಕೂಡ ವಶಕ್ಕೆ ಪಡೆಯಲಾಗಿದ್ದು, ತನಿಖೆ ಮುಂದುವರಿದಿದೆ ಎಂದರು.

ಮಹಿಳೆಯರಿಗೆ ಉದ್ಯೋಗ ನೀಡಿದರೆ ಕಠಿಣ ಕ್ರಮ: ತಾಲಿಬಾನ್ ಎಚ್ಚರಿಕೆ



ಕಾಬೂಲ್: ಅಫ್ಘಾನಿಸ್ತಾನದ ಮಹಿಳೆಯರಿಗೆ ಉದ್ಯೋಗ ನೀಡುವ ಎಲ್ಲ ರಾಷ್ಟ್ರೀಯ ಮತ್ತು ವಿದೇಶಿ ಸರ್ಕಾರೇತರ ಸಂಸ್ಥೆಗಳನ್ನು (ಎನ್‌ಜಿಒ) ಮುಚ್ಚುವುದಾಗಿ ತಾಲಿಬಾನ್ ಸರ್ಕಾರ ಎಚ್ಚರಿಕೆ ನೀಡಿದೆ.

ಸರ್ಕಾರದ ಆದೇಶವನ್ನು ಉಲ್ಲಂಘಿಸಿದರೆ ಎನ್‌ಜಿಒಗಳು ತಮ್ಮ ಪರವಾನಗಿಯನ್ನು ಕಳೆದುಕೊಳ್ಳಬೇಕಾಗುತ್ತದೆ ಎಂದು ಆರ್ಥಿಕ ಸಚಿವಾಲಯವು 'ಎಕ್ಸ್' ಮೂಲಕ ನೀಡಿರುವ ಪ್ರಕಟಣೆಯಲ್ಲಿ ತಿಳಿಸಿದೆ.

ರಾಷ್ಟ್ರೀಯ ಮತ್ತು ವಿದೇಶಿ ಎನ್‌ಜಿಒಗಳ ನೋಂದಣಿ ಮತ್ತು ಮೇಲ್ವಿಚಾರಣೆಯನ್ನು ನಡೆಸುವ ಜವಾಬ್ದಾರಿ ಸಚಿವಾಲಯದ್ದಾಗಿದೆ ಎಂದು ಅದು ತಿಳಿಸಿದೆ.

ತನ್ನ ನಿಯಂತ್ರಣದಲ್ಲಿ ಇಲ್ಲದ ಎಲ್ಲ ಸಂಸ್ಥೆಗಳಲ್ಲಿಯೂ ಮಹಿಳೆಯರು ಕಾರ್ಯನಿರ್ವಹಿಸುವುದನ್ನು ತಡೆಯಲು ತಾಲಿಬಾನ್ ಸರ್ಕಾರ ಮುಂದಾಗಿದೆ. ಹಿಜಾಬ್ ಸರಿಯಾಗಿ ಧರಿಸದ ಕಾರಣ ಮಹಿಳೆಯರನ್ನು ಕೆಲಸದಿಂದ ವಜಾ ಗೊಳಿಸುವಂತೆ ತಾಲಿಬಾನ್ ಸರ್ಕಾರ ಎಲ್ಲ ಎನ್‌ಜಿಒಗಳಿಗೆ ಎರಡು ವರ್ಷಗಳ ಹಿಂದೆ ಸೂಚನೆ ನೀಡಿತ್ತು. ಈ ಹೊಸ ಸೂಚನೆ ಮೂಲಕ ಎನ್‌ಜಿಒಗಳನ್ನು ನಿಯಂತ್ರಿಸಲು ತಾಲಿಬಾನ್ ಆಡಳಿತ ಮುಂದಾಗಿದೆ.

ಪುರೋಹಿತ ಕಾರ್ಮಿಕರ ಫೆಡರೇಷನ್ ಕೊಡಗು ಜಿಲ್ಲಾ ಶಾಖೆ ಉದ್ಘಾಟನೆ



ಅಖಿಲ ಭಾರತ ಪುರೋಹಿತ ಕಾರ್ಮಿಕರ ಫೆಡರೇಷನ್ ಕೊಡಗು ಜಿಲ್ಲಾ ಶಾಖೆ ಸದಸ್ಯರ ನೋಂದಣಿಗೆ ಚಾಲನೆ ನೀಡಲಾಯಿತು.

ಮಡಿಕೇರಿ, ಡಿ.31–ಎಲ್ಲಾ ಸಮುದಾಯಗಳ ಕಷ್ಟ ಸುಖಗಳಿಗೆ ಸ್ಪಂದಿಸುವ ಪುರೋಹಿತರು ಅತ್ಯಂತ ಸಂಕಷ್ಟದಲ್ಲಿ ತಮ್ಮ ಬದುಕನ್ನು ಸಾಗಿಸುತ್ತಿದ್ದಾರೆ ಎಂದು ಅಖಿಲ ಭಾರತ ಪುರೋಹಿತ ಕಾರ್ಮಿಕರ ಫೆಡರೇಷನ್ ರಾಜ್ಯಾಧ್ಯಕ್ಷ ಡಾ.ಜೆ. ಶ್ರೀನಿವಾಸಮೂರ್ತಿ ತಿಳಿಸಿದರು.

ಸೋಮವಾರಪೇಟೆಯ ಸೋಮೇಶ್ವರ ದೇವಾಲಯ ಸಭಾಂಗಣದಲ್ಲಿ ಅಖಿಲ ಭಾರತ ಪುರೋಹಿತ ಕಾರ್ಮಿಕರ ಫೆಡರೇಷನ್‌ನ ಕೊಡಗು ಜಿಲ್ಲಾ ಶಾಖೆ ಉದ್ಘಾಟಿಸಿ ಮಾತನಾಡಿದ ಅವರು, ವಿವಿಧ ದೇವಾಲಯಗಳಲ್ಲಿ ದುಡಿಯುತ್ತಿರುವ ಪುರೋಹಿತರಿಗೆ ಉದ್ಯೋಗ ಭದ್ರತೆಯಾಗಲಿ, ಆರೋಗ್ಯ ವಿಮಾ ಸೌಲಭ್ಯವಾಗಲಿ, ಭವಿಷ್ಯ ನಿಧಿ ಯೋಜನೆಯಾಗಲಿ ಯಾವುದೂ ಇಲ್ಲದೆ ಅಮಾನವೀಯವಾಗಿ ದುಡಿಸಿಕೊಳ್ಳಲಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ಎಲ್ಲಾ ಅಸಹಾಯಕ ಪರಿಸ್ಥಿತಿಯಿಂದ ಪುರೋಹಿತ ಕಾರ್ಮಿಕರನ್ನು ವಿಮುಕ್ತಿಗೊಳಿಸುವ ಉದ್ದೇಶದಿಂದ ಸಂಘಟನೆ ಆರಂಭಕ್ಕೆ ನಾಂದಿ ಹಾಡಲಾಗಿದೆ. ಆರಂಭಿಕವಾಗಿ 35ಕ್ಕೂ ಅಧಿಕ ಅರ್ಚಕ ವರ್ಗದವರು ಸದಸ್ಯರಾಗಿ ನೋಂದಣಿ ಮಾಡಿಕೊಂಡಿದ್ದಾರೆ. ಇವರುಗಳಲ್ಲೇ ಪದಾಧಿಕಾರಿಗಳನ್ನು ಆಯ್ಕೆ ಮಾಡಿ ಜಿಲ್ಲಾ ಘಟಕವನ್ನು ಅಸ್ತಿತ್ವಕ್ಕೆ ತರಲಾಗಿದೆ. ಮುಂದಿನ ದಿನಗಳಲ್ಲಿ ತಾಲೂಕು ಮಟ್ಟದ ಸಮಿತಿ ಅಸ್ತಿತ್ವಕ್ಕೆ ತರಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಅಧ್ಯಕ್ಷ ಡಾ.ಎಂ.ಬಿ.ಅನಂತಮೂರ್ತಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಪ್ರಹ್ಲಾದ, ಕೊಡಗು ಜಿಲ್ಲಾಧ್ಯಕ್ಷ ಪ್ರಸನ್ನ ಭಟ್ ಉಪಸ್ಥಿತರಿದ್ದರು.

ನೂತನ ಸಮಿತಿಗೆ ಆಯ್ಕೆ: ಜಿಲ್ಲಾ ಸಮಿತಿ ಅಧ್ಯಕ್ಷರಾಗಿ ಪ್ರಸನ್ನ ಭಟ್, ಉಪಾಧ್ಯಕ್ಷರಾಗಿ ಶನಿವಾರಸಂತೆ ಸುದರ್ಶನ, ಖಜಾಂಚಿಯಾಗಿ ಎಸಳೂರು ಉದಯಕುಮಾರ್, ಕಾರ್ಯದರ್ಶಿಗಳಾಗಿ ರವಿಕುಮಾರ್, ಪ್ರಸಾದ್ ಹಾಗೂ ಜಯಂತ್ ಆಯ್ಕೆ ಮಾಡಲಾಯಿತು.

ಇಂದು ಯೋಧ ದಿವಿನ್ ಅಂತ್ಯಕ್ರಿಯೆ

ಬೆಂಗಳೂರಿನ ವಿಮಾನ ನಿಲ್ದಾಣದಲ್ಲಿ ಪಾರ್ಥಿವ ಶರೀರ ಸ್ವೀಕರಿಸಿದ ಸಂಸದ ಯದುವೀರ್

ಮಡಿಕೇರಿ, ಡಿ.31–ಜಮ್ಮು ಕಾಶ್ಮೀರದ ಪೂಂಚ್‌ನಲ್ಲಿ ಸೇನಾ ವಾಹನ ಕಣಿವೆಗೆ ಉರುಳಿ ಬಿದ್ದು ತೀವ್ರವಾಗಿ ಗಾಯಗೊಂಡು ಆಸ್ಪತ್ರೆಯಲ್ಲಿ ನಿಧನರಾದ ಕೊಡಗಿನ ಯೋಧ ಪಳಂಗೋಟು ಪಿ.ದಿವಿನ್(28) ಅವರ ಅಂತ್ಯಕ್ರಿಯೆ ಬುಧವಾರ (ಜ.1) ನಡೆಯಲಿದೆ.

ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ 1ಗೆ ಮಂಗಳವಾರ ಸಂಜೆ ಆಗಮಿಸಿದ ಯೋಧ ಪಿ.ದಿವಿನ್ ಪಾರ್ಥಿವ ಶರೀರವನ್ನು ಕೊಡಗು–ಮೈಸೂರು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಕ್ಷೇತ್ರದ ಪರವಾಗಿ ಸ್ವೀಕರಿಸಿದರು. ಬಳಿಕ 'ರೀತ್' ಅರ್ಪಿಸಿದ ಸಂಸದರು, ಹುತಾತ್ಮ ಯೋಧ ದಿವಿನ್ ಅವರಿಗೆ ಗೌರವ ನಮನ ಸಲ್ಲಿಸಿದರು.



ಬೆಂಗಳೂರಿನ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಯೋಧ ಪಿ.ದಿವಿನ್ ಪಾರ್ಥಿವ ಶರೀರವನ್ನು ಸಂಸದ ಯದುವೀರ್ ಪುಷ್ಪ ನಮನ ಸಲ್ಲಿಸುವ ಮೂಲಕ ಸ್ವೀಕರಿಸಿದರು.

ಇದೇ ವೇಳೆ ಭಾರತೀಯ ಸೇನೆಯ ದಕ್ಷಿಣ ಕಮಾಂಡ್ ಅಧಿಕಾರಿಗಳು ಮತ್ತು ಸಿಬ್ಬಂದಿ ಪರವಾಗಿ ಪುಷ್ಪ ನಮನ ಸಲ್ಲಿಸಲಾಯಿತು. ಬೆಂಗಳೂರು ಸೇನಾ ವಲಯದ ಅಧಿಕಾರಿಗಳು ಮತ್ತು ಸಿಬ್ಬಂದಿ ಹುತಾತ್ಮ ಯೋಧ ದಿವಿನ್ ಅವರಿಗೆ ರಾಷ್ಟ್ರೀಯ ಗೌರವ ಮೂಲಕ ಅಂತಿಮ ವಿದಾಯ ಸಲ್ಲಿಸಿದರು. ಏರ್‌ಪೋರ್ಟ್ ಸಿಬ್ಬಂದಿ ಮತ್ತು ಸಾರ್ವಜನಿಕರು ಕೂಡ ಅಗಲಿದ ವೀರ ಯೋಧನಿಗೆ ಗೌರವ ಸಮರ್ಪಿಸಿದರು.

ಸೇನಾ ವಾಹನ ಬುಧವಾರ ಬೆಳಗ್ಗೆ ದಿವಿನ್ ಅವರ ಹುಟ್ಟೂರು ಸೋಮವಾರಪೇಟೆ ತಾಲೂಕಿನ ಆಲೂರು ಸಿದ್ದಾಪುರ ತಲುಪಲಿದೆ. ನಂತರ ಪಾರ್ಥಿವ ಶರೀರವನ್ನು ಆಲೂರು ಸಿದ್ದಾಪುರದ ಸರ್ಕಾರಿ ಶಾಲಾ ಆವರಣದಲ್ಲಿ ಕುಟುಂಬಸ್ಥರು ಮತ್ತು ಸಾರ್ವಜನಿಕರ ಅಂತಿಮ ದರ್ಶನಕ್ಕೆ ಇಡಲಾಗುವುದು.

ಕುಶಾಲನಗರ ತಾಲೂಕು ಆಡಳಿತ ವ್ಯವಸ್ಥೆ

ಪಾರ್ಥಿವ ಶರೀರದ ಸೇನಾ ವಾಹನ ಮಂಗಳವಾರ ಮಧ್ಯರಾತ್ರಿ ಕುಶಾಲನಗರಕ್ಕೆ ಆಗಮಿಸಲಿದೆ. ಶಾಸಕ ಡಾ.ಮಂತರ್‌ಗೌಡ ಕೋರಿಕೆ ಮೇರೆಗೆ ಕುಶಾಲನಗರದಲ್ಲೂ ಯೋಧ ದಿವಿನ್ ಅವರ ಅಂತಿಮ ದರ್ಶನಕ್ಕೆ ತಾಲೂಕು ಆಡಳಿತ ವ್ಯವಸ್ಥೆ ಮಾಡಿದೆ. ಕುಶಾಲನಗರ ಸಮುದಾಯ ಆರೋಗ್ಯ ಕೇಂದ್ರದಲ್ಲಿರಿಸಿ ಬುಧವಾರ ಬೆಳಗ್ಗೆ 9 ಗಂಟೆವರೆಗೆ ವೇಳೆ ಇಲ್ಲಿನ ಸರ್ಕಾರಿ ಶಾಲೆ ಮೈದಾನದಲ್ಲಿ ಸಾರ್ವಜನಿಕರು ಮತ್ತು ವಿವಿಧ ಸಂಘ–ಸಂಸ್ಥೆಗಳ ಅಂತಿಮ ದರ್ಶನಕ್ಕೆ ಅವಕಾಶ ನೀಡಲಾಗಿದೆ. ಬಳಿಕ ಯೋಧ ದಿವಿನ್ ಅವರ ಹುಟ್ಟೂರು ಆಲೂರು ಸಿದ್ದಾಪುರ ತಲುಪಲಿದೆ.

ಬಳಿಕ ಅವರ ಜಮೀನಿನಲ್ಲಿ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ ನೆರವೇರಲಿದೆ.

ವಿರಾಜಪೇಟೆಯಲ್ಲಿ ರಸ್ತೆ ತಡೆದು ಪ್ರತಿಭಟನೆ...



ಕಟ್ಟೆಮಾಡು ಶ್ರೀ ಮಹಾಮೃತ್ಯುಂಜಯ ದೇವಾಲಯ ವಾರ್ಷಿಕೋತ್ಸವ ಸಂದರ್ಭ ವಸ್ತ್ರಸಂಹಿತೆಗೆ ಸಂಬಂಧಿಸಿದಂತೆ ಉಂಟಾದ ವಿವಾದ ಖಂಡಿಸಿ ವಿರಾಜಪೇಟೆ ಕೊಡವ ಸಮಾಜದ ವತಿಯಿಂದ ಪಟ್ಟಣದ ಗಡಿಯಾರ ಕಂಬದ ಬಳಿ ರಸ್ತೆ ತಡೆದು ಪ್ರತಿಭಟನೆ ನಡೆಸಲಾಯಿತು. ಸಮಾಜದ ಅಧ್ಯಕ್ಷ ಕುಂಬೇರ ಮನು ಕುಮಾರ್, ಹಿರಿಯ ವಕೀಲ ಮಾದಂಡ ಪೂವಯ್ಯ, ಸಮಾಜದ ಉಪಾಧ್ಯಕ್ಷ ಕುಯಿಮಂಡ ಕಿರಣ್, ಮಹಿಳಾ ಅಧ್ಯಕ್ಷೆ ಕಾಂತಿ ಸತೀಶ್, ಮಾಜಿ ಅಧ್ಯಕ್ಷ ವಾಂಚೀರ ನಾಣಯ್ಯ ಜಗದೀಶ್, ಚೇನಂಡ ಗಿರೀಶ್, ಸುರೇಶ್ ನಾಣಯ್ಯ, ಮೂಕೊಂಡ ಶಶಿ ಸುಬ್ರಮಣಿ, ಕುಪ್ಪಂಡ ರಾಜೀವ್ ಕಾರ್ಯಪ್ಪ, ಅಂಜಪರುವಂಡ ಅನಿಲ್, ಪಟ್ರಪಂಡ ರಘುನಾಣಯ್ಯ, ಚಿಲ್ಲವಂಡ ಕಾವೇರಪ್ಪ, ಪಟ್ಟಡ ಮನು ರಾಮಚಂದ್ರ, ಮಾಜಿ ಸೈನಿಕರ ಸಂಘದ ಅಧ್ಯಕ್ಷ ಚಪ್ಪಂಡ ಹರೀಶ್, ಕೂತಂಡ ಸಚಿನ್, ಕುಸುಮ ಸೋಮಣ್ಣ ಇದ್ದರು.

ಹೊಸ ವರ್ಷಾಚರಣೆ: ಕೊಡಗಿಗೆ ಹೆಚ್ಚಿನ ಪ್ರವಾಸಿಗರು

ಮಡಿಕೇರಿ, ಡಿ.31– ಹೊಸ ವರ್ಷಾಚರಣೆ ಸಂಭ್ರಮಿಸಲು ಕೊಡಗು ಜಿಲ್ಲೆಗೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸಿದ್ದು, ಜಿಲ್ಲೆಯ ಬಹುತೇಕ ಎಸ್ಟೇಟ್, ಹೋಂ ಸ್ಟೇ, ರೆಸಾರ್ಟ್, ಲಾಡ್ಜ್‌ಗಳು ಭರ್ತಿಯಾಗಿವೆ.

ಅಬ್ಬಿಫಾಲ್ಸ್, ಮಾಂದಲ್‌ಪಟ್ಟಿ, ದುಬಾರೆ, ನಿಸರ್ಗಧಾಮದಲ್ಲೂ ಪ್ರವಾಸಿಗರ ಸಂಖ್ಯೆ ಈ ಬಾರಿ ಹೆಚ್ಚಿದೆ. ಇನ್ನು ಜಿಲ್ಲಾ ಕೇಂದ್ರ ಮಡಿಕೇರಿ ಜನರಲ್ ತಿಮ್ಮಯ್ಯ ವೃತ್ತದಿಂದ ರಾಜಾಸೀಟು ರಸ್ತೆಯಲ್ಲಿ ಹೆಚ್ಚಿನ ವಾಹನ ಸಂಚಾರ ಕಂಡು ಬಂತು.




ಮಡಿಕೇರಿ ರಾಜಾಸೀಟ್‌ನಲ್ಲಿ ಪ್ರವಾಸಿಗರು ವರ್ಷಾಂತ್ಯದ ಸೂರ್ಯಾಸ್ತಮಾನಕ್ಕಾಗಿ ಕಾದು ಕುಳಿತಿದ್ದರು.

ಮಡಿಕೇರಿ ಪ್ರಸಿದ್ಧ ಪ್ರವಾಸಿ ತಾಣ ರಾಜಾಸೀಟ್‌ನಲ್ಲಿ ಪ್ರತಿವರ್ಷದಂತೆ ಈ ಬಾರಿಯೂ ಪ್ರವಾಸಿಗರು ವರ್ಷಾಂತ್ಯದ ಸೂರ್ಯಾಸ್ತಮಾನಕ್ಕಾಗಿ ಕಾದು ಕುಳಿತಿದ್ದರು. ಕೆಂಬಣ್ಣ ಚೆಲ್ಲುತ್ತಾ ಬೆಟ್ಟ ಶ್ರೇಣಿಗಳ ನಡುವೆ ನೇಸರ ಮರೆಯಾಗುವ ಸಂದರ್ಭ ಪ್ರವಾಸಿಗರು ಏಕಕಾಲದಲ್ಲಿ ಇಂದಿನ ವರ್ಷಕ್ಕೆ ಗುಡ್ ಬೈ ಹೇಳುವ ಮೂಲಕ ವರ್ಷಾಂತ್ಯದ ನೇಸರನನ್ನು ಬೀಳ್ಕೊಟ್ಟರು. ಅಲ್ಲದೇ, ಪ್ರಕೃತಿ ಮಡಿಲಲ್ಲಿ ಜಾರುತ್ತಿದ್ದ ಸೂರ್ಯನ ವಿಹಂಗಮ ದೃಶ್ಯವನ್ನು ಪ್ರವಾಸಿಗರು ಕಣ್ತುಂಬಿಕೊಂಡರು. ಮೊಬೈಲ್, ಕ್ಯಾಮರಾಗಳಲ್ಲಿ ಫೋಟೋ ತೆಗೆದುಕೊಂಡು ಸಂಭ್ರಮಿಸಿದರು.

ಪೂವಮ್ಮ ನಿಧನ

ನಾಪೋಕ್ಲು, ಡಿ.31–ಯವಕಪಾಡಿ ಗ್ರಾಮದ ಮುಣ್ಣಂಡ್ರ ದಿವಂಗತ ರಾಮಯ್ಯ ಪತ್ನಿ ಪೂವಮ್ಮ (89) ಮಂಗಳವಾರ ನಿಧನರಾದರು. ಮೃತರು ನಾಲ್ವರು ಪುತ್ರರು, ಮೂವರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಸ್ವಗೃಹ ಆವರಣದಲ್ಲಿ ಅಂತ್ಯಕ್ರಿಯೆ ನಡೆಯಿತು.



ಪಿ.ಕೆ.ಮೊಹಮ್ಮದ್



ನಾಪೋಕ್ಲು, ಡಿ.31– ಇಲ್ಲಿನ ಇಂದಿರಾ ನಗರದ ನಿವಾಸಿ ಪಿ.ಕೆ. ಮೊಹಮ್ಮದ್ (49) ಹೃದಯಾಘಾತದಿಂದ ಸೋಮವಾರ ನಿಧನರಾದರು. ಮೃತರು ಪತ್ನಿ, ಪುತ್ರ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸ್ಥಳೀಯ ಮೊಹಿಯುದ್ದೀನ್ ಜುಮಾ ಮಸೀದಿಯ ಖಬರ್‌ಸ್ಥಾನದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

ರವಿ ಉತ್ತಪ್ಪ

ನಾಪೋಕ್ಲು, ಡಿ.31– ಸಮೀಪದ ಬಲ್ಲಮಾವಟಿ ಗ್ರಾಮದ ನಿವಾಸಿ ಮಲೆಯರ ರವಿ ಉತ್ತಪ್ಪ (71) ಸೋಮವಾರ ನಿಧನರಾದರು. ಮೃತರು ಪತ್ನಿ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮಂಗಳವಾರ ಮೃತರ ಸ್ವಗೃಹ ಆವರಣದಲ್ಲಿ ಅಂತ್ಯಕ್ರಿಯೆ ನಡೆಸಲಾಯಿತು.



ಅಧ್ಯಕ್ಷರಾಗಿ ಅರುಣ್ ಭೀಮಯ್ಯ ಆಯ್ಕೆ



ಪೊನ್ನಂಪೇಟೆ ತಾಲೂಕು ಕೃಷಿಕ ಸಮಾಜಕ್ಕೆ ಆಯ್ಕೆಯಾದ ಪದಾಧಿಕಾರಿಗಳು

ಗೋಣಿಕೊಪ್ಪ, ಡಿ.31–ಪೊನ್ನಂಪೇಟೆ ತಾಲೂಕು ಕೃಷಿಕ ಸಮಾಜದ ಅಧ್ಯಕ್ಷರಾಗಿ ಕುಂಞಂಗಡ ಅರುಣ್ ಭೀಮಯ್ಯ ಹಾಗೂ ಕಾರ್ಯದರ್ಶಿಯಾಗಿ ಕಾಡ್ಯಮಾಡ ಗಿರೀಶ್ ಗಣಪತಿ ಆಯ್ಕೆಯಾಗಿದ್ದಾರೆ.

ಪೊನ್ನಂಪೇಟೆ ತಾಲೂಕಿನಲ್ಲಿ ನಡೆದ ಕೃಷಿಕ ಸಮಾಜದ ಚುನಾವಣೆಯಲ್ಲಿ ಉಪಾಧ್ಯಕ್ಷರಾಗಿ ಹೆಚ್.ಡಿ.ಶ್ರೀನಿವಾಸ್, ಕೋಶಾಧಿಕಾರಿಯಾಗಿ ಅಳಮೇಂಗಡ ವಿವೇಕ್, ಜಿಲ್ಲಾ ಪ್ರತಿನಿಧಿಯಾಗಿ ನೆಲ್ಲೀರ ಚಲನ್‌ಕುಮಾರ್, ಕಾರ್ಯಕಾರಿ ಸಮಿತಿ ಸದಸ್ಯರಾಗಿ ಅಳಮೇಂಗಡ ಬೋಸ್, ಎಸ್.ಎಸ್. ಸುರೇಶ್, ಶೆರೀನ್ ಸುಬ್ಬಯ್ಯ, ಎಂ.ಬಿ.ಮೋಹನ್, ಚಿರಿಯಪಂಡ ರಾಜ ನಂಜಪ್ಪ ಅವರು ಆಯ್ಕೆಯಾದರು.

ಕ್ರಿಸ್‌ಮಸ್ ಆಚರಣೆ



ಗೋಣಿಕೊಪ್ಪ ಸಮೀಪದ ಅತ್ತೂರು ನ್ಯಾಷನಲ್ ಅಕಾಡೆಮಿ ಶಾಲೆಯಲ್ಲಿ ನಡೆದ ಕ್ರಿಸ್‌ಮಸ್ ಆಚರಣೆಯಲ್ಲಿ ಪುಟಾಣಿಗಳು ವಿಶೇಷ ಉಡುಗೆ ತೊಟ್ಟು ನೃತ್ಯ ಪ್ರದರ್ಶಿಸಿದರು. ಅಕಾಡೆಮಿ ಸಂಸ್ಥಾಪಕಿ ಡಾ.ಅಪ್ಪನೆರವಂಡ ಶಾಂತಿ ಅಚ್ಚಪ್ಪ, ಮುಖ್ಯ ಶಿಕ್ಷಕಿ ಪುಷ್ಪಾ ಇದ್ದರು.

ಚಾಮರಾಜನಗರ ಬಂದ್‌ಗೆ ಉತ್ತಮ ಪ್ರತಿಕ್ರಿಯೆ

- ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ವಿವಿಧ ಸಂಘಟನೆಗಳಿಂದ ಪ್ರತಿಭಟನೆ
- ಮುಚ್ಚಿದ ಬಹುತೇಕ ಅಂಗಡಿ–ಮುಗ್ಗಟ್ಟು

ಚಾಮರಾಜನಗರ, ಡಿ.31–ರಾಜ್ಯಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅಂಬೇಡ್ಕರ್ ಬಗ್ಗೆ ಅವಹೇಳನ ಮಾಡಿದ್ದಾರೆ ಎಂದು ಜಿಲ್ಲೆಯ ದಲಿತ ಹಾಗೂ ಪ್ರಗತಿಪರ ಸಂಘಟನೆಗಳು ಮಂಗಳವಾರ ಕರೆ ನೀಡಿದ್ದ ಚಾಮರಾಜನಗರ ಬಂದ್‌ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು.

ಪ್ರತಿಭಟನೆ: ಅಹಿಂದ, ಬಿಎಸ್‌ಪಿ, ಎಸ್‌ಡಿಪಿಐ, ಕನ್ನಡಪರ ಹಾಗೂ ವಿದ್ಯಾರ್ಥಿ ಸಂಘಟನೆಗಳು ಬೆಳಗ್ಗೆ 8 ಗಂಟೆಯಿಂದಲೇ ಪ್ರತಿಭಟನೆ ಆರಂಭಿಸಿದ್ದು, ನಗರದ ಎಲ್ಲಾ ವೃತ್ತಗಳಲ್ಲಿ ಕೆಲಕಾಲ ಧರಣಿ ನಡೆಸಿ, ಆಕ್ರೋಶ ಹೊರಹಾಕಿದವು. ನಗರದ ಭುವನೇಶ್ವರಿ ವೃತ್ತದಲ್ಲಿ ಪ್ರತಿಭಟನಾಕಾರರು, ಶಾಮಿಯಾನ ಹಾಕಲು ಮತ್ತು ಟೈರ್ ಸುಡಲು ಮುಂದಾದರು. ಈ ವೇಳೆ ಪೊಲೀಸರು ಅಡ್ಡಿಪಡಿಸಿದ್ದರಿಂದ ಪೊಲೀಸರ ವಿರುದ್ಧ ಘೋಷಣೆ ಕೂಗಿದರು. ಬಳಿಕ ಭುವನೇಶ್ವರಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ, ಅಮಿತ್ ಶಾ ವಿರುದ್ಧ ಘೋಷಣೆ ಕೂಗಿದರು. ಕೂಡಲೇ ಸಚಿವ ಸ್ಥಾನದಿಂದ ಅಮಿತ್ ಶಾ ಅವರನ್ನು ವಜಾ ಮಾಡಬೇಕು. ಅಮಿತ್ ಶಾ ದೇಶದ ಜನರ ಕ್ಷಮೆ ಕೇಳಬೇಕು. ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಮೈಸೂರಿನ ಉರಿಲಿಂಗಿ ಪೆದ್ದಿಮಠದ ಜ್ಞಾನಪ್ರಕಾಶ ಸ್ವಾಮೀಜಿ, ದಲಿತ ಮುಖಂಡ ವೆಂಕಟರಮಣಸ್ವಾಮಿ ಪಾಪು, ಬಸವನಪುರ ರಾಜಶೇಖರ್ ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಮುಖಂಡರು ಹಾಜರಿದ್ದರು. ಬಂದ್ ಹಿನ್ನೆಲೆಯಲ್ಲಿ ನಗರದ ಬಹುತೇಕ ಹೋಟೆಲ್, ಅಂಗಡಿಗಳು, ವಾಣಿಜ್ಯ ಮಳಿಗೆಗಳನ್ನು ಮುಚ್ಚಿದವು. ಸರ್ಕಾರಿ ಕಚೇರಿ, ಬ್ಯಾಂಕ್‌ಗಳು, ಕೆಲವು ಶಾಲಾ–ಕಾಲೇಜು, ಆಸ್ಪತ್ರೆ, ಮೆಡಿಕಲ್ ಸ್ಟೋರ್, ಹಾಲಿನ ಡೇರಿಗಳನ್ನು ಹೊರತುಪಡಿಸಿ ಉಳಿದಂತೆ ದೊಡ್ಡ ಅಂಗಡಿ, ಚಿಕ್ಕಂಗಡಿ ಬೀದಿ, ಸತ್ತಿ ರಸ್ತೆ, ಬಿ.ರಾಚಯ್ಯ ಜೋಡಿರಸ್ತೆ, ಗುಂಡ್ಲುಪೇಟೆ ವೃತ್ತ, ಸಂತೇಮರಹಳ್ಳಿ ವೃತ್ತ, ಡಿವಿಯೇಷನ್ ರಸ್ತೆ ಸೇರಿದಂತೆ ನಗರದ ಪ್ರಮುಖ ರಸ್ತೆಗಳ ಅಂಗಡಿ, ಮುಂಗಟ್ಟುಗಳು ಬಂದ್ ಆಗಿದ್ದವು. ಪರಿಣಾಮ ನಗರದಲ್ಲಿ ಜನಸಂದಣಿ ವಿರಳವಾಗಿತ್ತು.



ಬಂದ್ ಹಿನ್ನೆಲೆಯಲ್ಲಿ ಚಾಮರಾಜನಗರದ ಬಹುತೇಕ ಅಂಗಡಿ, ವಾಣಿಜ್ಯ ಮಳಿಗೆಗಳು ಮುಚ್ಚಿದವು.

ಪ್ರಯಾಣಿಕರ ಪರದಾಟ: ಬಂದ್‌ನಿಂದ ಗ್ರಾಮೀಣ ಪ್ರದೇಶದ ಪ್ರಯಾಣಿಕರು ಮತ್ತು ವಿದ್ಯಾರ್ಥಿಗಳು ತೀವ್ರ ಪರದಾಡುವಂತಾಯಿತು. ಬೆಳಗ್ಗೆಯೇ ಬಸ್ ನಿಲ್ದಾಣಕ್ಕೆ ಬಂದ ಪ್ರತಿಭಟನಾಕಾರರು, ಬಸ್ ಸಂಚಾರ ಸ್ಥಗಿತಗೊಳಿಸಿ ಬಂದ್‌ಗೆ ಬೆಂಬಲ ನೀಡುವಂತೆ ಒತ್ತಾಯಿಸಿದರು. ಬೆಳಗ್ಗೆಯಿಂದ ಮಧ್ಯಾಹ್ನದವರೆಗೆ ಕೆಎಸ್‌ಆರ್‌ಟಿಸಿ ಮತ್ತು ಖಾಸಗಿ ಬಸ್, ಆಟೋ ಸಂಚಾರ ಸ್ಥಗಿತಗೊಂಡಿತ್ತು. ಇದರಿಂದ ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳು ಶಾಲಾ–ಕಾಲೇಜಿಗೆ ಹೋಗಲು ಪರದಾಡುವಂತಾಯಿತು.

ರೈತ ಸಂಘಟನೆಗಳಿಂದ ಪಂಜಿನ ಮೆರವಣಿಗೆ



ಚಾಮರಾಜನಗರದಲ್ಲಿ ರೈತ ಸಂಘಟನೆಗಳ ಒಕ್ಕೂಟ ಹಾಗೂ ಕಬ್ಬು ಬೆಳೆಗಾರ ಸಂಘದಿಂದ ಪಂಜಿನ ಮೆರವಣಿಗೆ ನಡೆಸಲಾಯಿತು.

ಚಾಮರಾಜನಗರ, ಡಿ.31–ರೈತರ ಹಕ್ಕುಗಳಾಗಿ ದೆಹಲಿ ಗಡಿಯಲ್ಲಿ 34 ದಿನಗಳಿಂದ ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೆವಾಲ ನಡೆಸುತ್ತಿರುವ ಉಪವಾಸ ಸತ್ಯಾಗ್ರಹ ಬೆಂಬಲಿಸಿ ರೈತ ಸಂಘಟನೆಗಳ ಒಕ್ಕೂಟ ಹಾಗೂ ಕಬ್ಬು ಬೆಳೆಗಾರ ಸಂಘದ ಜಿಲ್ಲಾ ಘಟಕದಿಂದ ನಗರದಲ್ಲಿ ಮಂಗಳವಾರ ರಾತ್ರಿ ಪಂಜಿನ ಮೆರವಣಿಗೆ ನಡೆಸಲಾಯಿತು.

ರೈತ ಸಂಘಟನೆಗಳ ಒಕ್ಕೂಟ, ಕಬ್ಬು ಬೆಳೆಗಾರ ಸಂಘ ಚಾಮರಾಜನಗರ ತಾಲೂಕು ಪ್ರಧಾನ ಕಾರ್ಯದರ್ಶಿ ಉಡಿಗಾಲ ಸುಂದ್ರಪ್ಪ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಕಳ್ಳಿ ಮಹದೇವಸ್ವಾಮಿ ನೇತೃತ್ವದಲ್ಲಿ ಚಾಮರಾಜೇಶ್ವರ ಉದ್ಯಾನದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು, ಪಂಜು ಹಿಡಿದು ಭುವನೇಶ್ವರಿ ವೃತ್ತದವರೆಗೆ ಮೆರವಣಿಗೆ ನಡೆಸಿದರು. ನಂತರ ರಾಷ್ಟ್ರೀಯ ಹೆದ್ದಾರಿ ತಡೆದು ಆಕ್ರೋಶ ವ್ಯಕ್ತಪಡಿಸಿದರು.

ಜಗಜಿತ್ ಸಿಂಗ್ ದಲ್ಲೆವಾಲ ನಡೆಸುತ್ತಿರುವ ಉಪವಾಸ ಸತ್ಯಾಗ್ರಹವನ್ನು ಕೇಂದ್ರ ಸರ್ಕಾರ ನಿರ್ಲಕ್ಷಿಸಿದೆ. ಕರ್ನಾಟಕ ಸಂಸದರು ಯಾವುದೇ ಧ್ವನಿ ಎತ್ತುತ್ತಿಲ್ಲ. ಅವರಿಗೆ ತೊಂದರೆ ಉಂಟಾದರೆ ಕೇಂದ್ರ ಸರ್ಕಾರವೇ ಹೊಣೆಯಾಗಬೇಕಾಗುತ್ತದೆ. ಕೇಂದ್ರ ಸರ್ಕಾರ ರೈತರ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಘೋಷಿಸಬೇಕು. ರೈತರ ಸಂಪೂರ್ಣ ಸಾಲಮನ್ನಾ, 60 ವರ್ಷ ತುಂಬಿದ ರೈತರಿಗೆ ಪಿಂಚಣಿ ಯೋಜನೆಯನ್ನು ತಕ್ಷಣ ಜಾರಿಗೊಳಿಸಬೇಕು. ರೈತರ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

ಮೆರವಣಿಗೆಯಲ್ಲಿ ಜಿಲ್ಲಾ ಕಾರ್ಯಾಧ್ಯಕ್ಷ ಉಡಿಗಾಲ ರೇವಣ್ಣ, ಉಪಾಧ್ಯಕ್ಷ ಪಟೇಲ್ ಶಿವಮೂರ್ತಿ, ತಾಲೂಕು ಅಧ್ಯಕ್ಷ ಸತೀಶ್, ನಟರಾಜು, ಗುರುಪ್ರಸಾದ್ ಎಚ್. ಮೂಕಳ್ಳಿ, ಎಂ.ಬಿ.ರಾಜು, ಯರಿಯೂರು ಮಹೇಶ, ಉಡಿಗಾಲ ನಟರಾಜು, ಲೋಕೇಶ್, ನವೀನ್, ಗುರುಸ್ವಾಮಿ, ನಾಗೇಂದ್ರ, ಮೂಡ್ಲುಪುರ ಮಂಜುನಾಥ್, ಮಹೇಶ್ ಇತರರು ಭಾಗವಹಿಸಿದ್ದರು.

ಇಂದು ವಿಷ್ಣು ನೆನಪಿನೋತ್ಸವ ಕಾರ್ಯಕ್ರಮ



ಸುದ್ದಿಗೋಷ್ಠಿಯಲ್ಲಿ ಕನ್ನಡ ನೆಲ–ಜಲ, ಸಾಂಸ್ಕೃತಿಕ ವೇದಿಕೆ ಅಧ್ಯಕ್ಷ ಉಮ್ಮತ್ತೂರು ಇಂದುಶೇಖರ್ ಮಾತನಾಡಿದರು.

ಚಾಮರಾಜನಗರ, ಡಿ.31–ಕನ್ನಡ ನೆಲ–ಜಲ, ಸಾಂಸ್ಕೃತಿಕ ವೇದಿಕೆ ವತಿಯಿಂದ ಜ.1ರಂದು ಸಂಜೆ 6 ಗಂಟೆಗೆ ನಗರದಲ್ಲಿ 15ನೇ ವಿಷ್ಣು ನೆನಪಿನೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ವೇದಿಕೆ ಅಧ್ಯಕ್ಷ ಉಮ್ಮತ್ತೂರು ಇಂದುಶೇಖರ್ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ನ್ಯಾಯಾಲಯ ರಸ್ತೆಯಲ್ಲಿರುವ ವಿಹೆಚ್‌ಪಿ ಶಾಲೆ ಸಮೀಪ ಏರ್ಪಡಿಸಿರುವ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಶಿಲ್ಪನಾಗ್ ಉದ್ಘಾಟಿಸಲಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ವಿಷ್ಣುವರ್ಧನ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಿದ್ದಾರೆ ಎಂದರು.

ಜೂನಿಯರ್ ವಿಷ್ಣುವರ್ಧನ್, ಮೈಸೂರು ವಿಷ್ಣು ಆರ್ಕೆಸ್ಟ್ರಾ ತಂಡ ವತಿಯಿಂದ ಗಾಯನ ಕಾರ್ಯಕ್ರಮ ನಡೆಯಲಿದೆ. ರಾಷ್ಟ್ರೀಯ ಯುವ ಪ್ರಶಸ್ತಿ ಪುರಸ್ಕೃತ ಸುರೇಶ್ ಋಗ್ವೇದಿ ನುಡಿನಮನ ಸಲ್ಲಿಸಲಿದ್ದಾರೆ. ವಿಷ್ಣುವರ್ಧನ್ ಸಮಾಜಕ್ಕೆ ಚಿತ್ರಗಳ ಮೂಲಕ ಉತ್ತಮ ಸಂದೇಶ ನೀಡಿದ್ದಾರೆ. ಅವರ ಸ್ಮರಣೆ ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಇದೇ ಸಂದರ್ಭದಲ್ಲಿ ಆಟೋ ಚಾಲಕರಿಗೆ ಸಮವಸ್ತ್ರ ಹಾಗೂ ಬಡ ವಿದ್ಯಾರ್ಥಿ ನೋಟ್ ಪುಸ್ತಕ ವಿತರಿಸಲಾಗುವುದು ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಆಲೂರು ಮಲ್ಲು, ಜ.ಸುರೇಶ್ ನಾಗ್, ಕರಿನಂಜನಪುರ ಕೂಸಣ್ಣ, ಮಹೇಶ್, ಆನಂದ್ ಭಗೀರಥ, ಪುಟ್ಟುವರ್ಧನ್ ಹಾಜರಿದ್ದರು.

ಮಾ.8, ಲೋಕ್ ಅದಾಲತ್

ಚಾಮರಾಜನಗರ, ಡಿ.31–ಕಾನೂನು ಸೇವೆಗಳ ಪ್ರಾಧಿಕಾರ ನಿರ್ದೇಶನದನ್ವಯ ಮಾ.8ರಂದು ಜಿಲ್ಲೆಯಾದ್ಯಂತ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿದೆ. ಅದಾಲತ್‌ನಲ್ಲಿ ಸಾರ್ವಜನಿಕರು ಬಾಕಿ ಮತ್ತು ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇಚ್ಚಿಸಿದ್ದಲ್ಲಿ ಮುಂಚಿತವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ಆಯಾ ತಾಲೂಕು ಕಾನೂನು ಸೇವಾ ಸಮಿತಿಗಳನ್ನು ಆನ್‌ಲೈನ್, ವಿಡಿಯೋ ಕಾನ್ಫರೆನ್ಸ್, ಇ–ಮೇಲ್, ಎಸ್‌ಎಂಎಸ್, ವಾಟ್ಸ್ ಆ್ಯಪ್ ಅಥವಾ ಖುದ್ದಾಗಿ ಹಾಜರಾಗುವ ಮೂಲಕ ಸಂಪರ್ಕಿಸಬೇಕು.

ಲೋಕ್ ಅದಾಲತ್ ನಿಮಿತ್ತ ನ್ಯಾಯಾಲಯಗಳ ಬಾಕಿ ರಾಜೀ ಯೋಗ್ಯ ದಾವೆ ಅಥವಾ ಪ್ರಕರಣಗಳನ್ನು ಶೀಘ್ರ ಪರಿಣಾಮಕಾರಿ ತೀರ್ಮಾನಕ್ಕೆ ನ್ಯಾಯಾಲಯ ಆವರಣದ ಎಡಿಆರ್ ಕಟ್ಟಡದಲ್ಲಿ ಪೂರ್ವಭಾವಿ ಸಮಾಲೋಚನಾ ಕೇಂದ್ರ ತೆರೆಯಲಾಗಿದೆ.

ಮಾಹಿತಿಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸಹಾಯವಾಣಿ: 08226–226022, ಯಳಂದೂರು ತಾಲೂಕು ಸಹಾಯವಾಣಿ: 08226–240229, ಕೊಳ್ಳೇಗಾಲ: 08224–256788, ಗುಂಡ್ಲುಪೇಟೆ: 08229–223279 ಅಥವಾ ಇ–ಮೇಲ್ dlsachnagar2021@gmail.com ಅನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಈಶ್ವರ್ ತಿಳಿಸಿದ್ದಾರೆ.

ಯುವನಿಧಿ ಯೋಜನೆ ನೋಂದಣಿಗೆ ಜಿಲ್ಲಾಧಿಕಾರಿ ಚಾಲನೆ



ಚಾಮರಾಜನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಯುವನಿಧಿ ನೋಂದಣಿ ಪೋಸ್ಟರ್ ಅನ್ನು ಡಿಸಿ ಶಿಲ್ಪನಾಗ್ ಬಿಡುಗಡೆಗೊಳಿಸಿದರು.

ಚಾಮರಾಜನಗರ, ಡಿ.31–ಯುವಜನರ ಉಜ್ವಲ ಭವಿಷ್ಯಕ್ಕಾಗಿ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆ 2024ನೇ ಸಾಲಿನ ನೋಂದಣಿಗೆ ಜಿಲ್ಲಾಧಿಕಾರಿ ಶಿಲ್ಪನಾಗ್ ನಗರದಲ್ಲಿ ಮಂಗಳವಾರ ಚಾಲನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕೌಶಲಾಭಿವೃದ್ಧಿ, ಉದ್ಯಮಶೀಲತೆ, ಜೀವನೋಪಾಯ ಹಾಗೂ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ವತಿಯಿಂದ ಯುವನಿಧಿ ನೋಂದಣಿ ಪೋಸ್ಟರ್ ಅನ್ನು ಜಿಲ್ಲಾಧಿಕಾರಿ ಬಿಡುಗಡೆಗೊಳಿಸಿದರು.

ಇದೇ ವೇಳೆ ಮಾತನಾಡಿದ ಶಿಲ್ಪನಾಗ್, ಪದವಿ ಹಾಗೂ ಸ್ನಾತಕೋತ್ತರ ಪದವೀಧರರು ಹಾಗೂ ಡಿಪ್ಲೋಮಾ ತೇರ್ಗಡೆಯಾಗಿರುವ ನಿರುದ್ಯೋಗಿಗಳಿಗೆ ನೆರವಾಗುವ ನಿಟ್ಟಿನಲ್ಲಿ ಜಾರಿಯಾಗಿರುವ ಯುವನಿಧಿ ಯೋಜನೆ ಸದ್ಬಳಕೆ ಹಾಗೂ ಯಶಸ್ವಿಗಾಗಿ ನೋಂದಣಿ ಕಾರ್ಯ ಆರಂಭಿಸಲಾಗಿದೆ. ಜಿಲ್ಲೆಯ ಎಲ್ಲಾ ಪದವಿ, ಸ್ನಾತಕೋತ್ತರ ಪದವಿ, ಡಿಪ್ಲೋಮಾ ಕಾಲೇಜಿನ ಪ್ರಾಂಶುಪಾಲರು, ಮುಖ್ಯಸ್ಥರು ಸಹಕರಿಸಿ ನಿರುದ್ಯೋಗಿ ಅಭ್ಯರ್ಥಿಗಳನ್ನು ಪ್ರೇರೇಪಿಸಬೇಕು ಎಂದರು.

ಕನಿಷ್ಠ 6 ತಿಂಗಳವರೆಗೆ ಸರ್ಕಾರಿ ಅಥವಾ ಖಾಸಗಿ, ಸ್ವಯಂ ಉದ್ಯೋಗ ಹೊಂದಿಲ್ಲದವರು, ಉನ್ನತ ವಿದ್ಯಾಭ್ಯಾಸ ಮುಂದುವರಿಸದೇ ಇರುವವರು ಹಾಗೂ ಕರ್ನಾಟಕದಲ್ಲಿ ವಾಸವಿದ್ದು, ಕನಿಷ್ಠ 6 ವರ್ಷಗಳವರೆಗೆ ಅಧ್ಯಯನ ಮಾಡಿರುವ ಅಭ್ಯರ್ಥಿಗಳು ಸೇವಾಸಿಂಧು ಪೋರ್ಟಲ್ ಮೂಲಕ ನೋಂದಾಯಿಸಿಕೊಳ್ಳಬಹುದು. ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಉಚಿತವಾಗಿ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳು ನೋಂದಣಿಗಾಗಿ ಸೇವಾಸಿಂಧು ಪೋರ್ಟಲ್ https://sevasindhugs.karnataka.gov.in ಅಥವಾ ಸಹಾಯವಾಣಿ: 1800–599–7154 ಅನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ಇದೇ ವೇಳೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಮೋನಾ ರೋತ್, ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಪಂ ಉಪಕಾರ್ಯದರ್ಶಿ ಪಿ.ಲಕ್ಷ್ಮೀ, ಜಿಲ್ಲಾ ಕೌಶಲಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಅಧಿಕಾರಿ ಮಹಮ್ಮದ್ ಅಕ್ಬರ್, ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕಿ ಎಂ.ವಿ.ಸುಧಾ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಪ್ರಸನ್ನ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಾಮಚಂದ್ರರಾಜೇ ಅರಸ್, ಕೌಶಲಾಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕ ಮಲ್ಲೇಶ್, ತರಬೇತುದಾರ ಮಹದೇವಸ್ವಾಮಿ, ಉದ್ಯೋಗಾಭಿವೃದ್ಧಿ ನಿರ್ವಾಹಕ ಮೋಯಿನ್ ಖಾನ್ ಇತರರು ಇದ್ದರು.

ನಾಳೆ ಪಾಲಿಕೆ ವಲಯ ಕಚೇರಿ–4ರ ವ್ಯಾಪ್ತಿ ಇ–ಆಸ್ತಿ ಖಾತಾ ಅಭಿಯಾನ

ಮೈಸೂರು, ಡಿ.31(ಎಸ್‌ಬಿಡಿ)– ಮೈಸೂರು ಮಹಾನಗರ ಪಾಲಿಕೆ ವಲಯ ಕಚೇರಿ 4ರ ವ್ಯಾಪ್ತಿಯಲ್ಲಿ ಜ.2ರಂದು ಇ–ಆಸ್ತಿ ಖಾತಾ ಅಭಿಯಾನ್ ನಡೆಯಲಿದೆ.

ಗೋಕುಲಂ ಮೂರನೇ ಹಂತ, ಮೈಸೂರು ಒನ್ ಕೇಂದ್ರದ ಪಕ್ಕದಲ್ಲಿರುವ ಸಾಂಸ್ಕೃತಿಕ ಭವನ ಹಾಗೂ ಬೃಂದಾವನ ಬಡಾವಣೆ ಎರಡನೇ ಹಂತದ ಸಮುದಾಯ ಭವನದಲ್ಲಿ ಅಂದು ಬೆಳಗ್ಗೆ 10ಕ್ಕೆ ಅಭಿಯಾನ ಆರಂಭವಾಗಲಿದ್ದು, ಸ್ವತ್ತಿನ ಮಾಲೀಕರಿಂದ ಆಸ್ತಿ ದಾಖಲೆ ಸಂಗ್ರಹಿಸಲಾಗುವುದು. ಆಸ್ತಿ ಮಾಲೀಕರು ಅಭಿಯಾನದ ಉಪಯೋಗ ಪಡೆಯುವಂತೆ ಮಾಜಿ ಕಾರ್ಪೊರೇಟರ್ ಎಸ್‌ಬಿಎಂ ಮಂಜು ಮನವಿ ಮಾಡಿದ್ದಾರೆ.

ಅಗತ್ಯ ದಾಖಲೆಗಳು: ಲಿಖಿತ ಅರ್ಜಿ, ಆಸ್ತಿ ದಾಖಲೆ ನೋಂದಾಯಿತ ಪತ್ರ, ಟೈಟಲ್ ಡೀಡ್, ಖಾತಾ ಮತ್ತು ಆಸ್ತಿ ತೆರಿಗೆ ಪಾವತಿ ರಶೀದಿ, ನೀರಿನ ಕಂದಾಯ ಪಾವತಿ ರಶೀದಿ, ವಿದ್ಯುತ್ ಶುಲ್ಕ ಪಾವತಿ ಬಿಲ್, ಮನೆ ಫೋಟೋ, ಖಾತಾದಾರರ ಭಾವಚಿತ್ರ, ಋಣಭಾರ ಪ್ರಮಾಣ ಪತ್ರ(ಇಸಿ), ಪಾನ್‌ಕಾರ್ಡ್/ ಚುನಾವಣಾ ಗುರುತಿನ ಚೀಟಿ/ ಪಾಸ್‌ಪೋರ್ಟ್/ ಡ್ರೈವಿಂಗ್ ಲೈಸೆನ್ಸ್, ನಕ್ಷೆ ಹಾಗೂ ಸಿಆರ್.

ಸಂಗೀತ ವಿವಿಗೆ ಕುಲಸಚಿವರಾಗಿ ಡಾ.ಎಂ.ಜಿ.ಮಂಜುನಾಥ್ ನಿಯೋಜನೆ

ಮೈಸೂರು,ಡಿ.31(ಪಿಎಂ)– ರಾಜ್ಯ ಸರ್ಕಾರದ ಆದೇಶದಂತೆ ಮೈಸೂರು ವಿವಿ



ಕಲಾ ನಿಕಾಯದ ಡೀನ್ ಹಾಗೂ ಕನ್ನಡ ಪ್ರಾಧ್ಯಾಪಕ ಡಾ.ಎಂ.ಜಿ.ಮಂಜುನಾಥ್, ಸಂಗೀತ ವಿವಿಯ ಮೌಲ್ಯಮಾಪನ ಕುಲಸಚಿವರಾಗಿ ಸೋಮವಾರ ಅಧಿಕಾರ ವಹಿಸಿಕೊಂಡರು.

ಅವರನ್ನು ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿವಿಯ ಕುಲಸಚಿವ (ಮೌಲ್ಯಮಾಪನ) ಹುದ್ದೆಗೆ ನಿಯೋಜನೆ ಮೇರೆಗೆ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶಿಸಿತ್ತು. ಈ ಹಿನ್ನೆಲೆಯಲ್ಲಿ ಅವರು ವಿವಿಯ ಕುಲಪತಿ ಪ್ರೊ.ನಾಗೇಶ್ ವಿ.ಬೆಟ್ಟಕೋಟೆ ಅವರಲ್ಲಿ ವರದಿ ಮಾಡಿಕೊಂಡರು.

ಐಎನ್‌ಬಿಸಿಡಬ್ಲ್ಯೂಎಫ್ ಯುವ ಘಟಕದ ಅಧ್ಯಕ್ಷರಾಗಿ ಸಂತೋಷ್‌ಕುಮಾರ್ ನೇಮಕ



ಮೈಸೂರು,ಡಿ.31(ಪಿಎಂ)– ಇಂಡಿಯನ್ ನ್ಯಾಷನಲ್ ಬಿಲ್ಡಿಂಗ್ ಕನ್‌ಸ್ಟ್ರಕ್ಷನ್ ಫಾರೆಸ್ಟ್ ಅಂಡ್ ವುಡ್ ವರ್ಕರ್ಸ್ ಫೆಡರೇಷನ್ (ಐಎನ್‌ಬಿಸಿಡಬ್ಲ್ಯೂಎಫ್) ಕರ್ನಾಟಕ ರಾಜ್ಯ ಯುವ ಘಟಕದ ಅಧ್ಯಕ್ಷರಾಗಿ ಇಲವಾಲ ಹೋಬಳಿ ಚಿಕ್ಕಹಳ್ಳಿ ಗ್ರಾಮದ ಎನ್.ಸಂತೋಷ್‌ಕುಮಾರ್ ಅವರನ್ನು ನೇಮಕ ಮಾಡಿ ಸಂಘಟನೆಯ ರಾಜ್ಯಾಧ್ಯಕ್ಷರು ಆದೇಶ ಮಾಡಿದ್ದಾರೆ.

ಹುಟ್ಟು ಹಬ್ಬದ ಶುಭಾಶಯಗಳು



ಚಾಮುಂಡಿಬೆಟ್ಟದ ನಾಯಕ ಜನಾಂಗದ ಯುವ ಮುಖಂಡ ಮಂಜು ನಾಯಕ್ ಅವರಿಗೆ ಹುಟ್ಟು ಹಬ್ಬದ ಶುಭಾಶಯ ಕೋರಲಾಯಿತು. ಈ ವೇಳೆ ಗ್ರಾಪಂ ಮಾಜಿ ಅಧ್ಯಕ್ಷ ಭರತ್.ಕೆ, ಬಿಎಸ್‌ಎನ್‌ಎಲ್ ಮಹದೇವ, ವೆಂಕಟೇಶ್, ಸಿ.ಚಾಮರಾಜು, ಮಿಲ್ಟ್ರಿ ನಿಂಗರಾಜು, ಸಿದ್ದರಾಜು, ಶಂಕರ್, ಭಾಸ್ಕರ್, ರವಿಚಂದ್ರನ್ (ಪ್ರಕಾಶ್) ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು

ಡಾಲರ್ ಎದುರು ರೂಪಾಯಿ ಮೌಲ್ಯ 13 ಪೈಸೆ ಕುಸಿತ

ಮುಂಬೈ, ಡಿ.31– ಕರೆನ್ಸಿ ವಿನಿಮಯ ಮಾರುಕಟ್ಟೆಯಲ್ಲಿ ಮಂಗಳವಾರ ನಡೆದ ವಹಿವಾಟಿನಲ್ಲಿ ಅಮೆರಿಕದ ಡಾಲರ್ ಎದುರು ರೂಪಾಯಿ ಮೌಲ್ಯವು 13 ಪೈಸೆ ಕುಸಿದಿದೆ. ವಹಿವಾಟಿನ ಅಂತ್ಯಕ್ಕೆ ಪ್ರತೀ ಡಾಲರ್ ಮೌಲ್ಯ 85.65 ಆಗಿದೆ.

ದೇಶದ ಈಕ್ವಿಟಿ ಮಾರುಕಟ್ಟೆಯಲ್ಲಿ ವಿದೇಶಿ ಬಂಡವಾಳದ ಹೊರಹರಿವು ಹೆಚ್ಚಳ ಮುಂದುವರಿದಿದೆ. ಮತ್ತೊಂದೆಡೆ ಡಾಲರ್ ಮೌಲ್ಯ ಬಲಗೊಳ್ಳುತ್ತಿದೆ. ಇದರಿಂದ 2024ರಲ್ಲಿ ರೂಪಾಯಿ ಮೌಲ್ಯವು ಶೇ 3ರಷ್ಟು ಕುಸಿತ ಕಂಡಿದೆ.

ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಚೀನಾ ಸೇರಿ ಹಲವು ದೇಶಗಳ ಮೇಲೆ ಸುಂಕ ಹೆಚ್ಚಿಸುವುದಾಗಿ ಘೋಷಿಸಿದ್ದಾರೆ. ಇದರಿಂದ ಡಾಲರ್ ಸೂಚ್ಯಂಕ ಏರಿಕೆಯ ಹಾದಿ ಹಿಡಿದಿದೆ 10 ವರ್ಷದ ಅವಧಿಯ ಅಮೆರಿಕದ ಬಾಂಡ್‌ಗಳ ಗಳಿಕೆ ಹೆಚ್ಚಾಗಿದೆ ಅಲ್ಲದೆ, ಭಾರತದ ಆರ್ಥಿಕ ಬೆಳವಣಿಗೆ ದರ ಕುಂಠಿತವಾಗಿದೆ. ಇದು ರೂಪಾಯಿ ಮೌಲ್ಯ ಕುಸಿತಕ್ಕೆ ಕಾರಣವಾಗಿದೆ ಎಂದು ವಿದೇಶಿ ವಿನಿಮಯ ಮಾರುಕಟ್ಟೆ ತಜ್ಞರು ಹೇಳಿದ್ದಾರೆ.

ಮೈಸೂರು 65ನೇ ವಾರ್ಡ್ ವ್ಯಾಪ್ತಿ ಬಡಾವಣೆಗಳ ಹಸ್ತಾಂತರಕ್ಕೆ ಸದ್ಯ ಬ್ರೇಕ್

ಮೈಸೂರು, ಡಿ.31(ಎಸ್‌ಬಿಡಿ)– ಮೈಸೂರು ನಗರದ 65ನೇ ವಾರ್ಡ್ ವ್ಯಾಪ್ತಿಯ ಬಡಾವಣೆಗಳ ಹಸ್ತಾಂತರಕ್ಕೆ ತಾತ್ಕಾಲಿಕ ಬ್ರೇಕ್ ಬಿದ್ದಿದೆ.

ಶ್ರೀರಾಂಪುರ ಹಾಗೂ ಲಿಂಗಾಂಬುದಿ ಸೇರಿದಂತೆ 65ನೇ ವಾರ್ಡ್‌ಗೆ ಸಂಬಂಧಿಸಿದ ಬಡಾವಣೆಗಳನ್ನು ಹಸ್ತಾಂತರ ಮಾಡದೆ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಹೈಕೋರ್ಟ್ ಆದೇಶಿಸಿ, ಜನವರಿ 7ಕ್ಕೆ ವಿಚಾರಣೆ ಮುಂದೂಡಿದೆ ಎಂದು ಶ್ರೀರಾಂಪುರ ನಾಗರಿಕ ಹಿತರಕ್ಷಣಾ ಸಮಿತಿ ತಿಳಿಸಿದೆ. ಈ ಸಂಬಂಧ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ಆಯುಕ್ತರಿಗೆ ಪತ್ರ ಬರೆದು, ಮಾಹಿತಿ ನೀಡಲಾಗಿದೆ.

ಸಮಿತಿ ಸಲ್ಲಿಸಿದ್ದ ಮ್ಯಾಂಡಮಸ್ ಪಿಟಿಷನ್ ವಿಚಾರಣೆ ನಡೆಸಿದ ಹೈಕೋರ್ಟ್, ಮುಂದಿನ ಆದೇಶದವರೆಗೆ ಬಡಾವಣೆಗಳನ್ನು ಹಸ್ತಾಂತರ ಮಾಡದೇ ಯಥಾಸ್ಥಿತಿ ಕಾಪಾಡುವಂತೆ ಆದೇಶಿದೆ. ಈ ದಿನದ ನ್ಯಾಯಾಲಯದ ಕಲಾಪದಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಪರ ವಕೀಲರೂ ಉಪಸ್ಥಿತರಿದ್ದರು. ಆದ್ದರಿಂದ ಯಥಾಸ್ಥಿತಿ ಕಾಪಾಡುವಂತೆ ಕೋರುತ್ತೇವೆ ಎಂದು ವೇದಿಕೆಯ ಗೌರವಾಧ್ಯಕ್ಷ ಕೆ.ನಾಗರಾಜ್ ತಿಳಿಸಿದ್ದಾರೆ.

ನಮ್ಮ ಶಿಕ್ಷಕರಿಗೆ ವಿವೇಕ ಬಂದಾಗ 'ಸಾವಿತ್ರಿ ಬಾಯಿ ಫುಲೆ' ಹೆಸರಿನಲ್ಲಿ ಶಿಕ್ಷಕರ ದಿನ ಆಚರಿಸುತ್ತಾರೆ...!

● ಹಿರಿಯ ಸಾಹಿತಿ ಪ್ರೊ.ಕಾಳೇಗೌಡ ನಾಗವಾರ ಅಭಿಮತ ● ಬಡ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಸಾವಿತ್ರಿ ಬಾಯಿ ಫುಲೆ ಪರಿಶ್ರಮಪಟ್ಟವರು ● ಮೂರು ದಿನಗಳ ಸಂಚಲನ ರಂಗೋತ್ಸವದಲ್ಲಿ ಭಾಗಿ

ಮೈಸೂರು, ಡಿ.31(ಎಸ್‌ಪಿಎನ್)– ನಮ್ಮ ಶಿಕ್ಷಕರಿಗೆ, ಜನರಿಗೆ ವಿವೇಕ ಬಂದ ದಿನ 'ಸಾವಿತ್ರಿ ಬಾಯಿ ಫುಲೆ' ಹೆಸರಿನಲ್ಲಿ ಶಿಕ್ಷಕರ ದಿನ ಆಚರಿಸುವಂತಾಗ ಬಹುದು ಎಂದು ಹಿರಿಯ ಜಾನಪದ ವಿದ್ವಾಂಸ ಪ್ರೊ.ಕಾಳೇಗೌಡ ನಾಗವಾರ ಅಭಿಪ್ರಾಯಪಟ್ಟರು.

ಮೈಸೂರು ಕಲಾಮಂದಿರ ಆವರಣದ ಕಿರುರಂಗಮಂದಿರದಲ್ಲಿ ಮೈಸೂರಿನ ಸಂಚಲನ ಸಂಸ್ಥೆ, ಜಿಪಿಐಇಆರ್ ರಂಗತಂಡ ಬಳ್ಳಾರಿಯ ಧಾತ್ರಿ ರಂಗಸಂಸ್ಥೆ ಹಾಗೂ ಬೆಂಗಳೂರಿನ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಸಹಯೋಗದೊಂದಿಗೆ ಏರ್ಪಡಿಸಿದ್ದ ಮೂರು ದಿನಗಳ ಸಂಚಲನ ರಂಗೋತ್ಸವ ದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಇತ್ತೀಚೆಗೆ ಪುಣೆ ವಿಶ್ವವಿದ್ಯಾನಿಲಯಕ್ಕೆ ಭೇಟಿ ನೀಡಿದ್ದೆ. ಅಲ್ಲಿ ನನ್ನ ಮಗಳು, ಅಳಿಯ ಇದ್ದಾರೆ. ಅಲ್ಲದೆ, ನನ್ನ ಮೊಮ್ಮಗಳು ಅದೇ ವಿವಿಯಲ್ಲಿ ಪದವಿ ಮುಗಿಸಿದ್ದಾಳೆ. ಅದರ ಪದವಿ ಪ್ರಮಾಣ ಪತ್ರ ಮನೆಗೆ ಬಂದಿತ್ತು. ಅದನ್ನು ಕುತೂಹಲಕ್ಕೆ ತೆರೆದು ನೋಡಿದಾಗ ಅದು ಸಾವಿತ್ರಿಬಾಯಿ ಫುಲೆ ವಿವಿ ಪ್ರಮಾಣ ಪತ್ರ ಎಂದು ನಮೂದಾಗಿತ್ತು. ಪುಣೆ ವಿವಿಗೆ ಅಲ್ಲಿನ ಸರ್ಕಾರ 'ಸಾವಿತ್ರಿ ಬಾಯಿ ಫುಲೆ' ವಿವಿ ಎಂದು ಮರು ನಾಮಕರಣ ಮಾಡಿರುವುದಕ್ಕೆ ಆ ದಿನ ನನ್ನ ಸಂತೋಷಕ್ಕೆ ಪಾರವೇ ಇರಲಿಲ್ಲ ಎಂದು ಹರ್ಷ ವ್ಯಕ್ತಪಡಿಸಿದರು.

19ನೇ ಶತಮಾನದಲ್ಲಿ 'ಸಾವಿತ್ರಿಬಾಯಿ ಫುಲೆ' ಬಡ ಹೆಣ್ಣು ಮಕ್ಕಳ ಶಿಕ್ಷಣಕ್ಕಾಗಿ, ಅದರಲ್ಲೂ ಗ್ರಾಮೀಣ ಹೆಣ್ಣು ಮಕ್ಕಳ ಶಿಕ್ಷಣ ಬಹಳ ಕಷ್ಟಪಟ್ಟಿದ್ದಾರೆ. ಶಿಕ್ಷಣ ಕಲಿಸಲು ಶ್ರಮಿಸಿದ ಹಾದಿ ದುರ್ಗಮವಾಗಿತ್ತು ಎಂದ ಅವರು, ಬಡವರ ಪರವಾಗಿ ಕೆಲಸ ಮಾಡಿರುವ ಸಾಧಕರ ಹೆಸರಿನಲ್ಲಿ ನಮ್ಮ ಶಿಕ್ಷಕರು, ಶಿಕ್ಷಕರ ದಿನ ಆಚರಿಸಿದರೆ ಉತ್ತಮ ಎಂದರು.

ಕುವೆಂಪು ಪರಿಶ್ರಮ ಸ್ಮರಣೆ: ಪುಣೆ ವಿವಿ ಮಾದರಿಯಂತೆಯೇ ಮೈಸೂರು ವಿವಿ ಮಾನಸಗಂಗೋತ್ರಿ ಆವರಣವನ್ನು ಕಟ್ಟಲು ಕುವೆಂಪು ಶ್ರಮಿಸಿದ್ದ ಪ್ರಸಂಗವನ್ನು ಎಳೆಎಳೆಯಾಗಿ ವಿವರಿಸಿದರಲ್ಲದೆ, ನಾಟಕಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸಬೇಕಿದೆ. ವೈಜ್ಞಾನಿಕ ಚಿಂತನಾ ಲಹರಿಯ ಮೂಲಕ ಈ ದೇಶ ಕಟ್ಟಲು ಪ್ರತಿಯೊಬ್ಬರು ಪ್ರಯತ್ನಿಸಬೇಕು. ಸಂಚಲನ ಸಂಸ್ಥೆಯ ದೀಪಕ್ ಮೈಸೂರು ಹಾಗೂ ರಂಗ ನಿರ್ದೇಶಕರಾದ ವಿ.ಶ್ರುತಿ ಅವರು, ಪ್ರತಿಭಾವಂತ ಕಲಾವಿದರು. ಮುಂದಿನ ದಿನಗಳಲ್ಲಿ ಕರ್ನಾಟಕ ರಂಗಭೂಮಿ ಬೆಳೆಸಲು ಶ್ರಮಿಸಲಿ ಎಂದರು.

ನಮ್ಮ ದೇಶದ ರಾಮಾಯಣ, ಮಹಾಭಾರತ ಕಾವ್ಯಗಳು ಜನರು ಕಟ್ಟಿದ ಕಾವ್ಯಗಳು. ಇವು ಇತಿಹಾಸದ ಭಾಗವಲ್ಲ. ಇದರಲ್ಲಿ ವಿದ್ಯೆಯನ್ನೇ ಹೇಳಿಕೊಡದೇ ದ್ರೋಣಾಚಾರ್ಯರು, ಏಕಲವ್ಯನ ಬೆರಳು ಪಡೆದರು. ಇದನ್ನು ನೋಡಿದ ಆತನ ತಾಯಿ ದ್ರೋಣಾಚಾರ್ಯರಿಗೆ ಶಾಪವನ್ನು ಕೊಡುತ್ತಾಳೆ. ಆ ಸನ್ನಿವೇಶವನ್ನು ರಾಷ್ಟ್ರಕವಿ ಕುವೆಂಪು, 'ಬೆರಳ್ಗೆ–ಕೊರಳ್' ನಾಟಕದಲ್ಲಿ ಏಕಲವ್ಯ ಪಾತ್ರವನ್ನು ಮನೋಜ್ಞವಾಗಿ ಚಿತ್ರಿಸಿದ್ದಾರೆ ಎಂದರು.



ರಂಗಾಯಣ ಮಾಜಿ ನಿರ್ದೇಶಕ ಎಚ್.ಜನಾರ್ಧನ್(ಜನ್ನಿ) ಸಂಚಲನ ರಂಗೋತ್ಸವಕ್ಕೆ ಚಾಲನೆ ನೀಡಿದರು.

ಮಾಜಿ ಮುಖ್ಯಮಂತ್ರಿ ಎಸ್.ನಿಜಲಿಂಗಪ್ಪ ಜೀವನಚರಿತ್ರೆಯಲ್ಲಿ ಉಲ್ಲೇಖವಾಗಿರುವಂತೆ ಒಮ್ಮೆ ಅಂಬೇಡ್ಕರ್ ಅವರನ್ನು ಸಂವಿಧಾನ ರಚನಾ ಸಂದರ್ಭದಲ್ಲಿ ಎಸ್.ನಿಜಲಿಂಗಪ್ಪನವರು ಭೇಟಿ ಮಾಡಿ, ಬಸವಣ್ಣ ಚರಿತ್ರೆಯ ಪುಸ್ತಕವನ್ನು ಕೊಟ್ಟಿದ್ದರು. ಅದನ್ನು ಓದಿದ ಅಂಬೇಡ್ಕರ್ ಅವರು, ಇಂತಹ ಮಹಾನ್ ಪುರುಷರನ್ನು ಒಂದು ಭಾಷೆಗೆ ಸೀಮಿತಗೊಳಿಸಿರುವುದು ಬೇಸರ ಸಂಗತಿ ಎಂದಿದ್ದ ಪ್ರಸಂಗವನ್ನು ಉಲ್ಲೇಖಿಸಿದ್ದಾರೆ. ಮುಂದುವರೆದು 12ನೇ ಶತಮಾನದ ಶರಣರ ಕುರಿತು ಹಾಗೂ ಮಹಿಳಾ ಸಬಲೀಕರಣ ಕುರಿತ ಸಂಸತ್‌ನ ಚರ್ಚೆ ಸಮಯದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ರಾಮ್ ಮನೋಹರ್ ಲೋಹಿಯಾ ಅವರು, ಅಕ್ಕಮಹಾದೇವಿ ವಚನಗಳಲ್ಲೂ ಉಲ್ಲೇಖ ಮಾಡಿದ್ದ ಪ್ರಸಂಗವನ್ನು ವಿವರಿಸಿದರು.

ಅಲ್ಲದೆ, ಬುದ್ಧ 2600 ವರ್ಷಗಳ ಹಿಂದೆ, ಬಸವಣ್ಣ 900 ವರ್ಷಗಳ ಹಿಂದೆ ವೈಜ್ಞಾನಿಕ ಪ್ರಜಾಪ್ರಭುತ್ವ ಕಟ್ಟಲು ಶ್ರಮಿಸಿದ್ದಾರೆ. ಇದೀಗ ಅಂಬೇಡ್ಕರ್ 20ನೇ ಶತಮಾನದಲ್ಲಿ ವೈಜ್ಞಾನಿಕ ಪ್ರಭುಪ್ರಭುತ್ವವನ್ನು ಕಟ್ಟಲು ಶ್ರಮಿಸಿದ್ದಾರೆ. ಅದೇ ರೀತಿ ಸಾವಿತ್ರಿ ಬಾಯಿ ಫುಲೆ ಗ್ರಾಮೀಣ ಹೆಣ್ಣು ಮಕ್ಕಳಿಗೆ ಶಿಕ್ಷಣ ದೊರಕಿಸಲು ಹೋರಾಡಿರುವ ಪ್ರಸಂಗವನ್ನು ಈ ವೇದಿಕೆಯಲ್ಲಿ ಪ್ರದರ್ಶನಗೊಳ್ಳುವ 'ಸರಸತಿಯಾಗಲೊಲ್ಲೆ' ಮೂಲಕ ತಿಳಿದುಕೊಳ್ಳಬಹುದು ಎಂದರು.

ರಂಗಭೂಮಿಗೆ ವೈಜ್ಞಾನಿಕ ಸಮಾಜ ಕಟ್ಟುವ ತಾಕತ್ತಿದೆ: ಸಂಚಲನ ರಂಗೋತ್ಸವವನ್ನು ಉದ್ಘಾಟಿಸಿದ ರಂಗಾಯಣ ಮಾಜಿ ನಿರ್ದೇಶಕ ಎಚ್.ಜನಾರ್ಧನ್ (ಜನ್ನಿ) ಮಾತನಾಡಿ, ರಂಗಭೂಮಿಗೆ ವೈಜ್ಞಾನಿಕ ಸಮುದಾಯ ಕಟ್ಟುವ ತಾಕತ್ತು ಇದೆ. ಇದನ್ನು ಪರಿಣಾಮಕಾರಿ ಬಳಸಿಕೊಂಡು ಯುವಕರು ರಂಗಭೂಮಿ ಕಟ್ಟಲು ಪ್ರಯತ್ನಿಸಬೇಕು ಎಂದರು.

ರಂಗ ನಿರ್ದೇಶಕಿ ವಿ.ಶ್ರುತಿ ಮಾತನಾಡಿ, ಕಳೆದ ಐದು ವರ್ಷಗಳ ಹಿಂದೆ ರಾಮಾಯಣ ದರ್ಶನಂ ನಾಟಕ ಪ್ರದರ್ಶನಗೊಳ್ಳುವಾಗ ಬಂದಿದ್ದೆ, ಆಗ ಮೈಸೂರಿನ ರಂಗಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ಬಂದಿತ್ತು ಇದೀಗ ಮೂರು ತಿಂಗಳಿಂದ ಮೈಸೂರಿನ ರಂಗ ಭೂಮಿ ಚಟುವಟಿಕೆಗಳನ್ನು ಹತ್ತಿರದಿಂದ ಗಮನಿಸುತ್ತಿದ್ದೇನೆ. ಪ್ರತಿದಿನ ಒಂದಿಲ್ಲೊಂದು ನಾಟಕ ಪ್ರದರ್ಶನಗೊಳ್ಳುತ್ತಿವೆ. ಎಲ್ಲಾ ನಾಟಕಗಳಿಗೂ ಇಲ್ಲಿನ ಪ್ರೇಕ್ಷಕರು ಪ್ರೋತ್ಸಾಹ ನೀಡುತ್ತಿರುವುದು ಮೆಚ್ಚುಗೆಯ ವಿಷಯ ಎಂದರು.

ವೇದಿಕೆ ಕಾರ್ಯಕ್ರಮದ ನಂತರ ರಂಗ ನಿರ್ದೇಶಕ ನವೀನ್ ಭೂಮಿ ನಿರ್ದೇಶನದ, ಡಾ.ಎಂ.ಭೈರೇಗೌಡ ರಚಿತ ಸಾವಿತ್ರಿಬಾಯಿ ಫುಲೆಯವರ ಅಕ್ಷರಯಾನ ಬಿಂಬಿಸುವ 'ಸರಸತಿ ಯಾಗಲೊಲ್ಲೆ' ನಾಟಕ ಪ್ರದರ್ಶನಗೊಂಡಿತು.

ಜ.1ರಂದು ಸಾಣೆಹಳ್ಳಿ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ರಚಿತ, ಜಗದೀಶ್ ಆರ್. ಜಾಣಿ ನಿರ್ದೇಶನದ 'ಮೋಳಿಗೆ ಮಾರಯ್ಯ' ನಾಟಕ ಪ್ರದರ್ಶನಗೊಳ್ಳಲಿದೆ. ಜ.3ರಂದು ಭೀಮೇಶ್ ಹೆಚ್.ಎನ್.ದಾವಣಗೆರೆ ನಿರ್ದೇಶನದ ವಿ.ಎನ್.ಅಶ್ವತ್ ರಚನೆಯ ಶ್ರೀಕೃಷ್ಣ ಸಂಧಾನ' ನಗೆ ನಾಟಕ ಪ್ರದರ್ಶನಗೊಳ್ಳಲಿದೆ.

ದೆಹಲಿಯಲ್ಲಿ ಜಗಜಿತ್ ಸಿಂಗ್ ದಲ್ಲೇವಾಲ್ ಹೋರಾಟ ಬೆಂಬಲಿಸಿ ಮೈಸೂರಲ್ಲಿ ರೈತರ ಪಂಜಿನ ಮೆರವಣಿಗೆ



ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೇವಾಲ್ ಅವರ ಹೋರಾಟವನ್ನು ಬೆಂಬಲಿಸಿ ಮೈಸೂರಿನಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ಪಂಜಿನ ಮೆರವಣಿಗೆ ನಡೆಸಲಾಯಿತು.

ಮೈಸೂರು, ಡಿ.31(ಎಸ್‌ಬಿಡಿ)– ಕನಿಷ್ಠ ಬೆಂಬಲ ಬೆಲೆ(ಎಂಎಸ್‌ಪಿ)ಗೆ ಕಾನೂನು ಖಾತ್ರಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನವದೆಹಲಿಯಲ್ಲಿ ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೇವಾಲ್ ನೇತೃತ್ವದಲ್ಲಿ ನಡೆಯುತ್ತಿರುವ ಹೋರಾಟವನ್ನು ಬೆಂಬಲಿಸಿ ಮೈಸೂರಿನಲ್ಲಿ ಮಂಗಳವಾರ ರಾಜ್ಯ ಕಬ್ಬು ಬೆಳೆಗಾರರ ಸಂಘದ ಮೈಸೂರು ಜಿಲ್ಲಾ ಘಟಕದಿಂದ ಪಂಜಿನ ಮೆರವಣಿಗೆ ನಡೆಸಲಾಯಿತು.

ನಗರದ ಗನ್‌ಹೌಸ್ ವೃತ್ತದಿಂದ ಸಂಸ್ಕೃತ ಪಾಠಶಾಲೆ ಸಿಗ್ನಲ್, ಸಯ್ಯಾಜಿರಾವ್ ರಸ್ತೆ ಮೂಲಕ ಕಾಡಾ ಕಚೇರಿ ಜಂಕ್ಷನ್ ವರೆಗೆ ಪಂಜಿನ ಮೆರವಣಿಗೆ ನಡೆಸಿದ ರೈತರು, ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯೇತರ)ದ ಜಗಜಿತ್ ಸಿಂಗ್ ದಲ್ಲೇವಾಲ್ ಅವರು ಎಂಎಸ್‌ಪಿಗೆ ಕಾನೂನು ಖಾತ್ರಿ, ದೇಶದ ರೈತರ ಸಂಪೂರ್ಣ ಸಾಲ ಮನ್ನಾ, 60 ವರ್ಷ ತುಂಬಿದ ರೈತರಿಗೆ ಮಾಸಿಕ ಕನಿಷ್ಠ 10 ಸಾವಿರ ಪೆನ್ಷನ್, ಪ್ರಧಾನ ಮಂತ್ರಿ ಫಸಲ್ ಬೀಮಾ ಬೆಳೆ ವಿಮೆ ನೀತಿ ಬದಲಾವಣೆ, ಕೃಷಿ ಸಾಲಕ್ಕೆ ಸಿಬಿಲ್ ಸ್ಕೋರ್ ಮಾನದಂಡ ರದ್ದು ಸೇರಿದಂತೆ ಹಲವು ರೈತಪರ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ದೆಹಲಿ ಗಡಿಯಲ್ಲಿ ನಡೆಸುತ್ತಿರುವ ಉಪವಾಸ ಸತ್ಯಾಗ್ರಹ ಹೋರಾಟಕ್ಕೆ ಕಬ್ಬು ಬೆಳೆಗಾರರ ಸಂಘದ ಸಂಪೂರ್ಣ ಬೆಂಬಲ ವಿದೆ ಎಂದು ಘೋಷಣೆ ಮೊಳಗಿಸಿದರು.


ಪಂಜಾಬ್–ಹರಿಯಾಣದ ಗಡಿಯಲ್ಲಿ 34 ದಿನಗಳಿಂದ ನಿರಂತರ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದರೂ ಕೇಂದ್ರ ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ. ಹೋರಾಟದ ಭಾಗವಾಗಿ ದೇಶಾದ್ಯಂತ ಇಂದು ಪಂಜಿನ ಮೆರವಣಿಗೆ ಹೋರಾಟಕ್ಕೆ ಕರೆ ನೀಡಲಾಗಿತ್ತು ಉಪವಾಸ ಸತ್ಯಾಗ್ರಹ ಪರಿಣಾಮದಿಂದ ಅನಾರೋಗ್ಯಕ್ಕೆ ತುತ್ತಾಗಿರುವ ಜಗಜಿತ್ ಸಿಂಗ್ ಅವರು ಶೀಘ್ರ ಗುಣ ಮುಖರಾಗಲಿ, ಅವರ ಹೋರಾಟಕ್ಕೆ ಜಯವಾಗಲಿ ಎಂದು ಎಲ್ಲೆಡೆ ಪಂಜಿನ ಮೆರವಣಿಗೆ ನಡೆಸಲಾಗಿದೆ ಎಂದು ರೈತ ಮುಖಂಡರು ತಿಳಿಸಿದರು.

ಸರ್ಕಾರದ ಪರ ವಕೀಲರಿಗೆ ಎಚ್ಚರಿಕೆ ನೀಡಿದ್ದ ಸುಪ್ರೀಂಕೋರ್ಟ್, ಜಗಜಿತ್ ಸಿಂಗ್ ಅವರನ್ನು ಕೂಡಲೇ ಆಸ್ಪತ್ರೆಗೆ ದಾಖಲಿಸಿ, ತುರ್ತು ಚಿಕಿತ್ಸೆ ಕೊಡಿಸಬೇಕು ಎಂದು ಪಂಜಾಬ್ ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಪೊಲೀಸ್ ಮಹಾ ನಿರ್ದೇಶಕರಿಗೆ ಸೂಚನೆ ನೀಡಿತ್ತು. ನ್ಯಾಯಾಲಯ ಎಚ್ಚರಿಕೆ ನೀಡುವ ವರೆಗೂ ಕೇಂದ್ರ ಸರ್ಕಾರ ಎಚ್ಚೆತ್ತುಕೊಳ್ಳಲಿಲ್ಲ. ಪ್ರಧಾನಿ ನರೇಂದ್ರ ಮೋದಿ ಅವರಿಗೆ ರೈತರ ನೋವು ತಿಳಿಯುತ್ತಿಲ್ಲ. ನಮ್ಮ ರೈತರು ಸಾಲ ಮಾಡಿ ಬೆಳೆದ ಅನ್ನವನ್ನು ಬೇರೆ ದೇಶಗಳಿಗೆ ದಾನ ಮಾಡುವ ಜೊತೆಗೆ ಇಲ್ಲಿನ ರೈತರ ಸಮಸ್ಯೆಗಳಿಗೂ ಸ್ಪಂದಿಸಬೇಕು. ಇಲ್ಲವಾದಲ್ಲಿ ಹೋರಾಟ ತೀವ್ರಗೊಳ್ಳಲಿದೆ ಎಂದು ಎಚ್ಚರಿಸಿದರು.

ಪ್ರತಿಭಟನಾ ಮೆರವಣಿಗೆಯಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬರಡನಪುರ ನಾಗರಾಜ್, ಜಿಲ್ಲಾ ಕಾರ್ಯಾಧ್ಯಕ್ಷ ಕಿರಗಸೂರು ಶಂಕರ್, ಜಿಲ್ಲಾ ಉಪಾಧ್ಯಕ್ಷರಾದ ಮಾರ್ಬಳ್ಳಿ ನೀಲಕಂಠಪ್ಪ, ಪರಶಿವಮೂರ್ತಿ, ತಾಲೂಕು ಅಧ್ಯಕ್ಷ ಲಕ್ಷ್ಮೀಪುರ ವೆಂಕಟೇಶ್, ಕುರುಬೂರು ಸಿದ್ದೇಶ್, ವಾಜಮಂಗಲ ಮಾದೇವ್ತು, ಕಮಲಮ್ಮ ವರಕೂಡು ನಾಗೇಶ್, ಹಂಪಾಪುರ ರಾಜೇಶ್, ಧನಗಳ್ಳಿ ಕೆಂಡಗಣ್ಣ ಸ್ವಾಮಿ, ಕುರುಬೂರು ಪ್ರದೀಪ್, ಕೆ.ಜಿ.ಗುರುಸ್ವಾಮಿ, ಕೂಡನಹಳ್ಳಿ ಪ್ರಕಾಶ್, ಬನ್ನಳ್ಳಿ ಹುಂಡಿ ರಾಜೇಂದ್ರ, ವಾಜಮಂಗಲ ನಾಗೇಂದ್ರ, ಮೆಡಿಕಲ್ ಮಹೇಶ್, ಕೋಟೆ ಸುನಿಲ್ ಮತ್ತಿತರರು ಪಾಲ್ಗೊಂಡಿದ್ದರು.

ಕೋಟೆ ಬಳಿಯ ತಾರಕ ಹಿನ್ನೀರಿನಲ್ಲಿ ಮೋಜು ಮಸ್ತಿ

ಚೆಲ್ಲಾಡಿದ ಮದ್ಯದ ಬಾಟಲ್‌ಗಳು



ಚೆಲ್ಲಾಪಿಲ್ಲಿಯಾಗಿ ಬಿದ್ದಿರುವ ಮದ್ಯದ ಬಾಟಲಿಗಳು

ಮೈಸೂರು, ಡಿ.31(ಬಿಎಲ್‌ಯು)– ಹೊಸ ವರ್ಷಾಚರಣೆ ಸಂದರ್ಭದಲ್ಲಿ ಸಿಲಿಕಾನ್ ಸಿಟಿ ಬೆಂಗಳೂರು ಹಾಗೂ ಇತರೆ ಕಡೆಯಿಂದ ಬಂದ ಜನರು ಕರ್ನಾಟಕ ಮತ್ತು ಕೇರಳದ ಗಡಿಭಾಗದ ಹೆಚ್.ಡಿ. ಕೋಟೆ ಬಳಿಯ ತಾರಕ ಜಲಾಶಯದ ಹಿನ್ನೀರಿನಲ್ಲಿ ಮೋಜು ಮಸ್ತಿಯಲ್ಲಿ ತೊಡಗಿದ್ದು, ಮದ್ಯ ಸೇವಿಸಿ, ಬಾಟಲ್‌ಗಳನ್ನು ಅಲ್ಲಲ್ಲಿ ಬೀಸಾಡಿ ವಿಕೃತಿ ಮೆರೆದಿದ್ದಾರೆ.

ಹಸಿರು ವನದ ಪ್ರಕೃತಿ ಸೌಂದರ್ಯ ಸವಿಯಲು ಬೆಂಗಳೂರು ಜನರು ನಾಗರಹೊಳೆ ಹಾಗೂ ಬಂಡೀಪುರ ಅಭಯಾರಣ್ಯಕ್ಕೆ ಲಗ್ಗೆ ಇಟ್ಟಿದ್ದು, ಕಂಠ ಪೂರ್ತಿ ಕುಡಿದು ಮಸ್ತ್ ಮಜಾ ಮಾಡಲು ತಾರಕ ಜಲಾಶಯದ ಹಿನ್ನೀರು ಜಾಗ ಆಯ್ಕೆ ಮಾಡಿಕೊಂಡಿದ್ದಾರೆ.

ಕಾರಿನ ಸೌಂಡ್ ಸಿಸ್ಟಂನಲ್ಲಿ ಮ್ಯೂಜಿಕ್ ಹಾಕಿಕೊಂಡು ಯುವಕ–ಯುವತಿಯರು ಕುಣಿದು ಕುಪ್ಪಳಿಸಿದ್ದಾರೆ. ಮದ್ಯಪಾನ ಮಾಡಿದ ನಂತರ ಕುಡಿದ ನಶೆಯಲ್ಲಿ ಖಾಲಿ ಬಾಟಲ್‌ಗಳನ್ನು ಒಡೆದು ಹಾಕಿ ಪುಂಡಾಟ ಮೆರೆದಿದ್ದಾರೆ.

ರಾಷ್ಟ್ರೀಯ ಹುಲಿ ಯೋಜನೆಯ ಸೂಕ್ಷ್ಮ ಪ್ರದೇಶದಲ್ಲಿ ಈಗ ರಾಶಿಗಟ್ಟಲೆ ಮದ್ಯದ ಬಾಟಲ್‌ಗಳು ಬಿದ್ದಿವೆ. ಪಾರ್ಟಿ ಮಾಡಿದವರು ಮದ್ಯದ ಬಾಟಲ್‌ಗಳನ್ನು ನದಿ ನೀರಿಗೆ ಬೀಸಾಡಿದ್ದಾರೆ.

ಕಬಿನಿ ಹಿನ್ನೀರಿನಲ್ಲಿಯೂ ರಾಜಾರೋಷವಾಗಿ ನಶೆ ಪಾರ್ಟಿಗಳನ್ನು ಮಾಡುತ್ತಿದ್ದು, ಪೊಲೀಸರು, ಅರಣ್ಯ ಇಲಾಖೆಯವರು ಇದಕ್ಕೆ ಕಡಿವಾಣ ಹಾಕದೆ ಕಣ್ಮುಚ್ಚಿ ಕುಳಿತಿದ್ದಾರೆ.

ಮದ್ಯದ ಬಾಟಲ್ ಒಡೆದು ನದಿ ದಡದಲ್ಲಿ ಬಿಸಾಡಲಾಗಿದೆ. ಇದರಿಂದ ನೀರು ಕುಡಿಯಲು ಬರುವ ಹುಲಿ, ಆನೆ, ಚಿರತೆ, ಜಿಂಕೆ ಇತರೆ ಪ್ರಾಣಿಗಳ ಕಾಲಿಗೆ ಗಾಜಿನ ಚೂರು ಚುಚ್ಚಿಕೊಂಡು ಅವುಗಳಿಗೆ ಕಂಟಕವಾಗಲಿದೆ ಎಂಬ ಕನಿಷ್ಠ ಜ್ಞಾನ ಇಲ್ಲದೆ ವಿಕೃತಿ ಮೆರೆದಿದ್ದಾರೆ.

ಕಂಡಲ್ಲಿ ಗುಂಡು ಎಂಬಂತೆ ಕರ್ನಾಟಕದಲ್ಲಿ ಕಣ್ಣೆತ್ತಿ ನೋಡಿದ ಕಡೆಯಲ್ಲೆಲ್ಲಾ ಬಾರ್‌ಗಳು ಸಿಗುತ್ತವೆ. ಆದರೆ ಕೇರಳದಲ್ಲಿ ಅವುಗಳಿಗೆ ಬ್ರೇಕ್ ಬಿದ್ದಿದೆ. ಹಾಗಾಗಿ ಕೇರಳದ ಜನರು ಕೂಡ ಇಲ್ಲಿಗೆ ಬಂದು ಪಾರ್ಟಿ ಮಾಡುತ್ತಿದ್ದಾರೆ.

ಗುತ್ತಿಗೆದಾರ ಆತ್ಮಹತ್ಯೆ ಪ್ರಕರಣ

ಸಾಕ್ಷಿಯೇ ಇಲ್ಲದೆ ಪ್ರಿಯಾಂಕ್ ಖರ್ಗೆಯನ್ನು ಬಿಜೆಪಿ ಟಾರ್ಗೆಟ್ ಮಾಡುತ್ತಿದೆ: ಜಿ. ಪರಮೇಶ್ವರ

ಬೆಂಗಳೂರು: ಕಳೆದ ವಾರ ಬೀದರ್‌ನಲ್ಲಿ ನಡೆದ ಗುತ್ತಿಗೆದಾರನ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ರಾಜೀನಾಮೆಗೆ ಒತ್ತಾಯಿಸುತ್ತಿರುವ ತಮ್ಮ ಸಂಪುಟ ಸಹೋದ್ಯೋಗಿ ಪ್ರಿಯಾಂಕ್ ಖರ್ಗೆ ಅವರನ್ನು ಗೃಹ ಸಚಿವ ಜಿ ಪರಮೇಶ್ವರ ಸಮರ್ಥಿಸಿಕೊಂಡಿದ್ದು, ಸಿಐಡಿ ತನಿಖೆಯಿಂದ ಸತ್ಯ ಹೊರಬೀಳಲಿದೆ ಎಂದು ಮಂಗಳವಾರ ಹೇಳಿದ್ದಾರೆ.

ಗುತ್ತಿಗೆದಾರರು ಪ್ರಿಯಾಂಕ್ ಖರ್ಗೆ ಅವರ ಆಪ್ತರೊಬ್ಬರ ವಿರುದ್ಧ ಆರೋಪ ಮಾಡಿರುವ ಏಳು ಪುಟಗಳ ಡೆತ್ ನೋಟ್ ದೊರಕಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೂಡಲೇ ಪ್ರಿಯಾಂಕ್ ಖರ್ಗೆ ಅವರ ರಾಜೀನಾಮೆ ಪಡೆಯಬೇಕು ಎಂದು ಆಗ್ರಹಿಸಿರುವ ಬಿಜೆಪಿ, ಜನವರಿ 4ರೊಳಗೆ ಪ್ರಕರಣವನ್ನು ಸಿಬಿಐಗೆ ವಹಿಸಬೇಕು. ಇಲ್ಲವಾದರೆ, ಕಲಬುರಗಿಯಲ್ಲಿ ಸಚಿವರ ನಿವಾಸಕ್ಕೆ ಮುತ್ತಿಗೆ ಹಾಕುವುದಾಗಿ ಎಚ್ಚರಿಕೆ ನೀಡಿದೆ.

'ಗುತ್ತಿಗೆದಾರನ ಆತ್ಮಹತ್ಯೆ ಪ್ರಕರಣದಲ್ಲಿ ನನ್ನ ಪಾತ್ರವಿಲ್ಲ, ಇದಕ್ಕೂ ನನಗೂ ಯಾವುದೇ ಸಂಬಂಧವಿಲ್ಲ. ಡೆತ್ ನೋಟ್‌ನಲ್ಲಿ ತಮ್ಮ ಹೆಸರಿಲ್ಲ ಎಂದು ಸ್ವತಃ ಪ್ರಿಯಾಂಕ್ ಖರ್ಗೆ ಸ್ಪಷ್ಟಪಡಿಸಿದ್ದಾರೆ. ಹೀಗಿದ್ದರೂ ಬಿಜೆಪಿಯವರು ಅವರನ್ನು ಸಿಲುಕಿಸಲು ಪ್ರಯತ್ನಿಸುತ್ತಿದ್ದಾರೆ. ಪ್ರಿಯಾಂಕ್ ಖರ್ಗೆ ಅವರು ನೇರವಾಗಿ ಭಾಗಿಯಾಗಿದ್ದಾರೆ ಎಂಬುದಕ್ಕೆ ಯಾವುದೇ ಪುರಾವೆ ಇಲ್ಲ. ಯಾವುದೇ ಸಾಕ್ಷ್ಯವಿಲ್ಲದೆ ಅನಗತ್ಯವಾಗಿ ಅವರ ಮೇಲೆ ಆರೋಪ ಮಾಡುವುದು ಸರಿಯಲ್ಲ' ಎಂದು ಪರಮೇಶ್ವರ ಅವರು ಪ್ರತಿಕ್ರಿಯಿಸಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಷ್ಟ್ರೀಯ ಪಕ್ಷವಾಗಿದ್ದು, ಈ ಮಟ್ಟಕ್ಕೆ ಇಳಿಯಬಾರದು. ಈ ಹಿಂದೆ ತಾವೂ ಸಹ ಕೇಂದ್ರದಲ್ಲಿ ಸರ್ಕಾರ ನಡೆಸಿದ್ದೇವೆ. ಸರ್ಕಾರ ನಡೆಸುವಾಗ ನಾವೆಲ್ಲರೂ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸುತ್ತೇವೆ ಪ್ರಿಯಾಂಕ್ ಖರ್ಗೆ ಕೂಡ ಜವಾಬ್ದಾರಿಯಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಅವರ ವಿರುದ್ಧ ಅನಗತ್ಯ ಆರೋಪಗಳನ್ನು ಮಾಡಲಾಗುತ್ತಿದೆ. ಯಾವುದೇ ಪೂರಕ ಸಾಕ್ಷ್ಯಗಳಿದ್ದರೆ ನಾವು ಸ್ವೀಕರಿಸುತ್ತೇವೆ ಎಂದು ಅವರು ಹೇಳಿದರು.

ಆರೋಪಿ ರಾಜು ಕಪನೂರನನ್ನು ಪೊಲೀಸರು ಇನ್ನೂ ಬಂಧಿಸದಿರುವ ಕುರಿತು ಕೇಳಿದ ಪ್ರಶ್ನೆಗೆ, ಪ್ರಕರಣವನ್ನು ಸಿಐಡಿಗೆ ಹಸ್ತಾಂತರಿಸಲಾಗಿದೆ. ಅನಾವಶ್ಯಕವಾಗಿ ಆರೋಪ ಮಾಡುವುದು ಸರಿಯಲ್ಲ, ಸಿಐಡಿ ತನಿಖೆಯಾಗಲಿ, ಸತ್ಯಾಂಶ ಹೊರಬೀಳಲಿದೆ. ಹಣಕಾಸು ವ್ಯವಹಾರ ನಡೆದಿದೆಯೇ ಅಥವಾ ಇತರೆ ವಿಷಯಗಳು ವಿಚಾರಣೆಯಿಂದ ಗೊತ್ತಾಗಲಿದೆ ಎಂದರು.

ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದ ಪರಮೇಶ್ವರ ಅವರು, ಪ್ರಿಯಾಂಕ್ ಖರ್ಗೆ ಅವರು ವಿಧಾನಸಭೆಯ ಒಳಗೆ ಮತ್ತು ಹೊರಗೆ ಹಲವಾರು ಸಂದರ್ಭಗಳಲ್ಲಿ ಬಿಜೆಪಿ ಮತ್ತು ಜೆಡಿಎಸ್‌ನ ತಪ್ಪುಗಳನ್ನು ಸಾರ್ವಜನಿಕವಾಗಿ ಎತ್ತಿ ತೋರಿಸಿದ್ದಾರೆ. ಅದು ಅವರಿಗೆ ಇಷ್ಟವಾಗುವುದಿಲ್ಲ. ಹೀಗಾಗಿ, ಅವರನ್ನು ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಹೇಳಿದರು.


ರೇಣುಕಾಸ್ವಾಮಿ ಹತ್ಯೆ ಪ್ರಕರಣದ ಆರೋಪಿಗಳಾದ ದರ್ಶನ್ ತೂಗುದೀಪ ಹಾಗೂ ಇತರ ಆರೋಪಿಗಳಿಗೆ ನೀಡಿರುವ ಜಾಮೀನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸುವ ರಾಜ್ಯ ಸರ್ಕಾರದ ನಿರ್ಧಾರದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, 'ಈ ಬಗ್ಗೆ ಸರ್ಕಾರದ ಮಟ್ಟದಲ್ಲಿ ತೀರ್ಮಾನಿಸಲಾಗಿದೆ. ನಿನ್ನೆ ಆದೇಶ ಹೊರಡಿಸಲಾಗಿದೆ' ಎಂದರು.

ನಾನು ಬಿಜೆಪಿ ಸಿದ್ಧಾಂತಕ್ಕೆ ವಿರುದ್ಧ; ಆ ಕಾರಣಕ್ಕೇ ನಾನು ಟಾರ್ಗೆಟ್: ಪ್ರಿಯಾಂಕ್ ಖರ್ಗೆ ಆರೋಪ

ಬೆಂಗಳೂರು: 26 ವರ್ಷದ ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಮಾಡುತ್ತಿರುವ ಆರೋಪಗಳನ್ನು ಸಚಿವ ಪ್ರಿಯಾಂಕ್ ಖರ್ಗೆ ಅವರು ಮಂಗಳವಾರ ತಳ್ಳಿಹಾಕಿದ್ದಾರೆ. ಅದರ ಸಿದ್ಧಾಂತಕ್ಕೆ ವಿರುದ್ಧವಾಗಿರುವುದರಿಂದ ಬಿಜೆಪಿ ತನ್ನನ್ನು ಗುರಿಯಾಗಿಸಿಕೊಂಡಿದೆ ಎಂದು ಹೇಳಿದ್ದಾರೆ.

ಸುದ್ದಿಸಂಸ್ಥೆ ಜೊತೆ ಮಾತನಾಡಿದ ಅವರು, ಆತ್ಮಹತ್ಯೆಗೂ ಸರ್ಕಾರಕ್ಕೂ ಯಾವುದೇ ಸಂಬಂಧವಿಲ್ಲ. ಸಂಬಂಧವಿದೆ ಎಂಬುದನ್ನು ಸಾಬೀತುಪಡಿಸುವಲ್ಲಿ ಬಿಜೆಪಿ ವಿಫಲವಾಗಿದೆ ಎಂದರು.

ಬಿಜೆಪಿಯು ಎಲ್ಲವನ್ನೂ ಮಾಡಬಹುದು. ಆದರೆ, ಈ ಆತ್ಮಹತ್ಯೆಯು ಸರ್ಕಾರಕ್ಕೂ ಮತ್ತು ನನಗೂ ಹೇಗೆ ಸಂಬಂಧಿಸಿದೆ ಎಂಬುದನ್ನು ಕರ್ನಾಟಕದ ಜನರ ಮುಂದಿಡುವಲ್ಲಿ ಅವರಿಗೆ ಇನ್ನೂ ಸಾಧ್ಯವಾಗುತ್ತಿಲ್ಲ. ಈ ವಿಚಾರದ ಮೂಲಕ ಅವರು ತಮ್ಮ ನಾಯಕತ್ವವನ್ನು ಸ್ಥಾಪಿಸಿಕೊಳ್ಳಲು ಯತ್ನಿಸುತ್ತಿದ್ದಾರೆ. ಬಿಜೆಪಿ ಈಗ ಒಂದು ಬಣ–ಪ್ರೇರಿತ ಪಕ್ಷವಾಗಿದೆ. ಕರ್ನಾಟಕದಲ್ಲಿ ನಾಯಕತ್ವದ ಕಿತ್ತಾಟ ನಡೆಯುತ್ತಲೇ ಇದೆ. ಅವರು ಎಂದಿನಂತೆ ಈ ಸಾವಿನಲ್ಲಿ ರಾಜಕೀಯ ಮಾಡುತ್ತಿದ್ದಾರೆ ಎಂದು ದೂರಿದರು.



ಬಿಜೆಪಿಯವರು ನನ್ನನ್ನು ಗುರಿಯಾಗಿಸುತ್ತಿದ್ದಾರೆ. ಏಕೆಂದರೆ, ನಾನು ಅವರ ಸಿದ್ಧಾಂತಕ್ಕೆ ವಿರುದ್ಧವಾಗಿದ್ದೇನೆ. ನಾನು ಆರ್‌ಎಸ್‌ಎಸ್ ಮತ್ತು ಮನುಸ್ಮೃತಿಯ ವಿರುದ್ಧ ಇದ್ದೇನೆ ಮತ್ತು ನಾನು ಅದರ ಬಗ್ಗೆ ದನಿಯೆತ್ತಿದ್ದೇನೆ. ಅಲ್ಲದೆ, ನಾವು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆದರ್ಶಗಳನ್ನು ಮತ್ತು ಸಂವಿಧಾನವನ್ನು ಅನುಸರಿಸುತ್ತೇವೆ. ಆದ್ದರಿಂದ ಅವರು ಸಹಜವಾಗಿ ಇಂತಹ ವಿಚಾರಗಳಲ್ಲಿ ಸಿಲುಕಿಸಲು ಪ್ರಯತ್ನಿಸುತ್ತಾರೆ. ಸಂತ್ರಸ್ತರಲ್ಲಿ ಯಾರಿಗಾದರೂ ನ್ಯಾಯ ದೊರಕಿಸಿ ಕೊಡಲು ಬಿಜೆಪಿಗೆ ನಿಜವಾಗಿಯೂ ಆಸಕ್ತಿ ಇದ್ದರೆ, ಮೊದಲು ವಿಜಯೇಂದ್ರ ತನ್ನ ತಂದೆಯ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣದಲ್ಲಿ ತಾವು ರಾಜೀನಾಮೆ ನೀಡಲಿ ಎಂದು ಸವಾಲೆಸೆದರು.

ಬೀದರ್ ಗುತ್ತಿಗೆದಾರನ ಆತ್ಮಹತ್ಯೆ ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಮತ್ತು ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡಬೇಕು ಎಂದು ಕರ್ನಾಟಕ ಬಿಜೆಪಿ ಮುಖ್ಯಸ್ಥ ಬಿವೈ ವಿಜಯೇಂದ್ರ ಹೇಳಿಕೆ ನೀಡಿದ ನಂತರ ಸಚಿವರು ತಿರುಗೇಟು ನೀಡಿದ್ದಾರೆ.

ಪ್ರಿಯಾಂಕ್ ಖರ್ಗೆ ಅವರ ಆಪ್ತ ರಾಜು ಕಾಪನೂರ ಅವರ ಕಿರುಕುಳ ಮತ್ತು ಬೆದರಿಕೆಯಿಂದ ಬೀದರ್‌ನ ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸಚಿನ್ ಈ ಬಗ್ಗೆ ಡೆತ್ ನೋಟ್‌ನಲ್ಲಿ ವಿಸ್ತೃತವಾಗಿ ಹೇಳಿದ್ದಾರೆ ಎಂದು ವಿಜಯೇಂದ್ರ ಅವರು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ತಂಬಾಕು ಬೆಳೆಗಾರರಿಗೆ ಕನಿಷ್ಠ ಬೆಂಬಲ ಬೆಲೆ ಕೊಡಿಸಲು

ರೈತರ ನಿಯೋಗ ದೆಹಲಿ ಪ್ರವಾಸ ಫಲ ನೀಡಿದೆ

ಕಟ್ಟೆಮಳಲವಾಡಿ ತಂಬಾಕು ಮಾರುಕಟ್ಟೆಯಲ್ಲಿ ಶಾಸಕ ಜಿ.ಡಿ.ಹರೀಶ್‌ಗೌಡ ಮಾಹಿತಿ

ಹುಣಸೂರು, ಡಿ.31– ಈ ಬಾರಿ ಉತ್ತಮ ಬೆಲೆ ಸಿಗದೆ ಕಂಗಾಲಾಗಿದ್ದ ತಂಬಾಕು ಬೆಳೆಗಾರರಿಗೆ ಕನಿಷ್ಠ ಬೆಂಬಲ ಬೆಲೆ ಕೊಡಿಸಲು ರೈತರ ನಿಯೋಗದೊಂದಿಗೆ ದೆಹಲಿ ಪ್ರವಾಸ ಕೈಗೊಂಡು ವಾಣಿಜ್ಯ ಸಚಿವ ಪೀಯೂಷ್ ಗೋಯಲ್ ಅವರನ್ನು ಭೇಟಿ ಮಾಡಿದ್ದು ಫಲ ನೀಡಿದೆ ಎಂದು ಶಾಸಕ ಜಿ.ಡಿ. ಹರೀಶ್‌ಗೌಡ ತಿಳಿಸಿದರು.

ತಾಲೂಕಿನ ಕಟ್ಟೆಮಳಲವಾಡಿ ತಂಬಾಕು ಹರಾಜು ಮಾರುಕಟ್ಟೆ ಪ್ಲಾಟ್ ಫಾರಂ 3ಕ್ಕೆ ಭೇಟಿ ನೀಡಿ ತಂಬಾಕು ಪರಿಶೀಲಿಸಿ ಮಾತನಾಡಿದ ಅವರು, ರೈತರು ಶ್ರಮಪಟ್ಟು ದುಡಿದ ತಂಬಾಕಿಗೆ ಉತ್ತಮ ಬೆಲೆ ಸಿಗದಿದ್ದರೆ ಅವರ ಗತಿಯೇನು. ಹೀಗಾಗಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಮತ್ತು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ನೇತೃತ್ವದಲ್ಲಿ ರೈತರ ನಿಯೋಗ ವಾಣಿಜ್ಯ ಸಚಿವರನ್ನು ಭೇಟಿ ಮಾಡಿದ್ದರಿಂದ ಪ್ರಸ್ತುತ 308 ರೂ. ಬೆಲೆ ಸಿಕ್ಕಿದೆ ಎಂದರು.



ಕಟ್ಟೆಮಳಲವಾಡಿ ತಂಬಾಕು ಮಾರುಕಟ್ಟೆಗೆ ಶಾಸಕ ಜಿ.ಡಿ.ಹರೀಶ್‌ಗೌಡ ಭೇಟಿ ನೀಡಿ ಪರಿಶೀಲಿಸಿದರು.

ರೈತರ ವಿಚಾರದಲ್ಲಿ ನಾನು ಎಂದಿಗೂ ರಾಜಕೀಯ ಮಾಡುವುದಿಲ್ಲ. ತಂಬಾಕು ಬೆಳೆಗಾರರಿಗೆ ಉತ್ತಮ ಬೆಲೆ ಕೊಡಿಸುವ ನಿಟ್ಟಿನಲ್ಲಿ ವಾಣಿಜ್ಯ ಸಚಿವರೊಂದಿಗೆ ಹಲವು ಸಮಸ್ಯೆಗಳನ್ನು ಬಗೆಹರಿಸುವಂತೆ ಚರ್ಚಿಸಿದ್ದೇನೆ. ಅನಧಿಕೃತವಾಗಿ ಬೆಳೆದಿರುವ ಕಾರ್ಡ್‌ದಾರರಿಗೂ ನ್ಯಾಯ ಸಿಗಬೇಕು. ತಂಬಾಕು ಬೆಳೆಗಾರರಿಗೆ ಶಾಶ್ವತ ಪರಿಹಾರ ನೀಡವಲ್ಲಿ ನಮ್ಮ ಹೋರಾಟ ನಿರಂತರ ಎಂದರು.

ವಾಣಿಜ್ಯ ಸಚಿವರು ಈಗಾಗಲೇ ತಿಳಿಸಿರುವಂತೆ ಮುಂದಿನ ವರ್ಷ ಮಾರುಕಟ್ಟೆ ಪ್ರಾರಂಭಕ್ಕೂ ಮುನ್ನ ಹರಾಜು ಮಾರುಕಟ್ಟೆಯಲ್ಲಿ ರೈತರ ಸಭೆ ನಡೆಸಿ, ರೈತರ ಬಹುತೇಕ ಸಮಸ್ಯೆ, ಮಾರುಕಟ್ಟೆಗೆ ವಿದೇಶಿ ಖರೀದಿದಾರರಿಗೆ ಅವಕಾಶ ನೀಡಲು ಚರ್ಚಿಸಿ ಶಾಶ್ವತ ಪರಿಹಾರ ನೀಡಲು ಚಿಂತನೆ ಮಾಡೋಣ ಎಂದಿದ್ದಾರೆ ಎಂದು ತಿಳಿಸಿದರು.

"ಅತಿಯಾದ ಮಳೆಯಿಂದ ಈ ಬಾರಿ ರೈತನ ಬದುಕು ಸಂಕಷ್ಟದಲ್ಲಿದೆ. ಕಳೆದ ಬಾರಿ 295 ರೂ. ಇದ್ದ ತಂಬಾಕು ದರ ಈ ಬಾರಿ 308 ಆಗಿದೆ. ಆದರೆ ಬೆಳೆಗಾರರಿಗೆ 350 ರೂ. ಬೆಲೆ ಸಿಗಬೇಕು. ಇಲ್ಲದಿದ್ದರೆ ಕಳೆದ ಬಾರಿ ಸರ್ಕಾರ ಮಧ್ಯಪ್ರವೇಶ ಮಾಡಿ ರೈತರ ಸಂಕಷ್ಟಕ್ಕೆ ನೆರವಾದಂತೆ ಪ್ರಸ್ತುತ ಸರ್ಕಾರ ಮಧ್ಯಪ್ರವೇಶ ಮಾಡಿ ತಂಬಾಕು ಖರೀದಿ ಮಾಡಲಿ.
- ಜಿ.ಡಿ.ಹರೀಶ್‌ಗೌಡ, ಶಾಸಕ.

ಈ ರೀತಿ ತಂಬಾಕು ದರದಲ್ಲಿ ತಾರತಮ್ಯ ನಡೆದರೆ ಮುಂದಿನ ವಾರದಿಂದ 350 ರಿಂದ 400 ರೂ. ಸಿಗುವ ತನಕ ರೈತರ ಒಗ್ಗೂಡಿ ನಿಯೋಗದೊಂದಿಗೆ ಹೋರಾಟ ಮಾಡೋಣ ಎಂದ ಅವರು ಎಲ್ಲರೂ ಪಕ್ಷಾತೀತವಾಗಿ ಸಹಕರಿಸಬೇಕು ಎಂದರು. ಈ ಸಂದರ್ಭ ದಲಿತ ಮುಖಂಡ ನಾಗರಾಜು ಮಲ್ಲಾಡಿ, ರೈತ ಮುಖಂಡ ಸಿ.ಚಂದ್ರೇಗೌಡ, ಪ್ರಭಾಕರ್, ಮೋದೂರು ಶಿವಣ್ಣ, ತಟ್ಟೆಕೆರೆ ಶ್ರೀನಿವಾಸ್, ನಂಜುಂಡೇಗೌಡ, ಬನ್ನಿಕುಪ್ಪೆ ಕೂಸಪ್ಪ, ಹಿರಿಕ್ಯಾತನಹಳ್ಳಿ ಪುಟ್ಟಣ್ಣ, ಕೆ.ಎಂ.ವಾಡಿ. ದೇವರಾಜು, ಆಂಜನಯ್ಯ, ಪುಟ್ಟರಾಜು, ಅಧಿಕಾರಿಗಳಾದ ಬ್ರಿಜ್ ಭೂಷಣ್, ಮೀನಾ, ಸಿದ್ದರಾಜು ಇತರರಿದ್ದರು.

ತಿ.ನರಸೀಪುರ ಟಿಎಪಿಸಿಎಂಎಸ್ ದಿನದರ್ಶಿಕೆ ಬಿಡುಗಡೆ

ಸಂಘ ಯಶಸ್ವಿಯಾಗಿ ಮುನ್ನಡೆದಿದೆ: ಅಧ್ಯಕ್ಷ ಟಿ.ಪಿ.ಸುಬ್ರಹ್ಮಣ್ಯ



ವ್ಯವಸಾಯೋತ್ಪನ್ನ ಮಾರುಕಟ್ಟೆ ಸಮಿತಿ ಟಿ.ಪಿ.ಸುಬ್ರಹ್ಮಣ್ಯ ಕ್ಯಾಲೆಂಡರ್ ಬಿಡುಗಡೆಗೊಳಿಸಿದರು.

ತಿ.ನರಸೀಪುರ, ಡಿ.31– ತಾಲೂಕು ವ್ಯವಸಾಯೋತ್ಪನ್ನ ಮಾರುಕಟ್ಟೆ ಸಮಿತಿ ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆಯಡಿ ಯಶಸ್ವಿಯಾಗಿ ಮುನ್ನಡೆದಿದೆ ಎಂದು ಸಮಿತಿ ಅಧ್ಯಕ್ಷ ಟಿ.ಪಿ.ಸುಬ್ರಹ್ಮಣ್ಯ ತಿಳಿಸಿದರು.

ಪಟ್ಟಣದ ವ್ಯವಸಾಯೋತ್ಪನ್ನ ಮಾರುಕಟ್ಟೆ ಸಹಕಾರ ಸಂಘದ ಕಚೇರಿಯಲ್ಲಿ 2025ನೇ ಸಾಲಿನ ದಿನದರ್ಶಿಕೆ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಸಂಘದ ಸರ್ವ ಸದಸ್ಯರ ಸಹಕಾರದೊಂದಿಗೆ ಸಹಕಾರ ಸಂಘವು ವರ್ಷದಿಂದ ವರ್ಷಕ್ಕೆ ಉನ್ನತಿ ಸಾಧಿಸುತ್ತಿದ್ದು, ಲಾಭದತ್ತ ಮುನ್ನಡೆಯುತ್ತಿದೆ. ಹಾಗಾಗಿ ಸಂಘದ ಸರ್ವ ಸದಸ್ಯರು ಸಂಘದ ಯಶಸ್ಸಿಗೆ ಪಾಲುದಾರರಾಗಿದ್ದಾರೆ ಎಂದರು.

ಸಂಘದ ಅಭ್ಯುದಯಕ್ಕಾಗಿ ಅಧಿಕಾರ ವಹಿಸಿಕೊಂಡ ವೇಳೆ ನಷ್ಟದಲ್ಲಿದ್ದ ಸಂಘವನ್ನು ಲಾಭದತ್ತ ಕೊಂಡೊಯ್ಯಲು ಸದಸ್ಯರು ನೀಡಿದ ಸಹಕಾರ ಮರೆಯಲಾಗದು. ಮುಂದೆಯೂ ಸರ್ವ ಸದಸ್ಯರಿಂದ ಇಂತಹದ್ದೇ ಸಹಕಾರ ಬಯಸುತ್ತೇನೆ ಎಂದರು.

ಸಂಘದ ಕಾರ್ಯದರ್ಶಿ ಜಿ.ರಘುನಂದನ್, ಉಪಾಧ್ಯಕ್ಷ ಮಲ್ಲಣ್ಣ, ನಿರ್ದೇಶಕರಾದ ರಂಗಸಾಮಿದ್ದ ಟಿ.ವಾಸುದೇವ, ಬಿ.ಎಸ್.ಮಹೇಶ್ ಎಂ.ಎಂ.ಜಯಣ್ಣ, ಎಂ.ಎಸ್.ಬಸವರಾಜು, ವೈ.ಎಸ್. ರಾಮಸ್ವಾಮಿ, ಎಂ.ಕೆ.ಮಹೇಶ್, ಕೆ.ಎಂ. ಸುನೀಲ್, ಡಿ.ಕೋಮಲ, ಎಸ್. ನಿರ್ಮಲ, ಶಿವಲಿಂಗೇಗೌಡ, ಸಿಬ್ಬಂದಿಗಳಾದ ಟಿ.ಜಿ. ಸುಮಿತ್ರ, ಎನ್.ಮಹೇಶ್, ಸಂದೇಶ್, ಶ್ರೀಧರ್ ಹಾಜರಿದ್ದರು.

ಹನುಮ ಜಯಂತಿ ಅಂಗವಾಗಿ ಶೋಭಾಯಾತ್ರೆ

ಹೆಚ್.ಡಿ.ಕೋಟೆ, ಡಿ.31– 7ನೇ ವರ್ಷದ ಹನುಮ ಜಯಂತಿ ಅಂಗವಾಗಿ ಹನುಮ ಸೇವಾ ಸಮಿತಿಯಿಂದ ಶೋಭಾಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿ ಅಧ್ಯಕ್ಷ ಚಂದ್ರಮೌಳೇಶ್ವರ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಹನುಮ ಸೇವಾ ಸಮಿತಿ ಅಧ್ಯಕ್ಷ ಚಂದ್ರಮೌಳೇಶ್ವರ ಮಾತನಾಡಿದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜ.2ರಂದು ಬೆಳಿಗ್ಗೆ ಪಟ್ಟಣದ ಆಂಜನೇಯಸ್ವಾಮಿ ದೇವಾಲಯದ ಬಳಿ ಭಕ್ತರಿಗೆ ಹನುಮ ಮಾಲಾಧಾರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜ.3ರಂದು ಬೆಳಿಗ್ಗೆ 10.30ಕ್ಕೆ ಸರಗೂರಿನ ಮಹದೇವ ಸ್ವಾಮೀಜಿಗಳ ಸಾನಿಧ್ಯದಲ್ಲಿ ಪವನ ಹೋಮ ನಡೆಯಲಿದ್ದು, ಮಧ್ಯಾಹ್ನ 12 ಗಂಟೆಗೆ ನಡೆಯುವ ಧಾರ್ಮಿಕ ಸಭೆಯಲ್ಲಿ ಕರ್ನಾಟಕ ಬ್ಯಾಂಕ್‌ನ ನಿವೃತ್ತ ವ್ಯವಸ್ಥಾಪಕ ಬಿ.ಕೆ.ಜಗದೀಶ್ ಮಾತನಾಡಲಿದ್ದು, ಮಧ್ಯಾಹ್ನ 1.30ಕ್ಕೆ ಪ್ರಸಾದ ವಿತರಣೆ ಮಾಡಲಾಗುವುದು. ಜ.4ರಂದು ಪಟ್ಟಣದ ಗದ್ದಿಗೆ ಸರ್ಕಲ್ ಬಳಿಯ ಭಂಡಾರಿ ಅಮ್ಮನವರ ದೇವಸ್ಥಾನ ಬಳಿ ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಸೋಮೇಶ್ವರನಾಥ ಸ್ವಾಮೀಜಿ, ಶಾಸಕ ಅನಿಲ್ ಚಿಕ್ಕಮಾದು ಹಾಗೂ ಗಣ್ಯರು ಆಂಜನೇಯಸ್ವಾಮಿ ಉತ್ಸವ ಮೂರ್ತಿಗೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡುವ ಮೂಲಕ ಶೋಭಾಯಾತ್ರೆಗೆ ಚಾಲನೆ ನೀಡುವರು. ಬಳಿಕ ಮಂಗಳವಾದ್ಯ, ನಂದಿ ಕಂಬ, ವೀರಗಾಸೆ, ಚಂಡೆ, ಕಂಸಾಳೆ ಸೇರಿದಂತೆ ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಶೋಭಾಯಾತ್ರೆ ಸಾಗಿ ವರದರಾಜಸ್ವಾಮಿ ದೇವಾಲಯ ಬಳಿ ಸಮಾಪ್ತಿಯಾಗಲಿದೆ ಎಂದರು.

ಕಾರ್ಯದರ್ಶಿ ರಾಜು ಮಾತನಾಡಿದರು. ಸುದ್ದಿಗೋಷ್ಠಿಯಲ್ಲಿ ಹನುಮ ಸೇವಾ ಸಮಿತಿ ಮಾಜಿ ಅಧ್ಯಕ್ಷ ಡೈರಿ ಶ್ರೀಕಾಂತ್, ಕಾರ್ಯದರ್ಶಿ ಬಿಡುಗಲು ರಾಜು, ಖಜಾಂಚಿ ಮುತ್ತುರಾಜ್, ನಾಗೇಶ್, ನಂದೀಶ್, ಸುಧಾಕರ್, ಮಹೇಶ್, ಸಂತೋಷ್, ಪ್ರಶಾಂತ್, ಜಯಂತ್, ರೂಪೇಶ್, ಪೂರ್ಣೇಶ್, ಪುರುಷೋತ್ತಮ್, ಸತ್ಯ ಇದ್ದರು.

ಸ್ಕೂಟರ್‌ಗೆ ಸಾರಿಗೆ ಬಸ್ ಡಿಕ್ಕಿ: ವಿದ್ಯಾರ್ಥಿನಿ ಸಾವು

ತಿ.ನರಸೀಪುರ, ಡಿ.31– ಸ್ಕೂಟರ್‌ಗೆ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ ಹೊಡೆದ ಪರಿಣಾಮ ಬಿಇ ವಿದ್ಯಾರ್ಥಿನಿ ಸಾವನ್ನಪ್ಪಿರುವ ಘಟನೆ ಬನ್ನೂರು ಪೊಲೀಸ್ ಠಾಣೆ ವ್ಯಾಪ್ತಿಯ ಚಾಮನಹಳ್ಳಿ ಬಸ್ ನಿಲ್ದಾಣದ ಬಳಿ ಸಂಭವಿಸಿದೆ.



ಬನ್ನೂರು ಟೌನ್ ಹೊರಕೇರಿ ಬೀದಿ ನಿವಾಸಿ ರಾಜೇಗೌಡ ಎಂಬುವರ ಪುತ್ರಿ ಕೀರ್ತನಾ(19) ಸಾವನ್ನಪ್ಪಿದವರು. ಈಕೆ ಕೆ.ಎಂ. ದೊಡ್ಡಿಯ ಭಾರತಿ ಕಾಲೇಜಿನಲ್ಲಿ ಬಿಇ ವ್ಯಾಸಾಂಗ ಮಾಡುತ್ತಿದ್ದು, ಮಂಡ್ಯದಲ್ಲಿ ಲ್ಯಾಬ್ ಪರೀಕ್ಷೆ ಬರೆಯಲು ತನ್ನ ತಂದೆ ರಾಜೇಗೌಡರೊಂದಿಗೆ ಸುಜುಕಿ ಆಕ್ಸಿಸ್ (ಕೆಎ.55, ಇಸಿ.9785) ನಲ್ಲಿ ಬನ್ನೂರು ಬಸ್ ನಿಲ್ದಾಣಕ್ಕೆ ಬಂದಿದ್ದಾಳೆ. ಆದರೆ ಮಂಡ್ಯ ಬಸ್ ಅಷ್ಟರಲ್ಲಾಗಲೇ ಹೊರಟು ಹೋಗಿದ್ದರಿಂದ ತಂದೆ ಸ್ಕೂಟರ್‌ನಲ್ಲೇ ಮಂಡ್ಯಕ್ಕೆ ಕರೆದುಕೊಂಡು ಹೋಗಲು ನಿರ್ಧರಿಸಿ ಮಂಡ್ಯ ಕಡೆ ಹೊರಟ ವೇಳೆ ಅತಿ ವೇಗ ವಾಗಿ, ಅಜಾಗರೂಕತೆಯಿಂದ ಬಸ್ ಚಾಲನೆ ಮಾಡಿಕೊಂಡು ಬಂದ ಕೆಎಸ್‌ಆರ್‌ಟಿಸಿ ಬಸ್ (ಕೆಎ.11, ಎಫ್. 0127) ಚಾಲಕ ಓವರ್ ಟೇಕ್ ಮಾಡುವ ಸಲುವಾಗಿ ಎಡಭಾಗಕ್ಕೆ ಬಸ್ ತಿರುಗಿಸಿದ ಪರಿಣಾಮ ಮುಂದೆ ಹೋಗುತ್ತಿದ್ದ ಸ್ಕೂಟರ್‌ಗೆ ಹಿಂಬದಿಯಿಂದ ಡಿಕ್ಕಿ ಹೊಡೆದಿದ್ದಾನೆ. ಈ ವೇಳೆ ರಾಜೇಗೌಡ ಎಡಭಾಗಕ್ಕೆ ಬಿದ್ದರೆ ಹಿಂಬದಿ ಕುಳಿತಿದ್ದ ಕೀರ್ತನಾ ಬಲಭಾಗಕ್ಕೆ ಬಿದ್ದಿದ್ದು, ಆಕೆಯ ಮೇಲೆ ಬಸ್ ಎಡಭಾಗದ ಚಕ್ರ ಹರಿದು ಸ್ವಲ್ಪ ದೂರ ಎಳೆದೊಯ್ದಿದೆ.

ಈ ವೇಳೆ ತೀವ್ರ ಗಾಯಗೊಂಡ ಕೀರ್ತನಾ ಪ್ರಜ್ಞೆ ತಪ್ಪಿದ್ದಾಳೆ. ಕೂಡಲೇ ಆಕೆಯನ್ನು ಬನ್ನೂರು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಪ್ರಥಮ ಚಿಕಿತ್ಸೆ ಕೊಡಿಸಿ ವೈದ್ಯರ ಸಲಹೆ ಮೇರೆಗೆ ಹೆಚ್ಚಿನ ಚಿಕಿತ್ಸೆಗೆ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾಳೆ. ಈ ಸಂಬಂಧ ಕೀರ್ತನಾಳ ತಂದೆ ರಾಜೇಗೌಡ ಬಸ್ ಚಾಲಕ ಸರ್ದಾರ್ ವಿರುದ್ಧ ಬನ್ನೂರು ಪೊಲೀಸ್ ಠಾಣೆಗೆ ದೂರು ನೀಡಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಎಸ್‌ಐ ಎಂ.ಆರ್.ಸುದರ್ಶನ್ ಮುಂದಿನ ಕ್ರಮ ಕೈಗೊಂಡಿದ್ದಾರೆ.

ಮಾನಸಿಕ, ದೈಹಿಕ ಆರೋಗ್ಯಕ್ಕೆ ಕ್ರೀಡೆ ಸಹಕಾರಿ

ತಿ.ನರಸೀಪುರ ಆರ್.ಸಿ.ಚಾಲೆಂಜರ್ಸ್ ಪ್ರಥಮ, ನಂ.ಗೂಡು ಶ್ರೀರಾಂಪುರ ತಂಡ ದ್ವಿತೀಯ



ವಿಜೇತ ತಂಡಕ್ಕೆ ಬಹುಮಾನ ವಿತರಿಸಲಾಯಿತು.

ನಂಜನಗೂಡು, ಡಿ.31– ಕ್ರೀಡೆ ವ್ಯಕ್ತಿಯಲ್ಲಿ ಶಿಸ್ತು, ಏಕಾಗ್ರತೆ, ಸಾಮಾಜಿಕ ಭಾಗವಹಿಸುವಿಕೆ ಜೊತೆಗೆ ಮಾನಸಿಕ ಮತ್ತು ದೈಹಿಕ ಆರೋಗ್ಯ ಕಾಪಾಡುತ್ತದೆ ಎಂದು ನಗರಸಭಾ ಸದಸ್ಯ ಪ್ರದೀಪ್ ತಿಳಿಸಿದರು.

ನಗರದ ಜೂನಿಯರ್ ಕಾಲೇಜ್ ಮೈದಾನದಲ್ಲಿ ಜೂನಿಯರ್ ಕಾಲೇಜು ಕ್ರಿಕೆಟ್ ಕ್ಲಬ್ ವತಿಯಿಂದ ಏರ್ಪಡಿಸಿದ್ದ ಸಂವಿಧಾನ ಕಪ್ ಕ್ರಿಕೆಟ್ ಲೀಗ್ ಪಂದ್ಯಾವಳಿ ಸಮಾರೋಪದಲ್ಲಿ ವಿಜೇತ ತಂಡಗಳಿಗೆ ಬಹುಮಾನ ವಿತರಿಸಿ ಮಾತನಾಡಿದ ಅವರು, ನಂಜನಗೂಡು ಧಾರ್ಮಿಕ ಇತಿಹಾಸದ ಜೊತೆಗೆ ಕ್ರೀಡೆಯಲ್ಲಿ ರಾಜ್ಯ ಮಟ್ಟದಲ್ಲಿ ಪ್ರಖ್ಯಾತಿ ಹೊಂದಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಕ್ರೀಡಾಪಟುಗಳ ಕೊರತೆ ಎದ್ದು ಕಾಣುತ್ತಿದೆ. ಸ್ಥಳೀಯ ಕ್ರೀಡಾಪಟುಗಳ ಪ್ರತಿಭೆಗೆ ವೇದಿಕೆ ಕಲ್ಪಿಸುವ ಸಲುವಾಗಿ ಕ್ರಿಕೆಟ್ ಲೀಗ್ ಪಂದ್ಯಾವಳಿ ಆಯೋಜಿಸಿರುವುದು ಸಂತಸ ತಂದಿದೆ. ಇದೇ ರೀತಿ ಎಲ್ಲಾ ಕ್ರೀಡೆಗಳ ಪಂದ್ಯಾವಳಿ ಆಯೋಜನೆ ಮಾಡುವ ಮೂಲಕ ನಂಜನಗೂಡಿನ ಕ್ರೀಡಾ ಇತಿಹಾಸ ಮರುಕಳಿಸುವಂತಾಗಲಿ ಎಂದು ಶುಭ ಹಾರೈಸಿದರು.

ಕ್ರಿಕೆಟ್ ಪಂದ್ಯಾವಳಿಯಲ್ಲಿ 25ಕ್ಕೂ ಹೆಚ್ಚು ತಂಡಗಳು ಭಾಗಿಯಾಗಿದ್ದವು. ಪಂದ್ಯಾವಳಿಯಲ್ಲಿ ನರಸೀಪುರ ಆರ್.ಸಿ. ಚಾಲೆಂಜರ್ಸ್ ತಂಡ ಮತ್ತು ನಂಜನಗೂಡಿನ ಶ್ರೀರಾಂಪುರ ಕ್ರಿಕೆಟ್ ತಂಡಗಳ ನಡುವೆ ನಡೆದ ಫೈನಲ್ ಪಂದ್ಯದಲ್ಲಿ ನರಸೀಪುರ ಆರ್‌ಸಿ ಚಾಲೆಂಜರ್ಸ್ ತಂಡ ಜಯಗಳಿಸಿ ಪ್ರಥಮ ಬಹುಮಾನ ಒಂದು ಲಕ್ಷ ರೂ. ಮತ್ತು ಆಕರ್ಷಕ ಟ್ರೋಫಿ ತನ್ನದಾಗಿಸಿಕೊಂಡಿತು. ನಂಜನಗೂಡು ಶ್ರೀರಾಂಪುರ ತಂಡ ದ್ವಿತೀಯ ಬಹುಮಾನ 50 ಸಾವಿರ ರೂ. ಮತ್ತು ಆಕರ್ಷಕ ಟ್ರೋಫಿ ಹಾಗೂ ನಂಜನಗೂಡಿನ ಎನ್‌ಎಫ್‌ಸಿಸಿ ತಂಡ ತೃತೀಯ ಬಹುಮಾನ ಪಡೆಯಿತು.

ಚೇತನ್ ಮಾತನಾಡಿದರು. ಸಮಾರಂಭದಲ್ಲಿ ವಿಶ್ವಕರ್ಮ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ನಂದಕುಮಾರ್, ತಾಪಂ ಮಾಜಿ ಉಪಾಧ್ಯಕ್ಷ ಮಹದೇವಯ್ಯ, ಮುಖಂಡರಾದ ಎಂ.ಮಾದಪ್ಪ, ಚೇತನ್, ತ್ರಿಲೋಚನ, ಮಧು, ಅಭಿ, ಅವಿನಾಶ್, ಕುಮಾರಸ್ವಾಮಿ, ರಘು ಸೇರಿದಂತೆ ಇತರರಿದ್ದರು.

ರಾಷ್ಟ್ರೀಯ ಅಹಿಂದ ಒಕ್ಕೂಟ ಸಂಘಟನೆ ಪದಾಧಿಕಾರಿಗಳ ಸಭೆ



ರಾಷ್ಟ್ರೀಯ ಅಹಿಂದ ಒಕ್ಕೂಟ ಸಂಘಟನೆಯ ಪದಾಧಿಕಾರಿಗಳ ಸಭೆ ನಡೆಯಿತು.

ತಿ.ನರಸೀಪುರ ಡಿ.31– ವರುಣ, ತಿ.ನರಸೀಪುರ ಕ್ಷೇತ್ರ ವ್ಯಾಪ್ತಿಯಲ್ಲಿ ಸಿಎಂ ಸಿದ್ದರಾಮಯ್ಯ, ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಂಸದ ಸುನೀಲ್ ಬೋಸ್, ಎಂಎಲ್‌ಸಿ ಡಾ. ಯತೀಂದ್ರ ಅವರ ಕೈ ಬಲಪಡಿಸುವ ಕಾರ್ಯಕ್ರಮಗಳನ್ನು ರೂಪಿಸಿ ಒಟ್ಟಾಗಿ ಸಂಘಟನೆ ಮಾಡಬೇಕಿದೆ ಎಂದು ಸಂಘಟನೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕುಮಾರ್ ರಾಮೇಗೌಡ ತಿಳಿಸಿದರು.

ಪಟ್ಟಣದ ಲೋಕೋಪಯೋಗಿ ಅತಿಥಿ ಗೃಹದಲ್ಲಿ ರಾಷ್ಟ್ರೀಯ ಅಹಿಂದ ಒಕ್ಕೂಟ ಸಂಘಟನೆಯ ತಿ.ನರಸೀಪುರ ತಾಲೂಕು ಘಟಕದ ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿ, ಹೊಸ ವರ್ಷಕ್ಕೆ ನಾವೆಲ್ಲರೂ ನಾವು ನಮ್ಮ ಸಂಘಟನೆಯನ್ನು ಪ್ರತಿ ಹಳ್ಳಿ ಹಳ್ಳಿಗೂ ತಲುಪಿಸುವ ಕಾರ್ಯ ಮಾಡಬೇಕು. ಅಲ್ಲದೇ ಅಹಿಂದ ಸಂಘಟನೆ ಹೆಚ್ಚು ಬಲಪಡಿಸಲು ಕಾರ್ಯಕ್ರಮ ರೂಪಿಸಿಕೊಳ್ಳಬೇಕು ಎಂದರು. ರಾಷ್ಟ್ರೀಯ ಅಹಿಂದ ಒಕ್ಕೂಟದ ಸೋಸಲೆ ದೇವರಾಜ್ ಮಾತನಾಡಿ, ಮುಂದಿನ ದಿನಗಳಲ್ಲಿ ವರುಣ ಹಾಗೂ ತಿ.ನರಸೀಪುರ ಕ್ಷೇತ್ರಗಳಲ್ಲಿ ಜಿಪಂ ಮತ್ತು ತಾಪಂ ಚುನಾವಣೆಗಳಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳು ಕಣಕ್ಕಿಳಿದರೆ ಅವರನ್ನು ಗೆಲ್ಲಿಸುವ ಮೂಲಕ ನಮ್ಮ ಅಹಿಂದ ಕಾರ್ಯಕರ್ತರು ಪ್ರಮುಖ ಪಾತ್ರ ವಹಿಸಬೇಕಾಗುತ್ತದೆ ಎಂದರು.

ಇದೇ ವೇಳೆ 2025ನೇ ಸಾಲಿನ ದಿನದರ್ಶಿಕೆ ಬಿಡುಗಡೆ ಮಾಡಲು ನಿರ್ಧರಿಸಲಾಯಿತು. ಗೌರವಾಧ್ಯಕ್ಷ ತಲಕಾಡು ಸುಂದರ ನಾಯಕ, ಉಪಾಧ್ಯಕ್ಷ ಕೈಯಂಬಳ್ಳಿ ಲೋಹಿತ್, ಕಾರ್ಯಾಧ್ಯಕ್ಷ ಅಶ್ವಿನ್ ಕುಮಾರ್, ಕಾರ್ಯದರ್ಶಿ ಸೋಸಲೆ ರಾಜು, ಸಂಘಟನಾ ಕಾರ್ಯದರ್ಶಿ ಬೆನಕನಹಳ್ಳಿ ಅರುಣ್, ಪ್ರಚಾರ ಸಮಿತಿ ಅಧ್ಯಕ್ಷ ಗರ್ಗೇಶ್ವರಿ ಗೋಪಾಲ್ ರಾಜ್, ಸಹ ಕಾರ್ಯದರ್ಶಿ ಸಬಿಲ್ ಖಾನ್ ಹಾಗೂ ತಾಲೂಕು ಯುವ ಘಟಕದ ತಾಲೂಕು ಅಧ್ಯಕ್ಷ ಭರತ್ ರಾಜ್ ಹಾಜರಿದ್ದರು.

ದೊಡ್ಡಹೆಜ್ಜೂರು ಶಾಲೆಯಲ್ಲಿ ಟ್ಯೂಷನ್‌ಗೆ ಚಾಲನೆ

ಹನಗೋಡು, ಡಿ.31– ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಶಾಲಾ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆ ಇದ್ದರೆ ಅತಿಥಿ ಶಿಕ್ಷಕರನ್ನು ನೇಮಿಸಿ ಟ್ಯೂಷನ್ ಮೂಲಕ ಶಿಕ್ಷಣ ನೀಡಲು ಸಹಕಾರ ನೀಡುತ್ತಿದೆ ಎಂದು ತಾಲೂಕು ಯೋಜನಾಧಿಕಾರಿ ನಾರಾಯಣಶೆಟ್ಟಿ ತಿಳಿಸಿದರು.

ಸಮೀಪದ ದೊಡ್ಡಹೆಜ್ಜೂರು ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ವತಿಯಿಂದ 10ನೇ ತರಗತಿ ಮಕ್ಕಳ ಟ್ಯೂಷನ್ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗಡೆಯವರ ಮಾರ್ಗದರ್ಶನದಲ್ಲಿ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಸಂಘದ ಸದಸ್ಯರ ಮಕ್ಕಳಿಗೆ ಸುಜ್ಞಾನ ನಿಧಿ, ಶಾಲೆ ಆವರಣ, ಗೋಡೆ, ಶೌಚಾಲಯ, ಡೆಸ್ಕ್ ಸೇರಿದಂತೆ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡುತ್ತಿದೆ. ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಯೋಜನೆ ಸದುಪಯೋಗ ಪಡಿಸಿಕೊಳ್ಳಬೇಕೆಂದು ಹೇಳಿದರು. ಶಾಲೆ ಮುಖ್ಯಶಿಕ್ಷಕ ಚಂದ್ರಶೇಖರ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಮಹದೇವ, ಯೋಜನೆ ಮೇಲ್ವಿಚಾರಕಿ ಪುಷ್ಪಲತಾ, ಸೇವಾ ಪ್ರತಿನಿಧಿಗಳಾದ ಸಲೇಹಾ ಬಾನು, ಮಮತಾ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.



ದೊಡ್ಡಹೆಜ್ಜೂರು ಸರ್ಕಾರಿ ಪ್ರೌಢಶಾಲೆಯಲ್ಲಿ ಟ್ಯೂಷನ್ ಕ್ಲಾಸ್‌ಗೆ ಗಣ್ಯರು ಚಾಲನೆ ನೀಡಿದರು.

ಅಭಿನಂದನೆ



ಕೃಷಿಕ ಸಮಾಜದ ಚುನಾವಣೆಯಲ್ಲಿ ಮೂಗೂರು ಕ್ಷೇತ್ರದಿಂದ ನಿರ್ದೇಶಕರಾಗಿ ಆಯ್ಕೆಯಾದ ಶಿವಸ್ವಾಮಿ ಅವರನ್ನು ಮೂಗೂರು ಸ್ನೇಹ ಬಳಗದಿಂದ ಅಭಿನಂದಿಸಲಾಯಿತು. ಈ ವೇಳೆ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

ಸಿದ್ಧಗಂಗಾ ಶ್ರೀಗಳಿಂದ ಕ್ಯಾಲೆಂಡರ್ ಅನಾವರಣ



ಬೆಟ್ಟದಪುರದ ಸ್ವರ್ಣಾಂಬ ಫೈನಾನ್ಸ್‌ನ 2025ನೇ ಸಾಲಿನ ಕ್ಯಾಲೆಂಡರ್ ಅನ್ನು ತುಮಕೂರಿನ ಶ್ರೀಸಿದ್ಧಗಂಗಾ ಮಠದ ಪೀಠಾಧ್ಯಕ್ಷ ಸಿದ್ಧಲಿಂಗ ಸ್ವಾಮೀಜಿ ಅನಾವರಣಗೊಳಿಸಿದರು. ಈ ವೇಳೆ ಹಾಸನದ ತಣ್ಣೀರು ಹಳ್ಳ ಮಠದ ವಿಜಯ ಕುಮಾರ ಸ್ವಾಮೀಜಿ, ರಾವಂದೂರು ಮಠದ ಮೋಕ್ಷಪತಿ ಸ್ವಾಮೀಜಿ, ಸಂಸ್ಥೆ ಅಧ್ಯಕ್ಷ ಶಿವಕುಮಾರಸ್ವಾಮಿ, ಬೆಟ್ಟದಪುರ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಶಿವದೇವ್, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಗಿರೀಶ್, ಗ್ರಾಪಂ ಮಾಜಿ ಸದಸ್ಯ ಗಣೇಶ್, ನಟರಾಜ್ ಇತರರಿದ್ದರು.

ಕಂಪಲಾಪುರ ಡೈರಿಯಲ್ಲಿ ಕ್ಯಾಲೆಂಡರ್ ಬಿಡುಗಡೆ



ಕಂಪಲಾಪುರ ಹಾಲಿನ ಡೈರಿಯಲ್ಲಿ ಮಂಗಳವಾರ 2025ನೇ ಸಾಲಿನ ಕ್ಯಾಲೆಂಡರ್ ಅನ್ನು ಅಧ್ಯಕ್ಷ ಕೃಷ್ಣ ಬಿಡುಗಡೆಗೊಳಿಸಿದರು. ಉಪಾಧ್ಯಕ್ಷೆ ಸುನಂದಾ, ಸಿಇಓ ಕಿಶೋರ್, ನಿರ್ದೇಶಕರಾದ ಕರಿಗೌಡ, ರವಿ, ರಾಜೇಗೌಡ, ತಮ್ಮಯ್ಯ, ರಾಮಕೃಷ್ಣ, ನಜೀಬ್, ಮಾಜಿ ಅಧ್ಯಕ್ಷ ಜಯಣ್ಣ, ಸಿಬ್ಬಂದಿ ರೇವಣ್ಣ, ಮಂಜು ಇತರರಿದ್ದರು.

ಅಂಬೇಡ್ಕರ್ ಬಗ್ಗೆ ಅವಹೇಳಕಾರಿ ಹೇಳಿಕೆ

ಅಮಿತ್ ಶಾ ವಿರುದ್ಧ ಹುರ, ಸರಗೂರಲ್ಲಿ ಪ್ರತಿಭಟನೆ





ಅಮಿತ್ ಶಾ ವಿರುದ್ಧ ನಂಜನಗೂಡು ತಾಲೂಕಿನ ಹುರ ಹಾಗೂ ಸರಗೂರಲ್ಲಿ ಪ್ರತಿಭಟನೆ ಪ್ರತಿಭಟನೆ ನಡೆಸಲಾಯಿತು.

ಸರಗೂರು/ಮಲ್ಕುಂಡಿ, ಡಿ.31– ಅಂಬೇಡ್ಕರ್ ಬಗ್ಗೆ ಅವಹೇಳಕಾರಿ ಹೇಳಿಕೆ ನೀಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ನಂಜನಗೂಡು ತಾಲೂಕಿನ ಹುರ ಹಾಗೂ ಸರಗೂರಲ್ಲಿ ಪ್ರತಿಭಟನೆ ನಡೆಸಲಾಯಿತು.

ಹುರ: ಅಂಬೇಡ್ಕರ್ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವ ಅಮಿತ್ ಶಾ ವಿರುದ್ಧ ಗ್ರಾಮದಲ್ಲಿ ದಲಿತ ಮುಖಂಡರು ಪ್ರತಿಭಟನೆ ನಡೆಸಿದರು.

ತಾಪಂ ಮಾಜಿ ಅಧ್ಯಕ್ಷ ನಾಗೇಶ್ ರಾಜ್ ಮಾತನಾಡಿ, ನಮ್ಮ ದೇಶ ಯಾವುದೇ ದೇವರು ಹಾಗೂ ಧರ್ಮದಿಂದ ನಡೆಯುತ್ತಿಲ್ಲ. ಬದಲಿಗೆ ಅಂಬೇಡ್ಕರ್ ಅವರ ಸಂವಿಧಾನ ಅಡಿಯಲ್ಲಿ ಮುನ್ನಡೆಯುತ್ತಿದೆ. ಹೀಗಾಗಿ ಅಂಬೇಡ್ಕರ್ ಅವರ ಬಗ್ಗೆ ಕೇಂದ್ರ ಗೃಹ ಸಚಿವರ ಹೇಳಿಕೆ ಖಂಡನೀಯ. ಕೂಡಲೇ ಅಮಿತ್ ಶಾ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಿ ಗಡಿಪಾರು ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ಶಿವಣ್ಣ, ಮಂಜು ಸೇರಿದಂತೆ ಇತರರಿದ್ದರು.

ಸರಗೂರು: ಅಮಿತ್ ಶಾ ಹೇಳಿಕೆ ಖಂಡಿಸಿ ಹಾಗೂ ಅವರ ರಾಜೀನಾಮೆಗೆ ಒತ್ತಾಯಿಸಿ ಪಟ್ಟಣದಲ್ಲಿ ತಾಲೂಕು ಆದಿ ಕರ್ನಾಟಕ ಮಹಾಸಭಾ ಮತ್ತು ಪ್ರಗತಿಪರ ಒಕ್ಕೂಟಗಳ ಸಂಘಟನೆ ಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಅಂಬೇಡ್ಕರ್ ಭವನದಿಂದ ಮೆರವಣಿಗೆಯಲ್ಲಿ ತೆರಳಿದ ಪ್ರತಿಭಟನಾಕಾರರು ಜಯ ಚಾಮರಾಜೇಂದ್ರ ಕ್ರೀಡಾಂಗಣ, ಮೊದಲನೇ ಮುಖ್ಯರಸ್ತೆ, ಸಂತೇ ಮಾಳ, ಬಸವೇಶ್ವರ ದೇವಸ್ಥಾನ, ಚಿಕ್ಕದೇವಮ್ಮ ನವರ ಸರ್ಕಲ್, ಮಹಾವೀರ ವೃತ್ತದ ಮೂಲಕ ಪಟ್ಟಣದ ಬಸ್ ನಿಲ್ದಾಣದ ಬಳಿ ಮಾನವ ಸರಪಳಿ ನಿರ್ಮಿಸಿ, ಅಮಿತ್ ಶಾ ಅವರ ಅಣಕು ಶವಯಾತ್ರೆ ನಡೆಸಿ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಬೆಟ್ಟಯ್ಯ ಕೋಟೆ ಮಾತನಾಡಿ, ಅಂಬೇಡ್ಕರ್ ಬಗ್ಗೆ ಅಮಿತ್ ಶಾ ಅವರು ಹಗುರವಾಗಿ ಮಾತನಾಡಿ ಅವರಿಗೆ ಅಪಮಾನ ಮಾಡಿದ್ದು, ದೇಶದ ಗೃಹ ಸಚಿವರಾಗಿ ಮುಂದುವರೆಯುವುದು ಸರಿಯಲ್ಲ. ಹೀಗಾಗಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಆದಿ ಕರ್ನಾಟಕ ಮಹಾಸಭಾ ತಾಲೂಕು ಅಧ್ಯಕ್ಷ ಶಿವಣ್ಣ ಮಾತನಾಡಿದರು. ಪ್ರತಿಭಟನೆಯಲ್ಲಿ ಕೋಟೆ ಅಧ್ಯಕ್ಷ ನರಸಿಂಹ ಮೂರ್ತಿ, ಕಾರ್ಯದರ್ಶಿ ಮಲ್ಲೇಶ್, ಅಂಬೇಡ್ಕರ್ ಟ್ರಸ್ಟ್ ಅಧ್ಯಕ್ಷ ನಾಗರಾಜು, ಸಣ್ಣಸ್ವಾಮಿ, ಯಜಮಾನರಾದ ಬೋಗಯ್ಯ, ರಂಗಯ್ಯ, ಗ್ಯಾರಂಟಿ ಯೋಜನೆ ಅಧ್ಯಕ್ಷ ಚಲುವರಾಜು, ಜಿಪಂ ಮಾಜಿ ಸದಸ್ಯರಾದ ಪಿ.ರವಿ. ಭಾಗ್ಯಲಕ್ಷ್ಮಿ, ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ದರಾಜು, ಚಿಕ್ಕಣ್ಣ, ವರ್ತಕರ ಸಂಘದ ಅಧ್ಯಕ್ಷ ಎಸ್.ಪಿ.ಪ್ರಸಾದ್, ಆರ್ಯ ಈಡಿಗ ಸಮಾಜದ ಅಧ್ಯಕ್ಷ ಎಸ್.ಎನ್. ನಾಗರಾಜು, ಅಕ್ರಮ ಸಕ್ರಮ ಸಮಿತಿ ಸದಸ್ಯ ಶಿವಶಂಕರ್, ಮಹೇಶ್, ಪಪಂ ಸದಸ್ಯ ಶ್ರೀನಿವಾಸ್, ಚಂದ್ರಕಲಾ, ಚಿಕ್ಕಮ್ಮ, ಮುಖಂಡರಾದ ವಕೀಲ ಜವರಯ್ಯ, ಮರಿದೇವಯ್ಯ, ಶಿವರಾಜು, ಪುಟ್ಟರಾಜು, ರಮೇಶ್, ದೊಡ್ಡಯ್ಯ, ಮಹೇಶ್, ರಾಜಣ್ಣ, ಬೆಟ್ಟಸ್ವಾಮಿ, ಶಿವರಾಜು, ಶಿವಶಂಕರ್, ಪ್ರಭಾಕರ, ಮಹೇಶ್, ಕಾಳಸ್ವಾಮಿ, ಬಾಬು ಜಗಜೀವನ್ ರಾಂ ಸಂಘಟನೆ, ಮುಸ್ಲಿಂ ಸಮಾಜದ ಬಂಧುಗಳು, ಪ್ರಗತಿಪರ ಒಕ್ಕೂಟಗಳ ಸಂಘಟನೆಗಳ ಕಾರ್ಯಕರ್ತರು ಭಾಗವಹಿಸಿದ್ದರು.

ಹುಲ್ಲಹಳ್ಳಿಯಲ್ಲಿ ದಿನದರ್ಶಿಕೆ ಬಿಡುಗಡೆ



ಹುಲ್ಲಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ 2025ರ ದಿನದರ್ಶಿಕೆಯನ್ನು ಅಧ್ಯಕ್ಷ ಮಂಜುನಾಥ್ ಹಾಗೂ ನಿರ್ದೇಶಕರು ಬಿಡುಗಡೆಗೊಳಿಸಿದರು. ಈ ವೇಳೆ ಉಪಾಧ್ಯಕ್ಷ ನಂಜುಂಡನಾಯಕ, ಸದಸ್ಯರಾದ ಬಸವರಾಜು, ಅಶೋಕ, ರೇವಣ್ಣ, ರಾಜಮ್ಮ, ಮಂಜುಳ, ನಾಗೇಂದ್ರ, ಗಿರಿರಾಜು, ಲಕ್ಷ್ಮಮ್ಮ, ಮಹೇಶ್. ಪ್ರಭಾರ ಸಿಇಓ ಕುಮಾರ್, ಸಹಾಯಕರಾದ ಮದನ್, ರಾಜು, ನಾಗರಾಜು ಇದ್ದರು.

ಶ್ರೀಸ್ವರ್ಣ ಗೌರಿ ಭಕ್ತ ಮಂಡಳಿ ದಿನದರ್ಶಿಕೆ ಬಿಡುಗಡೆ



ಮೂಗೂರಿನ ಶ್ರೀಸ್ವರ್ಣ ಗೌರಿ ಭಕ್ತ ಮಂಡಳಿಯ ನೂತನ ದಿನದರ್ಶಿಕೆಯನ್ನು ಸೋಸಲೆ ಮಠದ ಶ್ರೀ ಷಡಕ್ಷರಿ ಸ್ವಾಮೀಜಿ ಬಿಡುಗಡೆ ಮಾಡಿದರು. ಭಕ್ತ ಮಂಡಳಿ ಅಧ್ಯಕ್ಷ ಸತೀಶ್, ಉಪಾಧ್ಯಕ್ಷ ನಟರಾಜು, ಸಮಿತಿ ಪದಾಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

ಗೌರವಧನ ಹೆಚ್ಚಳಕ್ಕೆ ಆಗ್ರಹಿಸಿ ಮೈಸೂರು ಡಿಸಿ ಕಚೇರಿ ಬಳಿ ಆಶಾ ಕಾರ್ಯಕರ್ತೆಯರ ಪ್ರತಿಭಟನೆ

ಮೈಸೂರು, ಡಿ.31(ಜಿಎ)–ಆಶಾ ಕಾರ್ಯಕರ್ತರ ಗೌರವಧನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಅನಿರ್ದಿಷ್ಟಾವಧಿ ಧರಣಿ ನಡೆಸಲಾಯಿತು.

ಆರೋಗ್ಯ ಕ್ಷೇತ್ರದಲ್ಲಿ ಸ್ಪಷ್ಟವಾಗಿ ಕಾಣುವ ಏಕೈಕ ಆಧಾರಸ್ತಂಭ ಅಂದರೆ ಆಶಾ ಕಾರ್ಯಕರ್ತೆಯರು. ಇವರ ಸೇವೆ ಬಡಜನತೆಯ ಆರೋಗ್ಯಕ್ಕೆ ಬಹು ಮುಖ್ಯವಾಗಿ ಅವಶ್ಯಕತೆ ಇದೆ. ಆಶಾ ಕಾರ್ಯಕರ್ತೆರ ಸೇವೆಯಿಂದ ಕಳೆದ 15 ವರ್ಷಗಳಿಂದ ತಾಯಿ ಹಾಗೂ ಶಿಶು ಮರಣ ಸಂಖ್ಯೆ ಇಳಿಕೆ, ವಿವಿಧ ರೋಗ–ರುಜಿನಗಳ ತಡೆಗಟ್ಟುವಿಕೆ, ಜನರಲ್ಲಿ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದ್ದಾರೆ. ಕೊರೊನಾ ಸಂದರ್ಭದಲ್ಲಿ ಅಮೋಘ ಸೇವೆ ಸಲ್ಲಿಸಿದ್ದಾರೆ. ರಾಷ್ಟ್ರದಲ್ಲಿಯೇ ಅತ್ಯುತ್ತಮ ಸೇವೆ ಸಲ್ಲಿಸಿದ ಕೀರ್ತಿ ಜತೆಗೆ ಕೇಂದ್ರದ ಪ್ರಶಂಸನಾ ಪತ್ರ ಸಿಕ್ಕಿದೆ. ಆದರೆ, ಆಶಾ ಕಾರ್ಯಕರ್ತೆಯರಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳಿಂದ ಸಿಗುವ ಪ್ರೋತ್ಸಾಹಧನ, ಗೌರವಧನ ಮಾತ್ರ ಪುಡಿಗಾಸು ಆಗಿದೆ ಎಂದು ಪ್ರತಿಭಟನಕಾರರು ಬೇಸರ ವ್ಯಕ್ತಪಡಿಸಿದರು.

ಸೇವೆಯನ್ನು ಸರ್ಕಾರಗಳು, ಇಲಾಖೆಗಳು ಕೊಂಡಾಡುತ್ತವೆ. ಆದರೆ, ಸೇವೆಗೆ ತಕ್ಕ ಪ್ರತಿಫಲ ನೀಡದೆ, ಶೋಷಿಸುತ್ತಿರುವುದು ಅತ್ಯಂತ ಅಮಾನವೀಯ.


ಆಶಾ ಕಾರ್ಯಕರ್ತರ ಗೌರವಧನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಅನಿರ್ದಿಷ್ಟಾವಧಿ ಧರಣಿ ನಡೆಸಲಾಯಿತು.

ಕರ್ನಾಟಕದಲ್ಲಿ ವಿಶೇಷ ಪೋರ್ಟಲ್ ಆಶಾ ನಿಧಿ ಮಾಡಿ ಆ ಮೂಲಕ ಆನ್‌ಲೈನ್ ಎಂಟ್ರಿ ಮಾಡಿಸಿ, ಪ್ರೋತ್ಸಾಹಧನ ನೀಡುವ ಪದ್ಧತಿ ಜಾರಿಗೊಳಿಸಲಾಗಿದೆ. ಕಳೆದ 8–9 ವರ್ಷಗಳಿಂದ ಆಶಾ ಕಾರ್ಯಕರ್ತೆಯರು ಈ ವೇತನ ಪದ್ಧತಿಯಿಂದಾಗಿ ಆಗುತ್ತಿರುವ ಸಮಸ್ಯೆಗಳ ಪರಿಹಾರಕ್ಕೆ ನಿರಂತರ ಹೋರಾಟ ನಡೆಸಿದರೂ ಯಾವುದೇ ಪ್ರಯೋಜನವಾಗುತ್ತಿಲ್ಲ ಎಂದು ಕಿಡಿಕಾರಿದರು.

ಬೇಡಿಕೆಗಳು: ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಆಶಾ ಕಾರ್ಯಕರ್ತೆಯರಿಗೆ ಗೌರವಧನ ಮತ್ತು ಪ್ರೋತ್ಸಾಹಧನ ಸೇರಿಸಿ 15 ಸಾವಿರ ರೂ. ಮಾಸಿಕ ಗೌರವಧನ ನಿಗದಿಯಾಗಬೇಕು. ನಗರ ಆಶಾ ಕಾರ್ಯಕರ್ತೆಯರ ಹೆಚ್ಚುವರಿ ಕೆಲಸ, ಜೀವನದ ದುಬಾರಿ ಖರ್ಚು ವೆಚ್ಚಗಳಿಗೆ ಅನುಗುಣವಾಗಿ ಕನಿಷ್ಠ 2 ಸಾವಿರ ಗೌರವಧನ ಹೆಚ್ಚಿಸಬೇಕು. ಸೇವಾ ನಿವೃತ್ತಿ ಪಡೆಯುವ ಕಾರ್ಯಕರ್ತೆಯರಿಗೆ ಪಶ್ಚಿಮ ಬಂಗಾಳದಂತೆ 5 ಲಕ್ಷಕ್ಕೆ ಏರಿಕೆ ಮಾಡಬೇಕು. ತೀವ್ರ ಅನಾರೋಗ್ಯ, ಚಿಕಿತ್ಸೆ ಪಡೆಯುವ ಅವಧಿಯಲ್ಲಿ ಕನಿಷ್ಠ 3 ತಿಂಗಳು ಪ್ರೋತ್ಸಾಹಧನ ನೀಡುವ ಜತೆಗೆ ಸೇವೆಯಲ್ಲಿದ್ದಾಗ ಆಗುವ ಅನಾಹುತಗಳಿಗೆ ಜವಾಬ್ದಾರಿ ಇಲಾಖೆ ವಹಿಸಿಕೊಳ್ಳಬೇಕು.

ಬಾಕಿ ಇರುವ 2–3 ತಿಂಗಳ ಆಶಾ ಕಾರ್ಯಕರ್ತೆಯರ ಪ್ರೋತ್ಸಾಹಧನವನ್ನು ಕೂಡಲೇ ಬಿಡುಗಡೆ ಮಾಡಬೇಕು. ಆಶಾ ಕಾರ್ಯಕರ್ತೆಯರಿಗೆ ಸಂಬಂಧವಿಲ್ಲದ ಕೆಲಸವನ್ನು ಅಧಿಕೃತವಾಗಿ ಮಾಡಲು ಹೇಳಿರುವ ಆದೇಶ ವಾಪಸ್ ಪಡೆಯಬೇಕು. ಪ್ರತಿ ವರ್ಷ ಸಂಪೂರ್ಣ ಆರೋಗ್ಯ ತಪಾಸಣೆ ಮಾಡಬೇಕು. ತೀವ್ರ ಕಾಯಿಲೆಗಳಿದ್ದಲ್ಲಿ ಕೂಡಲೇ ಉಚಿತ ಚಿಕಿತ್ಸೆ ಕೊಡಿಸಬೇಕು. ಕಾರ್ಯಕರ್ತೆಯರನ್ನು ಕಾರ್ಮಿಕರೆಂದು ಪರಿಗಣಿಸಿ, ಕನಿಷ್ಠ ವೇತನ, ಗ್ರಾಚ್ಯುಟಿ, ಪಿಎಫ್ ಸೌಲಭ್ಯ ಒದಗಿಸಬೇಕೆಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಎಐಯುಟಿಯುಸಿ ರಾಜ್ಯ ಉಪಾಧ್ಯಕ್ಷೆ ಉಮಾದೇವಿ ಸೇರಿದಂತೆ ನೂರಾರು ಆಶಾ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಭೈರತಿ ರಣಗಲ್(ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಯುಐ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಪುಷ್ಪ–2 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಪುಷ್ಪ–2 (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುಐ (ಕ)	4 ಪ್ರದರ್ಶನಗಳು
ರಾಜಕಮಲ್	
ಮ್ಯಾಕ್ಸ್(ಕ)	4 ಪ್ರದರ್ಶನಗಳು
ಸಂಗಂ	
ಮ್ಯಾಕ್ಸ್(ಕ)	4 ಪ್ರದರ್ಶನಗಳು
ಲಿಡೋ	
ಲಕ್ಕಿ ಭಾಸ್ಕರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಬೇಬಿಜಾನ್ (ಹಿ)	4 ಪ್ರದರ್ಶನಗಳು
ಪ್ರಭಾ	
ಔಟ್ ಆಫ್ ಸಿಲಬಸ್(ಕ) + ಪುಷ್ಪ–2 (ಕ)	2+2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಮ್ಯಾಕ್ಸ್ (ಕ): ಬೆ.9ಕ್ಕೆ, ಮುಫಾಸ ದಿ ಲಯನ್ ಕಿಂಗ್ (3ಡಿ)(ಇಂ): ಮ.12ಕ್ಕೆ, ಸಂ.5.10ಕ್ಕೆ, ರಾ.7.40ಕ್ಕೆ, ಯುಐ (2024) (ಕ): ಮ.2.30ಕ್ಕೆ, ಬರೋಜ್(3ಡಿ) (ಮ): ರಾ.10.10ಕ್ಕೆ.
ಸ್ಕ್ರೀನ್ 2	ಯುಐ (2024) (ಕ): ಬೆ.9.40ಕ್ಕೆ, ಸಂ.4.25ಕ್ಕೆ, ಪುಷ್ಪಾ 2 (ಕ): ಮ.12.30ಕ್ಕೆ, ಬೇಬಿ ಜಾನ್ (ಹಿಂ): ರಾ.7.10ಕ್ಕೆ, ಮಾರ್ಕೋ (ಮ): ರಾ.10.30ಕ್ಕೆ.
ಸ್ಕ್ರೀನ್ 3	ಹರಿದಾಸರ ದಿನಚರಿ (ಕ): ಬೆ.10.50ಕ್ಕೆ, ಬೇಬಿ ಜಾನ್ (ಹಿಂ): ಮ.12.55ಕ್ಕೆ, ಸಂ.4.15ಕ್ಕೆ, ಯುಐ (2024) (ಕ): ರಾ.7.35ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 4	ಮ್ಯಾಕ್ಸ್ (ಕ): ಬೆ.10.15ಕ್ಕೆ, ಮ.1.10ಕ್ಕೆ, ಸಂ.4.05ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಅಮರನ್ (ಕ): ಬೆ.10.30ಕ್ಕೆ, ರಾ.7.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಧೀರ ಭಗತ್ ರಾಯ್ (ಕ): ಸಂ.4.30ಕ್ಕೆ.
ಸ್ಕ್ರೀನ್ 2	ಭೈರತಿ ರಣಗಲ್ (ಕ): ಬೆ.10.40ಕ್ಕೆ, ಪುಷ್ಪಾ 2 (ಕ): ಮ.1.15ಕ್ಕೆ, ಸಂ.5.15ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 3	ಪುಷ್ಪಾ 2 (ಕ): ಬೆ.11.30ಕ್ಕೆ, ರಾ.7.45ಕ್ಕೆ, ಪುಷ್ಪಾ 2 (ತೆ): ಸಂ.4ಕ್ಕೆ.
ಸ್ಕ್ರೀನ್ 4	ಪುಷ್ಪಾ 2 (ತೆ): ಬೆ.10.30ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಪುಷ್ಪಾ 2 (ಕ): ಮ.2.15ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಏಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಚಾಮುಂಡಿಬೆಟ್ಟದಲ್ಲಿ ಯುವಕರ ಮೋಜು ಮಸ್ತಿ

ಹಾಡು ಹಗಲೇ ಮದ್ಯ ಸಮಾರಾಧನೆ

ಮೈಸೂರು, ಡಿ.31(ಬಿಎಲ್‌ಯು)– ನಾಡದೇವತೆ ತಾಯಿ ಚಾಮುಂಡೇಶ್ವರಿ ನೆಲೆಬೀಡು ಚಾಮುಂಡಿಬೆಟ್ಟದಲ್ಲಿ ಯುವಕರು ರಸ್ತೆ ಬದಿ ಕಾರು ನಿಲ್ಲಿಸಿಕೊಂಡು ಹಾಡು ಹಗಲೇ ಗುಂಡು ಪಾರ್ಟಿ ನಡೆಸಿದ್ದು, ಇದು ಭಕ್ತರಿಗೆ ಇರಿಸು–ಮುರಿಸು ಉಂಟು ಮಾಡಿದೆ.


ಚಾಮುಂಡಿಬೆಟ್ಟದ ವ್ಯೂ ಪಾಯಿಂಟ್ ಬಳಿ ನಾಲ್ಕೈದು ಯುವಕರು ರಸ್ತೆ ಬದಿ ಕಾರು ನಿಲ್ಲಿಸಿಕೊಂಡು ತಡೆ ಗೋಡೆ ಮೇಲೆ ಕುಳಿತು ಮದ್ಯ ಸೇವನೆ ಮಾಡಿದ್ದಾರೆ. ಈ ರಸ್ತೆಯಲ್ಲಿ ನೂರಾರು ಭಕ್ತರು ಸಾಗುತ್ತಿದ್ದರೂ ಈ ಯುವಕರು ಯಾರಿಗೂ ಕೇರ್ ಮಾಡದೆ ನಶೆ ಏರಿಸಿಕೊಂಡಿದ್ದಾರೆ.

ಇಂತಹ ಧಾರ್ಮಿಕ ಹಾಗೂ ಐತಿಹಾಸಿಕ ಸ್ಥಳದಲ್ಲಿ ಮದ್ಯ ಪ್ರಿಯರು ಕುಡಿದು, ಸಿಗರೇಟ್ ಸೇದುತ್ತಾ ಚಾಮುಂಡಿಬೆಟ್ಟದ ಪಾವಿತ್ರ್ಯತೆಗೆ ಧಕ್ಕೆ ತರುತ್ತಿರುವುದನ್ನು ನೋಡಿ ದಾರಿಹೋಕರು ತೀವ್ರ ಬೇಸರ ವ್ಯಕ್ತಪಡಿಸಿದ್ದಾರೆ.

ಚಾಮುಂಡಿಬೆಟ್ಟದಿಂದ ಉತ್ತನಹಳ್ಳಿ ಕಡೆಗೆ ಹೋಗುವ ರಸ್ತೆಯಲ್ಲೂ ಕೂಡ ಯುವಕರ ಗುಂಡು ಪಾರ್ಟಿಗಳು ನಡೆಯುತ್ತಿವೆ. ಇಂತಹ ಅನುಚಿತ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಪೊಲೀಸರ ಗಸ್ತು ನಿಯೋಜಿಸಲಾಗಿದೆ. ಆದರೆ ಪೊಲೀಸರು ಇತ್ತ ತಲೆ ಹಾಕದಿರುವ ಕಾರಣ ಪುಂಡ ಪೋಕರಿಗಳು ಕುಡಿದು ಕುಪ್ಪಳಿಸಲು ರಹದಾರಿ ಸಿಕ್ಕಂತಾಗಿದೆ

ಚಾಮುಂಡಿಬೆಟ್ಟದಲ್ಲಿ ರಸ್ತೆಗೆ ವಿದ್ಯುತ್ ಕಂಬ ಉರುಳಿ ಬಿದ್ದು ಸಂಚಾರ ಅಸ್ತವ್ಯಸ್ತ

ಕಳೆದ 15 ದಿನದಲ್ಲಿ ನೆಲಕುರುಳಿದ ಮೂರನೇ ವಿದ್ಯುತ್ ಕಂಬ


ಚಾಮುಂಡಿಬೆಟ್ಟದ ರಸ್ತೆಯಲ್ಲಿ ವಿದ್ಯುತ್ ಕಂಬ ತುಂಡರಿಸಿ ಬಿದ್ದಿರುವುದು.

ಮೈಸೂರು,ಡಿ.31(ಎಂಟಿವೈ)– ಚಾಮುಂಡಿಬೆಟ್ಟ ರಸ್ತೆಯಲ್ಲಿ ಅಪರಿಚಿತ ವಾಹನ ಡಿಕ್ಕಿ ಹೊಡೆದ ಪರಿಣಾಮ ರಸ್ತೆ ಬದಿಯ ವಿದ್ಯುತ್ ಕಂಬ ರಸ್ತೆಗೆ ಉರುಳಿ ಬಿದ್ದ ಪರಿಣಾಮ ಒಂದು ಗಂಟೆಗೂ ಹೆಚ್ಚು ಕಾಲ ವಾಹನ ಸಂಚಾರ ಸ್ಥಗಿತಗೊಂಡಿತ್ತು.

ಚಾಮುಂಡಿಬೆಟ್ಟದಿಂದ ಮೈಸೂರಿಗೆ ವಾಪಸ್ಸಾಗುತ್ತಿದ್ದ ಖಾಸಗಿ ಬಸ್‌ವೊಂದು ರಸ್ತೆ ಬದಿಯ ವಿದ್ಯುತ್ ಕಂಬಕ್ಕೆ ಅಪ್ಪಳಿಸಿದೆ. ಇದರಿಂದ ವಿದ್ಯುತ್ ಕಂಬ ತುಂಡರಿಸಿ, ರಸ್ತೆಗೆ ಅಡ್ಡಲಾಗಿ ಉರುಳಿ ಬಿದ್ದಿದೆ. ಹಾಗಾಗಿ ಬೆಟ್ಟಕ್ಕೆ ಹೋಗುವ ಹಾಗೂ ಬೆಟ್ಟದಿಂದ ಮೈಸೂರಿಗೆ ಬರುವ ವಾಹನ ಸಂಚಾರ ಕೆಲ ಕಾಲ ಸ್ಥಗಿತಗೊಂಡಿತ್ತು.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಚೆಸ್ಕಾಂ ಸಿಬ್ಬಂದಿ ವಿದ್ಯುತ್ ಸಂಪರ್ಕ ಸ್ಥಗಿತಗೊಳಿಸಿ, ರಸ್ತೆಗೆ ಅಡ್ಡಲಾಗಿ ಬಿದ್ದಿದ್ದ ಕಂಬವನ್ನು ಪಕ್ಕಕ್ಕೆ ಸರಿಸಿ ವಾಹನ ಸಂಚಾರ ಪುನರಾರಂಭಕ್ಕೆ ಸಹಕರಿಸಿದರು.

ಚಾಮುಂಡಿಬೆಟ್ಟ ರಸ್ತೆಯಲ್ಲಿ ತಾವರೆಕಟ್ಟೆಯಿಂದ ಬೆಟ್ಟದ ಮಹಿಷಾಸುರ ಪ್ರತಿಮೆವರೆಗೂ ವಿದ್ಯುತ್ ಕಂಬ ಅಳವಡಿಸಲಾಗಿದ್ದು, ಮಾರ್ಗದುದ್ದಕ್ಕೂ ದೀಪ ಅಳವಡಿಸಲಾಗಿದೆ. ಈ ಮಾರ್ಗದಲ್ಲಿ ವಿದ್ಯುತ್ ವೈರ್(ಕೇಬಲ್) ಅಳವಡಿಸಿದ್ದರಿಂದ ಕಂಬ ತುಂಡರಿಸಿ ಬಿದ್ದರೂ ಯಾವುದೇ ಅಪಾಯ ಸಂಭವಿಸಿಲ್ಲ.

ವಾರದ ಹಿಂದಷ್ಟೇ ಕಾರೊಂದು ಡಿಕ್ಕಿ ಹೊಡೆದ ಪರಿಣಾಮ ವಿದ್ಯುತ್ ಕಂಬವೊಂದು ತುಂಡಾಗಿ ರಸ್ತೆಗೆ ಬಿದ್ದಿತ್ತು. ಹಾಗಾಗಿ ರಸ್ತೆ ಬದಿ ಇರುವ ವಿದ್ಯುತ್ ಕಂಬಗಳೇ ಅಪಘಾತಕ್ಕೆ ಕಾರಣವಾಗುತ್ತಿವೆ ಎಂದು ಸ್ಥಳೀಯರು ದೂರಿದ್ದಾರೆ.

ಕಂಬವಿದ್ದರೂ ಲೈಟ್ ಇಲ್ಲ: ಚಾಮುಂಡಿಬೆಟ್ಟದ ರಸ್ತೆಯಲ್ಲಿ ದೀಪ ಅಳವಡಿಕೆಗೆ ತೀವ್ರ ವಿರೋಧವಿದ್ದರೂ 2022ರಲ್ಲಿ ತಾವರೆಕಟ್ಟೆಯಿಂದ ಬೆಟ್ಟದವರೆಗೂ ವಿದ್ಯುತ್ ಕಂಬ ಅಳವಡಿಸಲಾಗಿತ್ತು. ಪ್ರಧಾನಿ ನರೇಂದ್ರ ಮೋದಿ ಅವರ ಭೇಟಿ ಹಿನ್ನೆಲೆಯಲ್ಲಿ ಭದ್ರತಾ ದೃಷ್ಟಿಯಿಂದ ತರಾತುರಿಯಲ್ಲಿ ರಸ್ತೆಯ ಅಂಚಿನಲ್ಲೇ ವಿದ್ಯುತ್ ಕಂಬ ಅಳವಡಿಸಲಾಗಿತ್ತು. ಅಲ್ಲದೆ, ಎಲ್‌ಇಡಿ ಬಲ್ಬ್‌ವುಳ್ಳ ದೀಪವನ್ನು ಅಳವಡಿಸಲಾಗಿತ್ತು.

ಆದರೆ, ಬಿಲ್ ಕಟ್ಟದ ಕಾರಣ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗಿದೆ. ಇದರಿಂದ ಬೆಟ್ಟದ ರಸ್ತೆ ಕತ್ತಲಿನಿಂದ ಕೂಡಿದೆ. ಚಾಮುಂಡಿಬೆಟ್ಟದಲ್ಲಿ ಚಿರತೆ ಸೇರಿದಂತೆ ವಿವಿಧ ವನ್ಯಜೀವಿಗಳಿದ್ದು, ರಾತ್ರಿ ಅವುಗಳ ಸಹಜ ಸಂಚಾರಕ್ಕೆ ದೀಪಗಳ ಬೆಳಕು ಅಡ್ಡಿಯುಂಟಾಗುತ್ತಿದೆ ಎಂದು ವನ್ಯಜೀವಿ ಪ್ರೇಮಿಗಳು ಆರೋಪಿಸಿದ್ದರು. ಆದರೂ, ವಿದ್ಯುತ್ ಕಂಬ ಅಳವಡಿಸಲಾಗಿತ್ತು ಇದೀಗ ಇದ್ದು ಇಲ್ಲದಂತಾಗಿರುವ ವಿದ್ಯುತ್ ಕಂಬಗಳನ್ನು ಸುರಕ್ಷಿತ ಸ್ಥಳದಲ್ಲಿ ನೆಡುವಂತೆ ಒತ್ತಾಯಿಸಿದ್ದಾರೆ.

ಬಿಲ್ ಕಟ್ಟಲು ಮೀನಾಮೇಷ

ಬೆಟ್ಟದ ರಸ್ತೆಗೆ ಹಾಕಲಾಗಿದ್ದ ದೀಪಗಳ ಬಿಲ್ ಪಾವತಿಸಲು ಗ್ರಾಪಂ, ಬೆಟ್ಟದ ಅಭಿವೃದ್ಧಿ ಪ್ರಾಧಿಕಾರದ ನಡುವೆ ಮುಸುಕಿನ ಗುದ್ದಾಟ ನಡೆಯುತ್ತಿದೆ. ದೇವಾಲಯಕ್ಕೆ ಪ್ರವಾಸಿಗರು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವುದರಿಂದ ಬೆಟ್ಟದ ಪ್ರಾಧಿಕಾರಕ್ಕೆ ಹೆಚ್ಚಿನ ಆದಾಯ ಬರುತ್ತದೆ. ಆ ಕಾರಣದಿಂದ ಬೀದಿ ದೀಪದ ವಿದ್ಯುತ್ ಬಿಲ್ ಬೆಟ್ಟದ ಪ್ರಾಧಿಕಾರವೇ ಪಾವತಿಸಲಿ ಎಂದು ಗ್ರಾ.ಪಂ ಸುಮ್ಮನೆ ಇದೆ. ಆದರೆ, ಬೆಟ್ಟದ ಅಭಿವೃದ್ಧಿ ಪ್ರಾಧಿಕಾರ ಗ್ರಾಪಂ ಅಥವಾ ಜಿಪಂ ಬಿಲ್ ಪಾವತಿಸಲಿ ಎಂದು ಬಿಲ್ ಕಟ್ಟಲು ನಿರಾಕರಿಸಿದೆ ಎಂದು ಗ್ರಾಮಸ್ಥರು ದೂರಿದ್ದಾರೆ.

ಕೃಷಿಕ ಸಮಾಜದ ಅಧ್ಯಕ್ಷರಾಗಿ ಕೆ.ಬಿ.ಲಿಂಗರಾಜು ಆಯ್ಕೆ


ಮೈಸೂರು ತಾಲೂಕು ಕೃಷಿಕ ಸಮಾಜದ ಪದಾಧಿಕಾರಿಗಳು

ಮೈಸೂರು, ಡಿ.31(ಬಿಎಲ್‌ಯು)– ಮೈಸೂರು ತಾಲೂಕು ಕೃಷಿಕ ಸಮಾಜದ ಅಧ್ಯಕ್ಷರಾಗಿ ಕುಂಬಾರಕೊಪ್ಪಲಿನ ಕೆ.ಬಿ.ಲಿಂಗರಾಜು ಆಯ್ಕೆಯಾಗಿದ್ದಾರೆ.

2025–26 ರಿಂದ 2029–30 ಸಾಲಿನ ಐದು ವರ್ಷಕ್ಕೆ ಇಂದು ನಡೆದ ಚುನಾವಣೆಯಲ್ಲಿ ಪದಾಧಿಕಾರಿಗಳ ಆಯ್ಕೆ ನಡೆಯಿತು. ಅಧ್ಯಕ್ಷರಾಗಿ ಕೆ.ಬಿ.ಲಿಂಗರಾಜು ಆಯ್ಕೆಯಾದರೆ ಉಪಾಧ್ಯಕ್ಷರಾಗಿ ಹಾರೋಹಳ್ಳಿ ಎನ್.ಮಹಾದೇವಪ್ಪ, ಪ್ರಧಾನ ಕಾರ್ಯದರ್ಶಿಯಾಗಿ ಸಿಜೆ.ಶಿವಶಂಕರ್ ಚುಂಚರಾಯನಹುಂಡಿ, ಖಜಾಂಚಿಯಾಗಿ ಗೋವಿಂದಸ್ವಾಮಿ, ಜಿಲ್ಲಾ ಪ್ರತಿನಿಧಿಯಾಗಿ ಎಂ.ಕುಮಾರ ಚಿಕ್ಕಹಳ್ಳಿ ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ.

ಈ ಸಂದರ್ಭದಲ್ಲಿ ಸಮಾಜದ ನಿರ್ದೇಶಕರಾದ ಕೆ.ಬಸವರಾಜು ಕಲ್ಲೂರು ನಾಗನಹಳ್ಳಿ, ಶಿವಮಾದು ಕುಂಬಾರಕೊಪ್ಪಲು, ಎಲ್.ಲಿಂಗರಾಜು ದೇವಲಾಪುರ, ಕೆ.ಎಸ್.ಮಾದಪ್ಪ ಕೀಳನಪುರ, ಎಂ.ರವಿ ಮಾಧವಗೆರೆ, ಟಿ.ಪಿ.ನಂಜುಂಡಸ್ವಾಮಿ ತಳೂರು, ದೇವರಾಜೇ ಗೌಡ ಕುಂಬಾರಕೊಪ್ಪಲು ಉಪಸ್ಥಿತರಿದ್ದರು. ಬಿ.ಡಿ.ಜಯರಾಮು ಚುನಾವಣಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದರು.

ಇಂದು ಕ್ಯಾಲೆಂಡರ್ ಬಿಡುಗಡೆ

ಮೈಸೂರು, ಡಿ.31(ಬಿಎಲ್‌ಯು)– ಕರ್ನಾಟಕ ಸೇನಾ ಪಡೆಯ 2025 ರ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಕಾರ್ಯಕ್ರಮ ನಾಳೆ (ಜ.1) ನಡೆಯಲಿದೆ.

ವಿಜಯನಗರದ ಶ್ರೀ ಯೋಗಾನರಸಿಂಹಸ್ವಾಮಿ ದೇವಸ್ಥಾನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಡಾ.ಬಾಷ್ಯಂ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದು, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಒಕ್ಕಲಿಗ ಸಂಘದ ಕಾಮಗಾರಿ ವಿಭಾಗದ ಅಧ್ಯಕ್ಷ ಸಿ.ಜಿ.ಗಂಗಾಧರ್, ಡಾ.ರಘುರಾಂ ವಾಜಪೇಯಿ, ಮಾಜಿ ಶಾಸಕ ಮಾರುತಿ ರಾವ್ ಪವಾರ್, ಕಾವೇರಿ ಕ್ರಿಯಾ ಸಮಿತಿ ಅಧ್ಯಕ್ಷ ಎಸ್.ಜಯರಾಮ್ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

'ಸಂವಿಧಾನ ದುರ್ಬಳಕೆ ಆದದ್ದು ಯಾರಿಂದ' ಸಂವಾದ

ಚಿತ್ರದುರ್ಗ, ಡಿ.31(ಬಿಎಲ್‌ಯು)– ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆಯಲ್ಲಿ ಇಂದು ಎಸ್‌ಸಿ, ಎಸ್‌ಟಿ ಸಮಾಜದ ಆಯ್ದ ಮುಖಂಡರೊಂದಿಗೆ 'ಸಂವಿಧಾನದ ದುರ್ಬಳಕೆ ಆದದ್ದು ಯಾರಿಂದ' ವಿಚಾರ ಕುರಿತ ಸಂವಾದ ನಡೆಯಿತು.

ಸಿಟಿಜನ್ ಫಾರ್ ಸೋಷಿಯಲ್ ಜಸ್ಟೀಸ್ ಸಂಸ್ಥೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಎಸ್‌ಸಿ, ಎಸ್‌ಟಿ ಸಮುದಾಯದ ಮುಖಂಡರು, ನಿವೃತ್ತ ಸರ್ಕಾರಿ ನೌಕರರು, ವಕೀಲರು, ಅಧ್ಯಾಪಕರು ಭಾಗವಹಿಸಿದ್ದರು.

ಈ ವೇಳೆ ಮೈಸೂರಿನ ಹಿರಿಯ ವಕೀಲ ಎಸ್.ಅರುಣ್ ಕುಮಾರ್ ಹಾಗೂ ಮಾಜಿ ಸಚಿವ ಎನ್.ಮಹೇಶ್, ಸಮುದಾಯ ಕುರಿತಂತೆ ದಾಖಲೆ ಸಮೇತ ವಿವರಣೆ ನೀಡಿದರು.


'ಸಂವಿಧಾನದ ದುರ್ಬಳಕೆ ಆದದ್ದು ಯಾರಿಂದ' ವಿಚಾರ ಕುರಿತ ಸಂವಾದದಲ್ಲಿ ಗಣ್ಯರ ಸನ್ಮಾನಿಸಲಾಯಿತು.

ಜೊತೆಗೆ ಸಂವಿಧಾನ ತಿದ್ದುಪಡಿಗಳ ವಿಚಾರದಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ಸರ್ಕಾರಗಳ ನಿಲುವಿನ ಬಗ್ಗೆ ಕೂಡ ತಿಳಿಹೇಳಲಾಯಿತು. ಲೋಕಸಭಾ ಸದಸ್ಯ ಗೋವಿಂದ ಕಾರಜೋಳ ಅಧ್ಯಕ್ಷತೆ ವಹಿಸಿದ್ದ ಸಮಾರಂಭದಲ್ಲಿ ಹಲವು ಗಣ್ಯರು ಪಾಲ್ಗೊಂಡಿದ್ದರು.


ಭಾರತ ಸಂವಿಧಾನದ 75ನೇ ಸಂಭ್ರಮದ ಸಮಯದಲ್ಲಿ ಇಂತಹ ವಿಶಿಷ್ಟ ಕಾರ್ಯಕ್ರಮ ರೂಪಿಸಿರುವ ಬಗ್ಗೆ ಸಭಿಕರಿಂದ ಪ್ರಶಂಸೆ ವ್ಯಕ್ತವಾಯಿತು.

ಜ.5ರವರೆಗೆ ಮೈಸೂರು ದಸರಾ ವಸ್ತು ಪ್ರದರ್ಶನ ವಿಸ್ತರಣೆ

ಮೈಸೂರು, ಡಿ.31(ಜಿಎ)–ಮೈಸೂರು ದಸರಾ ವಸ್ತು ಪ್ರದರ್ಶನವನ್ನು ಜ.5ರವರೆಗೆ ವಿಸ್ತರಿಸಲಾಗಿದೆ. ಮಳೆ, ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಹಾಗೂ ಗಣ್ಯರ ನಿಧನದಿಂದ ವಸ್ತುಪ್ರದಶನಕ್ಕೆ ಪ್ರವೇಶ ನಿರ್ಬಂಧಿಸಿದ ಹಿನ್ನೆಲೆಯಲ್ಲಿ ಗುತ್ತಿಗೆದಾರರು ಹೆಚ್ಚುವರಿಯಾಗಿ 12 ದಿನ ವಿಸ್ತರಿಸುವಂತೆ ಮನವಿ ಸಲ್ಲಿಸಿದ ಹಿನ್ನೆಲೆಯಲ್ಲಿ ಈ ನಿರ್ಧಾರಕ್ಕೆ ಬರಲಾಗಿದೆ ಎಂದು ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು. ಗುತ್ತಿಗೆದಾರರ ಮನವಿ ನಂತರ ನಾನು ಹಾಗೂ ಸಿಇಓ ಚರ್ಚಿಸಿ ಹೆಚ್ಚುವರಿಯಾಗಿ 5 ದಿನಗಳು ವಿಸ್ತರಿಸಲು ನಿರ್ಧರಿಸಿದ್ದೇವೆ. ಮುಂದಿನ ಐದು ದಿನಗಳು ವಸ್ತು ಪ್ರದರ್ಶನದ ಎಲ್ಲಾ ಮಳಿಗೆಗಳು ತೆರೆದಿರುತ್ತವೆ. ಜೊತೆಗೆ ಕಡೇ ದಿನ ಫ್ಯಾಷನ್ ಶೋ ಆಯೋಜಿಸಲಾಗಿದೆ. ಯುವಕರ ತಂಡವೊಂದು ಪ್ರಾಧಿಕಾರದ ಮೈದಾನದಲ್ಲಿ ಬೈಕ್ ರೇಸ್ ಮಾಡಲು ಅನುಮತಿ ಕೇಳಿದ್ದು, ಅದರ ಬಗ್ಗೆ ಚರ್ಚಿಸಲಾಗುತ್ತಿದೆ ಎಂದರು.

ದೇಶಕ್ಕೆ ಆಹಾರ ಕೊಟ್ಟು ರೈತ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾನೆ

ಕೃಷಿ ಆರ್ಥಿಕ ತಜ್ಞ ಪ್ರಕಾಶ ಕಮ್ಮರಡಿ ಆತಂಕ


ರೈತ ದಿನಾಚರಣೆಯಲ್ಲಿ ಉಪಸ್ಥಿತರಿರುವ ರೈತ ನಾಯಕರು

ಮೈಸೂರು, ಡಿ. 31(ಆರ್‌ಕೆ)– ದೇಶಕ್ಕೆ ಆಹಾರ ಕೊಟ್ಟು ರೈತ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾನೆ ಎಂದು ಕೃಷಿ ಆರ್ಥಿಕ ತಜ್ಞ ಪ್ರಕಾಶ ಕಮ್ಮರಡಿ ಇಂದಿಲ್ಲಿ ಆತಂಕ ವ್ಯಕ್ತಪಡಿಸಿದ್ದಾರೆ.

ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದ ಸಂಯುಕ್ತಾಶ್ರಯದಲ್ಲಿ ಮೈಸೂರಿನ ಕಲಾಮಂದಿರದಲ್ಲಿ ಆಯೋಜಿಸಿದ್ದ ರೈತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೇಶದಲ್ಲಿ ಪ್ರತಿದಿನ 27 ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ದೇಶಕ್ಕೆ ಆಹಾರ ಕೊಟ್ಟು ರೈತ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದು ನೋವಿನ ಸಂಗತಿ ಎಂದರು.

ಕನಿಷ್ಠ ಬೆಂಬಲ ಬೆಲೆಗಾಗಿ ರೈತರು ನಿರಂತರ ಹೋರಾಟ ಮಾಡಿಕೊಂಡು ಬಂದಿದ್ದಾರೆ. ಬಹುರಾಷ್ಟ್ರೀಯ ಕಂಪನಿಗಳ ಉದ್ಯಮಗಳಿಗೆ ಉತ್ತೇಜನ, ಸೌಲಭ್ಯ ನೀಡುವ ಸರ್ಕಾರಗಳು ರೈತರನ್ನು ನಿರ್ಲಕ್ಷಿಸುತ್ತಿವೆ. ಶೇ. 50ರಷ್ಟು ಕೃಷಿ ಮಾಡುವ ರೈತರು ರಾಜಕಾರಣದಲ್ಲಿಯೂ ಪ್ರಬುದ್ಧರಾಗಬೇಕು. ಜಾತಿ, ಧರ್ಮ ಹೊರಗಿಟ್ಟು ಕೃಷಿಗೆ ಆದ್ಯತೆ ನೀಡುವವರನ್ನು ಆಯ್ಕೆ ಮಾಡುವಂತಾಗಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಶಾಸಕ ಎ.ಆರ್. ಕೃಷ್ಣಮೂರ್ತಿ ಮಾತನಾಡಿ, ರಾಜ್ಯದಲ್ಲಿ ಸಾಕಷ್ಟು ನೀರಿನ ಲಭ್ಯತೆ ಇದ್ದರೂ, ಸರಿಯಾಗಿ ಬಳಸಿಕೊಳ್ಳಲಾಗುತ್ತಿಲ್ಲ. ನಮ್ಮ ರಾಜ್ಯದಲ್ಲಿ ನೀರಿನ ನಿರ್ವಹಣೆ ಸುಧಾರಿಸಿದರೆ ಕೃಷಿಯಲ್ಲಿ ಪ್ರಗತಿ ಸಾಧಿಸಬಹುದು ಎಂದರು.

ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ಕೃಷಿ ಉತ್ಪನ್ನಗಳಿಗೆ ವೈಜ್ಞಾನಿಕ ಬೆಲೆ ಸಿಗದೆ ರೈತ ಕಂಗಾಲಾಗಿದ್ದಾನೆ. ಬೆಳಗಾವಿ ಅಧಿವೇಶನದಲ್ಲಿ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರೂ, ರಾಜ್ಯ ಸರ್ಕಾರ ಗಮನ ಹರಿಸಲಿಲ್ಲ. ಮುಂದೆ ಮಲೈಮಹದೇಶ್ವರ ಬೆಟ್ಟದಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆಗೆ ಕಾಲ್ನಡಿಗೆಯಲ್ಲಿ ತೆರಳಿ ಮುತ್ತಿಗೆ ಹಾಕಬೇಕಿದೆ ಎಂದರು.

ಇದೇ ವೇಳೆ ವಿಶ್ವ ರೈತ ದಿನಾಚರಣೆ ಸಮಿತಿ ಗೌರವಾಧ್ಯಕ್ಷ ಪ್ರೊ. ಎಸ್. ಶಿವರಾಜಪ್ಪ ಅವರ ಸಂಪಾದಕತ್ವದಲ್ಲಿ ಹೊರ ತಂದಿರುವ 'ಆರಂಭ' ರೈತ ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡಲಾಯಿತು. ನಂತರ ನಡೆದ ಸಂವಾದದಲ್ಲಿ ಪ್ರೊ ಕೆ.ಸಿ. ಬಸವರಾಜು, ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಭಾಗವಹಿಸಿದ್ದರು.

ರೈತ ಮುಖಂಡರಾದ ಪಚ್ಚೆ ನಂಜುಂಡ ಸ್ವಾಮಿ, ತೇಜಸ್ವಿ ಪಟೇಲ್, ವಿ.ಆರ್. ನಾರಾಯಣ ರೆಡ್ಡಿ, ಶರಣಪ್ಪ ದೊಡ್ಡಮನಿ, ವಿಜಯಕುಮಾರ್ ಹಾಗೂ ಇತರರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಮೈಸೂರಲ್ಲಿ ಕನ್ನಡ ಪತ್ರಿಕೆ ಕೊಂಡು ಓದಿ ಅಭಿಯಾನ


ಮೈಸೂರು ಕನ್ನಡ ಸಾಹಿತ್ಯ ಪರಿಷತ್ ಹಾಗೂ ಕನ್ನಡ ಸಾಹಿತ್ಯ ಕಲಾಕೂಟದಿಂದ 'ಕನ್ನಡ ದಿನ ಪತ್ರಿಕೆಗಳ ಕೊಂಡು ಓದಿ' ಅಭಿಯಾನ ಹಮ್ಮಿಕೊಳ್ಳಲಾಗಿತ್ತು.

ಮೈಸೂರು, ಡಿ. 31(ಆರ್‌ಕೆ)– ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಕನ್ನಡ ಸಾಹಿತ್ಯ ಕಲಾ ಕೂಟದ ಸಂಯುಕ್ತಾಶ್ರಯದಲ್ಲಿ ಮೈಸೂರಿನ ಜನತಾನಗರದಲ್ಲಿ ಇಂದು 'ಕನ್ನಡ ದಿನ ಪತ್ರಿಕೆಗಳನ್ನು ಕೊಂಡು ಓದಿ' ಅಭಿಯಾನ ನಡೆಯಿತು.

'ಮೈಸೂರು ಮಿತ್ರ', ಆಂದೋಲನ, ಮೈಸೂರು ದಿಗಂತ, ಪ್ರತಿನಿಧಿ, ಪ್ರಜಾವಾಣಿ, ಕನ್ನಡಪ್ರಭ, ವಿಜಯವಾಣಿ, ವಿಜಯ ಕರ್ನಾಟಕ, ಪ್ರಜಾನುಡಿ, ಪ್ರಜಾ ಸತ್ಯ, ಸಾಧ್ವಿ ಹಲೋ ಮೈಸೂರ್, ವರ್ತಮಾನ, ನಗರ ಬೆಳಕು, ನಿಜಧ್ವನಿ, ನಗರ ಧೂತ, ವಿಶ್ವಧೂತ ಸೇರಿದಂತೆ ಎಲ್ಲಾ ಕನ್ನಡ ದಿನಪತ್ರಿಕೆಗಳನ್ನು ಅಭಿಯಾನದಲ್ಲಿ ಪ್ರದರ್ಶಿಸಿ ಓದುಗರಲ್ಲಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭ ಮಾತನಾಡಿದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಮೈಸೂರು ಸಣ್ಣ ಪತ್ರಿಕೆಗಳ ತವರೂರು. ಇಲ್ಲಿನ ಜನರು ಕನ್ನಡ ಪತ್ರಿಕೆಗಳನ್ನು ಈ ಹಿಂದಿನಿಂದಲೂ ಕೊಂಡು ಓದುತ್ತಿದ್ದಾರೆ. ಕನ್ನಡ ಭಾಷೆ–ಸಂಸ್ಕೃತಿ ಬಗ್ಗೆ ಆಸಕ್ತಿ ಇರುವ ಸಹೃದಯ ಓದುಗರು ಎಂದೂ ಕನ್ನಡ ದಿನಪತ್ರಿಕೆಗಳನ್ನು ನಿರ್ಲಕ್ಷ್ಯ ಮಾಡುವುದಿಲ್ಲ ಎಂದರು.

ಇತ್ತೀಚಿನ ದಿನಗಳಲ್ಲಿ ಆಧುನಿಕತೆ ಬೆಳೆದಂತೆ ಅನ್ಯ ಭಾಷೆಯ ಸಾಮಾಜಿಕ ಜಾಲ ಮಾಧ್ಯಮಗಳ ಒತ್ತಡದಿಂದಾಗಿ ಕನ್ನಡ ಸುದ್ದಿ ಮಾಧ್ಯಮಕ್ಕೆ ಸ್ವಲ್ಪ ಹಿನ್ನಡೆಯಾಗಿರಬಹುದು. ಆದರೆ ಭಾಷೆಯ ಸತ್ವ, ಸುಲಭವಾಗಿ ಅರ್ಥವಾಗುವ ಪದ ಪ್ರಯೋಗದಿಂದಾಗಿ ನಮ್ಮ ಕನ್ನಡಿಗರ್ಯಾರೂ ಕನ್ನಡ ದಿನಪತ್ರಿಕೆಗಳಿಂದ ದೂರ ಸರಿಯುವುದಿಲ್ಲ ಎಂದ ಅಂಶಿ ಪ್ರಸನ್ನ ಕುಮಾರ್, ಮೈಸೂರಲ್ಲಿ ಕನ್ನಡ ಪತ್ರಿಕೆಗಳು ನಡೆದು ಬಂದದಾರಿಯ ಬಗ್ಗೆಮಾಹಿತಿ ನೀಡಿದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ವಿಧಾನಪರಿಷತ್ ಸದಸ್ಯ ಡಾ. ಡಿ. ತಿಮ್ಮಯ್ಯ, ಕನ್ನಡ ಸಾಹಿತ್ಯ ಕಲಾ ಕೂಟದ ಅಧ್ಯಕ್ಷ ಎಂ. ಚಂದ್ರಶೇಖರ್, ಮಾಜಿ ಮೇಯರ್‌ಗಳಾದ ಪುಷ್ಪಲತಾ ಟಿ.ಬಿ. ಚಿಕ್ಕಣ್ಣ ಮೋದಾಮಣಿ, ಕಸಾಪ ಮೈಸೂರು ನಗರ ಘಟಕದ ಅಧ್ಯಕ್ಷ ಕೆ.ಎಸ್. ಶಿವರಾಮು, ಮೂಗೂರು ನಂಜುಂಡಸ್ವಾಮಿ ಸೇರಿದಂತೆ ಹಲವು ಕನ್ನಡ ಪರ ಸಂಘಟನೆಗಳ ಮುಖಂಡರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಆಸ್ಪತ್ರೆ ಆವರಣಕ್ಕೆ ಜಾನುವಾರು, ಬೀದಿ ನಾಯಿ ನಿರ್ಬಂಧಕ್ಕೆ ಆರೋಗ್ಯ ಇಲಾಖೆ ಸೂಚನೆ

ಬೆಂಗಳೂರು, ಡಿ.31– ಸರ್ಕಾರಿ ಆಸ್ಪತ್ರೆಗಳ ಆವರಣಕ್ಕೆ ಜಾನುವಾರುಗಳು ಹಾಗೂ ಬೀದಿ ನಾಯಿಗಳು ಪ್ರವೇಶಿಸದಂತೆ ಕ್ರಮ ಕೈಗೊಳ್ಳಲು ವೈದ್ಯಾಧಿಕಾರಿಗಳಿಗೆ ಆರೋಗ್ಯ ಇಲಾಖೆ ಸೂಚಿಸಿದೆ.

ಈ ಬಗ್ಗೆ ಇಲಾಖೆ ಆಯುಕ್ತರು ಸುತ್ತೋಲೆ ಹೊರಡಿಸಿದ್ದಾರೆ. ಆಸ್ಪತ್ರೆಗಳ ಒಳಗೆ ಹಾಗೂ ಆವರಣಗಳನ್ನು ಪ್ರವೇಶಿಸುವ ಬೀದಿ ನಾಯಿಗಳು, ಒಳ ರೋಗಿ, ಹೊರ ರೋಗಿ, ಗರ್ಭಿಣಿಯರು, ತಾಯಿ–ಮಕ್ಕಳಿಗೆ ಅಪಾಯ ಉಂಟು ಮಾಡುತ್ತಿರುವುದು ಕೆಲವೆಡೆ ವರದಿಯಾಗುತ್ತಿದೆ. ಆರೋಗ್ಯ ಸಂಸ್ಥೆಗಳು ಅತ್ಯಂತ ಸೂಕ್ಷ್ಮ ಪ್ರದೇಶಗಳಾಗಿದ್ದು, ಆಸ್ಪತ್ರೆಗಳಲ್ಲಿ ಸೋಂಕು ತಡೆಗಟ್ಟಲು ಹಾಗೂ ಸಾರ್ವಜನಿಕರಿಗೆ ಉಂಟಾಗಬಹುದಾದ ಸಂಭವನೀಯ ಅಪಾಯ ತಡೆಗಟ್ಟಲು ಜಾನುವಾರು ಮತ್ತು ಬೀದಿ ನಾಯಿಗಳಿಗೆ ಪ್ರವೇಶ ನಿರ್ಬಂಧಿಸುವ ಅವಶ್ಯಕತೆಯಿದೆ ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಆಸ್ಪತ್ರೆಗಳಲ್ಲಿ ವೈದ್ಯಕೀಯ ತ್ಯಾಜ್ಯ ಮತ್ತು ಆಹಾರ ಪದಾರ್ಥಗಳ ತ್ಯಾಜ್ಯವನ್ನು ಸೂಕ್ತವಾಗಿ ನಿರ್ವಹಿಸದೆ ಇರುವುದೇ ಬೀದಿ ನಾಯಿಗಳು ಆಸ್ಪತ್ರೆಗಳ ಆವರಣ ಪ್ರವೇಶಿಸುವುದಕ್ಕೆ ಪ್ರಮುಖ ಕಾರಣವಾಗಿದೆ. ಈ ಬಗ್ಗೆ ಆರೋಗ್ಯ ಸಂಸ್ಥೆಗಳ ಆಡಳಿತ ಮುಖ್ಯಸ್ಥರು ಅಗತ್ಯ ಕ್ರಮವಹಿಸದೆ ನಿರ್ಲಕ್ಷ್ಯ ವಹಿಸುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ಎಚ್ಚರಿಸಲಾಗಿದೆ. ಜಾನುವಾರುಗಳು ಹಾಗೂ ಬೀದಿ ನಾಯಿಗಳು ಪ್ರವೇಶಿಸದಂತೆ ಕೈಗೊಳ್ಳಲಾದ ಕ್ರಮಗಳ ಬಗ್ಗೆ ಒಂದು ವಾರದೊಳಗೆ ವರದಿ ಸಲ್ಲಿಸುವಂತೆ ಜಿಲ್ಲಾ ಹಾಗೂ ತಾಲ್ಲೂಕು ಆಸ್ಪತ್ರೆಗಳ ಮುಖ್ಯಸ್ಥರಿಗೆ ಸೂಚಿಸಲಾಗಿದೆ.

ನಂದಿನಿ ಇಡ್ಲಿ, ದೋಸೆ ಹಿಟ್ಟಿಗೆ ಗ್ರಾಹಕರಿಂದ ಉತ್ತಮ ಪ್ರತಿಕ್ರಿಯೆ


ಬೆಂಗಳೂರು, ಡಿ.31– ವಾರದ ಹಿಂದೆ ಮಾರುಕಟ್ಟೆಗೆ ಪರಿಚಯಿಸಲಾದ ಕರ್ನಾಟಕ ಹಾಲು ಮಹಾಮಂಡಳದ (ಕೆಎಂಎಫ್) ನಂದಿನಿ ಬ್ರ್ಯಾಂಡ್‌ನ 'ಶೇ. 5 ವೇ ಪ್ರೋಟೀನ್' ಮಿಶ್ರಣದ ದೋಸೆ ಹಾಗೂ ಇಡ್ಲಿ ಹಿಟ್ಟಿಗೆ ಗ್ರಾಹಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಸದ್ಯ ಬೆಂಗಳೂರಿನಲ್ಲಿ ಮಾತ್ರ ದೋಸೆ ಮತ್ತು ಇಡ್ಲಿ ಹಿಟ್ಟನ್ನು ಪ್ರಾಯೋಗಿಕವಾಗಿ ಮಾರಾಟ ಮಾಡಲಾಗುತ್ತಿದೆ. ನಂದಿನಿ ಹಾಲಿನ ಬೂತ್‌ಗಳಲ್ಲಿ ಹಿಟ್ಟು ಲಭ್ಯವಿದೆ. ನಿತ್ಯ ಸುಮಾರು ಒಂದು ಟನ್‌ನಷ್ಟು ಮಾರಾಟವಾಗುತ್ತಿದೆ. ಮೂರು–ನಾಲ್ಕು ದಿನಗಳಿಂದ ಸುಮಾರು ಎರಡೂವರೆ ಟನ್ ಹಿಟ್ಟು ಪೂರೈಕೆಯಾಗಿ, ಮಾರಾಟವಾಗಿದೆ. ಬೇಡಿಕೆ ಆಧರಿಸಿ, ನಗರದ ಎಲ್ಲ ಭಾಗಕ್ಕೂ ಹಂತ ಹಂತವಾಗಿ ವಿಸ್ತರಿಸಲು ಕೆಎಂಎಫ್ ಸಿದ್ಧತೆ ನಡೆಸಿದೆ.

ಬೆಂಗಳೂರಿನ ಉತ್ತರ ಭಾಗದ ಜಯನಗರ, ಪದ್ಮನಾಭನಗರ ಹಾಗೂ ಕೇಂದ್ರ ಭಾಗದ ಮಲ್ಲೇಶ್ವರ, ಶೇಷಾದ್ರಿಪುರ ಸುತ್ತಮುತ್ತಲಿನ ನಂದಿನಿ ಹಾಲಿನ ಡೀಲರ್‌ಗಳಿಗೆ ದೋಸೆ, ಇಡ್ಲಿ ಹಿಟ್ಟನ್ನು ಪೂರೈಸಲಾಗುತ್ತಿದೆ. ಹಿಟ್ಟಿನ ಪೊಟ್ಟಣಗಳನ್ನು ಹಾಲಿನ ವ್ಯಾನ್‌ನಲ್ಲಿ ಕಳುಹಿಸುತ್ತಿಲ್ಲ. ಇದಕ್ಕಾಗಿ ಪ್ರತ್ಯೇಕ ವಾಹನಗಳನ್ನು ನಿಯೋಜಿಸಿದ್ದೇವೆ. ಸದ್ಯ ಐದಾರು ವಾಹನಗಳಲ್ಲಿ ಡೀಲರ್‌ಗಳಿಗೆ ಹಿಟ್ಟಿನ ಪೊಟ್ಟಣಗಳನ್ನು ಪೂರೈಸಲಾಗುತ್ತಿದೆ.

ಭಾಷ್ಯಂ ಸ್ವಾಮೀಜಿಗೆ 'ಕನ್ನಡಾಂಬೆ ರತ್ನ' ಪ್ರಶಸ್ತಿ

ಮೈಸೂರು, ಡಿ.31(ಎಸ್‌ಪಿಎನ್)– ಯೋಗನರಸಿಂಹ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಕನ್ನಡಾಂಬೆ ರಕ್ಷಣಾ ವೇದಿಕೆ ವತಿಯಿಂದ ನಾಡೋಜ ಪ್ರೊ.ಭಾಷ್ಯಂ ಸ್ವಾಮೀಜಿ ಅವರಿಗೆ 'ಕನ್ನಡಾಂಬೆ ರತ್ನ' ಪ್ರಶಸ್ತಿಯನ್ನು ಬುಧವಾರ ಬೆಳಗ್ಗೆ 10ಗಂಟೆಗೆ ಪ್ರಧಾನ ಮಾಡಲಾಗುವುದು ಎಂದು ರಾಜ್ಯಾಧ್ಯಕ್ಷ ಬಿ.ಬಿ. ರಾಜಶೇಖರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



PUBLIC NOTICE

Notice is hereby given that **MR.SYED MUTEEB UR RAHAMAN**, has agreed to sell the under mentioned property to my client and any person or persons claiming any interest on the under mentioned property or any part thereof, is hereby required to communicate the same to me with documentary evidence at my office, situated at **DOOR No.2765/1A D13/A1, "KEYANS", 5TH MAIN ROAD, V.V. PURAM (V.V. MOHALLA), MYSORE – 570 002**, within 15 (Fifteen) days from the date of this publication, otherwise the said sale will be completed without any reference or regard to any such purported claim or interest, which shall be deemed to have been waived for all intents and purposes.

SCHEDULE PROPERTY

Residential Site No. 2075, situated at 2nd Phase, 2nd Stage, Devanur Extension, Rajeev Nagar, N.R. Mohalla, Mysore, site measuring East to West 24.00 Meters and North to South 15.00 Meters, totally measuring 360 Sq. Meters, bounded on: East: Property No.2098 and 2099, West: Road, North: Property No.2074 and South: Property No.2076.

Sd/- Dhirendra Kumar R. Mehta,
Advocate, KEY-ANS LAW SOLUTIONS

Date:01.01.2025., Place: Mysore.

ಮೈಸೂರು ಮಿತ್ರ ಓದುಗರ ಗಮನಕ್ಕೆ


ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆ ವ್ಯವಹರಿಸಬೇಕಾಗುತ್ತದೆ. ಆದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು



ಮೊದಲನೇ ವರ್ಷದ ಸವಿನೆನಪು
ಜನನ : 25–02–1976 — ಮರಣ: 01–01–2024
ದಿ. ವಿದುಷಿ ರೂಪ ಜಿ.ಎನ್.
ಇಂತಿ,
ಪತಿ : ರಮೇಶ್ ಎನ್
(ಪೇಪರ್ ರಮೇಶ್)
ಪುತ್ರ : ರಾಹುಲ್ ಭಾರದ್ವಾಜ್ ಆರ್
ವಕೀಲರು
(ದೆಹಲಿ & ಬೆಂಗಳೂರು)

10ನೇ ವರ್ಷದ ಸವಿನೆನಪು
ನೀವು ನಮ್ಮನ್ನಗಲಿ ಇಂದಿಗೆ 10 ವರ್ಷ ಕಳೆದರೂ ನಿಮ್ಮ ನೆನಪಿನಲ್ಲಿರುವ.
ತಂದೆ: ಸುಬ್ಬಣ್ಣ, ತಾಯಿ: ಜಯಲಕ್ಷ್ಮಿ, ಪತ್ನಿ: ಶಾರದ, ಮಗಳು ರಕ್ಷ.ಎಸ್ ಹಾಗೂ ಕುಟುಂಬವರ್ಗದವರು ಎಂ ಬ್ಲಾಕ್ ಸ್ನೇಹಿತರು ಸಜ್ಜೆಹುಂಡಿ ಗ್ರಾಮಸ್ಥರು
ಎಸ್. ಸಿದ್ದರಾಜು
(ಮಣಿ) ಸಜ್ಜೆಹುಂಡಿ

ಭಾವಪೂರ್ಣ ಶ್ರದ್ಧಾಂಜಲಿ



ಡಿ.ಟಿ. ಗೋವಿಂದರಾಜು
(DGTM Trust ನ Donor Son)
ಜನನ : 10–07–1949 — ಮರಣ: 31–12–2024
ಇವರು ದಿ. 31.12.2024ರಂದು ದೈವಾಧೀನರಾಗಿದ್ದು, ಅಂತ್ಯಕ್ರಿಯೆಯನ್ನು 1.1.2025ರಂದು ಬೆಳಿಗ್ಗೆ 10 ಗಂಟೆಗೆ ಚಾಮುಂಡಿ ಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿಸಲಲಾಗುವುದು.
ದುಃಖತಪ್ತರು: ಅಣ್ಣ ತಮ್ಮಂದಿರು, ಕುಟುಂಬವರ್ಗದವರು ಹಾಗೂ ಬಂಧುಮಿತ್ರರು

21ನೇ ವರ್ಷದ ಪುಣ್ಯಸ್ಮರಣೆ
ನೀನು ನಮ್ಮನ್ನಗಲಿ ಇಂದಿಗೆ 21 ವರ್ಷವಾಯಿತು. ನಿನ್ನ ನೆನಪು ನಮ್ಮ ಹೃದಯದಲ್ಲಿ ಸದಾ ಹಸಿರಾಗಿರಲಿ
ಇತಿ ದುಃಖತಪ್ತರು: ತಾಯಿ–ವಿ.ಪಿ.ಸರೋಜ, ತಂದೆ–ವಿ.ಟಿ.ಪೊನ್ನಪ್ಪ, ಸಹೋದರ–ವಿ.ಪಿ.ಸಜೀತ್, ಕಾವೇರಿ, ತಾನ್ವಿ, ಪ್ರಶಾಂತ್ ಮತ್ತು ಸಹೋದರಿ–ಪುನೀತ, ಸುಬ್ಬಯ್ಯ, ನಾಚನ್, ದಿವ್ಯಾ, ಹಾಗೂ ಬಂಧುಮಿತ್ರರು.
ವಿ.ಪಿ. ಪ್ರಶಾಂತ್
10.09.1982–31.12.2003
The Madras Regiment Centre (17 Madras)
Mob: 9972729369

8ನೇ ವರ್ಷದ ಪುಣ್ಯಸ್ಮರಣೆ
ಸದಾ ನಿಮ್ಮ ನೆನಪಿನೊಂದಿಗೆ ಮಕ್ಕಳಾದ ಹೆಚ್.ಎನ್.ಪರಮೇಶ್ವರಪ್ಪ, ಇಂಜಿ ಹೆಚ್.ಎನ್.ಮಂಜುನಾಥ, ಹೆಚ್.ಎನ್. ಸರೋಜ, ಹೆಚ್.ಎನ್. ಪುಷ್ಪಲತಾ ಹಾಗೂಕುಟುಂಬವರ್ಗ
ನಿಧನ: 01.01.2017
ಶ್ರೀಮತಿ ಜಯಮ್ಮ
ಎಂ. ನಿರ್ವಾಣಪ್ಪ ಅವರ ಧರ್ಮಪತ್ನಿ ನಂ. 137, 2ನೇ ಕ್ರಾಸ್, 1ನೇ ಹಂತ, ನಂದಿನಿ ಬಡಾವಣೆ, ಮೈಸೂರು

ಪುರಸಭೆ ಕಾರ್ಯಾಲಯ, ಕೆ.ಆರ್.ನಗರ
ಹಾಸನ–ಮೈಸೂರು ಹೆದ್ದಾರಿ ರಸ್ತೆ, ವಿ.ವಿ ರಸ್ತೆ
ಕೆ.ಆರ್.ನಗರ, ಮೈಸೂರು ಜಿಲ್ಲೆ–571602
ವೆಬ್‌ಸೈಟ್: www.krnagaratown.mrc.gov.in
ಈ–ಮೇಲ್: ka.krnagar.tmc@gmail.com
ಫೋನ್: 08223–262242
ಸಂ.ಕೃರಾನ/ಪುಸ./ಆ.ಶಾ/ಸಾ.ಶೌ.ಚಾ/ಸಿ.ಆರ್.01/2024–25 ದಿ: 26.12.2024

ಟೆಂಡರ್ ಪ್ರಕಟಣೆ

ಮುಖ್ಯಾಧಿಕಾರಿಗಳು, ಪುರಸಭೆ ಕೆ.ಆರ್.ನಗರರವರು, ಕೆ.ಆರ್.ನಗರ ಪುರಸಭಾ ವ್ಯಾಪ್ತಿಯಲ್ಲಿ ಸಾರ್ವಜನಿಕ ಶೌಚಾಲಯಗಳ (ಪಾವತಿಸಿ ಬಳಸುವ) ನಿರ್ವಹಣೆಗಾಗಿ ಟೆಂಡರ್‌ನ್ನು ಆಹ್ವಾನಿಸಿದೆ. ದಸ್ತಾವೇಜಿನಲ್ಲಿ ನಿಗಧಿಪಡಿಸಿರುವ ಮಾನದಂಡಗಳ ಆಧಾರದ ಮೇಲೆ ಟೆಂಡರ್ ಪ್ರಸ್ತಾವನೆಗಳನ್ನು ಮೌಲ್ಯಮಾಪನ ಮಾಡಲಾಗುವುದು ಮತ್ತು ಯಶಸ್ವಿ ಬಿಡ್ಡರ್‌ಗಳನ್ನು ಆಯ್ಕೆ ಮಾಡಲಾಗುವುದು. ನೊಂದಾಯಿತ ಅರ್ಹ ಬಿಡ್ಡುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್ ಟೆಂಡರ್‌ನಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ವಿವರಗಳು/ಷರತ್ತುಗಳಿಗಾಗಿ ಕಛೇರಿಯ ವೆಬ್‌ಸೈಟ್ (www.krnagaratown.mrc.gov.in) ವಿಳಾಸದಲ್ಲಿ ಹಾಗೂ ಕಛೇರಿಯ ದೂರವಾಣಿ ಸಂಖ್ಯೆ:08223–262241 ಗೆ ಕರೆಮಾಡಿ ಅಥವಾ ಕಛೇರಿಯ ಆರೋಗ್ಯ ಶಾಖೆಯಿಂದ ಮಾಹಿತಿಯನ್ನು ಪಡೆಯಬಹುದಾಗಿದೆ. ಟೆಂಡರ್ ಬಗ್ಗೆ ಮಾಹಿತಿಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್ ವೆಬ್‌ಸೈಟ್ https://kppp.karnataka.gov.in ನ್ನು ನೋಡಿ ಇಂಡೆಂಟ್ ಸಂಖ್ಯೆ DMA/2023-24/WS/WORK_INDENT3152ಗೆ ಇ.ಎಂ.ಡಿ. ಮೊತ್ತ ರೂ.50,000/– ಗಳನ್ನು ಪಾವತಿಸಿ ದಿ: 15.01.2025 ಸಂಜೆ 5:30 ಗಂಟೆಯೊಳಗಾಗಿ ಟೆಂಡರ್‌ನ್ನು ಸದರಿ ಪೋರ್ಟಲ್ ಮುಖಾಂತರ ಅಪ್‌ಲೋಡ್ ಮಾಡಬಹುದಾಗಿರುತ್ತದೆ. ಟೆಂಡರ್‌ಗಳನ್ನು ದಿ: 17.01.2025 ಬೆಳಿಗ್ಗೆ 11:00 ಗಂಟೆಗೆ ತೆರೆಯಲಾಗುವುದು.

ಸಹಿ/– ಮುಖ್ಯಾಧಿಕಾರಿ, ಪುರಸಭೆ, ಕೆ.ಆರ್.ನಗರ.

DIPR/DDMYS/1015/KSMCA/689/2024-25

ನಗರಸಭಾ ಕಾರ್ಯಾಲಯ, ಮಡಿಕೇರಿ. ಕೊಡಗು ಜಿಲ್ಲೆ.
email: itstaff_ulb_madikeri1@yahoo.com

ಟೆಂಡರ್ ಪ್ರಕಟಣೆ –4ನೇ ಕರೆ

2024–25ನೇ ಸಾಲಿನ ನಗರಸಭೆ ನಿಧಿ ಅನುದಾನದಡಿ ಬೀದಿ ನಾಯಿಗಳಿಗೆ ಸಂತಾನ ಹರಣ ಶಸ್ತ್ರ ಚಿಕಿತ್ಸೆಯನ್ನು ಮಾಡಿಸಲು ... ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಅಧ್ಯಾದೇಶ 1999 ಹಾಗೂ ನಿಯಮ 2000 ಕ್ಕೆ ಒಳಪಟ್ಟು ಟೆಂಡರ್ ಡಾಕ್ಯುಮೆಂಟ್ (ಕೆ.ಡಬ್ಲ್ಯು–1) ನಿಯಮಾವಳಿಯಂತೆ KPP ಪೋರ್ಟಲ್ ಮೂಲಕ ಟೆಂಡರ್ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅರ್ಹ ಬಿಡ್ ದಾರರು ಟೆಂಡರ್ ವಿವರಗಳನ್ನು KPP ಪೋರ್ಟಲ್ ಮೂಲಕ ಪಡೆದುಕೊಂಡು ನಂತರ ಭರ್ತಿ ಮಾಡಿದ ಟೆಂಡರ್‌ಗಳನ್ನು KPP ಪೋರ್ಟಲ್ ಮುಖಾಂತರ ಸಲ್ಲಿಸಬಹುದು. ಹೆಚ್ಚಿನ ಮಾಹಿತಿ, ಕಾಮಗಾರಿ ವಿವರಣೆ, ನಿಬಂಧನೆ ಹಾಗೂ ಷರತ್ತುಗಳಿಗೆ ಕಛೇರಿ ವೇಳೆಯಲ್ಲಿ ಈ ಕಛೇರಿಯ ... ಸಂಪರ್ಕಿಸುವುದು. ಟೆಂಡರ್ ಡೌನ್‌ಲೋಡ್, ಅಪ್‌ಲೋಡ್, ಟೆಂಡರ್ ಪ್ರೋಸೆಸಿಂಗ್ ಮತ್ತು ಇ.ಎಂ.ಡಿ ಪಾವತಿ ಬಗ್ಗೆ ಸಂಬಂಧಪಟ್ಟಂತೆ ವಿವರಗಳನ್ನು ... ಪೋರ್ಟಲ್ ಮುಖಾಂತರ ಪಡೆಯಬಹುದು.

ಸಹಿ/ ಆಡಳಿತಾಧಿಕಾರಿಗಳು, ನಗರಸಭೆ, ಮಡಿಕೇರಿ ಹಾಗೂ ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ.
ಸಹಿ/ ಪೌರಾಯುಕ್ತರು, ನಗರಸಭೆ, ಮಡಿಕೇರಿ.

ಕರ್ನಾಟಕ ಸರ್ಕಾರ
ನಗರಾಭಿವೃದ್ಧಿ ಇಲಾಖೆ
ಪುರಸಭಾ ಕಾರ್ಯಾಲಯ, ಪಾಂಡವಪುರ–571434, ಮಂಡ್ಯ ಜಿಲ್ಲೆ.
ದೂ:08236–255137. E-mail : itstaff_pandavapura@yahoo.com
ಸಂ:ಪು.ಸ.ಪಾಂ/ಆಶಾ/ಮ್ಯಾ.ಸ್ಕ್ಯಾ.ಮ.ಸ/2024–25 ದಿ:26.12.2024

ಪತ್ರಿಕಾ ಪ್ರಕಟಣೆ

ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ "The prohibition of Implement as manual scavenging and their rehabilitation Act 2013 ಅಡಿಯ ಅಧಿನಿಯಮದಲ್ಲಿ ಅದರ ವಿಧಿಯ ಅನ್ವಯ ಈಗಾಗಲೇ ಪಾಂಡವಪುರ ಪುರಸಭೆಯಲ್ಲಿ 2023ನೇ ಇಸವಿನಲ್ಲಿ ಸಮೀಕ್ಷೆ ನಡೆಸಲಾಗಿದ್ದು, 31 ಜನ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳನ್ನು ಗುರುತಿಸಿ ನಿಯಮಾನುಸಾರ ಈಗಾಗಲೇ ಕ್ರಮವಹಿಸಲಾಗಿದೆ. ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆಯ:324/2020 ದಿನಾಂಕ:20.10.2023ರ ತೀರ್ಪಿನ ಅನ್ವಯ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಬಿಟ್ಟು ಹೋಗಿರುವ ಸರ್ವೇ ನಡೆಸಲು ಪ್ರಕಟಣೆಯನ್ನು ಹೊರಡಿಸಲಾಗಿದ್ದು, ಅದರಂತೆ 31 ಜನ ಅರ್ಜಿದಾರರು ಅರ್ಜಿಯನ್ನು ಆನ್‌ಲೈನ್ / ಲಿಖಿತ ರೂಪದಲ್ಲಿ ಅರ್ಜಿಗಳನ್ನು ಸಲ್ಲಿಸಿರುತ್ತಾರೆ. ಮಾನ್ಯ ಜಿಲ್ಲಾಧಿಕಾರಿಗಳ ಆದೇಶದಲ್ಲಿ ನಮೂದಿಸಿರುವ ಪುರಸಭೆಯ ಸರ್ವೇಯರ್/ಎನ್ಯುಮರೇಟರ್/ ಕಿರಿಯ ಆರೋಗ್ಯ ನಿರೀಕ್ಷಕರು/ಹಿರಿಯ ಆರೋಗ್ಯ ನಿರೀಕ್ಷಕರು/ಪರಿಸರ ಅಭಿಯಂತರರವರುಗಳ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಆಕ್ಟ್–2013ರ ವಿಧಿಯಡಿ ನೀಡಿರುವ ಮಾರ್ಗದರ್ಶನ ಮತ್ತು ನಿಯಮಗಳ ಅನುಸಾರ ಪರಿಶೀಲಿಸಿದಾಗ ಸದರಿ ಅರ್ಜಿಗಳು ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಅರ್ಹತಾ ಮಾನದಂಡವನ್ನ ಪೂರೈಸದೇ ಇರುವ ಕಾರಣ ಸದರಿ ಅರ್ಜಿಗಳನ್ನು ಪುರಸ್ಕರಿಸಿರುವುದಿಲ್ಲ. ಆದ್ದರಿಂದ ದಿನಾಂಕ:16.10.2024 ರಿಂದ ಪುರಸಭೆಯ ಆಟೋ ಅನೌನ್ಸ್ ಮೆಂಟ್ ಮತ್ತು ಮನೆ ಮನೆ ಸಮೀಕ್ಷೆ ಮೂಲಕ ದಿನಾಂಕ:30.10.2024ರ ವರೆಗೆ ಅಂತಿಮ ಗಡುವು ನೀಡಿ, ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, ಸ್ವೀಕೃತವಾದ ಒಟ್ಟು 31 ಅರ್ಜಿಗಳಲ್ಲಿ ನಿಯಮಾನುಸಾರ ಅರ್ಹತೆ ಹೊಂದಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳು ಯಾರು ಇರುವುದಿಲ್ಲವೆಂದು ಕಂಡುಬಂದಿದ್ದು, ಈ ಮೂಲಕ ವಿಷಯವನ್ನು ಸಾರ್ವಜನಿಕರಿಗೆ ಪ್ರಕಟಣೆ ಹೊರಡಿಸಲಾಗಿದ್ದು, ಯಾವುದಾದರೂ ಆಕ್ಷೇಪಣೆ ಇದ್ದಲ್ಲಿ ಸೂಕ್ತ ದಾಖಲಾತಿಗಳೊಂದಿಗೆ (ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಆಕ್ಟ್–2013ರಲ್ಲಿ ನಮೂದಿಸಿರುವ ದಾಖಲಾತಿಗಳು) ಈ ಪ್ರಕಟಣೆಯ 15 ದಿನಗಳ ಒಳಗೆ ಪಾಂಡವಪುರ ಪುರಸಭೆಯ ಕಛೇರಿಗೆ ಸಂಪೂರ್ಣ ದಾಖಲಾತಿಗಳೊಂದಿಗೆ ಆಕ್ಷೇಪಣೆ ಅರ್ಜಿ ಸಲ್ಲಿಸಲು ಕೋರಿದೆ.

ಸಹಿ/–ಅಧ್ಯಕ್ಷರು, ಪುರಸಭೆ, ಪಾಂಡವಪುರ
ಸಹಿ/–ಮುಖ್ಯಾಧಿಕಾರಿ, ಪುರಸಭೆ, ಪಾಂಡವಪುರ

ವಾವಾಸಂಇ/ಸನಿ–ಮಂ/ಕೆಎಸ್‌ಎಂಸಿಎ/517/2024–25